ಸಂಪುಟ: 04 ಸಂಚಿಕೆ: 175 ಪುಟಗಳು: 08 ಶುಕ್ರವಾರ 06 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮಹಾ ಮೂರ್ಖನು ಕೂಡ ತನ್ನ ಹೃದಯಕ್ಕೆ ಒಪ್ಪಿಗೆಯಾಗುವಂತಹ ಕಾರ್ಯವನ್ನು ಸಾಧಿಸಬಲ್ಲ, ಆದರೆ ಯಾವುದೇ ಕೆಲಸವನ್ನಾದರೂ ತನಗೆ ರುಚಿಸುವಂತೆ ಪರಿವರ್ತಿಸಬಲ್ಲನೋ ಅವನೇ ಬುದ್ಧಿವಂತನು..

## ಶಿಕ್ಷಕರ ದಿನಾಚರಣೆ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶಿಕ್ಷಕರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಮುಖ್ಯ ಆಯುಕ್ತರಿಂದ ಚಾಲನೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಿಕ್ಷಣ ಇಲಾಖೆ ವತಿಯಿಂದ ಸರ್ ಪುಟ್ಟಣ್ಣ ಚೆಟ್ಟಿ ಪುರಭವನ(ಟೌನ್ ಹಾಲ್)ನಲ್ಲಿ ಹಮ್ಮಿಕೊಳ್ಳಲಾಗಿದ್ದ ಶಿಕ್ಷಕರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್‌ರವರು ಉದ್ಘಾಟಿಸಿದರು. 2023-24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿ.ಯು.ಸಿ ಹಾಗೂ ಪದವಿ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪುರಸ್ಕರಿಸಿ ಪ್ರೋತ್ಸಾಹ ಧನವನ್ನು ನೀಡಲಾಯಿತು. (ಪಟ್ಟಿಯನ್ನು ಲಗತ್ತಿಸಿದೆ). ಈ ವೇಳೆ ವೇಳೆ ಶಿಕ್ಷಣ ವಿಭಾಗದ ವಿಶೇಷ ಆಯುಕ್ತರಾದ ಶ್ರೀಮತಿ ಪ್ರೀತಿ ಗೆಹ್ಲೋಟ್ , ಪಶ್ಚಿಮ ವಲಯ ಆಯುಕ್ತರಾದ ಶ್ರೀಮತಿ ಅರ್ಚನಾ, ಸಹಾಯಕ ಆಯುಕ್ತರಾದ ಮಹೇಶ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಿಕ್ಷಕ ವೃಂದಕ್ಕೆ ಅಪಮಾನ: ಕೋಟ

• ಉದಯವಾಹಿನಿ, ಉಡುಪಿ

ಕುಂದಾಪುರದ ಸರ್ಕಾರಿ ಪಿಯು ಕಾಲೇಜಿನ ಪ್ರಾಂಶುಪಾಲ ಬಿ.ಜಿ. ರಾಮಕೃಷ್ಣ ಅವರಿಗೆ ನೀಡಲಾಗಿದ್ದ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ಸರ್ಕಾರ ತಡೆ ಹಿಡಿದಿರುವುದು ಸರಿಯಲ್ಲ. ಇದು ಇಡೀ ಶಿಕ್ಷಕ ವೃಂದಕ್ಕೆ ಮಾಡಿರುವ ಅಪಮಾನ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು. ಸುದ್ದಿಗಾರರ ಜೊತೆ ಗುರುವಾರ ಮಾತನಾಡಿದ ಅವರು, ಹಿಜಾಬ್ ಪ್ರಕರಣದಲ್ಲಿ ರಾಮಕೃಷ್ಣ ಅವರು ಒಬ್ಬ ಅಧಿಕಾರಿಯಾಗಿ ಸರ್ಕಾರದ ಆದೇಶವನ್ನು ಪಾಲಿಸಿದ್ದಾರೆ. ಅದಕ್ಕೆ ಪೂರಕವಾಗಿ ಹೈಕೋರ್ಟ್ ಕೂಡ ಆದೇಶ ನೀಡಿತ್ತು ಎಂದರು.ಸರ್ಕಾರ ನ್ಯಾಯಾಲಯದ ಆದೇಶಕ್ಕೆ ಗೌರವ ಕೊಡುತ್ತದೋ ಅಥವಾ ತನ್ನ ಕಾರ್ಯಸೂಚಿಗೆ ಗೌರವ ಕೊಡುತ್ತದೋ ಎಂಬುದನ್ನು ಸ್ಪಷ್ಟಪಡಿಸಬೇಕಾಗಿದೆ ಎಂದರು. ಕೂಡಲೇ ಸರ್ಕಾರ ತನ್ನ ತಪ್ಪನ್ನು ಸರಿಪಡಿಸಿಕೊಂಡು ಘೋಷಿಸಿರುವ ಪ್ರಶಸ್ತಿಯನ್ನು ರಾಮಕೃಷ್ಣ ಅವರಿಗೆ ನೀಡಬೇಕು ಎಂದು ಆಗ್ರಹಿಸಿದರು.

## ತೀರ್ಪಿನ ಬಳಿಕ ರಾಜ್ಯ ಬಿಜೆಪಿ ಯಿಂದ ಮತ್ತೊಂದು ಹೋರಾಟ?

• ಉದಯವಾಹಿನಿ, ಬೆಂಗಳೂರು

ಮುಡಾ ಪ್ರಕರಣದಲ್ಲಿ ಹೈಕೋರ್ಟ್ ತೀರ್ಪು ಆಧರಿಸಿ ಸರಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮತ್ತೊಂದು ಸುತ್ತಿನ ಹೋರಾಟ ನಡೆಸುವ ಬಗ್ಗೆ ರಾಜ್ಯ ಬಿಜೆಪಿಯಲ್ಲಿ ಚಿಂತನೆ ನಡೆದಿದೆ. ಮುಡಾ ಪಾದಯಾತ್ರೆ ಪ್ರಾರಂಭವಾದ ಕಾಲದಿಂದಲೂ ಇದೊಂದು ಚರ್ಚೆ ಬಿಜೆಪಿಯಲ್ಲಿ ಇದೆ. ವಿಶೇಷವಾಗಿ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಸೇರಿದಂತೆ ಉತ್ತರ ಕರ್ನಾಟಕ ಭಾಗದ ನಾಯಕರು ಈ ಪ್ರಸ್ತಾವವನ್ನು ಇಟ್ಟಿದ್ದಾರೆ. ಆದರೆ, ಇದರಿಂದ ಆಂತರಿಕ ಭಿನ್ನಾಭಿಪ್ರಾಯ ಸ್ಫೋಟವಾಗಬಹುದೆಂಬ ಕಾರಣಕ್ಕೆ ಹೈಕಮಾಂಡ್ ಇನ್ನೂ ಒಪ್ಪಿಗೆ ನೀಡಿಲ್ಲ. ಹೀಗಾಗಿ ನ್ಯಾಯಾಲಯ ತೀರ್ಪಿನ ಬಳಿಕ ಈ ಎರಡೂ ಅಭಿಪ್ರಾಯಕ್ಕೂ ಮನ್ನಣೆ ನೀಡುವ ತಂತ್ರಗಾರಿಕೆಯ ಭಾಗವಾಗಿ ಹೋರಾಟಕ್ಕೆ ಅನುವು ನೀಡಬಹುದು ಎಂದು ಹೇಳಲಾಗುತ್ತಿದೆ. ಒಂದೊಮ್ಮೆ ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯ ಅವರಿಗೆ ರಿಲೀಫ್ ಸಿಕ್ಕರೆ ವಾಲ್ಮೀಕಿ ಅಭಿವೃದ್ಧಿ ನಿಗಮದ ವಿಚಾರವನ್ನು ಪ್ರಧಾನವಾಗಿಟ್ಟುಕೊಂಡು ಹೋರಾಟ ನಡೆಸಬಹುದು.

## ರಾಯಣ್ಣರಿಗೆ ಹೋಲಿಸಿಕೊಳ್ಳುವ ಸಿಎಂಗೆ ಒಳಗಿನವರೇ ಶತ್ರು

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರಿಗೆ ಸ್ವಪಕ್ಷದವರೇ ಸಿಎಂ ಸ್ಥಾನದಿಂದ ಕೆಡವಲು ಪ್ರಯತ್ನಿಸುತ್ತಿರುವುದು ಸ್ಪಷ್ಟವಾಗಿದ್ದು, ಖುದ್ದು ಅವರೇ ಆರೋಪ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಭಿಪ್ರಾಯಪಟ್ಟರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಇತ್ತೀಚೆಗೆ ಸಿದ್ದರಾಮಯ್ಯನವರು ತಮ್ಮನ್ನು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರಿಗೆ ಹೋಲಿಸಿಕೊಳ್ಳುತ್ತಿದ್ದಾರೆ.
ಸ್ವಾತಂತ್ರ್ಯ ಪೂರ್ವದಲ್ಲಿ ರಾಯಣ್ಣರನ್ನು ನಮ್ಮವರೇ ಬ್ರಿಟೀಷರಿಗೆ ಹಿಡಿದುಕೊಟ್ಟು ದೇಶದ್ರೋಹದ ಕೆಲಸ ಮಾಡಿದ್ದರು. ಅದೇ ರೀತಿ ತಮ್ಮ ವಿರುದ್ಧವೂ ಒಳಗಿನವರೇ ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ಸಿಎಂ ಮಾರ್ಮಿಕವಾಗಿ ಹೇಳುತ್ತಿದ್ದಾರೆ. ಹೀಗಾಗಿ ವಿಪಕ್ಷದವರು ಯಾರೂ ಸಿಎಂ ವಿರುದ್ಧ ಷಡ್ಯಂತ್ರ ಮಾಡುತ್ತಿಲ್ಲ ಅದರ ಅರ್ಥ ಎಂದರು.ಅವರ ಪಕ್ಷದವರೇ ಸಿಎಂ ವಿರುದ್ಧದ ಹಗರಣ ಹೊರಗೆ ತರುತ್ತಿದ್ದಾರೆ. ಆ ಮೂಲಕ ಅವರನ್ನು ಸಿಎಂ ಕುರ್ಚಿಯಿಂದ ಇಳಿಸಲು ಪ್ರಯತ್ನಿಸುತ್ತಿದ್ದಾರೆ ಅಂತಾ ಪರೋಕ್ಷವಾಗಿ ಸಿಎಂ ಅವರೇ ಹೇಳಿದ್ದಾರೆ ಎಂದು ಕುಮಾರಸ್ವಾಮಿ ಟಿಪ್ಪಣಿ ಮಾಡಿದರು. ತಮ್ಮನ್ನು ತಮಗೆ ರಾಯಣ್ಣರಿಗೆ ಹೋಲಿಕೆ ಮಾಡಿಕೊಂಡು, ನಮ್ಮ ಪಕ್ಷದವರೇ ತಮ್ಮನ್ನು ಮುಗಿಸಲು ಹೊರಟಿದ್ದಾರೆ ಅಂತಾ ಸಿಎಂ ಹೇಳಿಕೆಯ ಒಳಾರ್ಥವನ್ನು ತಮ್ಮ ಗ್ರಹಿಕೆಯಂತೆ ಹೆಚ್‌ಡಿಕೆ ವಿವರಿಸಿದರು. ಹೀಗಾಗಿ ಸದ್ಯ ವಿರೋಧ ಪಕ್ಷದವರ ವಿರುದ್ಧ ಸಿಎಂ ಹೇಳಿಕೆ ಕೊಟ್ಟಿಲ್ಲ.



# ಭಾರತ, ಸಿಂಗಾಪುರ ಅಭಿವೃದ್ಧಿ ಅಪ್ಪಟ ಉಭಯ ದೇಶಗಳ ನಿಕಟ

**ಮೋದಿ ಸಿಂಗಾಪುರ ಭೇಟಿ ಮಹತ್ವದ 4 ಒಪ್ಪಂದಗಳಿಗೆ ಸಹಿ**

**ಅಭಿವೃದ್ಧಿ ನೀತಿಗೆ ಭಾರತ ಬೆಂಬಲ**

**ಸೆಮಿಕಂಡಕ್ಟರ್ ಘಟಕಕ್ಕೆ ಭೇಟಿ ನೀಡಿದ ಪ್ರಧಾನಿ**

**ವಿಸ್ತರಣಾವಾದಕ್ಕೆ ಅಲ್ಲ: ನೆರೆಯ ಚೀನಾಗೆ ಟಾಂಗ್**

**ಸಿಂಗಾಪುರದಲ್ಲೂ ಮುಂದುವರಿದ ಮೋದಿ ಹವಾ**

**ಮೋದಿ ಸಿಂಗಾಪುರದಲ್ಲಿ ಮೋಡಿ**



• ಉದಯವಾಹಿನಿ, ನವದೆಹಲಿ

ಸಿಂಗಾಪುರ ಪ್ರವಾಸದಲ್ಲಿರುವ ಮೋದಿ ತಮ್ಮ ಸಹವರ್ತಿ ಲಾರೆನ್ಸ್ ವಾಂಗ್ ಜೊತೆಗೆ ದ್ವಿಪಕ್ಷೀಯ ಮಾತುಕತೆ ನಡೆಸಿದ್ದು, ಡಿಜಿಟಲ್ ತಂತ್ರಜ್ಞಾನ, ಆರೋಗ್ಯ ಸಹಕಾರ, ಕೌಶಲ್ಯ ಸೇರಿ ಪ್ರಮುಖ ನಾಲ್ಕು ಒಪ್ಪಂದಗಳಿಗೆ ಸಹಿ ಹಾಕಿದ್ದಾರೆ. ಡಿಜಿಟಲ್ ತಂತ್ರಜ್ಞಾನಗಳಲ್ಲಿ ಸಹಕರಿಸಲು ಭಾರತದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಮತ್ತು ಸಿಂಗಾಪುರದ ಡಿಜಿಟಲ್ ಅಭಿವೃದ್ಧಿ ಮತ್ತು ಮಾಹಿತಿ ಸಚಿವಾಲಯದ ನಡುವೆ ಮೊದಲ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಈ ಒಪ್ಪಂದವು ಡಿಜಿಟಲ್ ತಂತ್ರಜ್ಞಾನಗಳಾದ ಡಿಪಿಐ, ಸೈಬರ್-ಸೆಕ್ಯುರಿಟಿ, ಸೂಪರ್-ಕಂಪ್ಯೂಟಿಂಗ್, ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಕೃತಕ ಬುದ್ಧಿಮತ್ತೆಯಂತಹ ಉದಯೋನ್ಮುಖ ತಂತ್ರಜ್ಞಾನಗಳ ಕ್ಷೇತ್ರಗಳಲ್ಲಿ ಇದು ಉಭಯ ದೇಶಗಳ ನಡುವೆ ನಿಕಟ ಸಹಕಾರವನ್ನು ಸುಲಭಗೊಳಿಸಲು ಸಹಾಯ ಮಾಡುತ್ತದೆ. ಭಾರತ-ಸಿಂಗಪುರ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯ ಪಾಲುದಾರಿಕೆಯ ಕುರಿತಾದ ತಿಳುವಳಿಕಾ ಒಪ್ಪಂದಕ್ಕೆ ಭಾರತದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಮತ್ತು ಸಿಂಗಾಪುರದ ವ್ಯಾಪಾರ ಮತ್ತು ಕೈಗಾರಿಕಾ ಸಚಿವಾಲಯ ಸಹಿ ಮಾಡಿದೆ. ಈ ಒಪ್ಪಂದದ ಅಡಿಯಲ್ಲಿ, ಭಾರತ ಮತ್ತು ಸಿಂಗಾಪುರಗಳು ಸೆಮಿಕಂಡಕ್ಟರ್ ಕ್ಲಸ್ಟರ್ ಅನ್ನು ಅಭಿವೃದ್ಧಿಪಡಿಸಲು ಮತ್ತು ಸೆಮಿಕಂಡಕ್ಟರ್ ವಿನ್ಯಾಸ ಮತ್ತು ಉತ್ಪಾದನೆಯಲ್ಲಿ ಪ್ರತಿಭೆಯನ್ನು ಬೆಳೆಸುವಲ್ಲಿ ಸಹಕರಿಸುತ್ತವೆ. ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಸಹಕಾರಕ್ಕಾಗಿ ಭಾರತದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಮತ್ತು ಸಿಂಗಾಪುರದ ಆರೋಗ್ಯ ಸಚಿವಾಲಯವು ಮತ್ತೊಂದು ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಿದೆ. ಈ ಒಪ್ಪಂದವು ಪರಸ್ಪರ ಆರೋಗ್ಯ ಕ್ಷೇತ್ರಗಳಲ್ಲಿ ಸಂಶೋಧನೆ ಮತ್ತು ನಾವೀನ್ಯತೆಗಳ ಜಂಟಿ ಪ್ರಯತ್ನಗಳನ್ನು ಸುಗಮಗೊಳಿಸುತ್ತದೆ. ಆರೋಗ್ಯ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ನಿಕಟ ಸಹಕಾರವನ್ನು ಉತ್ತೇಜಿಸುತ್ತದೆ. ಈ ಒಪ್ಪಂದವು ಸಿಂಗಾಪುರದಲ್ಲಿ ಭಾರತೀಯ ಆರೋಗ್ಯ ವೃತ್ತಿಪರರನ್ನು ಉತ್ತೇಜಿಸುವ ಪ್ರಯತ್ನಗಳಿಗೆ ಪೂರಕವಾಗಲಿದೆ.

ಶೈಕ್ಷಣಿಕ ಸಹಕಾರ ಮತ್ತು ಕೌಶಲ್ಯ ಅಭಿವೃದ್ಧಿಯ ಅಂತಿಮ ಒಪ್ಪಂದಕ್ಕೆ ಭಾರತದ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ಮತ್ತು ಸಿಂಗಾಪುರದ ಶಿಕ್ಷಣ ಸಚಿವಾಲಯ ಸಹಿ ಮಾಡಿದೆ. ಈ ಒಪ್ಪಂದವು ತಾಂತ್ರಿಕ ಮತ್ತು ವೃತ್ತಿಪರ ಶಿಕ್ಷಣ ಮತ್ತು ತರಬೇತಿಯ ಕ್ಷೇತ್ರಗಳಲ್ಲಿ ನಿಕಟ ಸಹಕಾರವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಮತ್ತು ಕೌಶಲ್ಯ ಅಭಿವೃದ್ಧಿಯಲ್ಲಿ ನಡೆಯುತ್ತಿರುವ ಸಕ್ರಿಯ ಸಹಯೋಗಕ್ಕೆ ಪೂರಕವಾಗಿರುತ್ತದೆ.

**1** ಸಿಂಗಾಪುರದಲ್ಲಿ ಭೂಮಿ ಮತ್ತು ಮಾನವಶಕ್ತಿಯ ಕೊರತೆ

**2** ಭಾರತವು ಸಾಕಷ್ಟು ಭೂಮಿ ಮತ್ತು ಕೌಶಲ್ಯಪೂರ್ಣ ಕಾರ್ಮಿಕರನ್ನು ಹೊಂದಿದೆ.

**3** ಸಿಂಗಾಪುರ ಕಂಪನಿಗಳನ್ನು ಭಾರತದಲ್ಲಿ ವಿಸ್ತರಿಸಲು ಪ್ರೋತ್ಸಾಹ

ನನ್ನ ಸ್ನೇಹಿತ ಪ್ರಧಾನಿ ಲಾರೆನ್ಸ್ ವಾಂಗ್ ಅವರೊಂದಿಗಿನ ಚರ್ಚೆಗಳು ಇಂದಿಗೂ ಮುಂದುವರೆದಿವೆ. ನಾವು ಭಾರತದಲ್ಲಿ ಅನೇಕ ಸಿಂಗಾಪುರಗಳನ್ನು ರಚಿಸಲು ಬಯಸುತ್ತೇವೆ. ಕೌಶಲ್ಯ, ತಂತ್ರಜ್ಞಾನ, ಆರೋಗ್ಯ ಇತರ ಹಲವು ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಕುರಿತು ನಾವು ಚರ್ಚೆ ನಡೆಸಿದ್ದೇವೆ. ಅವರು ವ್ಯಾಪಾರವನ್ನು ಉತ್ತೇಜಿಸಲು ಒಪ್ಪಿಕೊಂಡಿದ್ದಾರೆ. ಈ ದಿಕ್ಕಿನಲ್ಲಿ ನಾವು ಒಟ್ಟಾಗಿ ಪ್ರಯತ್ನಿಸುತ್ತಿರುವುದಕ್ಕೆ ನಮಗೆ ಸಂತೋಷವಾಗಿದೆ

-ನರೇಂದ್ರ ಮೋದಿ, ಪ್ರಧಾನಿ

**ಸೆಮಿಕಂಡಕ್ಟರ್ ಘಟಕಕ್ಕೆ ಪ್ರಧಾನಿ ಭೇಟಿ**

ಮೋದಿ ಅವರು ಸಿಂಗಾಪುರದ ಸಹವರ್ತಿ ಲಾರೆನ್ಸ್ ವಾಂಗ್ ಅವರೊಂದಿಗೆ ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ವಲಯದ ಸಿಂಗಾಪುರ ಮೂಲದ ದೆಹಲಿಯಲ್ಲಿರುವ ಕಂಪನಿಯಾದ ಎಇಎಂ ಹೋಲ್ಡಿಂಗ್ಸ್ ಲಿಮಿಟೆಡ್‌ಗೆ ಸೆ.5ರಂದು ಭೇಟಿ ನೀಡಿದರು. ಈ ಪ್ರಮುಖ ಉದ್ಯಮದಲ್ಲಿ ಸಹಕಾರದ ಮಾರ್ಗಗಳ ಕುರಿತು ಮೋದಿ ಚರ್ಚಿಸಿದರು. ಜಾಗತಿಕ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯಲ್ಲಿ AEM ನ ಪಾತ್ರ, ಅದರ ಕಾರ್ಯಾಚರಣೆಗಳು ಬಗ್ಗೆ ಪ್ರಧಾನಿ ಮೋದಿಗೆ ವಿವರಿಸಲಾಯಿತು. ಈ ವೇಳೆ ಅನೇಕ ಇತರ ಸಿಂಗಾಪುರದ ಕಂಪನಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.11-13 ಸೆ.2024ರವರೆಗೆ ಗ್ರೇಟರ್ ನೋಯ್ಡಾದಲ್ಲಿ ನಡೆಯಲಿರುವ TSEMICON ಇಂಡಿಯಾ ಪ್ರದರ್ಶನದಲ್ಲಿ ಭಾಗವಹಿಸಲು ಸಿಂಗಾಪುರದ ಸೆಮಿಕಂಡಕ್ಟರ್ ಕಂಪನಿಗಳನ್ನು ಪ್ರಧಾನಮಂತ್ರಿ ಆಹ್ವಾನಿಸಿದರು.

**ನಾಲ್ಕು ಒಪ್ಪಂದಗಳಿಗೆ ಸಹಿ**

ಭಾರತದ ಪ್ರಧಾನಿ ಮೋದಿ ಮತ್ತು ಸಿಂಗಾಪುರದ ಪ್ರಧಾನಿ ಲಾರೆನ್ಸ್ ವಾಂಗ್ ಅವರ ಭೇಟಿಯ ಸಮಯದಲ್ಲಿ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಪಾಲುದಾರಿಕೆಯನ್ನು ಬಲಪಡಿಸಲು ನಾಲ್ಕು ತಿಳುವಳಿಕೆ ಪತ್ರಗಳಿಗೆ (ಎಂಒಯು) ಸಹಿ ಹಾಕಲಾಯಿತು. ಈ ಒಪ್ಪಂದಗಳು ಡಿಜಿಟಲ್ ತಂತ್ರಜ್ಞಾನದಲ್ಲಿ ಸಹಕಾರ, ಸೆಮಿಕಂಡಕ್ಟರ್ ವಲಯದಲ್ಲಿ ಪಾಲುದಾರಿಕೆ, ಶಿಕ್ಷಣದಲ್ಲಿ ಸಹಕಾರ, ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಕೌಶಲ್ಯ ಅಭಿವೃದ್ಧಿಯನ್ನು ಒಳಗೊಂಡಿವೆ. ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಸಿಂಗಾಪುರದ ವಿದೇಶಾಂಗ ವ್ಯವಹಾರಗಳ ಸಚಿವ ವಿವಿಯನ್ ಬಾಲಕೃಷ್ಣನ್ ಅವರು ಸಿಂಗಾಪುರದ ಸಂಸತ್ ಭವನದಲ್ಲಿ ಪ್ರಧಾನಿ ಮೋದಿ ಮತ್ತು ಅವರ ಸಿಂಗಾಪುರದ ಸಹವರ್ತಿ ಲಾರೆನ್ಸ್ ವಾಂಗ್ ಅವರ ಸಮ್ಮುಖದಲ್ಲಿ ಎಂಒಯುಗಳನ್ನು ವಿನಿಮಯ ಮಾಡಿಕೊಂಡರು. ಭಾರತ-ಸಿಂಗಾಪುರ್ ಸೆಮಿಕಂಡಕ್ಟರ್ ಇಕೋಸಿಸ್ಟಮ್ ಪಾಲುದಾರಿಕೆಯಲ್ಲಿ ಎರಡೂ ಕಡೆ ತಿಳುವಳಿಕೆ ಒಪ್ಪಂದ ಸಹ ಪೂರ್ಣಗೊಳಿಸಿದ್ದಾರೆ.

ಭಾರತವು ಸದಾ ಕಾಲ ಅಭಿವೃದ್ಧಿ ನೀತಿಯನ್ನು ಬೆಂಬಲಿಸುತ್ತದೆಯೇ ಹೊರತು ವಿಸ್ತರಣಾ ನೀತಿಯನ್ನಲ್ಲ, ಎಂದು ಪ್ರಧಾನಿ ಮೋದಿ ಹೇಳಿದರು. ಬ್ರುನೈ ಮುಖ್ಯಸ್ಥ ಸುಲ್ತಾನ್ ಹಸನಲ್ ಬೋಲ್ಕಿಯಾ ಅವರ ಜತೆಗಿನ ದ್ವಿಪಕ್ಷೀಯ ಮಾತುಕತೆ ಬಳಿಕ ಉಭಯ ನಾಯಕರು ಜಂಟಿ ಹೇಳಿಕೆ ಬಿಡುಗಡೆ ಮಾಡಿದರು. ಇಂಡೊ-ಪೆಸಿಫಿಕ್ ಸಾಗರದಲ್ಲಿ ಮುಕ್ತ ಸಂಚಾರ ಕುರಿತ ಉಭಯ ದೇಶಗಳ ಮುಖ್ಯಸ್ಥರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಬೋಲ್ಕಿಯಾ ಅವರು ಆಯೋಜಿಸಿದ್ದ ಔತಣ ಕೂಟದಲ್ಲಿ ಪಾಲ್ಗೊಂಡ ಮೋದಿ, ನಾವು ಪ್ರಗತಿಯ ನೀತಿಯನ್ನು ಬೆಂಬಲಿಸುತ್ತೇವೆಯೇ ಹೊರತು ವಿಸ್ತರಣಾ ನೀತಿಯನ್ನು ಅಲ್ಲ, ಎಂದು ಹೇಳುವ ಮೂಲಕ ಪರೋಕ್ಷವಾಗಿ ಚೀನಾಗೆ ಟಾಂಗ್ ನೀಡಿದರು. ದಕ್ಷಿಣ ಚೀನಾ ಸಮುದ್ರ ಮತ್ತು ಪೂರ್ವ ಚೀನಾ ಸಮುದ್ರಗಳಲ್ಲಿ ಡ್ರ್ಯಾಗನ್ ರಾಷ್ಟ್ರ ಪ್ರಾಬಲ್ಯ ಮೆರೆಯುತ್ತಿದ್ದು, ಅದರ ಆಕ್ರಮಣ ಫಿಲಿಪ್ಪಿನ್ಸ್, ಮಲೇಷ್ಯಾ, ವಿಯೆಟ್ನಾಂ, ಬ್ರುನೈ, ತೈವಾನ್ ತೀವ್ರತರದಲ್ಲಿ ವಿರೋಧಿಸುತ್ತಿವೆ.

**ಭಾರತವು ಸದಾ ಕಾಲ ಅಭಿವೃದ್ಧಿ ನೀತಿಯನ್ನು ಬೆಂಬಲಿಸುತ್ತದೆ**

## ವಿದ್ಯಾರ್ಥಿಗಳ ವ್ಯಕ್ತಿತ್ವ ರೂಪಿಸುವುದೇ ಶಿಕ್ಷಕರ ಜವಾಬ್ದಾರಿ

• ಉದಯವಾಹಿನಿ, ಬೆಂಗಳೂರು

ರೈತರು-ಶಿಕ್ಷಕರು-ಸೈನಿಕರು ದೇಶದ ನಿರ್ಮಾತೃಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಇಲಾಖೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಭಾರತ ರತ್ನ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ದೇಶದ ಎರಡನೇ ರಾಷ್ಟ್ರಾಧ್ಯಕ್ಷರಾಗಿದ್ದ ರಾಧಾಕೃಷ್ಣನ್ ಅವರು ಶ್ರೇಷ್ಠ ಶಿಕ್ಷಕರಾಗಲು ಸಾಧ್ಯವಾಗಿದೆ ಅಂದರೆ, ಇದೇ ಸಾಧ್ಯತೆ ಎಲ್ಲಾ ಶಿಕ್ಷಕರಿಗೂ ಇದ್ದೇ ಇರುತ್ತದೆ.

ಹೀಗಾಗಿ ಪ್ರತಿಯೊಬ್ಬ ಶಿಕ್ಷಕರೂ ರಾಧಾಕೃಷ್ಣನ್ ಅವರ ಮಾರ್ಗದಲ್ಲಿ ನಡೆಯಲು ಪ್ರಯತ್ನಿಸಬೇಕು ಎಂದು ಕರೆ ನೀಡಿದರು. ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ರೂಪಿಸುವ ಮೂಲಕ ದೇಶದ ವ್ಯಕ್ತಿತ್ವವನ್ನು ರೂಪಿಸುವವರು ನಮ್ಮ ಶಿಕ್ಷಕರು. ಇದು ಶಿಕ್ಷಕರ ಮೂಲಭೂತ ಜವಾಬ್ದಾರಿ. ಆಕಸ್ಮಿಕವಾಗಿ ಶಿಕ್ಷಕ ವೃತ್ತಿಗೆ ಬಂದವರಿಗಿಂತ ಶಿಕ್ಷಕ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರೇ ಅತಿ ಹೆಚ್ಚಾಗಿದ್ದಾರೆ. ಹೀಗೆ ಈ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರ ಬಗ್ಗೆ ನನಗೆ ಹೆಮ್ಮೆ ಎನಿಸುತ್ತದೆ ಎಂದರು. ವಿದ್ಯಾರ್ಥಿಗಳು ಸ್ವತಂತ್ರವಾಗಿ ಯೋಚಿಸುವಂತೆ ಅವರನ್ನು ರೂಪಿಸುವುದೇ ಶಿಕ್ಷಕರ ಜವಾಬ್ದಾರಿ. ವೈಜ್ಞಾನಿಕತೆ ಮತ್ತು ವೈಚಾರಿಕತೆಯನ್ನು ವಿದ್ಯಾರ್ಥಿಗಳು ಬೆಳೆಸಿಕೊಂಡರೆ ಮಾತ್ರ ಅವರಿಗೆ ಸಮಾಜ ಅರ್ಥವಾಗುತ್ತದೆ ಎಂದರು.

**ರೈತ-ಶಿಕ್ಷಕ-ಸೈನಿಕ ದೇಶದ ನಿರ್ಮಾತೃಗಳು**



ಕಡ್ಡಾಯ ಶಿಕ್ಷಣದ ಜೊತೆಗೆ ಅತ್ಯುತ್ತಮ ವ್ಯಕ್ತಿತ್ವಗಳನ್ನು ರೂಪಿಸುವ ರೂವಾರಿಗಳು ನಮ್ಮ ಶಿಕ್ಷಕರು. ಮನುಷ್ಯ ಮನುಷ್ಯನನ್ನು ಪ್ರೀತಿಸುವ ಮಾನವೀಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಶಿಕ್ಷಕರಿಂದ, ಶಿಕ್ಷಣದಿಂದ ಮಾತ್ರ ಸಾಧ್ಯ. 800 ವರ್ಷಗಳ ಹಿಂದೆಯೇ ಕರ್ಮ ಸಿದ್ಧಾಂತವನ್ನು ಬಸವಾದಿ ಶರಣರು ತಿರಸ್ಕರಿಸಿದ್ದರು. ಆದರೂ ಇವತ್ತಿನ ಶಿಕ್ಷಕರೂ ಹಣೆಬರಹ ಮುಂತಾದ ಕರ್ಮಸಿದ್ಧಾಂತವನ್ನು ನಂಬುತ್ತಾರೆ. ಇದು ಸರಿಯಲ್ಲ. ಸಾವಿತ್ರಿ ಬಾಯಿ ಫುಲೆ, ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳು ಮಾದರಿಯಾಗಲಿ ಎಂದು ಹಾರೈಸುತ್ತೇನೆ.

-ಸಿದ್ದರಾಮಯ್ಯ, ಮುಖ್ಯಮಂತ್ರಿ

## ಕಾಂಗ್ರೇಸ್ 40% ಮೀರಿದೆ, ಬಡವರ ಹೆಸರಿನಲ್ಲಿ ಲೂಟಿ ಮಾಡಿದೆ: ಹೆಚ್‌ಡಿಕೆ

### ಜೆಡಿಎಸ್ ಶಿವಮೊಗ್ಗದಲ್ಲಿ ನಾಲ್ಕು ಸ್ಥಾನ ಗೆಲ್ಲಬೇಕು. ಸ್ವತಂತ್ರವಾಗಿ ಅಧಿಕಾರಕ್ಕೆ ನಾವು ಬರಬೇಕು ಎಂಬುವುದು ನನ್ನ ಕನಸು

• ಉದಯವಾಹಿನಿ, ಶಿವಮೊಗ್ಗ

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಭದ್ರಾವತಿ ಹಾಗೂ ಶಿವಮೊಗ್ಗ ಗ್ರಾಮಾಂತರ ಕ್ಷೇತ್ರ ಗೆಲ್ಲಬೇಕು. ಜೆಡಿಎಸ್ ಶಿವಮೊಗ್ಗದಲ್ಲಿ ನಾಲ್ಕು ಸ್ಥಾನ ಗೆಲ್ಲಬೇಕು. ಸ್ವತಂತ್ರವಾಗಿ ಅಧಿಕಾರಕ್ಕೆ ನಾವು ಬರಬೇಕು ಎಂಬುವುದು ನನ್ನ ಕನಸು ಎಂದು ಶಿವಮೊಗ್ಗದಲ್ಲಿ ನಡೆದ ಮುಖಂಡರ ಸಭೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರು ಹೇಳಿದರು.

ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಜನತೆಗೆ ಗೌರಿ ಗಣೇಶ ಹಬ್ಬದ ಶುಭಾಶಯ ಕೋರಿದ್ದಾರೆ. ಜೊತೆಗೆ ಶಿವಮೊಗ್ಗದಲ್ಲಿ ಜೆಡಿಎಸ್ ಸಾಧನೆ ಸೇರಿದಂತೆ ಸಾಕಷ್ಟು ವಿಚಾರಗಳನ್ನು ಹಂಚಿಕೊಂಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಹೆಚ್‌ಡಿ ಕುಮಾರಸ್ವಾಮಿ ಪ್ರಸ್ತಾಪಿಸಿದ ವಿಷಯಗಳು ಹೀಗಿದೆ....

ಶಿವಮೊಗ್ಗದಲ್ಲಿ ಮುಖಂಡರೊಂದಿಗೆ ಸಭೆಯಲ್ಲಿ ಮಾತನಾಡಿದ ಅವರು, ಶಿವಮೊಗ್ಗದಲ್ಲಿ ಜನತಾದಳದ ಬೇರು ಗಟ್ಟಿಯಾಗಿದೆ. ಕೆಲವು ಕ್ಷೇತ್ರಗಳಲ್ಲಿ ಚುನಾವಣೆ ಸಮಯದಲ್ಲಿ ಟಿಕೆಟ್ ತಗೊಳೊದು ನಂತರ ಬಿಟ್ಟು ಹೋಗುತ್ತಾರೆ. ಶಾರದಾ ಅಪ್ಪಾಜಿ ಗೌಡರು ಭದ್ರಾವತಿಯಲ್ಲಿ ಶಕ್ತಿ ಹಾಗೇ ಉಳಿಸಿದ್ದಾರೆ. ನಮ್ಮ ತಪ್ಪಿನಿಂದಾಗಿ ಭದ್ರಾವತಿ ಕಳೆದುಕೊಳ್ಳಬೇಕಾಯಿತು. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಿದ್ದರಾಗಬೇಕು. ಜಿಲ್ಲೆಯಲ್ಲಿ ಜನರ ಮನಗೆದ್ದು ಸದಸ್ಯತ್ವ ಮಾಡಿಸಬೇಕಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಜನರಿಗೆ ದ್ರೋಹ ಮಾಡುತ್ತಿದೆ. ಒಳ್ಳೆಯ ಆಡಳಿತ ಕೊಡುತ್ತೇವೆ ಎಂದು ಜನರ ದಾರಿ ತಪ್ಪಿಸಿದ್ದಾರೆ. ರಾಜ್ಯದ ಅಭಿವೃದ್ಧಿ ಮಾಡದೆ ಲೂಟಿ ಹೊಡೆಯುವ ಪರಿಸ್ಥಿತಿ ಬಂದಿದೆ. ಪಕ್ಷ ಸಂಘಟಿಸಿ ಚುರುಕುಗೊಳಿಸಿದರೆ ಶಿವಮೊಗ್ಗದಲ್ಲಿ ನಾಲ್ಕೈದು ಕ್ಷೇತ್ರ ಗೆಲ್ಲಬಹುದು. ಮೈತ್ರಿ ಒಂದು ಭಾಗ ಆದರೆ ಪಕ್ಷ ಸಂಘಟಿಸುವುದು ಇನ್ನೊಂದು ಭಾಗ. ಮೈತ್ರಿಗೆ ಧಕ್ಕೆ ಆಗದ ರೀತಿಯಲ್ಲಿ ಪಕ್ಷ ಸಂಘಟಿಸಬೇಕು. ನಿಖಿಲ್ ಅವರು ಈಗ ರಾಜ್ಯದ್ಯಾಂತ ಪ್ರವಾಸ ಮಾಡುತ್ತಿದ್ದಾರೆ. ಇದರಿಂದ ನನ್ನ ಜವಾಬ್ದಾರಿ ಸ್ವಲ್ಪ ಕಡಿಮೆ ಆಗಿದೆ ಎಂದರು.

ಶಿವಮೊಗ್ಗ ಮತ್ತು ನನಗೆ ಸಾಕಷ್ಟು ಅವಿನಾಭಾವ ಸಂಬಂಧ ಇದೆ. ನಮ್ಮ ಶಾಸಕಿ ಶಾರದಾ ಪೂರ್ಯಾನಾಯ್ಕ ನನ್ನ ತಂಗಿ ಇದ್ದ ಹಾಗೇ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಸಹ ಭದ್ರಾವತಿ ಹಾಗೂ ಶಿವಮೊಗ್ಗ ಗ್ರಾಮಾಂತರ ಕ್ಷೇತ್ರ ಗೆಲ್ಲಬೇಕು. ಜೆಡಿಎಸ್ ಶಿವಮೊಗ್ಗದಲ್ಲಿ ನಾಲ್ಕು ಸ್ಥಾನ ಗೆಲ್ಲಬೇಕು. ಸ್ವತಂತ್ರವಾಗಿ ಅಧಿಕಾರಕ್ಕೆ ನಾವು ಬರಬೇಕು ಎಂಬುವುದು ನನ್ನ ಕನಸು. ಚುನಾವಣೆ ಯಾವಾಗ ಬಂದರೂ ನಾವು ಮಾನಸಿಕವಾಗಿ ಸಿದ್ದರಿರಬೇಕು ಎಂದರು.



ಈ ಹಿಂದೆ ಯಾವತ್ತು ಕಂಡಿಲ್ಲ. ರಾಜ್ಯ ಏಳುಬೀಳು ನೋಡಿದೆ. ಆಡಳಿತ ಪಕ್ಷದ ಅವಧಿ ಕೊನೆ ದಿನಗಳಿಗೆ ಬಂದ ರೀತಿಯಲ್ಲಿ ಟೀಕೆ ಟಿಪ್ಪಣಿ ನಡೆಯುತ್ತವೆ. ಅಧಿಕಾರಕ್ಕೆ ಬಂದ ಮೊದಲ ವರ್ಷವೇ ಸರ್ಕಾರದ ಬಗ್ಗೆ ಟೀಕೆ ಶುರುವಾಗಿವೆ. ಕಳೆದ ಸರ್ಕಾರ ಬಗ್ಗೆ ದೊಡ್ಡ ಮಟ್ಟದಲ್ಲಿ ಟೀಕೆ ಮಾಡಿ ಅಧಿಕಾರ ಹಿಡಿದ್ರು. ಕಾಂಗ್ರೆಸ್ ನವರು ಸ್ವಲ್ಪ ಬದಲಾವಣೆ ತರಬಹುದು ಅಂತಾ ಜನ ನಿರೀಕ್ಷೆ ಮಾಡಿದ್ರು. ಕಾಂಗ್ರೆಸ್ ಸ್ನೇಹಿತರಿಗೆ ಸರ್ಕಾರ ಬಗ್ಗೆ 40% ಮೀರಿದೆ ಅಂತಾ ಹೇಳ್ತಾ ಇದ್ದಾರೆ.

-ಹೆಚ್‌ಡಿ ಕುಮಾರಸ್ವಾಮಿ, ಕೇಂದ್ರ ಸಚಿವ

**ಕಾರ್ಮಿಕರಿಗೆ ಕೆಲಸ ಕೊಡುವ ಪ್ರಯತ್ನ**

ಚುನಾವಣೆ ಯಾವುದೇ ಕ್ಷಣದಲ್ಲೇ ಬರಬಹುದು. 2025ಕ್ಕೆ ಬರುತ್ತೋ 2026 ಕ್ಕೆ ಬರುತ್ತೇ ಗೊತ್ತಿಲ್ಲ ನಾವು ಮಾನಸಿಕವಾಗಿ ಸಿದ್ದರಿರಬೇಕು. ವಿಐಎಸ್‌ಎಲ್ ಉಳಿಸುವ ಕೆಲಸ ನಾನು ಮಾಡುತ್ತೇನೆ. ವಿಐಎಸ್ ಎಲ್ ಕಾರ್ಮಿಕರಿಗೆ ನಿರಂತರ ಕೆಲಸ ಕೊಡುವ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು. ಹಲವಾರು ರೀತಿಯ ಕೊಡುಗೆ ಕೊಟ್ಟ ಜಿಲ್ಲೆ ಇದು. ವಿಶೇಷ ಸ್ಥಾನಮಾನ ಕೊಟ್ಟಿರುವ ಜಿಲ್ಲೆ ಇದು. ಸರ್ಕಾರ ಯೋಜನೆಗಳು ಜಾರಿಗೆ ತರುವ ವಿಚಾರದಲ್ಲಿ ಲೋಪದೋಷಗಳು ಆಗ್ತಿವೆ ಎಂದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,276/Gram24ct ₹6,669/Gram22ct ಬೆಳ್ಳಿ: ₹85.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಲಿಂಗಾಯತ ಇಸ್ಲಾಂ ಧರ್ಮ ಸಮಾನತೆ

ಮೊನ್ನೆ ಮಂಗಳವಾರ ಚಿತ್ರದುರ್ಗದ ಸಾರ್ವಜನಿಕ ಕುರಾನ್ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಲಿಂಗಾಯತ ಇಸ್ಲಾಂ ಧರ್ಮಗಳು ಕೆಲವು ಅಂಶಗಳಲ್ಲಿ ಸಮಾನತೆ ಹೊಂದಿವೆ ಎಂದು ಸಾಣೇಹಳ್ಳಿಯ ಶ್ರೀಗಳು ಹೇಳಿದ್ದಾರೆ. ಧರ್ಮವೆಂದ ಮಾತ್ರಕ್ಕೆ ಧರ್ಮ ಧರ್ಮಗಳಲ್ಲಿ ಹಲವಾರು ಅಂಶಗಳು ಸಮಾನವಾಗಿರುತ್ತವೆ ಎಂಬುದನ್ನು ಒಪ್ಪಲೇಬೇಕು. ಹಾಗಿಲ್ಲದಿದ್ದರೆ ಅಂಥದ್ದು ಧರ್ಮವೆನಿಸದು. ಆದ್ದರಿಂದ ಶ್ರೀಗಳ ಹೇಳಿಕೆಯಲ್ಲಿ ಆಶ್ಚರ್ಯ ಪಡುವ ಹೊಸತಿಲ್ಲ. ಆದರೆ ಈ ಹಿಂದೆ ಹಿಂದೂ ಧರ್ಮವೇ ಅಲ್ಲ, ಅದು ಅನಾಚಾರಗಳನ್ನೊಳಗೊಂಡಿದೆ ಎಂದು ಹೇಳಿದ ಇವರಿಗೆ ಹಿಂದೂಧರ್ಮದ ಸಾಮ್ಯತೆ ಕಾಣಲಿಲ್ಲವೇಕೆ? ದಯವಿಲ್ಲದ ಧರ್ಮವದಾವುದಯ್ಯ? ಎಂಬಿತ್ಯಾದಿ ಹೇಳಿದ ಬಸವಣ್ಣನವರ ಸಿದ್ಧಾಂತ ಶುದ್ಧಶಾಖಾಹಾರವಲ್ಲವೇ? ಹೀಗಾದ ಬಳಿಕ ಮಾಂಸಾಹಾರವನ್ನು ಒಪ್ಪುವ ಧರ್ಮದ ವೈಷಮ್ಯ ಇವರಿಗೆ ಕಾಣಲಿಲ್ಲವೇ?

# ಮಹಿಳೆಯರ ಮೇಲೆ ಹೆಚ್ಚಾಗಿದ್ಯಾ ದೌರ್ಜನ್ಯ: ಡಿಕೆಶಿ ಹೇಳಿದ್ದೇನು?

## ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕನ್ನಡ ಚಿತ್ರರಂಗದ ನಟ-ನಟಿಯರು ಭೇಟಿಯಾಗಿ ಮನವಿ ಸಲ್ಲಿಕೆ

• ಉದಯವಾಹಿನಿ ಬೆಂಗಳೂರು

ಕನ್ನಡ ಚಿತ್ರರಂಗದಲ್ಲಿ ಮೀ ಟೂ ಮಹಿಳೆಯರ ಮೇಲಿನ ದೌರ್ಜನ್ಯದ ಬಗ್ಗೆ ಅಧ್ಯಯನ ಮಾಡಲು ಸಮಿತಿ ರಚನೆಗೆ ರಾಜ್ಯ ಸರ್ಕಾರಕ್ಕೆ ಕನ್ನಡ ಚಿತ್ರರಂಗದ ನಟ-ನಟಿಯರು ಆಗ್ರಹಿಸಿದ್ದಾರೆ. ಈ ಕುರಿತು ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರಿಗೆ ಕನ್ನಡ ಚಿತ್ರರಂಗದ ನಟ-ನಟಿಯರು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ.

ಈ ಕುರಿತು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ ಕೆ ಶಿವಕುಮಾರ್ ಅವರು ಮಾಧ್ಯಮಗಳ ಜೊತೆಗೆ ಮಾತನಾಡಿ, ಕನ್ನಡ ಚಿತ್ರರಂಗದಲ್ಲಿ ಮೀ ಟೂ ವಿಚಾರವಾಗಿ ನನಗೆ ಹೆಚ್ಚಿನ ಮಾಹಿತಿಯಿಲ್ಲ. ಈ ವಿಚಾರವಾಗಿ ತಿಳಿದು ಮಾತನಾಡುತ್ತೇನೆ ಎಂದು ತಿಳಿಸಿದರು.

ಎತ್ತಿನಹೊಳೆ ಯೋಜನೆ ಮೊದಲ ಹಂತದ ಕಾಮಗಾರಿ ಉದ್ಘಾಟನೆಯಾಗುತ್ತಿದೆ. ಇಲ್ಲಿಂದ 24 ಟಿಎಂಸಿ ನೀರನ್ನು ಎತ್ತಿ ಬರ ಪೀಡಿತ ಪ್ರದೇಶಗಳಲ್ಲಿ ಕುಡಿಯುವ ಉದ್ದೇಶಕ್ಕೆ ಪೂರೈಸಲಾಗುತ್ತಿದೆ. ಡಿಪಿಆರ್ ಮಾಡಿದ ಎಂಜಿನಿಯರ್‌ಗಳಿಂದ ತಂತ್ರಜ್ಞರು, ಯೋಜನೆಗಾಗಿ ಜಮೀನು ನೀಡಿದ ರೈತರು ಎಲ್ಲರ ಪಾತ್ರ ಪ್ರಮುಖವಾಗಿದೆ ಎಂದು ತಿಳಿಸಿದರು.

**ತುಮಕೂರಿನವರೆಗೆ ನೀರನ್ನು ತರಲಾಗುವುದು ವಿಶ್ವಾಸ**

ಈ ಯೋಜನೆಗೆ ಬಳಸಲಾಗಿರುವ ಯಂತ್ರ, ನೀರೆತ್ತುವ ತಂತ್ರಜ್ಞಾನ ನೋಡಿದರೆ ಒಂದು ವಿಸ್ಮಯ.

ಹೆಚ್ಚಿನ ಹಣ ಖರ್ಚು ಮಾಡಿ ಯೋಜನೆ ಮಾಡಲಾಗಿದ್ದು, ಅಂತರ್ಜಲ ಹೆಚ್ಚಳಕ್ಕೆ ಈ ಯೋಜನೆ ಸಹಕಾರಿಯಾಗಿದೆ ಎಂದರು. ಈ ಯೋಜನೆಯಿಂದ ನೀರು ತರಲು ಸಾಧ್ಯವೇ ಇಲ್ಲ. ನೀರು ಬಂದರೆ ಮೀಸೆ ಬೋಳಿಸಿ ಕೊಳ್ಳುತ್ತೇನೆ ಎಂದೆಲ್ಲಾ ಕೆಲವರು ಟೀಕೆ ಮಾಡಿದ್ದರು. ಹೀಗಾಗಿ ನಾನು ಈ ಯೋಜನೆಯನ್ನು ಸವಾಲಾಗಿ ಸ್ವೀಕರಿಸಿ ಮೊದಲ ಹಂತದ ಕಾಮಗಾರಿ ಮುಗಿಸಿ ನೀರನ್ನು ಎತ್ತಿದ್ದೇವೆ ಎಂದು ತಿಳಿಸಿದರು. ಈ ಯೋಜನೆ ಮಾರ್ಗದಲ್ಲಿ ಕೆಲವು ಅರಣ್ಯ ಪ್ರದೇಶಗಳಲ್ಲಿ ಸಮಸ್ಯೆ ಇರುವ ಕಾರಣ ನೀರನ್ನು ವಾಣಿ ವಿಲಾಸ ಅಣೆಕಟ್ಟಿಗೆ ಹರಿಸಲಾಗುತ್ತಿದೆ. ಈ ಸಮಸ್ಯೆ ಬಗೆಹರಿದು ಕಾಮಗಾರಿ ಮುಗಿದರೆ ಈ ವರ್ಷದೊಳಗೆ ತುಮಕೂರಿನವರೆಗೆ ನೀರನ್ನು ತರಲಾಗುವುದು



**ಬಿಜೆಪಿ ಇರುವುದೇ ಟೀಕೆ ಮಾಡಲು**

ಬೆಂಗಳೂರು ಗಾರ್ಬೇಜ್ ಸಿಟಿಯಾಗುತ್ತಿದೆ ಎಂಬ ಬಿಜೆಪಿ ಟೀಕೆ ಬಗ್ಗೆ ಕೇಳಿದಾಗ, ಬಿಜೆಪಿ ಇರುವುದೇ ಟೀಕೆ ಮಾಡಲು, ರಾಜಕಾರಣ ಮಾಡಲು. ಈ ಸಮಸ್ಯೆಗೆ ಪರಿಹಾರ ನೀಡಲು ನಾನು ಪ್ರಯತ್ನವಾದರೂ ಮಾಡುತ್ತಿದ್ದೇನೆ. ಈ ಬಗ್ಗೆ ಅಧ್ಯಯನ ಮಾಡಲು, ಚೆನ್ನೈ ಹೈದರಬಾದ್, ಮುಂಬೈಗೆ ಭೇಟಿ ನೀಡಿದ್ದೆ. ನಗರದ ಹೊರಗೆ ಕಸ ವಿಲೇವಾರಿಗೆ ನಾಲ್ಕು ಕಡೆಗಳಲ್ಲಿ ಜಾಗ ಹುಡುಕಲಾಗಿದೆ. ಹೀಗೆ ನನ್ನದೇ ಆದ ಪ್ರಯತ್ನ ಮಾಡುತ್ತಿದ್ದೇನೆ. ಅವರು ಏನು ಮಾಡಿದ್ದಾರೆ? ಎಂದು ಪ್ರಶ್ನಿಸಿದರು.

ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ಯೋಜನೆ ಉದ್ಘಾಟನೆ ಒಂದು ಹಬ್ಬವಾಗಿದೆ.

> ಡಿಸಿಎಂ ಕೇವಲ ಪ್ರಚಾರಕ್ಕೆ ಬ್ರ್ಯಾಂಡ್ ಬೆಂಗಳೂರು ಎಂದು ಹೇಳುತ್ತಿದ್ದು, ಕೆಲಸ ಆಗುತ್ತಿಲ್ಲ ಎಂಬ ಟೀಕೆ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಟೀಕೆಗಳಿಗೆ ಉತ್ತರ ಕೊಡುವುದಿಲ್ಲ. ನಮ್ಮ ಕೆಲಸಗಳೇ ನಿಮ್ಮ ಕಣ್ಣಿಗೆ ಕಾಣಲಿದೆ ಎಂದು ತಿಳಿಸಿದರು. ಇನ್ನೂ ಮೇಕೆದಾಟು ಯೋಜನೆ ವಿಚಾರವಾಗಿ ನಾವು ನ್ಯಾಯಾಲಯದಲ್ಲಿ ಹೋರಾಟ ಮಾಡುತ್ತಿದ್ದೇವೆ ಎಂದು ತಿಳಿಸಿದರು. -ಡಿ ಕೆ ಶಿವಕುಮಾರ್

ಗೌರಿ ಹಬ್ಬ ಪ್ರತಿ ವರ್ಷ ಬರುತ್ತದೆ. ಆದರೆ ಗೌರಿ ಹಬ್ಬದ ದಿನ ಗಂಗೆ ಪೂಜೆ ಮಾಡುವುದು ಬಹಳ ವಿಶೇಷ. ಎಲ್ಲಾ ಪಕ್ಷದ ನಾಯಕರಿಗೆ, ಶಾಸಕರು, ರೈತ ಮುಖಂಡರು ಕಾರ್ಯಕ್ರಮಕ್ಕೆ ಬಂದು ಈ ಗಳಿಗೆಗೆ ಸಾಕ್ಷೀಯಾಗಬೇಕು ಎಂದು ಮನವಿ ಮಾಡುತ್ತೇನೆ. ಈ ಕಾರ್ಯಕ್ರಮದ ಪೂರ್ವಭಾವಿ ತಯಾರಿ ಹಿನ್ನೆಲೆಯಲ್ಲಿ ಇಂದಿನ ಸಚಿವ ಸಂಪುಟ ಸಭೆಯಲ್ಲಿ ನಾನು ಭಾಗವಹಿಸಲು ಸಾಧ್ಯವಾಗುತ್ತಿಲ್ಲ. ಈ ಬಗ್ಗೆ ಮುಖ್ಯಮಂತ್ರಿಗಳ ಜತೆ ಮಾತನಾಡಿದ್ದೇನೆ ಎಂದು ಹೇಳಿದರು.

### ಭಜನ - ಪ್ರವಚನ - ಸಂಕೀರ್ತನ

• ಉದಯವಾಹಿನಿ ಬೆಂಗಳೂರು



ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ರಾಜಾಜಿನಗರದ ಇ.ಎಸ್.ಐ. ಹಾಸ್ಪಿಟಲ್ ಬಸ್ ನಿಲ್ದಾಣದ ಹತ್ತಿರ ಇರುವ ಶ್ರೀ ನರಸಿಂಹ ಪ್ರವಚನ ಮಂದಿರದಲ್ಲಿ ಸೆಪ್ಟೆಂಬರ್ 10 ರಿಂದ 13ರ ವರೆಗೆ ಧಾರ್ಮಿಕ/ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ : ಭಜನಾ ಕಾರ್ಯಕ್ರಮ : (ಪ್ರತಿದಿನ ಸಂಜೆ 6 ರಿಂದ 7) ಸೆಪ್ಟೆಂಬರ್ 10 : ಅಂಭ್ರಣಿ ಭಜನಾ ಮಂಡಳಿ, ರಾಜಾಜಿನಗರ, ಸೆಪ್ಟೆಂಬರ್ 11 : ಅಲಕನಂದ ಭಜನಾ ಮಂಡಳಿ, ಬಸವೇಶ್ವರನಗರ, ಸೆಪ್ಟೆಂಬರ್ 12 : ಶ್ರೀ ಲಕ್ಷ್ಮೀ ವೆಂಕಟೇಶ್ವರ ಭಜನಾ ಮಂಡಳಿ, ಮತ್ತಿಕೆರೆ. ಪ್ರವಚನ ಕಾರ್ಯಕ್ರಮ ಸೆಪ್ಟೆಂಬರ್ 10, 11 ಮತ್ತು 12 (ಪ್ರತಿದಿನ ಸಂಜೆ 7 ರಿಂದ 8) ಪ್ರವಚನಕಾರರು ಡಾ|| ಹೆಚ್. ಸತ್ಯನಾರಾಯಣಾಚಾರ್ಯ. ವಿಷಯ : ಶ್ರೀ ಜಗನ್ನಾಥದಾಸರ ವಿರಚಿತ ಫಲವಿದು ಬಾಳ್ದುದಕೆ **ಹರಿನಾಮ ಸಂಕೀರ್ತನೆ :** ಸೆಪ್ಟೆಂಬರ್ 13, ಶುಕ್ರವಾರ (ಸಂಜೆ 6-30 8-00). ಹರಿನಾಮ ಸಂಕೀರ್ತನೆ : ಗಾಯನ : ಶ್ರೀಮತಿ ರೂಪಾ ಪ್ರಭಂಜನ, ಹಾರ್ಮೋನಿಯಂ : ಕು|| ಸೃಷ್ಟಿ ದೇಸಾಯಿ, ತಬಲಾ ಶ್ರೀ ಋತುಪರ್ಣ ದೇಸಾಯಿ. ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಟಿ.ಟಿ.ಡಿ. ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ|| ಪಿ. ಭುಜಂಗರಾವ್ ವಿನಂತಿಸಿದ್ದಾರೆ.

### ಮಹಿಳೆ ಮೇಲೆ ಹಲ್ಲೆ ನಡೆಸಿ ಆಟೋ ಚಾಲಕನ ದರ್ಪ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ಆಟೋ ಬುಕ್ ಮಾಡಿ ಕ್ಯಾನ್ಸಲ್ ಮಾಡಿದ್ದಕ್ಕೆ ಕುಪಿತಗೊಂಡ ಓಲಾ ಚಾಲಕನೋರ್ವ ಮಹಿಳೆಯ ಕೆನ್ನೆಗೆ ಬಾರಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಆಟೋ ಚಾಲಕ ಮಹಿಳೆಯ ಮೇಲೆ ಹಲ್ಲೆ ಮಾಡುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ನಗರ ಪೊಲೀಸರು ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ.

ವೈರಲ್ ಆಗಿರುವ ವಿಡಿಯೋ ನೋಡುವುದಾದರೆ ಸಿಟ್ಟಿನಿಂದ ಮಹಿಳೆ ಮೇಲೆ ರೇಗಾಡುತ್ತಿರುವ ಆಟೋ ಚಾಲಕ ಆಕೆಯ ಮೇಲೆ ಹಲ್ಲೆ ನಡೆಸುತ್ತಾನೆ. ಮಿಸ್ ಆಗಿ ನೀವು ನನ್ನ ರೈಡ್‌ಅನ್ನು ಅದೇಗೆ ಕ್ಯಾನ್ಸಲ್ ಮಾಡುತ್ತೀರಾ ಎಂದು ಪ್ರಶ್ನಿಸಿದ ಆತ, ನಿಮ್ಮಪ್ಪ ಗ್ಯಾಸ್ ಕೊಡ್ತಾನಾ ಎಂದು ಕೂಗಾಡುತ್ತಾನೆ. ನನ್ನ ಮೇಲೆ ಏಕೆ ಕೂಗಾಡುತ್ತಿದ್ದೀರಾ ಎಂದು ಪ್ರಶ್ನಿಸಿದ ಯುವತಿಯ ಫೋನ್‌ಅನ್ನು ಆಟೋ ಚಾಲಕ ಕಸಿದುಕೊಳ್ಳಲು ಮುಂದಾಗುತ್ತಿರುವುದನ್ನು ವೈರಲ್ ಆಗಿರುವ ವಿಡಿಯೋದಲ್ಲಿ ನೋಡಬಹುದಾಗಿದೆ.

ಈ ಕುರಿತಾದ ವಿಡಿಯೋವನ್ನು ನೀತಿ ಎಂಬ ಯುವತಿಯು ಟ್ವಿಟರ್‌ನಲ್ಲಿ ಪೋಸ್ಟ್ ಮಾಡಿದ್ದು, ಬುಧವಾರ ನಾನು ಹಾಗೂ ನನ್ನ ಫ್ರೆಂಡ್ ಇಬ್ಬರೂ ಓಲಾ ಪೀಕ್ ಅವರ್‌ನಲ್ಲಿ ಎರಡು ಆಟೋಗಳನ್ನು ಬುಕ್ ಮಾಡಿದ್ದೆವು. ಮೊದಲು ಬಂದ ಆಟೋವನ್ನು ನಾವು ಹತ್ತಿಕೊಂಡು ಮತ್ತೊಂದನ್ನು ಕ್ಯಾನ್ಸಲ್ ಮಾಡಿದೆವು. ಆದರೆ, ಬುಕ್ಕಿಂಗ್ ಕ್ಯಾನ್ಸಲ್ ಆದ ಆಟೋ ಡ್ರೈವರ್ ನಮ್ಮ ಫಾಲೋ ಮಾಡಿಕೊಂಡು ಬಂದಿದ್ದಲ್ಲದೆ, ನಮ್ಮ ಮೇಲೆ ಕೂಗಾಡಲು ಶುರು ಮಾಡಿದ ಮತ್ತು ಅವಾಚ್ಯ ಶಬ್ದಗಳಿಂದ ನಿಂದಿಸಿದ.


### ಸ್ಟೋನಿ ಬ್ರೂಕ್ ಪಬ್‌ನಲ್ಲಿದೆ ಸ್ಪೆಷಲ್ ಡಿ-ಬಾಸ್ ಸಫಾರಿ ರೂಮ್

• ಉದಯವಾಹಿನಿ ಬೆಂಗಳೂರು

ಸ್ನೇಹಿತೆ ಪವಿತ್ರಾ ಗೌಡಗೆ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಅಶ್ಲೀಲ ಸಂದೇಶಕಳು ಹಿಸಿದ್ದಾನೆ ಎನ್ನುವ ಹಿನ್ನಲೆಯಲ್ಲಿ ಆತನನ್ನು ಕೊಲೆ ಮಾಡಿದ್ದಾರೆ ಎನ್ನುವ ಪ್ರಕರಣದಲ್ಲಿ ದರ್ಶನ್ ಸೇರಿದಂತೆ 17 ಜನ ಜೈಲಿನಲ್ಲಿದ್ದಾರೆ. ಈ ಪ್ರಕರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಕುರಿತಾಗಿ ಪೊಲೀಸರು 17 ಆರೋಪಿಗಳು.. 231 ಸಾಕ್ಷಿ.. 3991 ಪುಟಗಳಲ್ಲಿ ಇದೆ. ಕೊಲೆ ಪ್ರಕರಣದ ಈಖಖ ನಲ್ಲಿ ಪವಿತ್ರಾ ಗೌಡ 01 ಮತ್ತು ದರ್ಶನ್ 02 ಆಗಿದ್ದರು. ಅನೇಕರು ಇದು ಬದಲಾಗಬಹುದೆಂದು ಭಾವಿಸಿದ್ದರು.

ಆದರೆ ಚಾರ್ಜ್ ಶೀಟ್‌ನಲ್ಲಿಯೂ ಪವಿತ್ರಾ ಗೌಡ 01 ಮತ್ತು ದರ್ಶನ್ 02 ಎಂದೇ ದಾಖಲಿಸಿದ್ದಾರೆ. ಎಸಿಪಿ ಚಂದನ್


ಉದಯವಾಹಿನಿ ಚಿತ್ರ

ಕುಮಾರ್ ಹಾಗೂ ತನಿಖಾ ತಂಡ ಈ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದೆ. ಮೂವರು ಪ್ರತ್ಯಕ್ಷ ಸಾಕ್ಷಿದಾರರು, ಎಫ್‌ಎಸ್‌ಎಲ್, ಸಿಎಫ್‌ಎಸ್ ನ 8 ವರದಿಗಳು, 27 ಜನರ 164 ಹೇಳಿಕೆ, 8 ಇತರೆ ಸರ್ಕಾರಿ ಅಧಿಕಾರಿಗಳ ಸಾಕ್ಷಿ, 56 ಜನ ಪೊಲೀಸರು, 59 ಪಂಚರ ಸಮಕ್ಷಮದಲ್ಲಿ ಮಹಜರು ಸೇರಿ ಈ ಪ್ರಕರಣದಲ್ಲಿ ಒಟ್ಟು 231 ಸಾಕ್ಷಿಗಳನ್ನು ಪೊಲೀಸರು ಕಲೆ ಹಾಕಿದ್ದಾರೆ. ಚಾರ್ಜ್‌ಶೀಟ್ ಬೆನ್ನಲ್ಲೇ ಪೊಲೀಸರ ವಿಚಾರಣೆಗೆ ಸಂಬಂಧಿಸಿದ ಕೆಲವು ಮಹತ್ವದ ವಿಚಾರಗಳು ಬಳಕಿಗೆ ಬರುತ್ತಿದೆ. ಶೆಡ್‌ನಲ್ಲಿ ದರ್ಶನ್ ಅಂಡ್ ಗ್ಯಾಂಗ್ ರೇಣುಕಾಸ್ವಾಮಿ ಹಲ್ಲೆ ನಡೆಸಿರುವ ಫೋಟೋ ವೈರಲ್ ಬೆನ್ನಲ್ಲೇ, ಇದೀಗ ಪೊಲೀಸರು ರೀ-ಕ್ರಿಯೇಟ್ ಮಾಡಿದ ಫೋಟೋ ಒಂದು ವೈರಲ್ ಆಗಿದೆ.

**ರೀ-ಕ್ರಿಯೇಟ್ ಫೋಟೋದಲ್ಲಿ ಏನಿದೆ**

ವಿನಯ್, ದರ್ಶನ್, ಚಿಕ್ಕಣ್ಣ, ಪವನ್, ನಾಗರಾಜ್ ಇತರರು ಇರೋದನ್ನು ಗಮನಿಸಬಹುದಾಗಿದೆ. ಚಿಕ್ಕಣ್ಣ ಪಾರ್ಟಿಯಲ್ಲಿ ಭಾಗಿಯಾಗಿದ್ದರು. ಈ ಸಂಬಂಧ ಪೊಲೀಸ್ ಅಧಿಕಾರಿಗಳು ಚಿಕ್ಕಣ್ಣ ಅವರಿಂದ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದಾರೆ.

### ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿದ ಕನ್ನಡ ನಟ, ನಟಿಯರು-ಕಾರಣ ಏನು?

• ಉದಯವಾಹಿನಿ ಬೆಂಗಳೂರು


ಮಲಯಾಳಂ ಚಿತ್ರರಂಗದಲ್ಲಿ ನಟಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಯುತ್ತವೆ ಎನ್ನುವ ಆರೋಪಗಳು ಕೇಳಿಬಂದಿದ್ದವು. ಹಲವರು ನಟಿಯರು ಕೂಡ ಈ ಬಗ್ಗೆ ತನಿಖೆಗೆ ಆಗ್ರಹಿಸಿದ್ದರು. ಇದೀಗ ಕನ್ನಡ ಚಿತ್ರರಂಗದಲ್ಲೂ ಇಂತಹದ್ದೇ ಆರೋಪ ಕೇಳಿಬಂದಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ನಟ, ನಟಿಯರು ಸಿಎಂ ಭೇಟಿಯಾಗಿ ಆಗ್ರಹಿಸಿದರು. ಹಿರಿಯ ಸಾಮಾಜಿಕ ಕಾರ್ಯಕರ್ತೆ ವಿಜಯಮ್ಮ, ನಟ ಚೇತನ್ ನೇತೃತ್ವದ ಫೈರ್ ನಿಯೋಗದವರು (ಸೆಪ್ಟೆಂಬರ್ 05) ಮುಖ್ಯಮಂತ್ರಿ ಅವರನ್ನು ಭೇಟಿಯಾಗಿ ಈ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿದರು. ಮಲಯಾಳಂ ಸಿನಿಮಾ ರಂಗದಲ್ಲಿ ನಟಿಯರ ಮೇಲಿನ ಲೈಂಗಿಕ ದೌರ್ಜನ್ಯ ಕುರಿತ ತನಿಖೆಗಾಗಿ ಸಮಿತಿ ರಚನೆ ಮಾಡಿದಂತೆ. ಹಾಗೆಯೇ ರಾಜ್ಯ ಸರ್ಕಾರವು ಸಮಿತಿ ರಚಿಸಿ, ಕನ್ನಡ ಚಿತ್ರರಂಗದಲ್ಲಿ ನಟಿಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳ ಸಮಗ್ರ ತನಿಖೆ ಮಾಡುವಂತೆ ಸಿದ್ದರಾಮಯ್ಯಗೆ ನಟ, ನಟಿಯರು ಮನವಿ ಸಲ್ಲಿಸಿದರು.


ಉದಯವಾಹಿನಿ ಚಿತ್ರ

### ಯುವಕರ ಭವಿಷ್ಯಕ್ಕೆ ಕಲ್ಲು ಹಾಕಲು ಕಾಂಗ್ರೆಸ್ ಹೊರಟಿದೆ: ಬಿಜೆಪಿ ಕಿಡಿ

• ಉದಯವಾಹಿನಿ ಬೆಂಗಳೂರು

ಯುವಕರ ಭವಿಷ್ಯದ ಕುರಿತು ಎಳ್ಳಷ್ಟು ಕಾಳಜಿಯಿಲ್ಲದ ಭ್ರಷ್ಟ ಕಾಂಗ್ರೆಸ್ ಸರ್ಕಾರ, ಯುಪಿಎಸ್ಸಿ ಪರೀಕ್ಷೆ ನಡೆಯುವ ದಿನಾಂಕದಂದೇ ಪಿಎಸ್ಐ ಪರೀಕ್ಷೆ ದಿನಾಂಕ ನಿಗದಿ ಮಾಡುವ ಮೂಲಕ ಯುವಕರ ಭವಿಷ್ಯಕ್ಕೆ ಕಲ್ಲು ಹಾಕಲು ಹೊರಟಿದೆ ಎಂದು ರಾಜ್ಯ ಬಿಜೆಪಿ ಘಟಕ ಕಿಡಿಕಾರಿದೆ.




ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್?ನಲ್ಲಿ ಬರೆದುಕೊಂಡಿರುವ ಬಿಜೆಪಿ, ಯುಪಿಎಸ್ಸಿ ಹಲವು ತಿಂಗಳುಗಳ ಮೊದಲೇ ಪರೀಕ್ಷೆ ದಿನಾಂಕ ಪ್ರಕಟಿಸುತ್ತಿದೆ. ಅದರಂತೆ, ಜೂನ್ 16ರಂದು ಯುಪಿಎಸ್ಸಿ ಪ್ರಿಲಿಮ್ಸ್ ಪರೀಕ್ಷೆ ನಡೆದಿದ್ದು, ಸೆಪ್ಟೆಂಬರ್ 22ಕ್ಕೆ ಮುಖ್ಯ ಪರೀಕ್ಷೆ ನಡೆಯಲಿದೆ. ವಿವೇಚನೆ, ಸಂವೇದನೆ ಇಲ್ಲದ ಸಿಎಂ ಸಿದ್ದರಾಮಯ್ಯನವರ ಸರ್ಕಾರ ಪಿಎಸ್ಐ ಪರೀಕ್ಷೆಯನ್ನು ಸೆ.22ರಂದೇ ನಡೆಸುವುದಾಗಿ ಜುಲೈ 31ರಂದು ಪ್ರಕಟಿಸಿದೆ. ಈ ಮೂಲಕ ಯುವಕರ ಉದ್ಯೋಗದ ಕನಸಿಗೆ ಕೊಳ್ಳಿಯಿಡುವ ಕೆಲಸ ಮಾಡಿದೆ. ಸೆ.22ರಂದು ನಿಗದಿಯಾಗಿರುವ ಯುಪಿಎಸ್ಸಿ ಮುಖ್ಯ ಪರೀಕ್ಷೆ, ಎಸ್ಎಸ್ಸಿ ಪರೀಕ್ಷೆ ಜೊತೆಗೆ ಪಿಎಸ್ಐ ಪರೀಕ್ಷೆಯೂ ನಡೆದರೆ ಮೂರೂ ಪರೀಕ್ಷಾರ್ಥಿಗಳಿಗೆ ತೊಂದರೆಯಾಗಲಿದೆ.

**ಸ್ಪರ್ಧಾತ್ಮಕ ಪರೀಕ್ಷೆ ದಿನಾಂಕ ನಿಗದಿ ಗೊಂದಲದ ಕುರಿತು ವಿಧಾನ ಪರಿಷತ್ ಸದಸ್ಯರಾದ ಶ್ರೀ ಶಶಿಲ್ ನಮೋಶಿ ಅವರು ಈ ಹಿಂದೆ ಮೇಲ್ಮನೆಯಲ್ಲಿ ಕೇಳಿದ್ದ ಪ್ರಶ್ನೆಗೆ, ಯುಪಿಎಸ್ಸಿ, ಎಸ್‌ಎಸ್ಸಿ ಹಾಗೂ ಎನ್ಟಿಎ ಮತ್ತು ಇತರ ನೇಮಕಾತಿ ಪ್ರಾಧಿಕಾರಗಳಿಂದ ಪ್ರಕಟಿತವಾಗುವ ವೇಳಾಪಟ್ಟಿ ಗಮನದಲ್ಲಿಟ್ಟುಕೊಂಡು ತಾತ್ಕಾಲಿಕ ಪರೀಕ್ಷಾ ದಿನಾಂಕ ನಿಗದಿಪಡಿಸಲಾಗುತ್ತಯೇ ಎಂಬ ಪ್ರಶ್ನೆಗೆ ಇಲ್ಲ ಒಂದು ವೇಳೆ ಪರೀಕ್ಷೆಗೆ ತೊಂದರೆಯಾದರೇ ಪರೀಕ್ಷೆ ದಿನಾಂಕ ಮರು ನಿಗದಿಪಡಿಸಲಾಗುವುದು ಎಂಬುದಾಗಿ ಸ್ವತಃ ಮುಖ್ಯಮಂತ್ರಿಗಳೇ ವಿಧಾನ ಪರಿಷತ್ತಿನಲ್ಲಿ ಉತ್ತರಿಸಿದ್ದಾರೆ.**

### ನೈರುತ್ಯ ರೈಲ್ವೆಯಿಂದ ರಾಜ್ಯದ ವಿವಿಧ ಭಾಗಗಳಿಗೆ ವಿಶೇಷ ರೈಲು ಸೇವೆ

• ಉದಯವಾಹಿನಿ ಬೆಂಗಳೂರು

ನಾಳೆ ಮತ್ತು ನಾಡಿದ್ದು ಗೌರಿ ಗಣೇಶ ಹಬ್ಬ, ನಂತರ ಮುಂದಿನ ತಿಂಗಳು ದಸರಾ ಹಾಗೂ ದೀಪಾವಳಿ ಹಬ್ಬಗಳು ಬರುತ್ತಿವೆ. ನಾಡಿನಾದ್ಯಂತ ಆಚರಿಸುವ ಈ ಹಬ್ಬಗಳ ರಜೆಗಳು, ಜನರ ಪ್ರಯಾಣ, ಓಡಾಟ ಹೆಚ್ಚಾಗಿರುವ ಕಾರಣ ನೈಋತ್ಯ ರೈಲ್ವೆ ಇಲಾಖೆ ರಾಜ್ಯಾದ್ಯಂತ 22 ವಿಶೇಷ ರೈಲುಗಳನ್ನು ಘೋಷಣೆ ಮಾಡಿದೆ.ವಿಶೇಷ ರೈಲುಗಳ ವೇಳಾಪಟ್ಟಿ, ಪ್ರಯಾಣದ ಸಮಯಗಳನ್ನು ಕೂಡ ಹಂಚಿಕೊಂಡಿದೆ.

ಇಂದು ಸೆಪ್ಟೆಂಬರ್ 5 ರಿಂದ 7 ರವರೆಗೆ ಬೆಂಗಳೂರು ಮತ್ತು ಕಲಬುರಗಿ ನಡುವೆ ವಿಶೇಷ ರೈಲುಗಳ ಸಂಚಾರ ನಡೆಸಲಿದೆ. ಬೆಂಗಳೂರು ಕಲಬುರಗಿ ವಿಶೇಷ ರೈಲು ಎಸ್?ಎಂವಿಟಿ ಬೆಂಗಳೂರಿನಿಂದ ರಾತ್ರಿ 9:15 ಕ್ಕೆ ಹೊರಟು ಮರುದಿನ ಬೆಳಿಗ್ಗೆ 7:40 ಕ್ಕೆ ಕಲಬುರಗಿಗೆ ತಲುಪಲಿದೆ. ಅದೇ ರೀತಿ, ಸೆಪ್ಟೆಂಬರ್ 6 ರಿಂದ 8 ರವರೆಗೆ,


ಉದಯವಾಹಿನಿ ಚಿತ್ರ

ಕಲಬುರಗಿಯಿಂದ ಹಿಂತಿರುಗುವ ರೈಲು ಬೆಳಿಗ್ಗೆ 9:35 ಕ್ಕೆ ಹೊರಟು ಅದೇ ದಿನ ರಾತ್ರಿ 8:00 ಗಂಟೆಗೆ ಎಸ್‌ಎಂವಿಟಿ ಬೆಂಗಳೂರು ತಲುಪುತ್ತದೆ.

ಗಣೇಶ ಚತುರ್ಥಿ, ದೀಪಾವಳಿ ಮತ್ತು ದಸರಾ ಹಬ್ಬದ ವೇಳೆ ಪ್ರಯಾಣಿಕರ ಬೇಡಿಕೆಯನ್ನು ಪೂರೈಸಲು ನೈಋತ್ಯ ರೈಲ್ವೆಯು ವಿವಿಧ ಸ್ಥಳಗಳ ನಡುವೆ ಇಪ್ಪತ್ತೆರಡು ಹಬ್ಬದ ವಿಶೇಷ ರೈಲುಗಳನ್ನು ಓಡಿಸಲಾಗುತ್ತಿದೆ.

### ಬೆಂಗಳೂರಿನ ಈ ಬಿಡಿಎ ಕಾಂಪ್ಲೆಕ್ಸ್ ಅಭಿವೃದ್ಧಿಗೆ ವಿರೋಧ, ಯಾಕೆ ?

• ಉದಯವಾಹಿನಿ ಬೆಂಗಳೂರು

ಈ ನಿರ್ದಿಷ್ಟ ಭಾಗದಲ್ಲಿ ಬಿಡಿಎ ಕಾಂಪ್ಲೆಕ್ಸ್‌ಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿರೋಧ ವ್ಯಕ್ತವಾಗಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಸಾರ್ವಜನಿಕ ಸಹಭಾಗಿತ್ವದಲ್ಲೂ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸುತ್ತಿದೆ. ಆದರೆ, ಈ ನಿರ್ದಿಷ್ಟ ಭಾಗದಲ್ಲಿ ಬಿಡಿಎ ಕಾಂಪ್ಲೆಕ್ಸ್ ಅಭಿವೃದ್ಧಿ ಮಾಡುವುದು ಬೇಡ ಎಂದು ಸ್ಥಳೀಯರು ಹೇಳಿದ್ದಾರೆ. ಅಲ್ಲದೇ ಈ ಮಾದರಿಯ (ಪಿಪಿಪಿ) ಅಭಿವೃದ್ಧಿಯನ್ನು ವಿರೋಧಿಸಿ ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಬೆಂಗಳೂರಿನ ಈ ಕಾಂಪ್ಲೆಕ್ಸ್‌ಗಳ ಅಭಿವೃದ್ಧಿಗೆ ವಿರೋಧ: ಬೆಂಗಳೂರಿನ ಎಚ್‌ಎಸ್‌ಆರ್ ಮತ್ತು ಕೋರಮಂಗಲ ಬಿಡಿಎ ಕಾಂಪ್ಲೆಕ್ಸ್‌ಗಳ ಅಭಿವೃದ್ಧಿಗೆ ವಿರೋಧ ವ್ಯಕ್ತವಾಗಿದೆ. ಎಚ್‌ಎಸ್‌ಆರ್ ಮತ್ತು ಕೋರಮಂಗಲ ಬಿಡಿಎ ಕಾಂಪ್ಲೆಕ್ಸ್ ಜಾಗ ಚದರ ಅಡಿಗೆ ಬರೋಬ್ಬರಿ ೫೦ ಸಾವಿರ ಇದೆ. ಎಚ್‌ಎಸ್‌ಆರ್ ಮತ್ತು ಕೋರಮಂಗಲದಲ್ಲಿರುವ ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಈಚೆಗಷ್ಟೇ ಅಭಿವೃದ್ಧಿಪಡಿಸಲಾಗಿದೆ. ಈ ಎರಡೂ ಕಾಂಪ್ಲೆಕ್ಸ್‌ಗಳನ್ನು ಬರೋಬ್ಬರಿ ೫ ಕೋಟಿ ರೂಪಾಯಿ ವೆಚ್ಚದಲ್ಲಿ ಈಚೆಗಷ್ಟೇ ಅಭಿವೃದ್ಧಿಪಡಿಸಲಾಗಿದೆ. ಈ ಎರಡೂ ಕಾಂಪ್ಲೆಕ್ಸ್‌ಗಳು ಇನ್ನೂ ಹತ್ತಾರು ವರ್ಷಗಳ ಕಾಲ ಬಾಳಿಕೆ ಬರುವ ಸುಸ್ಥಿತಿಯಲ್ಲಿವೆ. ಇದೀಗ ಈ ವಾಣಿಜ್ಯ ಸಂಕೀರ್ಣಗಳನ್ನು ಕೆಡವಿ ಹಾಕುವುದು ಎಷ್ಟು ಸರಿ ಎಂದು ಬಿಡಿಎ ಕಾಂಪ್ಲೆಕ್ಸ್ ಉಳಿಸಿ ಹೋರಾಟ ಸಮಿತಿ ಪ್ರಶ್ನೆ ಮಾಡಿದೆ.



ಉದಯವಾಹಿನಿ ಚಿತ್ರ

### ಆಟೋ ಚಾಲಕನ ದುರ್ಮರಣ; ಬಿಬಿಎಂಪಿ ಹೇಳಿದ್ದೇನು!

• ಉದಯವಾಹಿನಿ ಬೆಂಗಳೂರು

ಜಯನಗರದ ನಾಲ್ಕನೇ ಟಿ ಬ್ಲಾಕ್‌ನಲ್ಲಿ ಚಲಿಸುತ್ತಿದ್ದ ಆಟೊ ಮೇಲೆ ಬೆಳಿಗ್ಗೆ ಮರದ ಕೊಂಬೆ ಬಿದ್ದು ಚಾಲಕ ಮೃತಪಟ್ಟಿದ್ದಾರೆ. ಪಾದರಾಯನಪುರದ ನಿವಾಸಿ ಆಟೊ ಚಾಲಕ ಖಲೀಲ್ (55) ಮೃತ ವ್ಯಕ್ತಿ. ಜಯನಗರ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

ಬೆಳಿಗ್ಗೆ 8.20ಕ್ಕೆ ಖಲೀಲ್ ಅವರು ಜಯನಗರದ 4ನೇ ಟಿ ಬ್ಲಾಕ್‌ನಲ್ಲಿ ಆಟೊ ಚಲಾಯಿಸಿಕೊಂಡು ತೆರಳುತ್ತಿದ್ದರು. ಆಟೊ ಮೇಲೆ ಮರದ ಕೊಂಬೆ ಬಿದ್ದಿತ್ತು. ಗಂಭೀರವಾಗಿ ಗಾಯಗೊಂಡಿದ್ದ ಖಲೀಲ್ ಅವರನ್ನು ಕೂಡಲೇ ಆಸ್ಪತ್ರೆಗೆ ಸೇರಿಸಲಾಗಿತ್ತು. ಆದರೆ, ಅವರು ಚಿಕಿತ್ಸೆಗೆ ಸ್ಪಂದಿಸದೇ ಮಧ್ಯಾಹ್ನ ಮೃತಪಟ್ಟಿದ್ದಾರೆ' ಎಂದು ಪೊಲೀಸರು ತಿಳಿಸಿದರು. ಬಿದ್ದ ಮರದ ಕೊಂಬೆಯನ್ನು ಸ್ಥಳದಿಂದ ತೆರವುಗೊಳಿಸಲಾಗಿದೆ. ಹಾನಿಗೊಳಗಾದ ಆಟೋವನ್ನು ವ್ಯಾಪ್ತಿಯ ಪೊಲೀಸ್ ಠಾಣೆಗೆ ಸ್ಥಳಾಂತರಿಸಲಾಗಿದೆ. ಪಶ್ಚಿಮ ವಲಯದ ಪಾದರಾಯನಪುರದಲ್ಲಿ ವಾಸವಾಗಿರುವ ಸಂತ್ರಸ್ತನ ಕುಟುಂಬಕ್ಕೆ ಘಟನೆ ಕುರಿತು ಮಾಹಿತಿ ನೀಡಲಾಗಿದೆ.

ಖಲೀಲ್‌ಗೆ ಗಂಭೀರ ಗಾಯಗಳಾಗಿದ್ದ ಪರಿಣಾಮ ಅವರನ್ನು ಬದುಕಿಸಲು ಸಾಧ್ಯವಾಗಲಿಲ್ಲ ಎಂದು ಚಿಕಿತ್ಸೆ ನೀಡಿದ ವೈದ್ಯರು ಕುಟುಂಬಕ್ಕೆ ಮಾಹಿತಿ ನೀಡಿದ್ದಾರೆ. ನಾವು ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದ್ದೇವೆ ಮತ್ತು ಬಿಬಿಎಂಪಿ ನಿಯಮಗಳ ಪ್ರಕಾರ, ಸಂತ್ರಸ್ತನ ಕುಟುಂಬಕ್ಕೆ 5 ಲಕ್ಷ ರೂಪಾಯಿ ಪರಿಹಾರ ಬಿಡುಗಡೆ ಮಾಡಲಾಗುವುದು. ಪಾಲಿಕೆ ಅರಣ್ಯ ಇಲಾಖೆಯು ಚಿಕಿತ್ಸಾ ವೆಚ್ಚ ಹಾಗೂ ಅಂತಿಮ ಸಂಸ್ಕಾರ ವೆಚ್ಚವನ್ನು ಭರಿಸಲಿದೆ ಎಂದು ಬಿಬಿಎಂಪಿ ಅರಣ್ಯ ಉಪ ಸಂರಕ್ಷಣಾಧಿಕಾರಿ ಬಿ.ಎಲ್.ಜಿ.ಸ್ವಾಮಿ ತಿಳಿಸಿದ್ದಾರೆ.

### ಪಾಲಿಕೆ ಬಜಾರ್‌ಗೆ ತೆರಳಲು ಒಲವು ತೋರದ ಮಾರಾಟಗಾರರು

• ಉದಯವಾಹಿನಿ ಬೆಂಗಳೂರು

ಬಿಬಿಎಂಪಿ ವಿಜಯನಗರದಲ್ಲಿ ನಿರ್ಮಿಸಿರುವ ಮೊಟ್ಟಮೊದಲ ಹವಾನಿ ಯಂತ್ರಿತ ಭೂಗತ ಮಾರುಕಟ್ಟೆ ಪಾಲಿಕೆ ಬಜಾರ್‌ಗೆ ತೆರಳುವವರ ಸಂಖ್ಯೆ ಕಡಿಮೆಯಿದೆ. ತಳ್ಳುವ ಗಾಡಿ, ತಾತ್ಕಾಲಿಕ ಶೆಡ್ ಮತ್ತು ರಸ್ತೆಯ ಪಕ್ಕದಲ್ಲಿ ಟೆಂಟ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾರಾಟಗಾರರು ವ್ಯಾಪಾರ ಕಳೆದುಕೊಳ್ಳುವ ಭಯದಿಂದ ಹವಾನಿಯಂತ್ರಿತ ಸ್ಥಳಕ್ಕೆ ತೆರಳಲು ಮನಸ್ಸಾಗುತ್ತಿಲ್ಲ ಎಂದು ಹೇಳುತ್ತಿದ್ದಾರೆ.

ಇನ್ನೊಂದೆಡೆ ತಂಪಾದ ವಾತಾವರಣ ವನ್ನು ನಾಗರಿಕರು, ವಿಶೇಷವಾಗಿ ವಿದ್ಯಾರ್ಥಿಗಳು ಬಯಸುತ್ತಾರೆ.ಬಿಬಿಎಂಪಿಯು ವಿಜಯನಗರ ಮೆಟ್ರೋ ನಿಲ್ದಾಣದ ಬಳಿ 13 ಕೋಟಿ



ಉದಯವಾಹಿನಿ ಚಿತ್ರ

ರೂ. ವೆಚ್ಚದಲ್ಲಿ ನಿರ್ಮಿಸಿರುವ ಭೂಗತ ಮಾರುಕಟ್ಟೆ ಪ್ರದೇಶದಲ್ಲಿ 79 ಮಳಿಗೆಗಳಿವೆ. 2017 ರಲ್ಲಿ ಪ್ರಾರಂಭವಾದ ಕಾಮಗಾರಿ 2024 ರಲ್ಲಿ ಪೂರ್ಣಗೊಂಡಿತು. ಇದನ್ನು ಆಗಸ್ಟ್ 25 ರಂದು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಆದರೆ ಇದುವರೆಗೆ ಕೇವಲ ಮೂರು ಮಾರಾಟಗಾರರು ಮಾತ್ರ ಅಲ್ಲಿಗೆ ಸ್ಥಳಾಂತರಗೊಂಡಿದ್ದಾರೆ.

ಆದರೆ ವ್ಯಾಪಾರ ಕುಸಿತದ ಕಾರಣದಿಂದ ಅವರು ಕೂಡಾ ಪಶ್ಚಾತ್ತಾಪ ಪಡುತ್ತಿದ್ದಾರೆ. ಮತ್ತೆ ತಳ್ಳುಗಾಡಿ ವ್ಯಾಪಾರ ಮಾ ಡುತ್ತೇನೆ. ಹಬ್ಬ ಹರಿದಿನಗಳಲ್ಲಿ ನಷ್ಟ ಅನು ಭವಿಸುವುದು ನನಗಿಷ್ಟವಿಲ್ಲ. ಕಟ್ಟಡ ಹವಾನಿಯಂತ್ರಿತವಾಗಿದೆ, ಆದರೆ ಟ್ಯೂಬ್ಲೈಟ್ ಹೊರತುಪಡಿಸಿ, ನಮಗೆ ನೀಡಿರುವ ಅಂಗಡಿಯಲ್ಲಿ ಬೇರೇನೂ ಇಲ್ಲ. ಬಜಾರ್ ಪ್ರಾರಂಭವಾದ ಒಂದು ವಾರದೊಳಗೆ ಗೋಡೆಗಳಲ್ಲಿ ನೀರು ಸೋರಿಕೆಯಾಗಿದೆ. ರಾತ್ರಿ ಸಮಯದಲ್ಲಿ ರಸ್ತೆ ಬದಿಯ ತಾತ್ಕಾಲಿಕ ಶೆಡ್‌ನಲ್ಲಿ ಕಾರ್ಯನಿರ್ವಹಿಸುತ್ತೇವೆ ಎಂದು ತರಕಾರಿ ಮಾರಾಟಗಾರ ಬಸವರಾಜ ಹೇಳಿದರು.

### ಅಶ್ವಿನಿ ಪುನೀತ್ ರಾಜ್‌ಕುಮಾರ್ ಬಗ್ಗೆ ಅವಹೇಳನಕಾರಿ ಟ್ರೋಲ್

• ಉದಯವಾಹಿನಿ ಬೆಂಗಳೂರು

ಅಶ್ವಿನಿ ಪುನೀತ್ ರಾಜ್ ಕುಮಾರ್ ಬಗ್ಗೆ ಡೀಫ್ ಪೇಕ್ ವೀಡಿಯೋ, ಫೋಟೋಗಳನ್ನು ಎಡಿಟ್ ಮಾಡಿ ಅವಹೇಳನಕಾರಿ ಟ್ರೋಲ್ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅವರ ಅಭಿಮಾನಿಗಳ ಸಂಘದಿಂದ ಫಿಲ್ಮಂ ಚೇಂಬರ್ ಅಧ್ಯಕ್ಷರಿಗೆ ದೂರು ನೀಡಲಾಗಿದೆ. ಫಿಲ್ಮಂ ಚೇಂಬರ್ ಅಧ್ಯಕ್ಷ ಎನ್ ಎಂ ಸುರೇಶ್ ಅವರನ್ನು ಭೇಟಿಯಾಗಿರುವಂತ ರಾಜವಂಶ ಅಭಿಮಾನಿಗಳ ಸಂಘದ ಅಧ್ಯಕ್ಷರು, ಸದಸ್ಯರು ಕಿಡಿಗೇಡಿಗಳು ನಕಲಿ ಖಾತೆಯ ಮೂಲಕ ಅಶ್ವಿನಿ ಪುನೀತ್ ರಾಜ್ ಕುಮಾರ್ ಫೇಕ್ ವೀಡಿಯೋ ಹರಿ ಬಿಟ್ಟಿದ್ದಾರೆ.ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಗಿದೆ. ನಕಲಿ ಫೇಸ್ ಬುಕ್ ಖಾತೆಯಿಂದ ವೀಡಿಯೋ ವೈರಲ್ ಆಗಿದೆ. ರಾಜ್ ಕುಟುಂಬ, ನಟ ನಟಿಯರ ಫೋಟೋ, ವೀಡಿಯೋ ವೈರಲ್ ಮಾಡಲಾಗುತ್ತಿದೆ. ಕೂಡಲೇ ಕ್ರಮವಹಿಸಿ ಕಿಡಿಗೇಡಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ ಪತ್ರದಲ್ಲಿ ಆಗ್ರಹಿಸಲಾಗಿದೆ. ಇದೇ ಸಂದರ್ಭದಲ್ಲಿ ಸೋಷಿಯಲ್ ಮೀಡಿಯಾಗಳಿಗೆ ಆಧಾರ್ ಲಿಂಕ್ ಕಡ್ಡಾಯ ಮಾಡುವಂತೆಯೂ ಕೇಂದ್ರ ಸರ್ಕಾರಕ್ಕೆ ರಾಜವಂಶ ಅಭಿಮಾನಿಗಳ ಸಂಘದಿಂದ ಒತ್ತಾಯಿಸಲಾಯಿತು.

# ಎತ್ತಿನಹೊಳೆ ಯೋಜನೆ: ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದ ಸಿಟಿ ರವಿ

## ಜಾಹೀರಾತನ್ನು ನೋಡಿ, ನಮಗಿರುವ ಸಾರ್ವಜನಿಕರ ಆತಂಕವನ್ನು ದೂರ ಮಾಡಬೇಕೆಂದು ಆಗ್ರಹ

• ಉದಯವಾಹಿನಿ ಬೆಂಗಳೂರು

ಎತ್ತಿನಹೊಳೆ ಯೋಜನೆ ಕುರಿತಂತೆ ತಾವು ಮತ್ತು ಉಪ ಮುಖ್ಯಮಂತ್ರಿಗಳು ನೀಡಿದ ಸಾರ್ವಜನಿಕ ಹೇಳಿಕೆ ಮತ್ತು ಜಾಹೀರಾತನ್ನು ನೋಡಿ, ನಮಗಿರುವ ಸಾರ್ವಜನಿಕರ ಆತಂಕವನ್ನು ದೂರ ಮಾಡಬೇಕೆಂದು ಆಗ್ರಹಿಸಿ ಈ ಕೆಲವು ಪ್ರಶ್ನೆಗಳನ್ನು ಕೇಳಲು ಬಯಸುತ್ತೇನೆ ಎಂದು ವಿಧಾನ ಪರಿಷತ್ ಸದಸ್ಯರಾದ ಸಿ ಟಿ ರವಿ ಅವರು ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಬೆಟ್ಟ ಅಗೆದು ಇಲಿ ಹಿಡಿದ ಎತ್ತಿನಹೊಳೆ ಯೋಜನೆ ಕುರಿತಂತೆ 7 ಜಿಲ್ಲೆಯ ಜನರ ಪರವಾಗಿ ನಿಮಗೊಂದು ಬಹಿರಂಗ ಪತ್ರ. ಆರಂಭದಲ್ಲಿ ಈ ಯೋಜನೆಯ ಉದ್ದೇಶವೇ ನಿರಂತರ ಬರದ ದವಡೆಗೆ ಸಿಲುಕಿರುವ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ತುಮಕೂರು, ಹಾಸನ ಮತ್ತು ರಾಮನಗರ ಜಿಲ್ಲೆಯ ಜನರಿಗೆ ಕುಡಿಯುವ ನೀರು ಒದಗಿಸುವುದು. 38 ಪಟ್ಟಣಗಳಿಗೆ, 6657 ಗ್ರಾಮಗಳಿಗೆ, 527 ಕೆರೆ ತುಂಬಿಸುವುದು, 75 ಲಕ್ಷ ಜನರಿಗೆ, ಶುದ್ಧ ಕುಡಿಯುವ ನೀರು, ಆಗಿತ್ತು. ಇದಕ್ಕಾಗಿ ಆರಂಭಿಕ ಯೋಜನೆ ಮೊತ್ತ 8,323 ಕೋಟಿ. ನಂತರ ಪರಿಷ್ಕೃತ ಮೊತ್ತ 12912 ಕೋಟಿ ರೂ. ಗಳು. ಈಗ ಮತ್ತೊಮ್ಮೆ ಮೊತ್ತವನ್ನು ಪರಿಷ್ಕೃತ 23,251 ಕೋಟಿ ರೂ. ಗೆ ಹೆಚ್ಚಳ ಮಾಡಿದ್ದೀರಿ. ಈಗಾಗಲೇ ನೀವೆ ಹೇಳಿರುವ ಹಾಗೆ ದಿನಾಂಕ 30.06.2024ರವರೆಗೆ ರೂ. 16,076 ಕೋಟಿ ವೆಚ್ಚವನ್ನು ಮಾಡಿದ್ದೀರಿ. ಈಗ ಮಾಡಿರುವ ವೆಚ್ಚದಲ್ಲಿ ಎಷ್ಟು ಹಳ್ಳಿಯ ಜನರಿಗೆ ಕುಡಿಯುವ ನೀರು, ಎಷ್ಟು ಕೆರೆಗಳಿಗೆ ನೀರು ತುಂಬಿಸುತ್ತೀರಿ? ಸ್ಪಷ್ಟಪಡಿಸಿ. 2014ರ ಲೋಕಸಭಾ ಚುನಾವಣೆಯ ಮುಂಚೆ ಚಿಕ್ಕ ಬಳ್ಳಾಪುರದಲ್ಲಿ ಈ ಯೋಜನೆಗೆ ಶಂಕುಸ್ಥಾಪನೆ ಮಾಡಿ, ಈ ಮೂಲಕ ಸಾರ್ವಜನಿಕವಾಗಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜನಪ್ರತಿನಿಧಿಗಳ ಸಮಕ್ಷಮದಲ್ಲಿ ಜನರಿಗೆ 3 ವರ್ಷದಲ್ಲಿ ಯೋಜನೆ ಪೂರ್ಣಗೊಳಿಸಿ, ಮೊದಲ ಹಂತದಲ್ಲಿ ಕುಡಿಯುವ ನೀರು ಒದಗಿಸುವುದಾಗಿ ಹೇಳಿದ್ದೀರಿ. ಈಗ ಈ ಯೋಜನೆಗೆ ಶಂಕುಸ್ಥಾಪನೆಯಾಗಿ 10 ವರ್ಷ ಕಳೆದರೂ ಯಾವ ಹಳ್ಳಿಯ ಜನರಿಗೆ ನೀರನ್ನು ಒದಗಿಸಿದ್ದೀರಿ? ಸ್ಪಷ್ಟಪಡಿಸಿ.

**75 ಲಕ್ಷ ಜನರಿಗೆ, ಶುದ್ಧ ಕುಡಿಯುವ ನೀರು**


ಉದಯವಾಹಿನಿ ಚಿತ್ರ

> ಆಸೆ ತೋರಿಸಿದ್ದು ಬರಪೀಡಿತ ಜನರಿಗೆ, ಹೊಟ್ಟೆ ತುಂಬಿಸಿದ್ದು, ಗುತ್ತಿಗೆದಾರರು, ಅಧಿಕಾರಿಗಳು ಮತ್ತು ಭ್ರಷ್ಟ ರಾಜಕಾರಿಣೆಗಳಿಗೆ ಅಂತ ಸಂಶಯ ಬರುತ್ತದೆ. ನೀವು ಈ ಭಾಗದ ಪ್ರದೇಶಗಳಿಗೆ ನೀರು ಕೊಡಲು ಈಗಲೂ ಬದ್ಧರಿದ್ದೀರಾ? ಈಗಲಾದರೂ ನೈಜ ಅಧ್ಯಯನ ನಡೆಸಿ, ತಪ್ಪು ಯೋಜನೆ ರೂಪಿಸಿ, ಸಾವಿರಾರು ಕೋಟಿ ರೂಪಾಯಿ ದುರುಪಯೋಗವಾಗಿರುವುದರ ವಿರುದ್ಧ ಕ್ರಮಕೈಗೊಳ್ಳಿ ಮತ್ತು ಹಾಲಿ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ಕೇಂದ್ರ ಸರ್ಕಾರದ ವೈಜ್ಞಾನಿಕ ಸಂಸ್ಥೆಗಳು, ತಾಂತ್ರಿಕ ಸಂಸ್ಥೆಗಳು ಮತ್ತು (ಭಾರತೀಯ ವಿಜ್ಞಾನ ಸಂಸ್ಥೆ) ಗಳನ್ನು ಬಳಕೆ ಮಾಡಿಕೊಂಡು ಒಂದು ಸಮಗ್ರ ಅಧ್ಯಯನ ನಡೆಸಿ. ಈ ಯೋಜನೆ ಬೆಟ್ಟ ಅಗೆದು ಇಲಿ ಹಿಡಿದ ಹಾಗೆ ಆಗಿದೆ ಅಲ್ಲವೇ ಮಾನ್ಯ ಮುಖ್ಯಮಂತ್ರಿಗಳೆ ಎಂದು ಪ್ರಶ್ನಿಸಿದರು.

ಅನುಬಂಧ-2ರಲ್ಲಿ ಅದರಲ್ಲಿ ನೀರಿನ ಲಭ್ಯವಿರುವುದೇ 8.85 ಟಿಎಂಸಿ ಎಂದು ಟೆಲಿಮೆಟ್ರಿಕ್ ಗೇಜ್ ವರದಿ ಹೇಳಿದೆ. ಅದನ್ನ ಲಿಫ್ಟ್ ಮಾಡುವುದೇ 3 ರಿಂದ 4 ಟಿಎಂಸಿ ನೀರು ಮಾತ್ರ. ಇದನ್ನು ನೋಡಿದಾಗ ಮೂಗಿಗಿಂತ ಮೂಗುತಿ ಭಾರ ಅನ್ನುವ ನಾನ್ನುಡಿ ಅನ್ವಯವಾಗುತ್ತೆ. ಯೋಜನೆ ಲಾಭಕ್ಕಿಂತ ಯೋಜನಾ ವೆಚ್ಚವೇ ಅಧಿಕವಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ.

> ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕಿನ ಕಟ್ಟಕಡೆಯ ಗ್ರಾಮ ನಂಗಲಿ ಜನ ಎತ್ತಿನಹೊಳೆ ನೀರಿಗಾಗಿ ರಾಮನನ್ನು ಕಾಯ್ದ ಶಬರಿಯಂತೆ ನಿಮ್ಮ ಮಾತನ್ನು ನಂಬಿ ಕಾಯುತ್ತಿದ್ದಾರೆ. ಯಾವಾಗ ನೀರು ಕೊಡ್ತೀರಿ ಆರಂಭದಲ್ಲಿ ಹೇಳಿರುವ ಹಾಗೆ 24 ಟಿಎಂಸಿ ನೀರು ಲಭ್ಯವಿದೆ. ಅದಕ್ಕಾಗಿ ಜಿಲ್ಲಾವಾರು ನೀರನ್ನು ಹಂಚಿಕೆ ಮಾಡಿದ್ರಿ. (ಕೇಂದ್ರೀಯ ಜಲ ಆಯೋಗ) ವರದಿಯ ಪ್ರಕಾರ ನೀವು ಹೇಳಿರುವ ಹಾಗೆ 24 ಟಿಎಂಸಿ ನೀರು ಲಭ್ಯವಿಲ್ಲ ಎಂದು 2012ರಲ್ಲಿಯೇ ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದಿತ್ತು. (ಭಾರತೀಯ ವಿಜ್ಞಾನ ಸಂಸ್ಥೆ) 24 ಟಿಎಂಸಿ ನೀರು ಇಳುವರಿ ಸಾಧ್ಯವಿಲ್ಲ, ಕೇವಲ ಕಾಲ್ಪನಿಕ. 3 ರಿಂದ 4 ಟಿಎಂಸಿ ನೀರು ಮಾತ್ರ ಎಂದು ತಿಳಿಸಿತ್ತು.

# ಎಕ್ಸ್‌ಪ್ರೆಸ್ ವೇನಲ್ಲಿ ತಗ್ಗಿದ ಸಾವಿನ ಪ್ರಮಾಣ

## 2023ರಲ್ಲಿ ಸಾವಿನ ಶತಕ ಬಾರಿಸುವ ಮೂಲಕ ಡೆತ್‌ವೇ ಎಂಬ ಕಳಂಕಕ್ಕೆ ಪಾತ್ರವಾಗಿದ್ದ ಬೆಂ-ಮೈ 6 ಪಥದ ಎಕ್ಸ್‌ಪ್ರೆಸ್ ವೇ

• ಉದಯವಾಹಿನಿ ರಾಮನಗರ

2023ರಲ್ಲಿ ಸಾವಿನ ಶತಕ ಬಾರಿಸುವ ಮೂಲಕ ಡೆತ್‌ವೇ ಎಂಬ ಕಳಂಕಕ್ಕೆ ಪಾತ್ರವಾಗಿದ್ದ ಬೆಂ-ಮೈ 6 ಪಥದ ಎಕ್ಸ್‌ಪ್ರೆಸ್ ವೇನಲ್ಲಿ ಅಪಘಾತ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ. ಈ ಸಂಗತಿಯನ್ನು ಪೊಲೀಸ್ ಇಲಾಖೆ ಅಧಿಕೃತ ಅಂಕಿ ಅಂಶಗಳನ್ನು ಬಿಡುಗಡೆ ಮಾಡುವ ಮೂಲಕ ಖಚಿತ ಪಡಿಸಿದೆ.

**ನಿಯಮ ಉಲ್ಲಂಘನೆ ವಿರುದ್ಧ ಕಣ್ಗಾವಲು**

2023ರಲ್ಲಿ ಆಗಸ್ಟ್ ತಿಂಗಳವರೆಗೆ 147 ಮಂದಿ ಎಕ್ಸ್‌ಪ್ರಸ್ ವೇನಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಸಾವಿಗೀಡಾಗಿದ್ದರು. ಈ ವರ್ಷ ಆಗಸ್ಟ್ ಅಂತ್ಯದವರೆಗೆ 50 ಮಂದಿ ಸಾವಿಗೀಡಾಗಿದ್ದಾರೆ. ಈ ಅಂಕಿ ಅಂಶ ಬಿಡುಗಡೆ ಮಾಡಿರುವ ಸಂಚಾರ ಮತ್ತು ರಸ್ತೆ ಸುರಕ್ಷತೆ ವಿಭಾಗದ ಎಡಿಜಿಪಿ ಅಲೋಕ್‌ಕುಮಾರ್, ಈ ವರ್ಷದಲ್ಲಿ 97 ಮಂದಿ ಅಮೂಲ್ಯ ಜೀವ ಉಳಿದಿದೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಅನಿಸಿಕೆ ಹಂಚಿಕೊಂಡಿದ್ದಾರೆ.

**ಸಿಂಗಲ್ ಡಿಜಿಟ್‌ಗಿಳಿದ ಸಾವಿನ ಸಂಖ್ಯೆ:** ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ 2023ರಲ್ಲಿ ನಡೆಯುತ್ತಿದ್ದ ಸಾಲು ಸಾಲು ಅಪ ಘಾತಗಳಿಂದಾಗಿ ಪ್ರತಿ ತಿಂಗಳು 14 ರಿಂದ 29 ಮಂದಿವರೆಗೆ ಸಾವಿಗೀಡಾಗಿದ್ದರು.

ಇನ್ನು ಗಾಯಾಳುಗಳ ಸಂಖ್ಯೆ ತ್ರಿಶತಕ ದಾಟಿತ್ತು. ಸರಣಿ ಅಪಘಾತಗಳಿಂದಾಗಿ ನಾಲ್ಕೈದು ಮಂದಿ ಒಂದೇ ಅಪಘಾತದಲ್ಲಿ ಸಾವಿಗೀಡಾಗಿದ್ದರು. ಈ ವರ್ಷ ಎಕ್ಸ್‌ಪ್ರಸ್ ವೇನಲ್ಲಿ ಜನವರಿ ತಿಂಗಳಲ್ಲಿ 12 ಮಂದಿ ಸಾವಿಗೀಡಾಗಿದ್ದನ್ನು ಬಿಟ್ಟರೆ, ಉಳಿದ ತಿಂಗಳಲ್ಲಿ ಸಾವಿನ ಪ್ರಮಾಣ ಸಿಂಗಲ್ ಡಿಜಿಟ್‌ಗೆ ಇಳಿದಿದೆ. ಆಗಸ್ಟ್‌ನಲ್ಲಿ 2 ಸಾವು ಸಂಭವಿಸಿದ್ದು, ಎಕ್ಸ್‌ಪ್ರಸ್ ವೇ ಸುರಕ್ಷಿತ ಪ್ರಯಾಣದ ಹೆದ್ದಾರಿಯಾಗಿದೆ ಎಂಬುದನ್ನು ಪೊಲೀಸ್ ಇಲಾಖೆ ಅಂಕಿಅಂಶ ತಿಳಿಸಿವೆ.


ಉದಯವಾಹಿನಿ ಚಿತ್ರ

> ಪ್ರಯಾಣದ ಸಮಯ 15 ನಿಮಿಷ ಹೆಚ್ಚಿಸಿದರೆ ಅಮೂಲ್ಯ ಜೀವ ಉಳಿಯುತ್ತದೆ. ಈ ವರ್ಷ ಹೆದ್ದಾರಿಯಲ್ಲಿ ಸುರಕ್ಷತಾ ಕ್ರಮ ಕೈಗೊಂಡಿರುವ ಪರಿಣಾಮ 97 ಅಮೂಲ್ಯ ಜೀವಉಳಿದಿವೆ.
> -ಅಲೋಕ್ ಕುಮಾರ್, ಎಡಿಜಿಪಿ, ಸಂಚಾರ ಮತ್ತು ರಸ್ತೆ ಸುರಕ್ಷತೆ ವಿಭಾಗ

**ತಗ್ಗಿದ ಅಪಘಾತ:** 2023ರ ಮಾ.12 ರಂದು ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ವೇ ಅನ್ನು ಪ್ರಧಾನಿ ನರೇಂದ್ರ ಮೋದಿ ಲೋಕಾಪಣೆಗೊಳಿಸಿದ್ದರು. ಈ ಮುನ್ನ 2022ರ ಡಿಸೆಂಬರ್ ಅಂತ್ಯದಿಂದಲೇ ಎಕ್ಸ್‌ಪ್ರಸ್ ವೇನಲ್ಲಿ ಪ್ರಯಾಣಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ಉದ್ಘಾಟನೆಗೊಂಡ ಬಳಿಕ 4 ತಿಂಗಳ ಅವಧಿಯಲ್ಲಿ( ಮಾರ್ಚ್ ನಿಂದ ಜೂನ್‌ವರೆಗೆ) 96 ಮಂದಿ ಸಾವಿಗೀಡಾಗಿದ್ದರು. ಈ ಹಿನ್ನೆಲೆ ಎನ್‌ಎಚ್‌ಎಐ ಮತ್ತು ರಾಜ್ಯ ಪೊಲೀಸ್ ಇಲಾಖೆ ಹೆದ್ದಾರಿ ಸುರಕ್ಷತೆ ಬಗ್ಗೆ ಸಾಕಷ್ಟು ಗಮನಹರಿಸಿತ್ತು. ಪರಿಣಾಮ ಜುಲೈನಲ್ಲಿ ಎನ್‌ಎಚ್ ಎಐ ರಸ್ತೆ ಸುರಕ್ಷತೆಗೆ ಸಂಬಂಧಿಸಿದಂತೆ 3 ಮಂದಿ ತಜ್ಞರ ಸಮಿತಿ ರಚಿಸಿ ಹೆದ್ದಾರಿಯಲ್ಲಿ ಸಮೀಕ್ಷೆ ನಡೆಸಿತ್ತು. ಇನ್ನು ಸಂಚಾರ ಮತ್ತು ರಸ್ತೆ ಸುರಕ್ಷತಾ ವಿಭಾಗದ ಎಡಿಜಿಪಿ ಅಲೋಕ್‌ಕುಮಾರ್ ಸಹ 2 ಬಾರಿ ಹೆದ್ದಾರಿಯಲ್ಲಿ ಸುರಕ್ಷತಾ ಕ್ರಮಗಳ ಬಗ್ಗೆ ವೀಕ್ಷಣೆ ಮಾಡಿದ್ದರು. ಇದೆಲ್ಲರದ ಪರಿಣಾಮ ಹೆದ್ದಾರಿಯಲ್ಲಿ ಇದೀಗ ಸಾವಿನ ಪ್ರಮಾಣ ತಗ್ಗಿದೆ.

### ವೇಗ ನಿಯಂತ್ರಣವೂ ಸಹಕಾರಿ

**ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಅಪಘಾತ ನಿಯಂತ್ರಣಕ್ಕೆ ವೇಗಕ್ಕೆ ಕಡಿವಾಣ ಹಾಕಿದ್ದು ಪ್ರಮುಖ ಕಾರಣವಾಗಿದೆ. ಎಕ್ಸ್‌ಪ್ರೆಸ್ ವೇನದಲ್ಲಿ 48 ಕಡೆ ಎಐ ತಂತ್ರಜ್ಞಾನ ಹೊಂದಿರುವ ಎಎನ್‌ಆರ್‌ಪಿ ಕ್ಯಾಮರಾ ಅಳವಡಿಸಿ ಸಂಚಾರ ನಿಯಮ ಉಲ್ಲಂಘನೆ ವಿರುದ್ಧ ಕಣ್ಗಾವಲು ಇರಿಸಲಾಗಿದೆ. 100 ಕಿ.ಮೀ.ಗಿಂತ ಹೆಚ್ಚಿನ ವೇಗದಲ್ಲಿ ಸಂಚರಿಸುವ ಪ್ರಯಾಣಿಕರ ವಿರುದ್ಧ ದಂಡ ವಿಧಿಸಲಾಗುತ್ತದೆ. ಆಗಸ್ಟ್ ತಿಂಗಳಲ್ಲಿ 1.20 ಲಕ್ಷ ಪ್ರಕರಣ ದಾಖಲಿಸಲಾಗಿದೆ. ಇನ್ನು ವೇಗದ ಮಿತಿ 130 ಕಿ.ಮೀ. ದಾಟಿದರೆ ಎಫ್‌ಐಆರ್ ದಾಖಲಿಸಲಾಗುತ್ತದೆ. ವೇಗಕ್ಕೆ ಕಡಿವಾಣ ಹಾಕಿರುವುದು ಅಪಘಾತ ತಗ್ಗಲು ಕಾರಣವಾಗಿದೆ ಎನ್ನುತ್ತಿದ್ದಾರೆ ಪೊಲೀಸ್ ಮೂಲಗಳು.**

---

## ಕೃಷಿಯಿಂದ ಬದುಕು ಕಟ್ಟಿಕೊಂಡ ಎಂಟೆಕ್ ಪದವೀಧರ ಆಧೀಶ್

• ಉದಯವಾಹಿನಿ ರಾಮನಗರ

ಈತ ಓದಿದ್ದು ಎಂಟೆಕ್ ಪದವಿ. ಆದರೆ ಬದುಕು ಕಟ್ಟಿಕೊಂಡಿದ್ದು ಮಾತ್ರ ಕೃಷಿಯಲ್ಲಿ. ರಾಮನಗರ ಜಿಲ್ಲೆಯ ಪಾಲಭೋವಿದೊಡ್ಡಿ ಗ್ರಾಮದಲ್ಲಿ ವಾಸಿಸುತ್ತಿರುವ ಎಂ.ಟೆಕ್ ಪದವಿದರ ಆದೀಶ ಅವರು ಉನ್ನತ ವ್ಯಾಸಂಗವನ್ನು ಮಾಡಿ ಅದರಿಂದ ಸಿಗಬಹುದಾದ ಉದ್ಯೋಗವನ್ನು ದೂರ ಮಾಡಿಕೊಂಡು, ನಾಲ್ಕು ಎಕರೆ ಜಮೀನಿನಲ್ಲಿ ಸಮಗ್ರ ಕೃಷಿಯನ್ನು ಅಳವಡಿಸಿಕೊಂಡು ಯಶಸ್ಸು ಸಾಧಿಸುವ ಮೂಲಕ ಇಂದಿನ ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಮಾದರಿಯಾಗಿದ್ದಾರೆ.

ಬಾಲ್ಯದಿಂದಲೂ ತಂದೆ ಜೊತೆ ಕೃಷಿ ಚಟುವಟಿಕೆ ಬಗ್ಗೆ ಆಸಕ್ತಿಯನ್ನು ಬೆಳೆಸಿಕೊಂಡಿದ್ದ ಇವರು, ಉತ್ತಮ ವ್ಯಾಸಂಗ ಮಾಡುವ ಮೂಲಕ ಇಂಜಿನಿಯರಿಂಗ್ ಪದವಿ ಪಡೆದು ಎಂ.ಟೆಕ್ ಸ್ನಾತಕೋತ್ತರ ಪದವಿ ಪಡೆದುಕೊಂಡರು. ನಂತರ ಕೆಲವು ಸಮಯ ಡಿಪ್ಲೋಮಾ ಕಾಲೇಜಿನ ಉಪನ್ಯಾಸಕನಾಗಿ, ಪ್ರಾಂಶುಪಾಲನಾಗಿ ಕೆಲಸ ಮಾಡಿದರು. ಈ ಉದ್ಯೋಗ ಇವರಿಗೆ ತೃಪ್ತಿ ತರಲಿಲ್ಲ. ನಂತರ ತಮ್ಮ ಗ್ರಾಮದಲ್ಲಿ ಇದ್ದ ಕೃಷಿ ಜಮೀನಿನ ಕಡೆಗೆ ಮುಖ ಮಾಡಿದರು.


ಉದಯವಾಹಿನಿ ಚಿತ್ರ

ವಕೀಲೆಯಾಗಿರುವ ಪತ್ನಿಯು ಸಹ ನನ್ನ ಕೃಷಿ ಕೆಲಸಕ್ಕೆ ಬೆಂಬಲ ನೀಡುತ್ತಿದ್ದಾರೆ. ಕೃಷಿಯಿಂದ ನಾವು ನೆಮ್ಮದಿ ಕಂಡುಕೊಂಡಿದ್ದೇವೆ ಎಂದು ಹೇಳುವ ಆದೀಶ ಅವರು, ಸದ್ಯಕ್ಕೆ ಪ್ರತಿ ವರ್ಷ ಎಲ್ಲಾ ಖರ್ಚು ಕಳೆದು ನಾಲ್ಕು ಲಕ್ಷ ಸಂಪಾದನೆ ಆಗುತ್ತಿದೆ.

> ವ್ಯವಸಾಯ ಮಾಡುತ್ತಿರುವ ನಾಲ್ಕು ಎಕರೆ ಜಮೀನಿನಲ್ಲಿ ಬಹು ಬೆಳೆಯನ್ನು ಬೇಸಾಯ ಮಾಡುತ್ತಿದ್ದಾರೆ. ಭತ್ತ, ಬೆಂಡೆಕಾಯಿ, ರಾಗಿ, ಮೆಣಸಿನ ಕಾಯಿ, ಸೊಪ್ಪು, ಬಾಳೆ, ತೆಂಗು ಹಾಗೂ ಕೆಲವು ಹಣ್ಣಿನ ಗಿಡಗಳನ್ನು ಬೆಳೆದಿದ್ದಾರೆ. ಮಾರುಕಟ್ಟೆಯು ಗ್ರಾಮಕ್ಕೆ ಕೆಲವೇ ಕಿ.ಮೀ ಅಂತರದಲ್ಲಿರುವುದರಿಂದ ತೋಟಗಾರಿಕೆ ಬೆಳೆಯಲ್ಲಿ ಉತ್ತಮ ಆದಾಯವನ್ನು ಸಹ ಕಂಡಿದ್ದೇನೆ -ಆಧೀಶ್

ಮುಂದಿನ ದಿನದಲ್ಲಿ ಸಮಗ್ರ ಸಾವಯವ ಕೃಷಿಯನ್ನು ಅಳವಡಿಸಿಕೊಳ್ಳುವ ಇಂಗಿತ ವ್ಯಕ್ತಪಡಿಸಿದ್ದಾರೆ.

ದಂಪತಿಗಳು ಉನ್ನತ ವ್ಯಾಸಂಗ ಪಡೆದಿದ್ದರು ಸಹ ತಮ್ಮ ಪುತ್ರನನ್ನು ಸರ್ಕಾರಿ ಶಾಲೆಯಲ್ಲಿ ಓದಿಸುತ್ತಿರುವುದು ವಿಶೇಷವಾಗಿದೆ.

---

## ಖಾಸಗಿ ಶಾಲೆಗೆ ಸೆಡ್ಡು ಹೊಡೆದ ಸರ್ಕಾರಿ ಶಾಲೆ

• ಉದಯವಾಹಿನಿ ಶಿರಾ

ಶಿಕ್ಷಕರು ಮನಸ್ಸು ಮಾಡಿದರೆ ಖಾಸಗಿ ಶಾಲೆಯನ್ನು ಮೀರಿಸುವಂತೆ ಸರ್ಕಾರಿ ಶಾಲೆಯನ್ನು ಅಭಿವೃದ್ಧಿಪಡಿಸಬಹುದು ಎನ್ನುವುದಕ್ಕೆ ತಾಳಗುಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಿದರ್ಶನದಂತಿದೆ.

ತಾಲ್ಲೂಕಿನ ಕಳ್ಳಂಬೆಳ್ಳ ಹೋಬಳಿ ತಾಳಗುಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಹಲವು ಕೊರತೆಗಳ ನಡುವೆಯೂ ದಾನಿಗಳ ಸಹಕಾರದಿಂದ ಮಾದರಿ ಶಾಲೆಯನ್ನಾಗಿ ರೂಪಿಸಿದ್ದಾರೆ.

ಶಾಲೆಯಲ್ಲಿ 1ರಿಂದ 7ನೇ ತರಗತಿವರೆಗೆ 131 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಇಲ್ಲಿ ವರ್ಷದಿಂದ ವರ್ಷಕ್ಕೆ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದೆ.

ಶಾಲೆಯಲ್ಲಿ 9 ಕೊಠಡಿಗಳಿವೆ. ಅದರಲ್ಲಿ ಐದು ಶಿಥಿಲಗೊಂಡಿದ್ದರೆ, ಮತ್ತೊಂದು ಕೊಠಡಿಯನ್ನು ನೆಲಸಮ ಮಾಡಬೇಕಿದೆ. ಉಳಿದ ಮೂರು ಕೊಠಡಿಗಳಲ್ಲಿ ಶಾಲೆಗಳು ನಡೆಯುವಂತಾಗಿದೆ. 131 ಮಕ್ಕಳಿದ್ದರೂ ನಾಲ್ಕು ಜನ ಶಿಕ್ಷಕರಿದ್ದಾರೆ. ವಿಷಯವಾರು ಬೋಧನೆಗೆ ತೊಂದರೆಯಾಗುತ್ತಿದೆ. ಜೊತೆಗೆ ದೈಹಿಕ ಶಿಕ್ಷಣ ಶಿಕ್ಷಕರು ಇಲ್ಲ. ಶಿಕ್ಷಕರು ಹಾಗೂ ಕೊಠಡಿ ಸಮಸ್ಯೆಗಳ ನಡುವೆಯೂ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಪೋಷಕರ ಗಮನ ಸೆಳೆದಿರುವುದು ವಿಶೇಷ.



ಉದಯವಾಹಿನಿ ಚಿತ್ರ

ಶಾಲೆಯ ಪ್ರಭಾರ ಮುಖ್ಯಶಿಕ್ಷಕಿ ಟಿ.ವಿ.ರೂಪ ಅವರು 21 ವರ್ಷದಿಂದ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮಾದರಿ ಶಾಲೆಯನ್ನಾಗಿ ಮಾಡಲು ಶ್ರಮಿಸಿದ್ದಾರೆ. ಶಾಲೆಯಲ್ಲಿ ಕಲಿಕೆಗೆ ಪೂರಕ ವಾತಾವರಣ ನಿರ್ಮಿಸಿದ್ದಾರೆ. ಒಳಗಿನ ಪ್ರಶಾಂತ ವಾತಾವರಣ ಎಲ್ಲರನ್ನೂ ಮಂತ್ರಮುಗ್ಧರನ್ನಾಗಿ ಮಾಡುತ್ತದೆ.

---

## ಅಸ್ಸಾಂ ವಿದ್ಯಾರ್ಥಿಗಳಿಗೆ ಕನ್ನಡ ಕಲಿಸುವ ಶಿಕ್ಷಕಿಯರು

• ಉದಯವಾಹಿನಿ ಗೋಣಿಕೊಪ್ಪಲು

ಕನ್ನಡ ನೆಲದ ಮಕ್ಕಳಿಗಿಂತಲೂ ಸಾವಿರಾರು ಕಿಲೋಮೀಟರ್ ದೂರದ ಅಸ್ಸಾಂ ಮಕ್ಕಳಿಗೆ ಕನ್ನಡ ಕಲಿಸುವ ಪ್ರಯತ್ನ ಇಲ್ಲಿಗೆ ಸಮೀಪದ ಬಾಡಗರಕೇರಿ ಸರ್ಕಾರಿ ಹಿರಿಯ ಪಾಥಮಿಕ ಶಾಲೆಯಲ್ಲಿ ನಡೆದಿದೆ. ಶಾಲೆಯ ಮುಖ್ಯ ಶಿಕ್ಷಕಿ ಎಚ್.ಎಂ.ಜಯಮ್ಮ, ಅಂಜು ಮತ್ತು ಎಂ.ಎಸ್.ಆಶಾ ಕನ್ನಡ ಕಲಿಸುವ ಕಾಯಕದಲ್ಲಿ ತೊಡಗಿಕೊಂಡಿದ್ದಾರೆ.

**ಕನ್ನಡ ಕಲಿಸುವ ಕಾಯಕ**

ಶಾಲೆಯಲ್ಲಿ 1ರಿಂದ 7ನೇ ತರಗತಿವರೆಗೆ ಈಗ 64 ವಿದ್ಯಾರ್ಥಿಗಳಿದ್ದಾರೆ. ಇವರಲ್ಲಿ ಅಸ್ಸಾಂ ವಿದ್ಯಾರ್ಥಿಗಳ ಸಂಖ್ಯೆ 34. ಈ ಮಕ್ಕಳಿಗೆ ಕನ್ನಡ ಅಕ್ಷರ ಮಾಲೆ ಕಲಿಸಲಾಗುತ್ತಿದೆ. ಓದು ಬರಹದಲ್ಲಿ ಚುರುಕಾಗಿರುವ ಅಸ್ಸಾಮಿ ವಿದ್ಯಾರ್ಥಿಗಳು ಸ್ಥಳೀಯ ಮಕ್ಕಳಿಗಿಂತಲೂ ಕನ್ನಡ ಕಲಿಯಲು ಹೆಚ್ಚು ಆಸಕ್ತಿ ತೋರುತ್ತಿದ್ದಾರೆ ಎನ್ನುತ್ತಾರೆ ಶಾಲೆಯ ಶಿಕ್ಷಕರು. ಇದೇ ಶಾಲೆಯಲ್ಲಿ ಪ್ರಾಥಮಿಕ ತರಗತಿಯಿಂದ ವ್ಯಾಸಂಗದ ಮಾಡಿದ ಅಸ್ಸಾಂನ ಕಿರಣ್ ಮುಂಡ್ ಎಂಬ ವಿದ್ಯಾರ್ಥಿ ಬಿರುನಾಣಿಯ ಮರೆನಾಡು ಕನ್ನಡ ಪ್ರೌಢಶಾಲೆಯಲ್ಲಿ 10ನೇ ತರಗತಿ ವ್ಯಾಸಂಗ ಮಾಡಿ 625ಕ್ಕೆ 527 ಅಂಕಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದುಕೊಂಡಿರುವುದು ಇವರ ಮಾತಿಗೆ ಪುಷ್ಟಿ ನೀಡುವಂತಿದೆ.


ಉದಯವಾಹಿನಿ ಚಿತ್ರ

20 ವರ್ಷಗಳ ಹಿಂದೆಯೇ ಸಾವಿರಾರು ಕಾರ್ಮಿಕರು ಕೂಲಿ ಅರಸಿ ಕೊಡಗಿಗೆ ಬಂದು ಕೊಡಗಿನ ಗಡಿಭಾಗ ಬಿರುನಾಣಿ, ಪರಕಟಗೇರಿ, ಮರೆನಾಡು ಪ್ರದೇಶದ ಕಾಫಿ ತೋಟದ ಲೈನ್‌ಮನೆಗಳಲ್ಲಿ ನೆಲೆಸಿದ್ದಾರೆ. ಇವರಿಗೆಲ್ಲ ಕೊಡಗಿನ ವಿಳಾಸದಲ್ಲಿಯೇ ಆಧಾರ್ ಕಾರ್ಡ್ ಕೂಡ ಇದೆ. ಇವರೆಲ್ಲ ಈಗ ತಮ್ಮ ಮಕ್ಕಳನ್ನು ಸ್ಥಳೀಯ ಸರ್ಕಾರಿ ಶಾಲೆಗಳಿಗೆ ಸೇರಿಸಿ ಓದಿಸುತ್ತಿದ್ದಾರೆ. ಹೀಗಾಗಿ ಈ ಮಕ್ಕಳೆಲ್ಲ ಈಗ ಕನ್ನಡಿಗರೇ ಆಗಿದ್ದಾರೆ' ಎಂಬ ಹೆಮ್ಮೆಯ ನುಡಿ ಶಾಲೆಯ ಮುಖ್ಯ ಶಿಕ್ಷಕಿ ಜಯಮ್ಮ ಅವರದು.

---

## ಜಿದ್ದಾಜಿದ್ದಿಗೆ ಸಾಕ್ಷಿಯಾಗಲಿರುವ ಚನ್ನಪಟ್ಟಣ ನಗರಸಭೆ

• ಉದಯವಾಹಿನಿ ಚನ್ನಪಟ್ಟಣ

ಉಪಚುನಾವಣೆಯ ಕಾವು ಏರುತ್ತಿರುವಂತೆ ಮತ್ತೊಂದು ಜಿದ್ದಾಜಿದ್ದಿನ ಹೋರಾಟಕ್ಕೆ ಚನ್ನಪಟ್ಟಣವು ಸಾಕ್ಷಿಯಾಗಲಿದ್ದು, ಇಲ್ಲಿನ ನಗರಸಭೆ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನದ ಚುನಾವಣೆಗೆ ದಿನಾಂಕ ನಿಗದಿಗೂ ಮೊದಲೆ ಕಾಂಗ್ರೆಸ್ ಹಾಗೂ ಮೈತ್ರಿ ಪಕ್ಷಗಳಲ್ಲಿ ಸಂಘರ್ಷ ಏರ್ಪಟ್ಟಿದೆ.

ಒಟ್ಟು 31 ಸಂಖ್ಯಾಬಲದ ನಗರಸಭೆಯಲ್ಲಿ ಜೆಡಿಎಸ್ 16, ಕಾಂಗ್ರೆಸ್ 7, ಬಿಜೆಪಿ 7 ಸ್ಥಾನಗಳಲ್ಲಿ ಜಯಗಳಿಸಿದ್ದವು. ಒಂದು ಸ್ಥಾನ ಪಕ್ಷೇತರ ಪಾಲಾಗಿತ್ತು. ಹೆಚ್ಚು ಸ್ಥಾನಗಳಲ್ಲಿ ಗೆದ್ದಿದ್ದ ಜೆಡಿಎಸ್ ಮೊದಲ ಅವಧಿಯ ಅಧಿಕಾರವನ್ನು ನಿರಾಯಾಸವಾಗಿ ನಡೆಸಿತ್ತು.

ಈಗ ಎರಡನೇ ಅವಧಿಗೆ ಅಧ್ಯಕ್ಷಸ್ಥಾನ ಹಿಂದುಳಿದ ವರ್ಗ ಎ ಹಾಗೂ ಉಪಾಧ್ಯಕ್ಷ ಸ್ಥಾನ ಪರಿಶಿಷ್ಟ ಜಾತಿಗೆ ಮೀಸಲಾಗಿದೆ. ಆದರೆ ಲೋಕಸಭಾ ಚುನಾವಣೆಗೂ ಮೊದಲು ಅಧ್ಯಕ್ಷರೂ ಸೇರಿದಂತೆ 9 ಮಂದಿ ಜೆಡಿಎಸ್ ಸದಸ್ಯರು ಕಾಂಗ್ರೆಸ್ ಪಕ್ಷಕ್ಕೆ ಪಕ್ಷಾಂತರ ಮಾಡಿದ್ದಾರೆ. ಈಗ ಜೆಡಿಎಸ್ ಸಂಖ್ಯಾಬಲವನ್ನು ಕಳೆದುಕೊಂಡಿದೆ. ಕಾಂಗ್ರೆಸ್ ಸಂಖ್ಯಾಬಲವನ್ನು ಹೆಚ್ಚಿಸಿಕೊಂಡಿರುವ ಕಾರಣ ಅಧ್ಯಕ್ಷಗಾದಿಗೆ ಜಿದ್ದಾಜಿದ್ದಿ ಏರ್ಪಟ್ಟಿದೆ.



ಉದಯವಾಹಿನಿ ಚಿತ್ರ

ಕಾಂಗ್ರೆಸ್ ಈಗ 16 ಸ್ಥಾನ, ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಕೂಟ ತಲ 7 ರಂತೆ 14 ಸದಸ್ಯ ಬಲ ಹೊಂದಿವೆ.

ಮೈತ್ರಿಗೆ ಲೋಕಸ ಭಾ ಸದಸ್ಯ ಸಿ.ಎನ್. ಮಂಜುನಾಥ್ ಅವರ ಮತವೂ ಇರುವುದರಿಂದ 15 ಸಂಖ್ಯಾಬಲ ಆಗಲಿದೆ. ಪಕ್ಷೇತರ ಸದಸ್ಯರೊಬ್ಬರು ಯಾರಿಗೆ ಬೆಂಬಲ ನೀಡಲಿದ್ದಾರೆ ಎನ್ನುವುದು ಕುತೂಹಲ ಮೂಡಿಸಿದೆ.

### ಶತಾಯಗತಾಯ ಪ್ರಯತ್ನ

**ಚನ್ನಪಟ್ಟಣ ಉಪ ಚುನಾವಣೆಯನ್ನು ಪ್ರತಿಷ್ಠೆಯ ಪ್ರಶ್ನೆಯಾಗಿ ಸ್ವೀಕರಿಸಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ನಗರಸಭಾ ಅಧಿಕಾರ ಗದ್ದುಗೆಯೂ ಸಹ ಅಷ್ಟೇ ಪ್ರತಿಷ್ಠೆಯ ವಿಷಯವಾಗಿರುವ ಕಾರಣ ಅವರು ನಗರಸಭೆಯನ್ನು ಕಾಂಗ್ರೆಸ್ ಪಕ್ಷದ ತೆಕ್ಕೆಗೆ ತೆಗೆದುಕೊಳ್ಳಲು ಶತಾಯಗತಾಯ ಪ್ರಯತ್ನ ನಡೆಸುವುದಂತೂ ಖಚಿತ. ಇದಕ್ಕಾಗಿ ಎಲ್ಲಾ ರೀತಿಯ ತಂತ್ರಗಳನ್ನು ಹೆಣೆಯುತ್ತಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಮುಖಂಡರೊಬ್ಬರು ತಿಳಿಸುತ್ತಾರೆ.**

---

## ಕದ್ದ ಚಿನ್ನಾಭರಣ ಮಾರಾಟ ಮಾಡಲು ಯತ್ನಿಸಿದ ಹೆಡ್ ಕಾನ್‌ಸ್ಟೇಬಲ್ ಅರೆಸ್ಟ್

• ಉದಯವಾಹಿನಿ ಮೈಸೂರು

ಕಳ್ಳರು ಮನೆಗಳ್ಳತನ ಮಾಡಿ, ಕದ್ದಿದ್ದಂತ ಚಿನ್ನಾಭರಣದಲ್ಲಿ ಪಾಲು ಪಡೆದಿದ್ದಂತ ಹೆಡ್ ಕಾನ್ಸ್‌ಸ್ಟೇಬಲ್ ಒಬ್ಬರು, ಮಾರಾಟ ಮಾಡಲು ಯತ್ನಿಸಿ ಪೊಲೀಸರಿಗೆ ಸಿಕ್ಕಿಬಿದ್ದು, ಬಂಧನಕ್ಕೆ ಒಳಗಾಗಿರುವಂತ ಘಟನೆ ಮೈಸೂರಿನ ಮಂಡಿ ಠಾಣೆಯಲ್ಲಿ ನಡೆದಿದೆ. ಮೈಸೂರಿನ ಮಂಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಿವಿಧ ಮನೆಗಳ್ಳತನ ಪ್ರಕರಣಗಳು ನಡೆದಿದ್ದವು.

ಈ ಕಳ್ಳತನ ಪ್ರಕರಣದಲ್ಲಿ ಕಳ್ಳರಾದಂತ ನಜರುಲ್ಲಾ ಬಾಬು, ಆಲಿ ಎಂಬುವರು ಭಾಗಿಯಾಗಿದ್ದಂತ ಮಾಹಿತಿ ಪೊಲೀಸರಿಗೆ ಸಿಕ್ಕಿತ್ತು. ಅವರನ್ನು ಪೊಲೀಸರು ಬಂಧಿಸಿದ್ದರು. ಪೊಲೀಸರು ಬಂಧಿಸಿದ್ದಂತ ಮನೆಗಳ್ಳರಾದಂತ ನಜರುಲ್ಲಾ ಬಾಬು ಹಾಗೂ ಆಲಿ ತಾವು ಕದ್ದಿದ್ದಂತ 400 ಗ್ರಾಂ ಚಿನ್ನಾಭರಣದಲ್ಲಿ 300 ಗ್ರಾಂ ಅನ್ನು ಅಶೋಕಪುರಂ ಠಾಣೆಯ ಹೆಡ್ ಕಾನ್‌ಸ್ಟೇಬಲ್ ರಾಜು ಎಂಬುವರಿಗೆ ಕೊಟ್ಟಿರುವುದಾಗಿ ಮಾಹಿತಿ ನೀಡಿದ್ದರು.

ಈ ಮಾಹಿತಿ ಆಧರಿಸಿ ಅಶೋಕಪುರಂ ಹೆಡ್ ಕಾನ್ ಸ್ಟೇಬಲ್ ರಾಜು ಅವರ ಮೇಲೆ ಮಂಡಿ ಠಾಣೆಯ ಪೊಲೀಸರು ಕಣ್ಣಿಟ್ಟಿದ್ದರು. ಇಂದು ಮನೆಗಳ್ಳರಿಂದ ಪಡೆದಿದ್ದಂತ 100 ಗ್ರಾಂ ಚಿನ್ನಾಭರಣ ಮಾರಾಟಕ್ಕೆ ಯತ್ನಿಸಿದಂತ ವೇಳೆಯಲ್ಲಿ ಹೆಡ್ ಕಾನ್‌ಸ್ಟೇಬಲ್ ರಾಜುನನ್ನು ಮಂಡಿ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

---

## ಹೋಟೆಲ್‌ಗೆ ನುಗ್ಗಿದ ಟಿಪ್ಪರ್: ಇಬ್ಬರು ಸಾವು

• ಉದಯವಾಹಿನಿ ಚಿಕ್ಕಬಳ್ಳಾಪುರ

ಜಿಲ್ಲೆಯ ಚಿಂತಾಮಣಿ ನಗರದಲ್ಲಿ ಬೆಳಗ್ಗೆ ಟಿಪ್ಪರ್ ಲಾರಿಯೊಂದು ರಸ್ತೆ ಬದಿಯ ಹೋಟೆಲ್‌ಗೆ ನುಗ್ಗಿದ ಪರಿಣಾಮ ಇಬ್ಬರು ಸ್ಥಳದಲ್ಲಿ ಮೃತಪಟ್ಟಿದ್ದಾರೆ. ಮೃತರನ್ನು ಚಿಂತಾಮಣಿ ತಾಲ್ಲೂಕಿನ ಮಾಡಿಕೆರೆ ಗ್ರಾಮದ ನಿವಾಸಿ ಶಿವಾನಂದ, ಕೋಲಾರ ಜಿಲ್ಲೆಯ ವೆಲಗಲಬುರೆ ಗ್ರಾಮದ ನಿವಾಸಿ ಶಾಂತಕುಮಾರ್ ಎಂದು ಗುರುತಿಸಲಾಗಿದೆ. ಮೃತರಿಬ್ಬರು ಹೋಟೆಲ್ ಕಾರ್ಮಿಕರು ಎಂದು ತಿಳಿದು ಬಂದಿದೆ.

ಘಟನಾ ಸ್ಥಳಕ್ಕೆ ಚಿಂತಾಮಣಿ ನಗರ ಠಾಣೆ ಪೊಲೀಸರು ಬೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗಾಯಗೊಂಡಿರುವ ಮುರಳಿ ಹಾಗೂ ಶ್ರೀನಿವಾಸ ಬಾಬು ಅವರನ್ನು ಚಿಂತಾಮಣಿ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗೆ ಸೇರಿಸಲಾಗಿದೆ. ಟಿಪ್ಪರ್ ಚಾಲಕ ಅಪಘಾತ ಬಳಿಕ ಅಲ್ಲಿಂದ ಎಸ್ಕೇಪ್ ಆಗಿದ್ದಾನೆ.

---

## ಬಲವಂತದ ದುಡಿಮೆ: 36 ಕಾರ್ಮಿಕರ ರಕ್ಷಣೆ

• ಉದಯವಾಹಿನಿ ತಿಪಟೂರು

ತಾಲ್ಲೂಕಿನ ಹಾಲ್ಕುರಿಕೆ, ಮಂಜುನಾಥಪುರ ಸುತ್ತಮುತ್ತಲಿನ ಪ್ರದೇಶದಲ್ಲಿನ ಶುಂಠಿ ಜಮೀನಿನಲ್ಲಿ ಜೀತದಾಳುಗಳಂತೆ, ಬಲವಂತವಾಗಿ ದುಡಿಯುತ್ತಿದ್ದ 36 ಕಾರ್ಮಿಕರನ್ನು ಪೊಲೀಸರು ರಾತ್ರಿ ರಕ್ಷಿಸಿದ್ದಾರೆ. ಈ ಭಾಗದ ಕೆಲ ಪ್ರಭಾವಿಗಳು ರೈತರಿಂದ ನೂರಾರು ಎಕರೆ ಜಮೀನು ಗುತ್ತಿಗೆ ಪಡೆದು ಶುಂಠಿ ಬೆಳೆದಿದ್ದರು.

ಮೈಸೂರು, ಚಾಮರಾಜನಗರ, ಕೊಳ್ಳೇಗಾಲ, ಬಳ್ಳಾರಿ, ವಿಜಯಪುರ ಸೇರಿ ವಿವಿಧ ಜಿಲ್ಲೆಗಳ ಕಾರ್ಮಿಕರಿಗೆ ಹೆಚ್ಚಿನ ಕೂಲಿ ಆಸೆ ತೋರಿಸಿ ಜಮೀನಿನಲ್ಲಿ ಕೆಲಸ ಮಾಡಲು ಕರೆ ತಂದಿದ್ದರು. ಅಗತ್ಯ ಸೌಲಭ್ಯ, ಕೂಲಿ ಹಣ ಕೊಡದೆ ದುಡಿಸಿ ಕೊಳ್ಳಲಾಗುತ್ತಿದೆ. ಕೆಲಸದ ಸ್ಥಳದಿಂದ ಹೊರ ಹೋಗಲು ಬಿಡುತ್ತಿಲ್ಲ. ಪ್ರಶ್ನೆ ಮಾಡಿದರೆ ಹಲ್ಲೆ ಮಾಡುತ್ತಿದ್ದಾರೆ' ಎಂದು ಕಾರ್ಮಿಕರು ಆರೋಪಿಸುತ್ತಿದ್ದಾರೆ.

ನಮ್ಮ ಬಳಿ ಇದ್ದ ಆಧಾರ್‌ಕಾರ್ಡ್, ಗುರುತಿನ ಚೀಟಿ, ಮೊಬೈಲ್ ಕಿತ್ತುಕೊಂಡು ಹೆದರಿಸಿ, ಬೆದರಿಸಿ ಜಮೀನಿನ ಶೆಡ್‌ನಲ್ಲಿ ಇರಿಸಿದ್ದಾರೆ. ಶೆಡ್‌ನಿಂದ ಹೊರ ಹೋಗದಂತೆ ಕೆಲವರನ್ನು ಕಾವಲಿಟ್ಟಿದ್ದಾರೆ. ಜಾಸ್ತಿ ಮಾತನಾಡಿದರೆ ಹೊಡೆಯುತ್ತಾರೆ. ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 8 ಗಂಟೆಯ ತನಕ ಕೆಲಸ ಮಾಡಿದರೂ ಕೂಲಿ ಕೊಟ್ಟಿಲ್ಲ. ತುಂಬಾ ದಿನ ಒಂದು ಕಡೆ ಇರಲು ಬಿಡುತ್ತಿಲ್ಲ' ಎಂದು ಕಾರ್ಮಿಕರು ಅಳಲು ತೋಡಿಕೊಂಡಿದ್ದಾರೆ. ಹಾಸನ ಜಿಲ್ಲೆಯ ಅರಸಿಕೆರೆ ತಾಲ್ಲೂಕಿನ ವಿವಿಧ ಕಡೆ ಇರುವ ಶುಂಠಿ ಕ್ಯಾಂಪ್‌ಗಳಲ್ಲಿ ಕಾರ್ಮಿಕರನ್ನು ಕೆಲಸಕ್ಕೆ ನಿಯೋಜಿಸಲಾಗಿತ್ತು. ಕಳೆದ ಕೆಲವು ದಿನಗಳ ಹಿಂದೆ ಹಾಲ್ಕುರಿಕೆ, ಮಂಜುನಾಥಪುರ ಗ್ರಾಮಗಳ ಬಳಿಗೆ ಕರೆದುಕೊಂಡು ಬಂದಿದ್ದರು.


ಉದಯವಾಹಿನಿ ಚಿತ್ರ

### ಸಮುದಾಯ ಭವನದಲ್ಲಿ ಆಶ್ರಯ

**ಇದರ ಮಾಹಿತಿ ಪಡೆದ ಹೊನ್ನವಳ್ಳಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಥಳೀಯರ ನೆರವಿನಿಂದ ಕಾರ್ಮಿಕರನ್ನು ರಕ್ಷಿಸಿದ್ದು, ಅವರಿಗೆ ಹೊನ್ನವಳ್ಳಿ ಸಮುದಾಯ ಭವನದಲ್ಲಿ ಆಶ್ರಯ ಕಲ್ಪಿಸಲಾಗಿದೆ.**

---

# ಗುರುಭವನ: ಈವರೆಗೆ ಒಂದು ಇಟ್ಟಿಗೆಯನ್ನೂ ಇಟ್ಟಿಲ್ಲ

## • ಜಿಲ್ಲಾ ಕೇಂದ್ರದಲ್ಲಿ ಸುಸಜ್ಜಿತ ಗುರುಭವನ ನಿರ್ಮಾಣ ಮಾಡುವುದು 35 ವರ್ಷಗಳಿಂದ ಕನಸಾಗಿಯೇ ಉಳಿದಿದೆ

• ಉದಯವಾಹಿನಿ ಕೋಲಾರ

ಈಗಾಗಲೇ ಏಳೆಂಟು ಬಾರಿ ಶಂಕುಸ್ಥಾಪನೆ ಕಂಡಿರುವ ಗುರುಭವನ ಕಟ್ಟಡ ನಿರ್ಮಾಣ ಕಾಮಗಾರಿ ಮತ್ತೊಂದು ವರ್ಷ ಭರವಸೆಯಲ್ಲೇ ಕಳೆದು ಹೋಗಿದೆ. ನಿಗದಿಪಡಿಸಿರುವ ಜಾಗ ಪಾಳುಬಿದ್ದಿದ್ದು, ಈವರೆಗೆ ಒಂದು ಇಟ್ಟಿಗೆಯನ್ನೂ ಕಂಡಿಲ್ಲ.

ಜಿಲ್ಲಾ ಕೇಂದ್ರದಲ್ಲಿ ಸುಸಜ್ಜಿತ ಗುರುಭವನ ನಿರ್ಮಾಣ ಮಾಡುವುದು 35 ವರ್ಷಗಳಿಂದ ಕನಸಾಗಿಯೇ ಉಳಿದಿದೆ. ಕಾಮಗಾರಿ ಆರಂಭವಾಗಲು ಇನ್ನೆಷ್ಟು ವರ್ಷ ಕಾಯಬೇಕು, ಮತ್ತೆಷ್ಟು ಬಾರಿ ಶಂಕುಸ್ಥಾಪನೆ ನೆರವೇರಬೇಕು ಎಂಬುದು ಶಿಕ್ಷಕರು ಹಾಗೂ ಸಾರ್ವಜನಿಕರ ಪ್ರಶ್ನೆ.

ನಗರದಲ್ಲಿರುವ ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಒ) ಕಚೇರಿ ಪಕ್ಕದಲ್ಲಿ ಜಾಗ ನಿಗದಿಪಡಿಸಿದ್ದು, ಮಾರ್ಚ್‌ನಲ್ಲಿ ಜೆಸಿಬಿ ಮೂಲಕ ಅಡಿಪಾಯ ತೆಗೆಸಲು ಚಾಲನೆ ನೀಡಲಾಗಿತ್ತು. ಆದರೆ, ಈವರೆಗೆ ಯಾವುದೇ ರೀತಿಯ ಕಾಮಗಾರಿ ನಡೆದಿಲ್ಲ. ಶಿಕ್ಷಕರ ಸಂಘಟನೆಗಳಲ್ಲಿನ ಭಿನ್ನಾಭಿಪ್ರಾಯ, ಗುಂಪುಗಾರಿಕೆ ಇದಕ್ಕೆ ಮುಖ್ಯ ಕಾರಣ ಎನ್ನಲಾಗುತ್ತಿದೆ. ಅಧಿಕಾರಿಗಳು ತಾಂತ್ರಿಕ ಅಡಚಣೆಯ ನೆಪ ಹೇಳುತ್ತಿದ್ದಾರೆ. ಹಣ ನೀಡಲಾಗಿದೆ ಎನ್ನುವ ಜನಪ್ರತಿನಿಧಿಗಳು ಕೂಡ ಪ್ರಗತಿ ಪರಿಶೀಲನೆ ನಡೆಸಿಲ್ಲ. ಈ ಹಿಂದಿನ ಅಂದರೆ 2023ರ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಷಣ ಮಾಡಿದವರೆಲ್ಲಾ ಗುರುಭವನ ಕಟ್ಟಡ ಕಾಮಗಾರಿ ಬಗ್ಗೆಯೇ ಮಾತನಾಡಿದ್ದರು. ಎಸ್.ಮುನಿಸ್ವಾಮಿ (ಮಾಜಿ ಸಂಸದ), ವೈ.ಎ.ನಾರಾಯಣಸ್ವಾಮಿ (ವಿಧಾನ ಪರಿಷತ್ ಮಾಜಿ ಸದಸ್ಯ) ತಲಾ 50 ಲಕ್ಷ ನೀಡಿದ್ದಾರೆ.

### ಜನಪ್ರತಿನಿಧಿಗಳ ಬೆಂಬಲ

**ಇಂಚರ ಗೋವಿಂದರಾಜು, ವಿಧಾನ ಪರಿಷತ್ ಸದಸ್ಯ, ಶಿಕ್ಷಕರ ಸಂಘಟನೆಗಳ ಆಂತರಿಕ ಭಿನ್ನಾಬಿಪ್ರಾಯದ ಕಾರಣ ಗುರುಭವನ ಕಾಮಗಾರಿ ಆರಂಭವಾಗುತ್ತಿಲ್ಲ. ಹಣಕ್ಕೇನೂ ಕೊರತೆ ಇಲ್ಲ. ಜನಪ್ರತಿನಿಧಿಗಳ ಬೆಂಬಲವೂ ಇದೆ. ಕೃಷ್ಣಮೂರ್ತಿ, ಡಿಡಿಪಿಐಜನಪ್ರತಿನಿಧಿಗಳಿಂದ ಅನುದಾನ ಸಂಗ್ರಹ ಮಾಡಿದ್ದು ಕ್ರೆಡೆಲ್ ಬಳಿ ಹಣವಿದೆ. ತಾಂತ್ರಿಕ ಸಮಸ್ಯೆ ಸರಿಪಡಿಸಿಕೊಂಡು ಇನ್ನೊಂದು ವಾರದಲ್ಲಿ ಕಾಮಗಾರಿ ಆರಂಭಿಸುತ್ತೇವೆ.**


ಉದಯವಾಹಿನಿ ಚಿತ್ರ

> ಸುಮಾರು 5 ಕೋಟಿ ವೆಚ್ಚದಲ್ಲಿ ಗುರುಭವನ ನಿರ್ಮಿಸುವ ಯೋಜನೆ ಇದೆ. ಅದಕ್ಕಾಗಿ ಜನಪ್ರತಿನಿಧಿಗಳು ತಮ್ಮ ಅನುದಾನ ಘೋಷಿಸಿದ್ದಾರೆ. ಶಿಕ್ಷಕರಿಂದಲೂ ಹಣ ಸಂಗ್ರಹಿಸಲಾಗಿದೆ. ಗುರುಭವನ ನಿರ್ಮಾಣದ ಸಮಿತಿಗೆ ಜಿಲ್ಲಾಧಿಕಾರಿ ಅಧ್ಯಕ್ಷರು, ಡಿಡಿಪಿಐ ಸದಸ್ಯ ಕಾರ್ಯದರ್ಶಿ.

> ಕಾಮಗಾರಿ ಆರಂಭಕ್ಕೆ ಸಿದ್ಧತೆ ನಡೆದಿದೆ. ಕೆಲ ತಾಂತ್ರಿಕ ಅಡಚಣೆ ಸರಿಪಡಿಸಿಕೊಂಡು ಕಾಮಗಾರಿ ಆರಂಭಿಸಲಾಗುವುದು
> -ಕೃಷ್ಣಮೂರ್ತಿ, ಡಿಡಿಪಿಐ

**ತಾಂತ್ರಿಕ ಅಡಚಣೆಯ ನೆಪ**

ಉಳಿದಂತೆ ವಿಧಾನ ಪರಿಷತ್ ಸದಸ್ಯರಾದ ಇಂಚರ ಗೋವಿಂದರಾಜು ಹಾಗೂ ಎಂ.ಎಲ್. ಅನಿಲ್ ಕುಮಾರ್ ಇಬ್ಬರೂ ತಲಾ 25 ಲಕ್ಷ ನೀಡಬೇಕು. ನಾನು 50 ಲಕ್ಷ ಕೊಡುತ್ತೇನೆ. ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಅವರಿಂದ 50 ಲಕ್ಷ, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಅವರಿಂದಲೂ ಹಣ ಕೊಡಿಸುವೆ. ಶಿಕ್ಷಕರು ಈ ವರ್ಷ ಹಾಗೂ ಮುಂದಿನ ವರ್ಷದ ಒಂದು ದಿನದ ವೇತನ ಕೊಡಿ. ಶಿಕ್ಷಕರ ಕಲ್ಯಾಣ ನಿಧಿಯ 1 ಕೋಟಿ ಸೇರಿದಂತೆ ಎಲ್ಲಾ ಹಣ ಬಳಸಿಕೊಂಡು ಕಟ್ಟಡ ಕಾಮಗಾರಿ ಶೀಘ್ರ ಆರಂಭಿಸಲಾಗುವುದು' ಎಂದು ಶಾಸಕ ಕೊತ್ತೂರು ಮಂಜುನಾಥ್ ಆಗ ಹೇಳಿದ್ದರು. ಅದಾಗಿ ಒಂದು ವರ್ಷವಾಗಿದ್ದು, ಈಗ ಮತ್ತೊಂದು ಶಿಕ್ಷಕರ ದಿನಾಚರಣೆ ಎದುರು ಬಂದು ನಿಂತಿದೆ. ಗುರುವಾರ ಟಿ.ಚನ್ನಯ್ಯ ರಂಗಮಂದಿರದಲ್ಲಿ ಕಾರ್ಯಕ್ರಮಕ್ಕೆ ಸಿದ್ಧತೆ ನಡೆಯುತ್ತಿದೆ.

ಈ ಬಾರಿ ಶಾಸಕರು, ಶಿಕ್ಷಕರ ಸಂಘಟನೆಗಳ ಮುಖಂಡರು, ಸಂಬಂಧಪಟ್ಟ ಅಧಿಕಾರಿಗಳು ಏನು ಹೇಳುತ್ತಾರೆ, ಯಾವ ರೀತಿ ಭರವಸೆ ಕೊಡುತ್ತಾರೆ ಎಂಬ ಕುತೂಹಲ ಸಾರ್ವಜನಿಕರಲ್ಲಿ ನೆಲೆಸಿದೆ.ಪ್ರತಿ ಬಾರಿ ಶಿಕ್ಷಕರ ದಿನಾಚರಣೆಯಂದು ಈ ವಿಚಾರ ಪ್ರಸ್ತಾಪವಾಗುತ್ತದೆ.

ಅದಾಗಿ ಒಂದೆರಡು ದಿನಗಳಲ್ಲಿ ಶಂಕುಸ್ಥಾಪನೆ ನೆರವೇರುತ್ತದೆ. ಈ ವರ್ಷದೊಳಗೆ ನಿರ್ಮಿಸಿ ಮುಂದಿನ ಶಿಕ್ಷಕರ ದಿನಾಚರಣೆಯನ್ನು ಗುರುಭವನದಲ್ಲೇ ನಡೆಸಬೇಕು ಎಂದು ಜನಪ್ರತಿನಿಧಿಗಳು ಹೇಳಿ ಕೈತೊಳೆದುಕೊಂಡು ಬಿಡುತ್ತಾರೆ.

---

## ಮಿನಿ ನ್ಯೂಸ್

### ಕೌಟುಂಬಿಕ ಕಲಹ: ಗೃಹಿಣಿ ಆತ್ಮಹತ್ಯೆ

• ಉದಯವಾಹಿನಿ ಕುಣಿಗಲ್

ಕೌಟುಂಬಿಕ ಕಲಹಕ್ಕೆ ಗೃಹಿಣಿಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲ್ಲೂಕಿನ ಎಡಿಯೂರು ಹೋಬಳಿ ಸಿಂಗೋನಹಳ್ಳಿ ಅಗ್ರಹಾರದಲ್ಲಿ ಗ್ರಾಮದಲ್ಲಿ ನಡೆದಿದೆ. ಅಮೃತ್ತೂರು ಹೋಬಳಿ ಹೊಳಲಗುಂದ, ಹಾಲಿ ಬೆಂಗಳೂರು ನಿವಾಸಿ ರಕ್ಷಿತಾ (19) ಆತ್ಮಹತ್ಯೆ ಮಾಡಿಕೊಂಡ ಗೃಹಿಣಿ. ಸಿಂಗೋನಹಳ್ಳಿ ಗ್ರಾಮದ ಅಂಜನ್ ಕುಮಾರ್ ಹಾಗೂ ರಕ್ಷಿತಾ ಪ್ರೀತಿಸಿ, 6 ತಿಂಗಳ ಹಿಂದೆ ಮದುವೆಯಾಗಿದ್ದರು. ಸಾಂಸಾರಿಕ ಜೀವನದಲ್ಲಿ ಬಿರುಕು ಉಂಟಾಗಿ ರಕ್ಷಿತಾ ಸಿಂಗೋನಹಳ್ಳಿ ಅಗ್ರಹಾರ ಗ್ರಾಮದ ಅವರ ಮನೆಯಲ್ಲಿ ತನ್ನ ವೇಲಿನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಅಮೃತ್ತೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

### ಗೋಡೆ ಕುಸಿದು ಮಹಿಳೆ ಸಾವು

• ಉದಯವಾಹಿನಿ ಶ್ರೀರಂಗಪಟ್ಟಣ

ಮನೆಯೊಂದರ ಗೋಡೆ ಕುಸಿದು ಮಹಿಳೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ನೆಲಮನೆ ಗ್ರಾಮದಲ್ಲಿ ಗುರುವಾರ ನಡೆದಿದೆ. ಗ್ರಾಮದ ಎನ್.ಸಿ. ರಾಜಕುಮಾರ್ ಅವರ ಪತ್ನಿ ಶಾಂತಮ್ಮ (45) ಮೃತಪಟ್ಟಿದ್ದಾರೆ. ಗ್ರಾಮದ ಬಳಿ ಹರಿಯುವ ವಿಶ್ವೇಶ್ವರಯ್ಯ ನಾಲೆಯ ವಿತರಣಾ ನಾಲೆಯಲ್ಲಿ ಪಾತ್ರೆ ತೊಳೆಯುತ್ತಿದ್ದ ಶಾಂತಮ್ಮ ಅವರ ಮೇಲೆ 6 ಅಡಿ ಎತ್ತರದ, 20 ಅಡಿ ಉದ್ದದ ಗೋಡೆ ದಿಢೀರ್ ಕುಸಿದಿದೆ. ಶಾಂತಮ್ಮ ಗೋಡೆಯ ಅವಶೇಷಗಳ ಅಡಿ ಸಿಲುಕಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಾಬು ಎಂಬುವರ ಮನೆಯ ಗೋಡೆ ಕುಸಿದು ಈ ಅವಘಡ ಸಂಭವಿಸಿದೆ. ಸ್ಥಳಕ್ಕೆ ಕಂದಾಯ ನಿರೀಕ್ಷಕ ಭಾಸ್ಕರ್, ಗ್ರಾಮಾಡಳಿತ ಅಧಿಕಾರಿ ಸುಹಾಸ್ ಭೇಟಿ ನೀಡಿದ್ದರು.

### 5 ಬಾರಿ ಶೇ. 100 ಫಲಿತಾಂಶ: ಶಿಕ್ಷಕಿ ಎಸ್.ಎಸ್.ರಂಜಿನಿ ಕಾರ್ಯಕ್ಕೆ ಮೆಚ್ಚುಗೆ

• ಉದಯವಾಹಿನಿ ಸೋಮವಾರಪೇಟೆ



ಇಲ್ಲಿನ ಐಗೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ವಿಜ್ಞಾನ ವಿಷಯದ ಸಹ ಶಿಕ್ಷಕಿ ಎಸ್.ಎಸ್.ರಂಜಿನಿ ಉತ್ತಮ ಬೋಧನೆಗೆ ವಿದ್ಯಾರ್ಥಿ ವಲಯದಲ್ಲಿ ಪ್ರಸಿದ್ಧಿಯಾಗಿದ್ದಾರೆ. ಇದಕ್ಕೆ ಪೂರಕ ಎಂಬಂತೆ ಇವರ ವಿಷಯದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 5 ಬಾರಿ ಶೇ 100ರಷ್ಟು ಫಲಿತಾಂಶ ಶಾಲೆಗೆ ಲಭಿಸಿದೆ.

ಕಳೆದ 17 ವರ್ಷಗಳಿಂದ ವಿಜ್ಞಾನ ಶಿಕ್ಷಕಿಯಾಗಿ ಕೆಲಸ ಮಾಡುತ್ತಿರುವ ಇವರು ಈ ಮೂಲಕ ಜನಮನ್ನಣೆ ಗಳಿಸಿದ್ದಾರೆ.

ಇವರು ಪ್ರೌಢಶಾಲೆಯಲ್ಲಿ ಕಲಿಯುತ್ತಿದ್ದ ಸಂದರ್ಭದಲ್ಲಿ ಗಣಿತ ಶಿಕ್ಷಕರಾದ ಚಾಲ್ಸ್ ಡಿಸೀಜಾ ಅವರು ಪುಸ್ತಕ ನೋಡದೆ, ಪಾಠ ಮಾಡುತ್ತಿದ್ದುದ್ದನ್ನು ಗಮನಿಸಿದ್ದ ಇವರು, ಮುಂದೆ ಶಿಕ್ಷಕಿಯಾಗುವ ಕನಸು ಕಂಡಿದ್ದರು. ನಂತರ, ಶಿಕ್ಷಕರಾಗಿಯೂ ನೇಮಕವಾದ ಇವರು ಪ್ರಾರಂಭದಿಂದಲೇ ಪುಸ್ತಕ ನೋಡದೆ, ವಿಜ್ಞಾನ ಪಾಠವನ್ನು ಮಾಡುವ ಮೂಲಕ ವಿದ್ಯಾರ್ಥಿಗಳ ನೆಚ್ಚಿನ ಶಿಕ್ಷಕಿಯಾಗಿದ್ದಾರೆ.

ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕಿಯಾಗಿ ಬಡ್ತಿ ಪಡೆದರೂ, ತೆರಳದೆ ಪ್ರೌಢಶಾಲೆಯಲ್ಲಿ ಮುಂದುವರೆದಿದ್ದಾರೆ. ಇವರ ವಿಷಯದಲ್ಲಿ ಶಾಲೆಗೆ 5 ಬಾರಿ ಶೇಕಡ ನೂರು ಫಲಿತಾಂಶ ಬಂದಿದ್ದು, ಹೆಚ್ಚಿನ ಭಾರಿ ಶೇ 98 ಮತ್ತು ಶೇ 99ರಷ್ಟು ಫಲಿತಾಂಶವನ್ನು ಸಿಕ್ಕಿದೆ.

### ಜೇಬು ಸುಡುವ ಹೋಟೆಲ್ ಆಹಾರ

• ಉದಯವಾಹಿನಿ ಮೈಸೂರು

ಪ್ರವಾಸೋದ್ಯಮವೇ ಜೀವಾಳವಾಗಿರುವ ನಗರ ಹಾಗೂ ಇಲ್ಲಿಗೆ ಹೊಂದಿಕೊಂಡಂತಿರುವ ಪ್ರದೇಶಗಳಲ್ಲಿರುವ ಹೋಟೆಲ್‌ಗಳಲ್ಲಿನ ತಿಂಡಿ-ತಿನಿಸುಗಳ ಬೆಲೆ ಕೂಡ ಇತ್ತೀಚಿನ ವರ್ಷಗಳಲ್ಲಿ ಹಲವು ಪಟ್ಟು ಜಾಸ್ತಿಯಾಗಿದೆ. ಕಾಫಿ-ಟೀ ದರವೂ ಗ್ರಾಹಕರ ಬಾಯಿ ಸುಡುತ್ತಿದೆ.

ಕುಟುಂಬದ ನಾಲ್ಕೈದು ಮಂದಿ ಮಧ್ಯಮ ವರ್ಗದ ಹೋಟೆಲ್‌ಗೆ ಹೋದರೂ ಸಾವಿರಾರು ರೂಪಾಯಿ ಬಿಲ್ ಆಗುತ್ತದೆ.

ರಾಜ್ಯ ಹಾಗೂ ಕೇಂದ್ರ ಸರ್ಕಾರದ ತೆರಿಗೆಯ ಹೊರೆಯನ್ನೂ ಗ್ರಾಹಕರ ಮೇಲೆಯೇ ಹಾಕಲಾಗುತ್ತದೆ. ಜತೆಗೆ, 'ಸೇವಾ ಶುಲ್ಕ'ವನ್ನೂ ಕಟ್ಟಬೇಕು. ಇನ್ನು ದೊಡ್ಡವು ಎನಿಸುವ 'ಸ್ಟಾರ್' ಹೋಟೆಲ್‌ಗಳಿಗೆ ಹೋದರೆ ಬಿಲ್ ಮತ್ತಷ್ಟು 'ಭಾರ'ದ್ದೇ ಆಗಿರುತ್ತದೆ. ಅಲ್ಲಿಗೆ ಹೋಗುವುದಕ್ಕೆ ಕೆಳ ಹಾಗೂ ಮಧ್ಯಮ ವರ್ಗದವರು ಹಿಂದೇಟು ಹಾಕುವ ಸ್ಥಿತಿ ಇದೆ. ಬಹುತೇಕ ಕಡೆಗಳಲ್ಲಿ 'ಎಂಆರ್‌ಪಿ'ಗಿಂತಲೂ ಜಾಸ್ತಿ ಬೆಲೆ ಪಡೆಯುತ್ತಾರೆ. ಲೀಟರ್ ನೀರಿಗೆ 20 ಎಂಆರ್‌ಪಿ ಇದ್ದರೆ, ಹೋಟೆಲ್‌ಗಳವರು 40 ಬಿಲ್ ಮಾಡುತ್ತಾರೆ. 40 ಇರುವ ತಂಪು ಪಾನೀಯಕ್ಕೆ ಅವರು ಬಿಲ್ ಹಾಕುವುದು ದುಪ್ಪಟ್ಟು ಅಂದರೆ 80!. ಹೀಗೆ... ಹಲವು ಪದಾರ್ಥಗಳ ಮೇಲೆ ಮನಬಂದಂತೆ ದರ ವಿಧಿಸುತ್ತಿದ್ದರೂ ಸಂಬಂಧಿಸಿದ ಇಲಾಖೆಯವರು ಕಡಿವಾಣ ಹಾಕುವ ಕೆಲಸ ಮಾಡುತ್ತಿರುವುದು ಕಂಡುಬಂದಿಲ್ಲ. ಪರಿಣಾಮ, ಗ್ರಾಹಕರಿಂದ 'ಹೆಚ್ಚುವರಿ ವಸೂಲಿ' ಎಗ್ಗಿಲ್ಲದೆ ಮುಂದುವರಿಯುತ್ತಲೇ ಇದೆ.

### ಉಚಿತವಾಗಿ ಪಾಠ ಮಾಡುವ 'ಹಳ್ಳಿಮೇಷ್ಟ್ರ'

• ಉದಯವಾಹಿನಿ ಶ್ರೀರಂಗಪಟ್ಟಣ

ಶಿಕ್ಷಕರು ತರಗತಿಗಳಲ್ಲಿ ಪಾಠ ಮಾಡುವುದು ಸಹಜ. ಆದರೆ ಇಲ್ಲೊಬ್ಬ ಶಿಕ್ಷಕ ಎಸ್.ಎಸ್.ಎಲ್.ಸಿ ಮತ್ತು ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆ ಎದುರಿಸುವ ವಿದ್ಯಾರ್ಥಿಗಳಿಗಾಗಿ ಹಳ್ಳಿಗಳ ಪಡಸಾಲೆಯಲ್ಲಿ, ದೇಗುಲಗಳ ಮಂಟಪಗಳಲ್ಲಿ, ಮರಗಳ ನೆರಳಿನಲ್ಲಿ ಉಚಿತವಾಗಿ ಪಾಠ ಮಾಡುತ್ತಿದ್ದಾರೆ. ತಾಲ್ಲೂಕಿನ ಪಾಲಹಳ್ಳಿ ಗ್ರಾಮದ ಅನುದಾನಿತ ವಾಹಿನಿ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಕರಿಯಪ್ಪ ಲೇಬಗೇರಿ ಐದು ವರ್ಷಗಳಿಂದ ತಾಲ್ಲೂಕಿನ ವಿವಿಧೆಡೆ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ತರಬೇತಿ ನೀಡುತ್ತಿದ್ದಾರೆ. ತಾಲ್ಲೂಕಿನ ಬೆಳಗೊಳದಲ್ಲಿ ತಮ್ಮ ಸ್ನೇಹಿತರ ಜತೆಗೂಡಿ 2018ರಿಂದ 'ಜ್ಞಾನ ದಾಸೋಹ ಕೇಂದ್ರ' ತೆರೆದು ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಾಠ ಮಾಡುತ್ತಿದ್ದಾರೆ. ತಾಲ್ಲೂಕಿನ ಬಲ್ಲೇನಹಳ್ಳಿ ಡಿಜಿಟಲ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಸಹಯೋಗದಲ್ಲಿ ನಡೆಯುವ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆ ತರಬೇತಿ ಕೇಂದ್ರಕ್ಕೆ ಕರಿಯಪ್ಪ ಲೇಬಗೇರಿ ಅವರೇ ಬೆನ್ನೆಲುಬು. ಪರೀಕ್ಷೆ ತೆಗೆದುಕೊಳ್ಳುವ 8ನೇ ತರಗತಿ ಮಕ್ಕಳಿಗೆ ಶನಿವಾರ, ಭಾನುವಾರ ಮತ್ತು ಸರ್ಕಾರಿ ರಜೆ ದಿನಗಳಲ್ಲಿ ಉಚಿತವಾಗಿ ತರಬೇತಿ ನೀಡುತ್ತಿದ್ದಾರೆ. ಒಂದು ನಿಮಿಷ- ಒಂದು ಚಿತ್ರ, ಮತ್ತು ಕೋಡ್ ವರ್ಡ್ ಬಳಸು ವಿಜ್ಞಾನ ಮಾದರಿಯ ಭಾಗಗಳನ್ನು ಗುರುತಿಸು' ಎಂಬ ವಿಶಿಷ್ಟ ತಂತ್ರಗಳನ್ನು ಪರಿಚಯಿಸಿದ ಹೆಗ್ಗಳಿಕೆ ಕರಿಯಪ್ಪ ಅವರದ್ದು.


ಉದಯವಾಹಿನಿ ಚಿತ್ರ

ಅಂತರಾಳದಿಂದ... EDITORIAL

# ಅತ್ಯಾಚಾರ ತಡೆ-ಕಾಯ್ದೆಯಷ್ಟೇ ಸಾಕೆ ಮನೋಭಾವ ಬದಲಾಗಬೇಡವೇ?

ಅಪರಾಜಿತ ಮಹಿಳೆ ಮತ್ತು ಮಕ್ಕಳ (ಪಶ್ಚಿಮ ಬಂಗಾಳ ಅಪರಾಧ ಕಾಯ್ದೆಗಳು ಮತ್ತು ತಿದ್ದುಪಡಿ) ಮಸೂದೆ 2024 ಕ್ಕೆ ಪಶ್ಚಿಮ ಬಂಗಾಳ ವಿಧಾನಸಭೆ ಮಂಗಳವಾರ ಅಂಗೀಕಾರ ನೀಡಿದೆ. ಮಹಿಳೆಯರ ಮೇಲೆ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಎಸಗಿದವರಿಗೆ ಶಿಕ್ಷೆ ನೀಡಲು ಈಗಾಗಲೇ ಇದ್ದ ಅವಕಾಶಗಳನ್ನು ಈ ಮಸೂದೆಯಲ್ಲಿ ಇನ್ನಷ್ಟು ವಿಸ್ತರಿಸಲಾಗಿದೆ. ಶಿಕ್ಷೆಯನ್ನು ಕಠಿಣಗೊಳಿಸಲಾಗಿದೆ. ಅತ್ಯಾಚಾರ ಅಥವಾ ಸಾಮೂಹಿಕ ಅತ್ಯಾಚಾರದಿಂದಾಗಿ ಸಂತ್ರಸ್ತೆಯು ಮೃತಪಟ್ಟರೆ ಅಥವಾ ಪ್ರಜ್ಞಾಹೀನ ಸ್ಥಿತಿ ತಲುಪಿದರೆ ಅತ್ಯಾಚಾರಿ ಅಥವಾ ಅತ್ಯಾಚಾರಿಗಳಿಗೆ ಮರಣದಂಡನೆ ವಿಧಿಸುವ ಅವಕಾಶವನ್ನು ಈ ಮಸೂದೆಯು ಕಲ್ಪಿಸುತ್ತದೆ. ಅತ್ಯಾಚಾರ ಆರೋಪವು ದೃಢಪಟ್ಟರೆ ಅತ್ಯಾಚಾರಿಗೆ ಜೀವಾವಧಿ ಶಿಕ್ಷೆ ವಿಧಿಸುವ ಅವಕಾಶ ಇದ: ಅಪರಾಧಿಗೆ ಶಿಕ್ಷೆಯ ಅವಧಿಯಲ್ಲಿ ಪೆರೋಲ್‌ಗೆ ಕೂಡ ಅವಕಾಶ ಇರುವುದಿಲ್ಲ. ಭಾರತೀಯ ನ್ಯಾಯಸಂಹಿತೆಯಲ್ಲಿಯೂ ಅತ್ಯಾಚಾರ ಅಪರಾಧಕ್ಕೆ ಮರಣದಂಡನೆ ವಿಧಿಸುವ ಅವಕಾಶ ಇದೆ. ಅದಕ್ಕೂ ಹಿಂದೆ ಜಾರಿಯಲ್ಲಿ ಭಾರತೀಯ ದಂಡಸಂಹಿತೆಯಲ್ಲಿಯೂ ಕೆಲವು ರೀತಿಯ ಅತ್ಯಾಚಾರ ಪ್ರಕರಣಗಳಲ್ಲಿ ಗಲ್ಲು ಶಿಕ್ಷೆ ವಿಧಿಸುವ ಅವಕಾಶ ಇತ್ತು. ಹೊಸ ಮಸೂದೆಯಲ್ಲಿ ಶಿಕ್ಷೆಯನ್ನು ಇನ್ನಷ್ಟು ಕಠಿಣಗೊಳಿಸಲಾಗಿದೆ. ಅತ್ಯಾಚಾರ ಎಸಗಿದವರಿಗೆ ಕಠಿಣ ಶಿಕ್ಷೆ ಹಿಂದಿನಿಂದಲೂ ಇದ್ದರೂ ಅದು ಅಪರಾಧವನ್ನು ತಡೆಯುತ್ತಿಲ್ಲ ಎಂಬುದು ವಿಷಾದನೀಯ ವಿಚಾರ. ಲೈಂಗಿಕ ದೌರ್ಜನ್ಯವೂ ಸೇರಿದಂತೆ ಯಾವುದೇ ಅಪರಾಧ ನಡೆಯುವುದನ್ನು ಮರಣ ದಂಡನೆಯ ಭೀತಿಯು ತಡೆಯುತ್ತಿಲ್ಲ. ಶಿಕ್ಷೆಯ ತೀವ್ರತೆ ಅಲ್ಲ ಬದಲಿಗೆ ಶಿಕ್ಷೆ ಆಗುವುದು ಖಚಿತ ಎಂಬ ಭಯವು ಅಪರಾಧ ಕೃತ್ಯಗಳನ್ನು ತಡೆಯುತ್ತದೆ ಎಂಬುದು ಅಪರಾಧ ನ್ಯಾಯಶಾಸ್ತ್ರದ ಮೂಲಭೂತ ತಳಹದಿಯಾಗಿದೆ. ಇಂತಹ ಅಂಶಗಳು ಈಗ ಇರುವ ಕಾನೂನುಗಳಲ್ಲಿಯೂ ಇವೆ. ಆದರೆ, ಅವು ಸರಿಯಾಗಿ ಅನುಷ್ಠಾನಗೊಳ್ಳುತ್ತಿಲ್ಲ. ಇಡೀ ದೇಶವನ್ನು ಬೆಚ್ಚಿಬೀಳಿಸಿದ್ದ 'ನಿರ್ಭಯಾ' ಪ್ರಕರಣದಲ್ಲಿ ಕೂಡ ಶಿಕ್ಷೆ ಖಚಿತಗೊಳ್ಳಲು ಏಳು ವರ್ಷಗಳು ಬೇಕಾಗಿದ್ದವು. ಅತ್ಯಾಚಾರ ಪ್ರಕರಣಗಳಲ್ಲಿ ಅಪರಾಧ ಸಾಬೀತು ಪ್ರಮಾಣವು ಶೇ 27 – 24ರಷ್ಟು ಮಾತ್ರ ಇದೆ. ಕಠಿಣ ಶಿಕ್ಷೆ ವಿಧಿಸಲು ಅವಕಾಶ ಇರುವ ಕಾಯ್ದೆಗಳು ದೇಶದಲ್ಲಿ ಜಾರಿಯಲ್ಲಿದ್ದರೂ ಅತ್ಯಾಚಾರ ಪ್ರಕರಣಗಳ ಸಂಖ್ಯೆ ಏರುತ್ತಲೇ ಇದೆ. ಸಂತ್ರಸ್ತೆಯು ಅತ್ಯಾಚಾರಿಯ ಸಂಬಂಧಿ ಅಥವಾ ಗೊತ್ತಿರುವ ವ್ಯಕ್ತಿ ಎಂಬ ಕಾರಣಕ್ಕೆ ಹಲವು ಪ್ರಕರಣಗಳು ವರದಿಯಾಗುವುದೇ ಇಲ್ಲ. ದೂರು ದಾಖಲಿಸಿದರೆ ಅದರ ಪರಿಣಾಮ ಎದುರಿಸಬೇಕಾದೀತು ಅಥವಾ ಅವಮಾನ ಅನುಭವಿಸಬೇಕಾದೀತು ಎಂಬುದು ಕೂಡ ಪ್ರಕರಣ ವರದಿಯಾಗದೇ ಇರುವುದಕ್ಕೆ ಕಾರಣಗಳಾಗಿವೆ. ಮಹಿಳೆಯರನ್ನು ಅಗೌರವದಿಂದ ಕಾಣುವ ಮತ್ತು ಮಹಿಳೆಯು ಒಂದು ವಸ್ತು ಮಾತ್ರ ಎಂಬ ಭಾವಿಸಿರುವ ಮನಃಸ್ಥಿತಿಯನ್ನು ಬದಲಾಯಿಸುವುದರ ಮೂಲಕ ಲೈಂಗಿಕ ಹಿಂಸೆಯನ್ನು ತಡೆಯುವುದಕ್ಕೆ ಸಾಧ್ಯವಿದೆ. ಕ್ರೌರ್ಯ ಎಸಗಲು ಅವಕಾಶ ಇಲ್ಲದಂತೆ ನೋಡಿಕೊಳ್ಳುವ ಮೂಲಕವೂ ಲೈಂಗಿಕ ಹಿಂಸೆಯನ್ನು ತಡೆಯಬಹುದು. ಕಾನೂನು ಬದಲಾಯಿಸುವುದಕ್ಕಿಂತ ಇದು ಹೆಚ್ಚು ಪರಿಣಾಮಕಾರಿಯಾದುದು. ಲಿಂಗತ್ವ ಸಂಬಂಧಗಳನ್ನು ವ್ಯಾಖ್ಯಾನಿಸುವ ಹಲವು ಧೋರಣೆಗಳು ಮತ್ತು ವರ್ತನಾ ವಿಧಗಳು ಬದಲಾಗಬೇಕಾಗಿದೆ. ಕೆಲಸದ ಸ್ಥಳಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಹೆಚ್ಚು ಸುರಕ್ಷಿತಗೊಳಿಸಬೇಕು ಹಾಗೂ ಮಹಿಳೆಯರಿಗೆ ಪೂರಕವಾಗಿರುವಂತೆ ನೋಡಿಕೊಳ್ಳಬೇಕು. ಈಗಾಗಲೇ ಹಲವು ಕಾಯ್ದೆಗಳು ಇವೆ. ಇನ್ನಷ್ಟು ಹೊಸ ಕಾಯ್ದೆಗಳನ್ನು ಜಾರಿಗೆ ತರುವುದರಿಂದ ವಾಸ್ತವವು ಬದಲಾಗುವುದಿಲ್ಲ. ಕೋಲ್ಕತ್ತದ ಆಸ್ಪತ್ರೆಯಲ್ಲಿ ಕಳೆದ ತಿಂಗಳು ನಡೆದ ವೈದ್ಯಕೀಯ ವಿದ್ಯಾರ್ಥಿನಿಯ ಮೇಲಿನ ಅತ್ಯಾಚಾರ ಮತ್ತು ಹತ್ಯೆ ಪ್ರಕರಣವನ್ನು ರಾಜ್ಯ ಸರ್ಕಾರವು ನಿರ್ವಹಿಸಿದ ರೀತಿಗೆ ವ್ಯಾಪಕ ಟೀಕೆ ವ್ಯಕ್ತವಾಗಿತ್ತು, ಹಾಗಾಗಿಯೇ, ಈ ಟೀಕೆಗೆ ರಾಜಕೀಯ ಪ್ರತಿಕ್ರಿಯೆಯಾಗಿ ರಾಜ್ಯ ಸರ್ಕಾರವು ಹೊಸ ಮಸೂದೆಯನ್ನು ರೂಪಿಸಿದೆ. ಮಮತಾ ಬ್ಯಾನರ್ಜಿ ನೇತೃತ್ವದ ಸರ್ಕಾರವು ತನ್ನ ಮಹಿಳಾ ಸ್ನೇಹಿ ನೀತಿ ಮತ್ತು ನಿಲುವುಗಳಿಗೆ ಹೆಸರಾಗಿದೆ ಈ ಹೆಸರನ್ನು ಉಳಿಸಿಕೊಳ್ಳುವುದು ಹೊಸ ಮಸೂದೆ ರೂಪಿಸಿದ್ದರ ಹಿಂದೆ ಇರುವ ಉದ್ದೇಶ ಆಗಿರಬಹುದು.

**ಮಹಿಳೆಯರ ಮೇಲೆ ದೌರ್ಜನ್ಯಗಳು ಪಡೆಯಲು ಕಾರಣ ಕಾನೂನುಗಳು ದುರ್ಬಲವಾಗಿದೆ ಎಂಬುದು ಅಲ್ಲ; ಬದಲಿಗೆ ಈ ಕಾನೂನುಗಳು ಸರಿಯಾಗಿ ಜಾರಿಯಾಗುವುದಿಲ್ಲ ಎಂಬುದಾಗಿದೆ. ಪಶ್ಚಿಮ ಬಂಗಾಳ ವಿಧಾನಸಭೆಯು ಅಂಗೀಕರಿಸಿರುವ ಹೊಸ ಮಸೂದೆಯು ಪ್ರಕರಣದ ತ್ವರಿತ ತನಿಖೆ ಮತ್ತು ವಿಚಾರಣೆಯ ಭರವಸೆಯನ್ನು ನೀಡಿದೆ.**

## ಸೆ.20ಕ್ಕೆ ಇಮೇಜ್ ವಸ್ತು ಪ್ರದರ್ಶನ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ನೂತನ ಆವಿಷ್ಕಾರಗಳ ವೇದಿಕೆ ಛಾಯಾ ವೃತ್ತಿ ಬಾಂಧವರ ಹಬ್ಬ ಡಿಜಿ ಇಮೇಜ್ ವಸ್ತು ಪ್ರದರ್ಶನ. ಇದೇ ತಿಂಗಳ ಸೆಪ್ಟೆಂಬರ್ 20,21,22 ರಂದು ಅರಮನೆ ಮೈದಾನ, ಬೆಂಗಳೂರು ಇಲ್ಲಿ ನಡೆಯಲಿರುವ ಕೆಪಿಎ.ಡಿಜಿ.ಇಮೇಜ್ ವಸ್ತು ಪ್ರದರ್ಶನ ಯಶಸ್ವಿಯಾಗಲೆಂದು ಡಾ. ಸಿ.ಎನ್.ಮಂಜುನಾಥ್ ಸಂಸದರು, ಪ್ರೀತಿಯಿಂದ ಹಾರೈಸಿದ ಕ್ಷಣ. ಕರ್ನಾಟಕ ಛಾಯಾಚಿತ್ರಕಾರರ ಸಂಘದ ಸಿಂಗ್ ,ಸುರೇಶ್, ಮೋಹನ್, ಹಾಗೂ ಮಾಲಿಂಗ, ಬೆಳಗುಂಬ ಹಾಲಪ್ಪ ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಚಂದ್ರಶೇಖರ ಬೆಳಗುಂಬ ಹಾಲಪ್ಪ.

## ಮಹಾಭಾರತ
### ಮಹಾಪ್ರಸ್ಥಾನಿಕಪರ್ವ



• ಹಿಂದಿನ ಸಂಚಿಕೆಯಿಂದ

ನನಗೊಬ್ಬನಿಗೆ ಮಾತ್ರವೇ ಸಶರೀರನಾಗಿ ಸ್ವರ್ಗಕ್ಕೆ ಬರುವ ಅವಕಾಶ'' ಎಂದನು. ಯುಧಿಷ್ಠಿರನನು, ''ನನಗೆ ಸಂದ ಮರ್ಯಾದೆಗಾಗಿ ನಾನು ತಜ್ಞ. ದೇವೇಂದ್ರ, ಅವರೆಲ್ಲರೂ ಅಲ್ಲಿರುವರೆಂದ ಮೇಲೆ ನಾನು ಬರಲು ಸಿದ್ಧ. ಆದರೆ ಈ ನಾಯಿಯೂ ನನ್ನ ಜೊತೆಗೆ ಬರಲಿ. ಅದು ಹಸ್ತಿನಾವತಿಯಿಂದಲೂ ನಮ್ಮ ಜೊತೆಗೆ ಬಂದಿದೆ. ನಾನಿದನ್ನು ಕರೆತರುತ್ತೇನೆ ಎನ್ನಲು ದೇವೇಂದ್ರನು ಇವನ ನಾಯಿಯ ಮೇಲಿನ ಮೂರ್ಖ ಪ್ರೇಮವನ್ನು ಕಂಡು ನಕ್ಕು, ''ಯುಧಿಷ್ಠಿರ, ನಿನಗೆ ಚಿರಂಜೀವಿ ಪಟ್ಟ ಸಿಕ್ಕಿದೆ. ನೀನೀಗ ನನಗೆ ಸಮಾನ; ಬಹು ಅಷ್ಟಶಾಲಿ. ನಿನ್ನ ಶ್ವಾನಪ್ರೇಮದಿಂದ ಇದೆಲ್ಲವನ್ನೂ ಕಳೆದುಕೊಳ್ಳಬೇಡ. ಸ್ವರ್ಗದಲ್ಲಿ ನಾಯಿಗೆ ಸ್ಥಳವಿಲ್ಲ. ದಯವಿಟ್ಟು ಅದನ್ನು ತ್ಯಜಿಸಿ ಬಾ ಎಂದನು. ಯುಧಿಷ್ಠಿರನನು ತಲೆಯಲ್ಲಾಡಿಸಿ, ದೇವ ನನಗೆ ಅಸಾಧ್ಯವಾದುದನ್ನು ಮಾಡೆಂದು ಹೇಳುತ್ತಿದ್ದಿಯೆ. ಈ ನಾಯಿ ಈವರೆಗೂ ನಮ್ಮೊಡನಿದ್ದು ನಮ್ಮ ಕಷ್ಟಗಳನ್ನೆಲ್ಲ ಹಂಚಿಕೊಂಡಿದೆ. ನನ್ನೊಡನೆ ಬಹು ಸ್ನೇಹದಿಂದಿದೆ. ಇದನ್ನು ನಾನು ಬಿಟ್ಟು ಬರಲಾರೆ ಎನ್ನಲು, ಇಂದ್ರನು, ಮೂರ್ಖತನ ಮಾಡಬೇಡ. ಸ್ವರ್ಗದ ಹೊಸ್ತಿಲಿನ ಬಳಿ ಬಂದಿರುವ ನೀನು ಮಾನವ ಸಹಜ ಭಾವನೆಗಳಿಂದ ಬಾಧೆಪಡುತ್ತಿರುವೆ. ನನ್ನ ರಥದಲ್ಲಿ ನಾನಿದನ್ನು ಕೂರಿಸಿಕೊಳ್ಳಲಾರೆ'' ಎಂದನು. ಆಗ ಯುಧಿಷ್ಠಿರನನು, ನಾನೀಗ ಈ ನಾಯಿಗೆ ದಯೆ ತೋರಿಸದಿದ್ದರೆ, ಸ್ವರ್ಗವನ್ನು ಗಳಿಸಲು ಕಾರಣವಾದ ನನ್ನೆಲ್ಲ ಪುಣ್ಯಾರ್ಜನೆಯೂ ಖಿಲವಾಗುವುದು. ಆಶ್ರಿತರನ್ನು ನಾನು ಎಂಥ ಸಂದರ್ಭದಲ್ಲಿಯೂ ಕೈ ಬಿಡುವುದಿಲ್ಲ ಎನ್ನಲು, ಇಂದ್ರನು, ನೀನು ನಿನ್ನ ಸೋದರರರನ್ನೂ ದ್ರೌಪದಿಯನ್ನೂ ಬಿಟ್ಟು ಬಂದಿಲ್ಲವೆ ಈ ನಾಯಿ ಅವರಿಂಗಿಂತ ಹೆಚ್ಚೇ ನಿನಗೆ ಎಂದನು. ಅದಕ್ಕೆ ಯುಧಿಷ್ಠಿರನನು, ಅವರೆಲ್ಲ ಸತ್ತುಬಿದ್ದರು. ನಾನು ಅವರನ್ನು ಬದುಕಿಸಲಾರದಾದೆ. ಅವರು ಬದುಕಿದ್ದಿದ್ದರೆ ನಾನು ಅವರನ್ನು ಬಿಟ್ಟು ಬರುತ್ತಿರಲಿಲ್ಲ. ಆದರೆ ಈ ನಾಯಿ ಬದುಕಿದೆ. ಇದನ್ನು ಬಿಡಲಾರೆ. ನಾಯಿಗೆ ಸ್ಥಾನವಿಲ್ಲದಿರುವ ಸ್ವರ್ಗ ನನಗೂ ಬೇಡ ಎಂದುಬಿಟ್ಟನು. ಈಗ ನಾಯಿಯ ರೂಪವನ್ನು ತ್ಯಜಿಸಿ ಧರ್ಮನು ಪ್ರತ್ಯಕ್ಷನಾದನು. ಮಗನೇ, ನಿನ್ನ ಬಗ್ಗೆ ನನಗೆ ಹೆಮ್ಮೆಯುಂಟಾಗಿದೆ. ನಿನ್ನ ಜೀವಕಾರುಣ್ಯ ನನ್ನ ಹೃದಯವನ್ನು ಗೆದ್ದಿದೆ. ಹಿಂದೊಮ್ಮೆ ದ್ವೈತವನದಲ್ಲಿ ಸರಸ್ಸೊಂದರ ಬಳಿ ನಿನ್ನ ತಮ್ಮಂದಿರೆಲ್ಲ ಸತ್ತು ಮಲಗಿದ್ದಾಗ ನಾನು ನಿನ್ನನ್ನು ಪರೀಕ್ಷಿಸಿದೆ. ಒಬ್ಬ ಸೋದರನನ್ನು ಬದುಕಿಸುತ್ತೇನೆ, ಯಾರು ಬೇಕು ಎಂದು ಕೇಳಿದಾಗ ನೀನು ನಕುಲನು ಬದುಕಬೇಕೆಂದೆ. ಈಗ ಪುನಃ ನಿನ್ನನ್ನು ನಾನು ಪರೀಕ್ಷಿಸಿದೆ. ನಿನ್ನ ದಯಾಶೀಲತೆಯಿಂದ ನನಗೆ ಸಂತೋಷವಾಗಿದೆ. ಇಂದ್ರನ ಜೊತೆಗೆ ಸ್ವರ್ಗಕ್ಕೆ ಹೋಗು ಎಂದನು. ಅಷ್ಟರಲ್ಲಿ ಮಾನವಶರೀರ ಸಮೇತನಾಗಿ ಸ್ವರ್ಗಕ್ಕೆ ಬರುತ್ತಿರುವ ಈ ಮಹಾನುಭಾವನನ್ನು ನೋಡುವುದಕ್ಕೆಂದು ಸ್ವರ್ಗವಾಸಿಗಳನೇಕರು ಅಲ್ಲಿ ಬಂದು ನೆರೆದರು. ನಾರದನು,

ಮುಂದುವರಿಯುವುದು...



# ಶ್ರೀ ಗಣೇಶ ಚತುರ್ಥಿಯ ಮಹತ್ವವೇನು

• ಉದಯವಾಹಿನಿ, ವಿಶೇಷ

ಗಣೇಶ ಚತುರ್ಥಿಯನ್ನು ಕುಟುಂಬದಲ್ಲಿ ಯಾರು ಆಚರಿಸಬೇಕು, ಗಣೇಶ ಚತುರ್ಥಿಯನ್ನು ಆಚರಿಸುವುದರ ಮಹತ್ವವೇನು, ಗಣೇಶ ಚತುರ್ಥಿಯಂದು ನೂತನ ಮೂರ್ತಿಯನ್ನು ಏಕೆ ತರಬೇಕು, ಗಣೇಶ ಮೂರ್ತಿಯು ಭಂಗವಾದರೆ ಅದರ ಪರಿಹಾರಗಳೇನು ಈ ವಿಷಯಗಳಿಗೆ ಸಂಬಂಧಪಟ್ಟ ಮಾಹಿತಿಯನ್ನು ಇಲ್ಲಿ ನೀಡುತ್ತಿದ್ದೇವೆ. **ಕುಟುಂಬದಲ್ಲಿ ಯಾರು ಆಚರಿಸಬೇಕು :** ಗಣೇಶ ಚತುರ್ಥಿಯಂದು ಆಚರಿಸಲಾಗುವ ವ್ರತವನ್ನು 'ಸಿದ್ಧಿವಿನಾಯಕ ವ್ರತ' ಎನ್ನುತ್ತಾರೆ. ವಾಸ್ತವದಲ್ಲಿ ಇದನ್ನು ಎಲ್ಲಾ ಕುಟುಂಬಗಳೂ ಆಚರಿಸಬೇಕು. ಅಣ್ಣ ತಮ್ಮಂದಿರೆಲ್ಲರೂ ಒಟ್ಟಿಗೆ ಇದ್ದರೆ, ಅಂದರೆ ಅವರ ದ್ರವ್ಯಕೋಶ ಮತ್ತು ಪಾಕನಿಷ್ಪತಿ ಒಟ್ಟಿಗೆ ಇದ್ದರೆ ಎಲ್ಲರೂ ಸೇರಿ ಒಂದೇ ಮೂರ್ತಿಯ ಪೂಜೆಯನ್ನು ಮಾಡಬೇಕು; ಆದರೆ ದ್ರವ್ಯಕೋಶ ಮತ್ತು ಪಾಕನಿಷ್ಪತ್ತಿಯು ಕಾರಣಾಂತರದಿಂದ ವಿಭಕ್ತವಾಗಿದ್ದರೆ ಪ್ರತಿಯೊಬ್ಬರೂ ಅವರವರ ಮನೆಗಳಲ್ಲಿ ಸ್ವತಂತ್ರವಾಗಿ ಗಣೇಶವ್ರತವನ್ನು ಆಚರಿಸಬೇಕು.

**ಗಣೇಶಚತುರ್ಥಿಯ ಮಹತ್ವವೇನು :** ಆಷಾಢ ಹುಣ್ಣಿಮೆಯಿಂದ ಕಾರ್ತಿಕ ಹುಣ್ಣಿಮೆಯವರೆಗಿನ 120 ದಿನಗಳ ಕಾಲದಲ್ಲಿ ವಿನಾಶಕಾರಿ, ತಮಪ್ರಧಾನ ಯಮಲಹರಿಗಳು ಪೃಥ್ವಿಯ ಮೇಲೆ ಹೆಚ್ಚು ಪ್ರಮಾಣದಲ್ಲಿ ಬರುತ್ತವೆ. ಈ ಸಮಯದಲ್ಲಿ ಅವುಗಳ ತೀವ್ರತೆಯೂ ಹೆಚ್ಚಿಗೆ ಇರುತ್ತದೆ. ಈ ಕಾಲಾವಧಿಯಲ್ಲಿ, ಅಂದರೆ ಭಾದ್ರಪದ ಶುಕ್ಲ ಚತುರ್ಥಿಯಿಂದ ಅನಂತ ಚತು ರ್ದಶಿಯವರೆಗೆ ಗಣೇಶ ಲಹರಿಗಳು ಪೃಥ್ವಿಯ ಮೇಲೆ ಹೆಚ್ಚಿನ ಪ್ರಮಾಣದಲ್ಲಿ ಬರುವುದರಿಂದ ಯಮಲಹರಿಗಳ ತೀವ್ರತೆ ಕಡಿಮೆಯಾಗಲು ಸಹಾಯವಾಗುತ್ತದೆ.

**ಭಾದ್ರಪದ ಶುಕ್ಲ ಚತುರ್ಥಿಯ ದಿನ**

**ಗಣೇಶ ಚತುರ್ಥಿಯಂದು ನೂತನ ಶ್ರೀ ಗಣೇಶ ಮೂರ್ತಿಯನ್ನು ತರುವ ಹಿಂದಿನ ಉದ್ದೇಶವೇನು** ಮನೆಯಲ್ಲಿ ಪೂಜೆಗಾಗಿ ಗಣಪತಿಯನ್ನು ಇಟ್ಟಿರುವಾಗಲೂ ನೂತನ ಮೂರ್ತಿಯನ್ನು ತರುವ ಉದ್ದೇಶವು ಮುಂದಿನಂತಿದೆ. ಗಣೇಶ ಚತುರ್ಥಿಯ ಸಮಯದಲ್ಲಿ ಗಣೇಶ ಲಹರಿಗಳು ಅತಿ ಹೆಚ್ಚಿನ ಪ್ರಮಾಣದಲ್ಲಿ ಪೃಥ್ವಿಯ ಮೇಲೆ ಬರುತ್ತವೆ. ನಿತ್ಯದ ಪೂಜೆಯಲ್ಲಿರುವ ಮೂರ್ತಿಯಲ್ಲಿ ಅವುಗಳ ಆವಾಹನೆ ಮಾಡಿದರೆ ಅದರಲ್ಲಿ ಬಹಳಷ್ಟು ಶಕ್ತಿ ಬರಬಹುದು. ಇಂತಹ ಹೆಚ್ಚು ಶಕ್ತಿ ಇರುವ ಮೂರ್ತಿಯ ಎಲ್ಲಾ ಬಗೆಯ ಪೂಜೆ-ಅರ್ಚನೆಗಳನ್ನು ವರ್ಷಪೂರ್ತಿ ಸರಿಯಾಗಿ ಮಾಡುವುದು ಕಠಿಣವಾಗಿರುತ್ತದೆ; ಏಕೆಂದರೆ ಅದಕ್ಕೆ ಕರ್ಮಕಾಂಡದ ಬಹಳಷ್ಟು ಬಂಧನಗಳನ್ನು ಪಾಲಿಸಬೇಕಾಗುತ್ತದೆ. ಈ ಕಾರಣಕ್ಕಾಗಿಯೇ ಗಣೇಶ ಲಹರಿಗಳನ್ನು ಆವಾಹನೆ ಮಾಡಲು ನೂತನ ಮೂರ್ತಿಯನ್ನು ಉಪಯೋಗಿಸಿ ನಂತರ ಅದನ್ನು ವಿಸರ್ಜನೆ ಮಾಡುತ್ತಾರೆ. ಗಣೇಶ ಲಹರಿಗಳಲ್ಲಿನ ಸತ್ತ್ವ, ರಜ ಮತ್ತು ತಮದ ಪ್ರಮಾಣವು 5:5:5 ಹೀಗಿದ್ದರೆ ಸರ್ವಸಾಧಾರಣ ವ್ಯಕ್ತಿಯಲ್ಲಿ ಅದರ ಪ್ರಮಾಣವು 1:3:5 ಹೀಗೆ ಇರುತ್ತದೆ; ಆದ್ದರಿಂದ ಸರ್ವಸಾಧಾರಣ ವ್ಯಕ್ತಿಯು ಗಣೇಶ ಲಹರಿಗಳನ್ನು ಹೆಚ್ಚು ಸಮಯದ ವರೆಗೆ ಗ್ರಹಣ ಮಾಡಲಾರನು.

**ಶಾಸ್ತ್ರೋಕ್ತ ವಿಧಿ ಮತ್ತು ರೂಢಿ ಇವುಗಳ ಅವಧಿ:** 'ಭಾದ್ರಪದ ಶುಕ್ಲ ಚತುರ್ಥಿಯ ದಿನ ಮಣ್ಣಿನ ಗಣಪತಿಯನ್ನು ತಯಾರಿಸಿ, ಅದನ್ನು ಎಡಗೈ ಮೇಲಿಟ್ಟು ಅಲ್ಲಿಯೇ ಸಿದ್ಧಿವಿನಾಯಕ ಹೆಸರಿನಿಂದ ಪ್ರಾಣಪ್ರತಿಷ್ಠೆ ಮತ್ತು ಪೂಜೆಯನ್ನು ಮಾಡಿ ಕೂಡಲೇ ವಿಸರ್ಜನೆ ಮಾಡಬೇಕು ಎಂಬ ಶಾಸ್ತ್ರವಿದೆ. ಆದರೆ ಮಾನವರು ಉತ್ಸವಪ್ರಿಯರಾಗಿರುವುದರಿಂದ ಇಷ್ಟರಿಂದಲೇ ಅವರಿಗೆ ಸಮಾಧಾನವಾಗಲಿಲ್ಲ. ಆದುದರಿಂದ ಒಂದೂವರೆ, ಐದು, ಏಳು ಅಥವಾ ಹತ್ತು ದಿನ ಗಣಪತಿಯ ಮೂರ್ತಿಯನ್ನು ಇಟ್ಟು ಉತ್ಸವ ಮಾಡತೊಡಗಿದರು. ಕೆಲವರು ಗಣಪತಿಯ ವಿಸರ್ಜನೆಯನ್ನು ಗೌರಿಯ ಜೊತೆಗೆ ಮಾಡುತ್ತಾರೆ. ಯಾರಾದರೊಬ್ಬರ ಕುಲದಲ್ಲಿ ಗಣಪತಿಯನ್ನು ಐದು ದಿನ ಇಡುವ ಪದ್ಧತಿ ಇದ್ದು ಅವರು ಅದನ್ನು ಒಂದೂವರೆ ಅಥವಾ ಏಳು ದಿನ ಇಡಬೇಕಾಗಿದ್ದರೆ ಅವರು ಹಾಗೆ ಮಾಡಬಹುದು. ಇದಕ್ಕೆ ಯಾವುದೇ ಅಧಿಕಾರಯುತ ವ್ಯಕ್ತಿಯನ್ನು ಕೇಳುವ ಆವಶ್ಯಕತೆಯಿಲ್ಲ. ತಮ್ಮ ತಮ್ಮ ರೂಢಿಗನುಸಾರ ಮೊದಲನೆಯ, ಎರಡನೆಯ, ಮೂರನೆಯ, ಆರನೆಯ, ಏಳನೆಯ ಅಥವಾ ಹತ್ತನೆಯ ದಿನ ಗಣೇಶಮೂರ್ತಿಯ ವಿಸರ್ಜನೆಯನ್ನು ಮಾಡಬೇಕು.

**ಮೂರ್ತಿಯು ಭಗ್ನವಾದರೆ ಏನು ಮಾಡಬೇಕು:** ಮೂರ್ತಿಯ ಪ್ರಾಣಪ್ರತಿಷ್ಠೆಯನ್ನು ಮಾಡುವುದಕ್ಕಿಂತ ಮೊದಲು ಯಾವುದಾದರೊಂದು ಅವಯವಕ್ಕೆ ಏಟಾದರೆ ಅಥವಾ ಭಿನ್ನವಾದರೆ ಚಿಂತಿಸುವ ಕಾರಣವಿಲ್ಲ, ಅದರ ಬದಲು ಬೇರೆ ಮೂರ್ತಿಯನ್ನು ತಂದು ಪೂಜಿಸಬೇಕು. ವಿಸರ್ಜನೆಗಾಗಿ ಅಕ್ಷತೆ ಹಾಕಿದ ನಂತರ ಅವಯವಗಳಿಗೆ ಏಟಾದರೆ ಅಥವಾ ಭಿನ್ನವಾದರೆ ಆ ಮೂರ್ತಿಯನ್ನು ನಿತ್ಯದಂತೆ ವಿಸರ್ಜನೆ ಮಾಡಬೇಕು. ಪ್ರಾಣ ಪ್ರತಿಷ್ಠೆಯಾದ ನಂತರ ಅವಯವಕ್ಕೆ ಏಟಾದರೆ ಅಥವಾ ಮುರಿದರೆ ಆ ಮೂರ್ತಿಗೆ ಅಕ್ಷತೆಯನ್ನು ಅರ್ಪಿಸಿ ವಿಸರ್ಜಿಸಬೇಕು. ಈ ಘಟನೆಯು ಗಣೇಶ ಚತುರ್ಥಿಯ ದಿನವೇ ನಡೆದರೆ ಬೇರೆ ಮೂರ್ತಿಯನ್ನು ತಂದು ಪೂಜಿಸಬೇಕು. ಎರಡನೆಯ ಅಥವಾ ಮೂರನೆಯ ದಿನ ನಡೆದರೆ ಹೊಸ ಮೂರ್ತಿಯನ್ನು ತಂದು ಪೂಜಿಸಬೇಕಾಗಿಲ್ಲ. ಮೂರ್ತಿಯು ಸಂಪೂರ್ಣ ಭಗ್ನವಾದರೆ ಕುಲಪುರೋಹಿತರ ಸಲಹೆಯಂತೆ ಯಥಾವಕಾಶ 'ಅದ್ಭುತ ದರ್ಶನ ಶಾಂತಿ'ಯನ್ನು ಮಾಡಿಸಬೇಕು. ಗಣೇಶ ಚತುರ್ಥಿಯಂದು ದೀಪ ಆರಿ ಹೋಗುವುದು, ಅರೆಯುವ ಕಲ್ಲು, ಬೀಸುವ ಕಲ್ಲು ಅಥವಾ ಸಾಣೆಕಲ್ಲು ಒಡೆದು ಹೋಗುವುದು, ಕೆಸುವಿನ ಎಲೆಗೆ ಹೂವು ಬರುವುದು, ಮೂರ್ತಿಭಗ್ನ ಇತ್ಯಾದಿ ಘಟನೆಗಳಾದರೆ ಆ ಕುಟುಂಬದಲ್ಲಿ ದ್ರವ್ಯ ಹಾನಿ, ಗಂಭೀರ ರೋಗ ಅಥವಾ ಅಪಮೃತ್ಯು ಆಗುವ ಸಾಧ್ಯತೆಯಿರುತ್ತದೆ; ಅದಕ್ಕಾಗಿ ಮೇಲೆ ಕೊಟ್ಟಿರುವ ಪರಿಹಾರಗಳನ್ನು ಶ್ರದ್ಧೆಯಿಂದ ಮಾಡಬೇಕು.

### ಚಂದ್ರ, ಮನಸ್ಸು ಮತ್ತು ಗಣೇಶ ಚತುರ್ಥಿ ಇವುಗಳ ಸಂಬಂಧ


- **ಸೌರಮಂಡಲದಲ್ಲಿನ ಎಲ್ಲಾ ಗ್ರಹಗಳಲ್ಲಿ ಚಂದ್ರಗ್ರಹವು ಅತ್ಯಂತ ಚಂಚಲವಾಗಿದೆ. ಆದುದರಿಂದ ಚಂಚಲ ಸ್ವಭಾವವಿರುವವರ ಮನಸ್ಸಿನ ಮೇಲೆ ಚಂದ್ರನ ಸ್ಪಂದನಗಳು ಹೆಚ್ಚು ಕಾರ್ಯ ಮಾಡುತ್ತವೆ.**
- **ಪೃಥ್ವಿಯಿಂದ ಚಂದ್ರಗ್ರಹದ ದರ್ಶನವನ್ನು ನಾವು ಸಹಜವಾಗಿ ಪಡೆದುಕೊಳ್ಳಬಹುದು ಮತ್ತು ಅದನ್ನು ನಾವು ಮನಸ್ಸಿನಲ್ಲಿ ಅತ್ಯಂತ ಸಹಜವಾಗಿ ಯಾವಾಗ ಬೇಕಾದರೂ ನೋಡಬಹುದು.**
- **ಪರಿಣಾಮ : ಗಣೇಶ ಚತುರ್ಥಿಯ ದಿನ ಬ್ರಹ್ಮಾಂಡದಲ್ಲಿ ನಿರ್ಮಾಣವಾಗುವ ರಜೋಗುಣದ ಸ್ಪಂದನಗಳು ಚಂದ್ರನ ಕಡೆಗೆ ಹೆಚ್ಚಿನ ಪ್ರಮಾಣದಲ್ಲಿ ಆಕರ್ಷಿತವಾಗಿ ಚಂಚಲ ಮನಸ್ಸಿರುವ ಮನುಷ್ಯರ ಕಡೆಗೆ ಆಕರ್ಷಿಸಲ್ಪಡುತ್ತವೆ.**

**ಗಣೇಶ ಚತುರ್ಥಿಯ ವೈಶಿಷ್ಟ್ಯಗಳು:** ಈ ದಿನ ರಜೋಗುಣದಿಂದಾಗಿ ಚಂದ್ರನ ಸುತ್ತಲಿರುವ ಪ್ರಭಾವಲಯವು ಬಹಳ ತೇಜಸ್ವಿಯಾಗಿ ಕಾಣಿಸುತ್ತದೆ ಮತ್ತು ಅದು ಚಂಚಲ ಮನಸ್ಸನ್ನು ಸಹಜವಾಗಿ ಆಕರ್ಷಿಸಿಕೊಳ್ಳುತ್ತದೆ. ಈ ದಿನ ಚಂದ್ರದರ್ಶನವನ್ನು ಪಡೆದುಕೊಂಡರೆ, ಚಂದ್ರನು ತನ್ನ ಪ್ರಚಂಡ ರಜೋಗುಣದೊಂದಿಗೆ ಮನಸ್ಸಿನಲ್ಲಿ ಬೇರೂರುತ್ತಾನೆ. ಮನಸ್ಸಿನ ಮೇಲೆ ಮೂಡುವ ಅವನ ಚಿತ್ರವೂ ಅಷ್ಟೇ ಚಂಚಲವಾಗಿರುತ್ತದೆ. ಆದುದರಿಂದ ಅದು ಯಾವ ಕಾರಣಗಳು ಇಲ್ಲದಿರುವಾಗಲೂ ಮತ್ತು ಯಾವುದೇ ಸಮಯದಲ್ಲಿ ಮನಸ್ಸಿನ ಮೇಲೆ ಮೂಡುತ್ತದೆ. ಚಂದ್ರನನ್ನು ನೋಡಿದ ಸಮಯದಲ್ಲಿನ ದೃಶ್ಯವನ್ನು ನೆನಪಿಸಿಕೊಂಡರೂ ಮನಸ್ಸು ಚಂಚಲವಾಗುತ್ತದೆ.

**ಗಣೇಶ ಚತುರ್ಥಿಯ ದಿನ ಚಂದ್ರನ ದರ್ಶನವನ್ನು ಪಡೆದುಕೊಳ್ಳದಿರುವುದು** ಮನಸ್ಸಿನ ಚಂಚಲತೆಯು ಸುಮಾರು ಒಂದು ವರ್ಷದವರೆಗೆ ಉಳಿಯುತ್ತದೆ. ಮನಸ್ಸಿನ ಚಂಚಲತೆಯ ಪ್ರಚಂಡ ಪ್ರಭಾವದಿಂದಾಗಿ ಯಾವುದಾದರೊಂದು ಘಟನೆಯು ಘಟಿಸುವ ಮೊದಲೇ ಅದು ಘಟಿಸಿ ಹೋಗಿದೆ ಎಂಬ ತಪ್ಪುತಿಳುವಳಿಕೆ ಅಥವಾ ಗಾಳಿ ಸುದ್ದಿ ಹರಡುವ ಸಾಧ್ಯತೆ ಇರುತ್ತದೆ. ಇದನ್ನೇ ಯಾವುದಾದರೊಂದು ಅಡಚಣೆಯನ್ನು ಮೈಮೇಲೆ ಎಳೆದುಕೊಳ್ಳುವುದು ಎಂದು ಹೇಳುತ್ತಾರೆ. ಈ ಕಾರಣಕ್ಕಾಗಿ ಗಣೇಶ ಚತುರ್ಥಿಯ ದಿನ ಚಂದ್ರನನ್ನು ನೋಡುವುದು ಅಶುಭವೆಂದು ತಿಳಿದುಕೊಳ್ಳುತ್ತಾರೆ. **ಜ್ಯೋತಿಷ್ಯ ಮತ್ತು ಚಂದ್ರದರ್ಶನ :** ಗಣೇಶ ಚತುರ್ಥಿಯ ದಿನದಂದು ಯಾವ ವ್ಯಕ್ತಿಯ ರಾಶಿಯಲ್ಲಿ ಯಾವುದೇ ಸ್ಥಾನದಲ್ಲಿ ಚಂದ್ರನಿದ್ದರೆ ಅವನು ಚಂದ್ರದರ್ಶನವನ್ನು ಮಾಡಲೇಬಾರದು. ಇಂತಹ ವ್ಯಕ್ತಿಯು ನೀರಿನಲ್ಲಿ ಕಾಣಿಸುವ ಚಂದ್ರನ ಪ್ರತಿಬಿಂಬವನ್ನು ಸಹ ನೋಡಬಾರದು. ಏಕೆಂದರೆ ನೀರಿನಿಂದ ನೆನೆದಿರುವ ಮಣ್ಣಿನಲ್ಲಿಯೂ ಪ್ರಜನನ ಶಕ್ತಿಯು ಹೆಚ್ಚಾಗಿರುವುದರಿಂದ ಅಲ್ಲಿಯೂ ಪ್ರಚಂಡ ಪ್ರಮಾಣದಲ್ಲಿ ರಜೋಗುಣವು ನಿರ್ಮಾಣವಾಗಿರುತ್ತದೆ. **ಗಣೇಶೋತ್ಸವದ ಸಮಯದಲ್ಲಿ ಮಾಡಬೇಕಾದ ಪ್ರಾರ್ಥನೆ :** ಹೇ ಶ್ರೀ ಗಣೇಶಾ, ಗಣೇಶೋತ್ಸವದ ಸಮಯದಲ್ಲಿ ಎಂದಿಗಿಂತ ಸಾವಿರ ಪಟ್ಟು ಹೆಚ್ಚು ಕಾರ್ಯನಿರತವಾಗಿರುವ ನಿನ್ನ ತತ್ತ್ವದ ಲಾಭವು ನನಗೆ ಹೆಚ್ಚಿನ ಪ್ರಮಾಣದಲ್ಲಿ ಗ್ರಹಿಸುವಂತಾಗಲಿ.

## ಪರ್ಯಾಯ ಪುತ್ತಿಗೆ ಶ್ರೀಗಳಿಂದ ಅಂತಾರಾಷ್ಟ್ರೀಯ ದಾಸ ಸಾಹಿತ್ಯ ಸಮಾವೇಶದ ಕರಪತ್ರ ಉದ್ಘಾಟನೆ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ಉಡುಪಿಯ ಪರ್ಯಾಯ ಪುತ್ತಿಗೆ ಮಠ, ಶ್ರೀ ವಾದಿರಾಜ ಸಂಶೋಧನ ಪ್ರತಿಷ್ಠಾನ ಮತ್ತು ಬೆಂಗಳೂರಿನ ಶ್ರೀನಿವಾಸ ಉತ್ಸವ ಬಳಗದ ಸಂಯುಕ್ತ ಆಶ್ರಯದಲ್ಲಿ ಅಪರೋಕ್ಷ ಜ್ಞಾನಿಗಳಾದ ಶ್ರೀ ವಿಜಯದಾಸರ ಆರಾಧನಾ ಅಂಗವಾಗಿ ಉಡುಪಿಯ ಕೃಷ್ಣನ ಸನ್ನಿಧಿಯಲ್ಲಿ ನವೆಂಬರ್ 9–11 ರವರೆಗೆ ಮೂರು ದಿನಗಳ ಅಂತಾರಾಷ್ಟ್ರೀಯ ದಾಸ ಸಾಹಿತ್ಯ ಸಮ್ಮೇಳನದ ಕರಪತ್ರ ವನ್ನು ಪರ್ಯಾಯ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ತೀರ್ಥರು ಮತ್ತು ಕಿರಿಯ ಶ್ರೀಗಳು ಶ್ರೀ ಸುಶೀಂದ್ರ ತೀರ್ಥರು ಲೋಕಾರ್ಪಣೆಗೊಳಿಸಿ ಸಮ್ಮೇಳನ ಯಶಸ್ವೀ ಯಾಗಲಿ ಎಂದು ಆಶೀರ್ವದಿಸಿದರು.

ಶ್ರೀಮಠದ ಪ್ರಸನ್ನಚಾರ್ಯ, ವಾದಿರಾಜ ಸಂಶೋಧನ ಪ್ರತಿಷ್ಠಾನದ ನಿರ್ದೇಶಕ ಡಾ. ಬಿ. ಗೋಪಾಲಚಾರ್ಯ, ಶ್ರೀನಿವಾಸ ಉತ್ಸವ ಬಳಗದ ಟಿ. ವಾದಿರಾಜ, ಪ್ರಣವ ಮೀಡಿಯಾ ಹೌಸ್ ಪ್ರಕಾಶನದ ಡಾ. ಗುರುರಾಜ ಪೋಶೆಟ್ಟಿಹಳ್ಳಿ ಉಪಸ್ಥಿತರಿದ್ದರು.

ದೇಶ – ವಿದೇಶಗಳಿಂದ ದಾಸಸಾಹಿತ್ಯ ಅಭಿಮಾನಿಗಳು ಆಗಮಿಸಿ ವಿಜಯದಾಸರು ವರ್ಣಿಸಿದ ಉಡುಪಿ –ಕೃಷ್ಣನ ಬಗ್ಗೆ ವಿದ್ವತ್ಪೂರ್ಣ ಪ್ರಬಂಧ ಮಂಡಿಸಲು ಅವಕಾಶವಿದೆ, ಇದೇ ಸಂದರ್ಭದಲ್ಲಿ ವೈಭವದ ಶ್ರೀನಿವಾಸ ಕಲ್ಯಾಣ ವನ್ನು ಹಮ್ಮಿಕೊಳ್ಳಲಾಗುವುದು ಎಂದು ಆಯೋಜಕರು ತಿಳಿಸಿದ್ದಾರೆ.

## ಕೈಗಾರಿಕಾ ಪ್ರದೇಶಕ್ಕೆ ಪ್ರತ್ಯೇಕ ನೀರು ಸರಬರಾಜು, ಮೂಲಸೌಕರ್ಯ

• ಉದಯವಾಹಿನಿ ಬೆಂಗಳೂರು

ರಾಜ್ಯದಲ್ಲಿ ಹೊಸ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಹಾಗೂ ಹಾಲಿ ಕೈಗಾರಿಕಾ ಪ್ರದೇಶಗಳಿಗೆ ನದಿ ಮೂಲದ ಪ್ರತ್ಯೇಕ ನೀರು ಸರಬರಾಜು ಸೇರಿದಂತೆ ಮೂಲಸೌಕರ್ಯ ಕಲ್ಪಿಸುವ ಸಲುವಾಗಿ ?5,000 ಕೋಟಿ ಸಾಲ ಪಡೆಯುವ ಉದ್ದೇಶ ಇದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಗುರುವಾರ ಇಲ್ಲಿ ಹೇಳಿದರು.

ಭಾರತೀಯ ಕೈಗಾರಿಕೆಗಳ ಒಕ್ಕೂಟ (ಸಿಐಐ) ಇಲ್ಲಿ ಏರ್ಪಡಿಸಿರುವ 'ಇನ್ನೋವರ್ಜ್' ಸಮಾವೇಶದಲ್ಲಿ ಅವರು ಗುರುವಾರ



ಉದಯವಾಹಿನಿ ಚಿತ್ರ

ಮಾತನಾಡಿದರು. ರಾಜ್ಯದ ಬಹುತೇಕ ಕೈಗಾರಿಕಾ ಪ್ರದೇಶಗಳಲ್ಲಿ ನಿರೀಕ್ಷಿತ ಮೂಲಸೌಕರ್ಯ ಇಲ್ಲ. ಅದರಲ್ಲೂ ಪ್ರತ್ಯೇಕ ನೀರು ಸರಬರಾಜು ವ್ಯವಸ್ಥೆಯಂತೂ ಇಲ್ಲವೇ ಇಲ್ಲ. ಹೀಗಾಗಿ ಈ ನಿಟ್ಟಿನಲ್ಲಿ ಪ್ರಯತ್ನ ನಡೆಸಲಾಗುತ್ತಿದೆ. ಈ ಸಂಬಂಧ ಹಣಕಾಸು ಇಲಾಖೆ ಜತೆಗೂ ಚರ್ಚಿಸಲಾಗುತ್ತಿದೆ ಎಂದು ಅವರು ಹೇಳಿದರು. ಉದ್ದೇಶಿತ ನೀರು ಸರಬರಾಜು ಯೋಜನೆಗೆ ಅಂದಾಜು ಎರಡು ಸಾವಿರ ಕೋಟಿ ರೂಪಾಯಿ ಬೇಕಾಗುತ್ತದೆ. ಉಳಿದ ಮೂರು ಸಾವಿರ ಕೋಟಿಯನ್ನು ಹಳೇ ಕೈಗಾರಿಕಾ ಪ್ರದೇಶಗಳಲ್ಲಿ ಮೂಲ ಸೌಕರ್ಯ ಕಲ್ಪಿಸುವುದಕ್ಕೆ ಹಾಗೂ ಹೊಸ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮತ್ತು ಭೂಸ್ವಾಧೀನಕ್ಕೆ ಬಳಸಲಾಗುವುದು ಎಂದು ಅವರು ಹೇಳಿದರು. ರಾಜ್ಯವು ಉದ್ಯಮ, ಸಂಶೋಧನೆ, ಅಭಿವೃದ್ಧಿ ಮತ್ತು ತಂತ್ರಜ್ಞಾನಗಳ ಪರವಾಗಿದ್ದು, ಬೆಂಗಳೂರು ಮತ್ತು ಬೆಳಗಾವಿಯಲ್ಲಿ ಎರಡು ಪ್ರತ್ಯೇಕ ಸ್ಟಾರ್ಟಪ್ ಪಾರ್ಕ್ ಸ್ಥಾಪಿಸಲಾಗುವುದು ಎಂದು ಸಚಿವ ಪಾಟೀಲ ಹೇಳಿದ್ದಾರೆ. ಸ್ಟಾರ್ಟಪ್ ಪಾರ್ಕಿಗೆ ಬೇಕಾಗುವ ಭೂಮಿಯನ್ನು ಬೆಂಗಳೂರಿನಲ್ಲಿ ಈಗಾಗಲೇ ಗುರುತಿಸಲಾಗಿದೆ. ಬೆಳಗಾವಿಯಲ್ಲಿ ಸೂಕ್ತ ಜಾಗವನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇಲ್ಲಿ ಮೆಡ್–ಟೆಕ್ ಸ್ಟಾರ್ಟಪ್ ಪಾರ್ಕ್ ಸ್ಥಾಪಿಸುವ ಉದ್ದೇಶವಿದೆ ಎಂದು ಅವರು ತಿಳಿಸಿದರು. ಕರ್ನಾಟಕವು ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿಯ ತಾಣವಾಗಿದೆ. ಇದರ ಜತೆಗೆ ನಾವು ಕೌಶಲಪೂರ್ಣ ಮಾನವ ಸಂಪನ್ಮೂಲವನ್ನು ಕೂಡ ಸೃಷ್ಟಿಸಬೇಕು. ಆಗ ಇದರ ಲಾಭ ರಾಜ್ಯಕ್ಕೆ ಸಿಗುತ್ತದೆ ಎಂದು ಅವರು ವಿವರಿಸಿದ್ದಾರೆ.

> **ತಯಾರಿಕಾ ವಲಯದಲ್ಲಿ ಸೂಕ್ತ ನೀತಿಗಳು ಮತ್ತು ಪ್ರೋತ್ಸಾಹದೊಂದಿಗೆ ರಾಜ್ಯವು ಭಾರೀ ಬಂಡವಾಳ ಹೂಡಿಕೆಯನ್ನು ಆಕರ್ಷಿಸುತ್ತಿದೆ. ನಾಲ್ಕನೆಯ ಕೈಗಾರಿಕಾ ಕ್ರಾಂತಿಯನ್ನು ಪರಿಣಾಮಕಾರಿಯಾಗಿ ಸಾಧಿಸಬೇಕು ಎನ್ನುವುದು ರಾಜ್ಯದ ಗುರಿಯಾಗಿದೆ ಎಂದು ಪಾಟೀಲ ನುಡಿದರು.**

## ಸಂಘಟಿತ ಶಕ್ತಿ ಒಂದಾದಲ್ಲಿ ಅರ್ಬನ್ ನಕ್ಸಲ್‌ವಾದದ ವಿರುದ್ಧ ಜಯ ನಿಶ್ಚಿತ

• ಉದಯವಾಹಿನಿ ಬೆಂಗಳೂರು

ಅರ್ಬನ್ ನಕ್ಸಲ್ ವಾದಿಗಳಿಗೆ ಸರಕಾರೇತರ ಸಂಸ್ಥೆಗಳಿಂದ ಅಸೀಮಿತ ಹಣ ಪೂರೈಸಲಾಗುತ್ತದೆ ವಿವಿಧ ರೀತಿಯಲ್ಲಿ ಸಹಾಯ ನೀಡಿ ಭಾರತವಿರೋಧಿ ಚಟುವಟಿಕೆಗಳು ನಡೆಯುತ್ತವೆ.

ಹಲವಾರು ಯೂನಿವರ್ಸಿಟಿಗಳು ಸಹ ಈ ಅರ್ಬನ್ ನಕ್ಸಲ್ ವಾದಕ್ಕೆ ಸಹಕರಿಸುತ್ತಿದೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ವಿಶ್ವವಿದ್ಯಾನಿಲಯಗಳು, ಕಲಾಕ್ಷೇತ್ರ, ಸಾಮಾಜಿಕ ಮಾಧ್ಯಮಗಳು ಎಲ್ಲೆಡೆಯೂ ತಮ್ಮ ಜಾಲವನ್ನು ಹರಡಿದ್ದಾರೆ.

ಅಮೇರಿಕಾ ತನ್ನ ರಾಯಭಾರಿಗಳನ್ನು ಸಹ ಇಂತಹ ಕೆಲಸಗಳಿಗೆ ಬಳಸಿಕೊಳ್ಳುತ್ತಿದೆ, ಗೌರಿ ಲಂಕೇಶ್ ಭಾರತದ ಪ್ರಜಾಪ್ರಭುತ್ವಕ್ಕಾಗಿ ಹೋರಾಡಿದರು ಎಂದು ಅವರು ಯಾರೆಂದೇ ತಿಳಿಯದ ವಿದೇಶಿ ಜನ ಅವರ ಹೆಸರಿನಲ್ಲಿ ಪ್ರಶಸ್ತಿಯನ್ನು ನೀಡುತ್ತಿದ್ದಾರೆ, ಇದು ಸಹ ಈ ಅರ್ಬನ್ ನಕ್ಸಲ್ ವಾದದ ಹಿಡೆನ್ ಅಜೆಂಡವಾಗಿದೆ, ಇದರ ವಿರುದ್ಧ ನಾವೆಲ್ಲರೂ ಸಂಘಟಿತರಾಗಿ ಹೋರಾಡಿದರೆ ಅವರನ್ನು ಹಿಮ್ಮೆಟ್ಟಿಸಲು ಸಾಧ್ಯವಿದೆ, ಭಾರತಕ್ಕೆ ಇದು ಮೊದಲ ಬಾರಿಯ ಆಕ್ರಮಣವಲ್ಲ, ಹಿಂದೆಯೂ ಅನೇಕ ಆಕ್ರಮಣಗಳು ನಡೆದಿವೆ, ಅದರಲ್ಲಿ ಜಯ ಸಾಧಿಸಿದ್ದೇವೆ, ಇಲ್ಲಿಯೂ ಸಂಘಟಿತ ಶಕ್ತಿ ಒಂದಾದರೆ ಜಯ ನಿಶ್ಚಿತ ಎಂದು ಯುವಾ ಬ್ರಿಗೇಡ್‌ನ ಸಂಸ್ಥಾಪಕರಾದ ಶ್ರೀ. ಚಕ್ರವರ್ತಿ ಸುಲಿಬೆಲೆ ಇವರು ವಿಶ್ವಾಸ ವ್ಯಕ್ತಪಡಿಸಿದರು. ಅವರು ಹಿಂದೂ ಜನಜಾಗೃತಿ ಸಮಿತಿ 4 ಸೆಪ್ಟೆಂಬರ್ ರಂದು ಬೆಂಗಳೂರಿನ ಮಾನಂದಿ ನಂಜುಂಡಿ ಸೆಟ್ಟಿ ಸಭಾಂಗಣದಲ್ಲಿ ಆಯೋಜಿಸಿದ್ದ 'ದೇಶ ವಿರೋಧಿ ಷಡ್ಯಂತ್ರ ಹಾಗೂ ಅರ್ಬನ್ ನಕ್ಸಲ್ ವಾದ' ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.


ಉದಯವಾಹಿನಿ ಚಿತ್ರ

ಸೋಶಿಯಲ್ ಮೀಡಿಯಾ, OTT, ಚಲನಚಿತ್ರಗಳಲ್ಲಿ ವ್ಯಾಪಕಾಗಿ ಅರ್ಬನ್ ನಕ್ಸಲ್ ವಾದ ಹರಡಲಾಗುತ್ತಿದೆ. ಇತಿಹಾಸವನ್ನೇ ತಿರುಚಿ ತೋರಿಸಲಾಗುತ್ತಿದೆ. ಜೊತೆಗೆ ಹಿಂದೂ ಸಂಘಟನೆಗಳ ವಿರುದ್ಧ ಸುಳ್ಳು ನರೇಟಿವ್‌ಗಳನ್ನು ಸೆಟ್ ಮಾಡಲಾಗುತ್ತಿದೆ.

ಕಳೆದ ಕೆಲವು ವರ್ಷಗಳಲ್ಲಿ ದಾಖಲೆ ಪ್ರಕಾರ ನಕ್ಸಲರಿಂದ ಪೊಲೀಸರನ್ನೂ ಸೇರಿದಂತೆ 14,000ಕ್ಕೂ ಅಧಿಕ ಹತ್ಯೆಗಳು ನಡೆದಿವೆ. ಅನೇಕ ಹಿಂದೂ ಸಂಘಟನೆ ಕಾರ್ಯಕರ್ತರ ಹತ್ಯೆ ನಡೆದಿವೆ. ಆದರೆ ಇದರ ಬಗ್ಗೆ ಮಾಧ್ಯಮಗಳಲ್ಲಿ ಹೆಚ್ಚು ಚರ್ಚೆ ಆಗುವುದಿಲ್ಲ, ಆದರೆ ತಥಾಕಥಿಕ ಬುದ್ಧಿಜೀವಿಗಳಾದ ದಾಭೋಲ್ಕರ್, ಪಾನಸರೆ, ಕಲಬುರ್ಗಿ, ಗೌರಿ ಲಂಕೇಶ ಇವರ ಹತ್ಯೆಗಳಾದಾಗ ದೇಶದಾದ್ಯಂತ ಇದರ ಬಗ್ಗೆ ಚರ್ಚೆ ನಡೆಯುತ್ತದೆ, ಇದು ಅರ್ಬನ್ ನಕ್ಸಲ್ ವಾದದ ಷಡ್ಯಂತ್ರವಾಗಿದೆ. ಇತ್ತೀಚೆಗೆ 'IC814 ಕಂದಾಹಾರ ಹೈಜ್ಯಾಕ್' ವೆಬ್ ಸಿರೀಸ್ ನಲ್ಲಿ ಆ ವಿಮಾನವನ್ನು ಹಿಂದೂಗಳು ಹೈಜ್ಯಾಕ್ ಮಾಡಿದ್ದರು ಎಂದು ತಿರುಚಿ ತೋರಿಸಲಾಗಿದ್ದು ಅಷ್ಟೇ ಅಲ್ಲದೆ ಇಡೀ ಸಿರೀಸ್ ನಲ್ಲಿ ಇನ್ನೂ ಅನೇಕ ಕಡೆ ತಪ್ಪು ಮಾಹಿತಿಯನ್ನು ನೀಡಲಾಗಿದೆ. ಈ ರೀತಿ ವಿವಿಧ ಮಾಧ್ಯಮಗಳಿಂದ ಲೆಫ್ಟ್ ಎಕೋಸಿಸ್ಟಮ್ ಬಲಗೊಳ್ಳುತ್ತಿದ್ದು ಅದನ್ನು ಕೊನೆಗಾಣಿಸಲು ನಾವು ಹಿಂದೂ ಎಕೋಸಿಸ್ಟಮ್ ನ ಶಕ್ತಿ ಹೆಚ್ಚಿಸುವುದು ಅನಿವಾರ್ಯವಾಗಿದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ಸಮನ್ವಯಕರಾದ ಶ್ರೀ. ಚಂದ್ರ ಮೊಗವೀರ ಇವರು ಕರೆ ನೀಡಿದರು. ಕೊನೆಗೆ ಹಿರಿಯ ವಿಚಾರಕರು ಮತ್ತು ಮಾಜಿ ವಿಧಾನಸಭಾ ಸದಸ್ಯರಾದ ಡಾ. ಎಸ್. ಆರ್. ಲೀಲಾ ಮಾತನಾಡಿ ಮಹಾಭಾರತ ಕಾಲದಿಂದಲೂ ಈ ದೇಶದಲ್ಲಿ ಧರ್ಮ–ಅಧರ್ಮದ ನಡುವೆ ಸಂಘರ್ಷ ನಡೆಯುತ್ತಿದೆ. ಅಲ್ಲಿಯೂ ಕಪಟ ನೀತಿಯಿಂದ ಪಾಂಡವರ ಪರಾಜಯಕ್ಕೆ ಪ್ರಯತ್ನಿಸಲಾಗುತ್ತಿತ್ತು, ಆದರೆ ಭಗವಾನ್ ಶ್ರೀಕೃಷ್ಣನ ಕೃಪೆ ಮತ್ತು ಧರ್ಮವೀರರ ಸಂಘಟಿತ ಹೋರಾಟದಿಂದ ಧರ್ಮದ ವಿಜಯವಾಯಿತು, ಈಗಲೂ ಅರ್ಬನ್ ನಕ್ಸಲ್ ವಾದದಂತಹ ವೈಚಾರಿಕ ಯುದ್ಧ ನಡೆಯುತ್ತಿದೆ. ಜನತೆ ಧರ್ಮದ ಜಯವಾಗುವುದು ಎಂದು ತಮ್ಮಷ್ಟಕ್ಕೆ ಕೈಕಟ್ಟಿ ಕುಳಿತರೆ ಆಗುವುದಿಲ್ಲ. ಎಲ್ಲರೂ ಸಂಘಟಿತರಾಗಿ ಈ ವೈಚಾರಿಕ ಯುದ್ಧವನ್ನು ಗೆಲ್ಲಬೇಕಿದೆ, ಆಗಲೇ ರಾಷ್ಟ್ರವು ಉಳಿಯುವುದು ಎಂದರು. ಈ ಕಾರ್ಯಕ್ರಮದಲ್ಲಿ 250 ಕ್ಕೂ ಅಧಿಕ ಧರ್ಮಪ್ರೇಮಿ ಮತ್ತು ರಾಷ್ಟ್ರಪ್ರೇಮಿಗಳು ಭಾಗವಹಿಸಿದ್ದರು. ಸುಮಾರು 2000 ಕ್ಕೂ ಅಧಿಕ ಮಂದಿ ಈ ಕಾರ್ಯಕ್ರಮದ ನೇರಪ್ರಸಾರ ವೀಕ್ಷಿಸಿದ್ದಾರೆ.

## ಸಾಧಕ ಶಿಕ್ಷಕರು, ಶಿಕ್ಷಣ ತಜ್ಞರಿಗೆ ಗೌರವ ಸನ್ಮಾನ ಮತ್ತು ಗುರುವಂದನೆ

• ಉದಯವಾಹಿನಿ ಬೆಂಗಳೂರು

ಶಿಕ್ಷಕರು ಮಾಹಿತಿ ಕಣಜವಿದ್ದಂತೆ, ಸಮಾಜವನ್ನು ತಿದ್ದುವ,ಬದಲಾಯಿಸುವ ಶಕ್ತಿ ಶಿಕ್ಷಕನಿಗಿದೆ. ಶಿಕ್ಷಕ ವೃತ್ತಿ ಅತ್ಯಂತ ಪಾವಿತ್ರ್ಯತೆಯುಳ್ಳದ್ದು ಎಂದು ಭಾರತೀಯ ವಿಜ್ಞಾನ ಸಂಸ್ಥೆಯ ಏರೋಸ್ಪೇಸ್ ಎಂಜಿನಿಯರಿಂಗ್ ನಿವೃತ್ತ ಪ್ರಾಧ್ಯಾಪಕ ಮತ್ತು ವಿಜ್ಞಾನಿ ಡಾ.ಕೆಪಿಜೆ ರೆಡ್ಡಿ ಹೇಳಿದರು.

ನಗರದ ಸಿಎಂಆರ್ ವಿಶ್ವವಿದ್ಯಾಲಯ ಒಎಂಬಿಆರ್ ಬಡಾವಣೆಯಲ್ಲಿರುವ ಸಿಎಂಆರ್ ಸಭಾಂಗಣದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಮತ್ತು ಗುರು ವಂದನಾ ಕಾರ್ಯಕ್ರಮದಲ್ಲಿ ಗೌರವ ಸನ್ಮಾನ ಮತ್ತು ಗುರುವಂದನೆ ಸ್ವೀಕರಿಸಿ ಐಐಎಸ್‌ಸಿ ವಿಜ್ಞಾನಿ ಡಾ.ಕೆಪಿಜೆ ರೆಡ್ಡಿ ಮಾತನಾಡಿದರು. ಸಮಾಜದ ಸರ್ವತೋಮುಖ ಬದಲಾವಣೆಗೆ ತುಡಿಯುವ ಶಿಕ್ಷಕ, ಕಲಿಕೆಯ ಪ್ರಯೋಗಶೀಲತೆಗೆ ವಿದ್ಯಾರ್ಥಿಗಳನ್ನು ತೊಡಗಿಸುವ ಮೂಲಕ ಸಮಾಜ



ಉದಯವಾಹಿನಿ ಚಿತ್ರ

ಕಟ್ಟುವ ಸತ್ಪ್ರಜೆಗಳನ್ನಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವವಾದದು ಎಂದು ಶ್ಲಾಘಿಸಿದರು. ಶಿಕ್ಷಕರ ದಿನಾಚರಣೆ ಮತ್ತು ಗುರುವಂದನಾ ಕಾರ್ಯಕ್ರಮದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅವಿರತ ಸೇವೆ ಸಲ್ಲಿಸುವ ಮೂಲಕ ಸಮಾಜಕ್ಕೆ ಗಮನಾರ್ಹ ಕೊಡುಗೆ ನೀಡಿದ ಪ್ರೊ.ಕೆಪಿಜೆ ರೆಡ್ಡಿ, ಭಾರತೀಯ ವಿಜ್ಞಾನ ಸಂಸ್ಥೆಯ ಏರೋಸ್ಪೇಸ್ ಎಂಜಿನಿಯರಿಂಗ್ ನಿವೃತ್ತ ಪ್ರಾಧ್ಯಾಪಕರು ಮತ್ತು ವಿಜ್ಞಾನಿ, ಪ್ರೊ.ಆರ್.ಎಸ್ ದೇಶಪಾಂಡೆ, ಮಾಜಿ ನಿರ್ದೇಶಕರು, ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಅಂಡ್ ಎಕನಾಮಿಕ್ ಚೇಂಜ್,ಬೆಂಗಳೂರು. ಡಾ.ಕೆ.ಎನ್ ವೆಂಕಟ ಕೃಷ್ಣರಾವ್, ಮಾಜಿ ರಿಜಿಸ್ಟ್ರಾರ್, ಕುವೆಂಪು ಯೂನಿವರ್ಸಿಟಿ, ಕರ್ನಾಟಕ. ಇವರುಗಳನ್ನು ಡಾ.ಕೆ.ಸಿ ರಾಮಮೂರ್ತಿ, ಐಪಿಎಸ್ ನಿವೃತ್ತಿ, ಮಾಜಿ ರಾಜ್ಯಸಭಾ ಸದಸ್ಯರು, ಅಧ್ಯಕ್ಷರು ಸಿಎಂಆರ್ ವಿಶ್ವವಿದ್ಯಾಲಯ ಮತ್ತು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಇವರು ಸನ್ಮಾನಿಸುವ ಮೂಲಕ ಶಿಕ್ಷಕ ಸಮುದಾಯಕ್ಕೆ ಗೌರವ ಸಮರ್ಪಿಸಿದರು. ಕಾರ್ಯಕ್ರಮದಲ್ಲಿ ಸಿಎಂಆರ್ ವಿಶ್ವವಿದ್ಯಾಲಯ ಮತ್ತು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳನ್ನು ಆಡಳಿತ ಮಂಡಳಿ ಸನ್ಮಾನಿಸಿತು.

> **ವಿದ್ಯಾರ್ಥಿಗಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸುವ ಶಿಕ್ಷಕರ ಕೊಡುಗೆ ದೊಡ್ಡದು. ಈ ನಿಟ್ಟಿನಲ್ಲಿ ಶಿಕ್ಷಕರ ದಿನಾಚರಣೆ ಕೇವಲ ಶಿಕ್ಷಣ ಸಂಸ್ಥೆಗಳಿಗೆ ಮಾತ್ರ ಸೀಮಿತವಾಗದೆ ಇಡೀ ಸಮಾಜವೇ ಶಿಕ್ಷಕರ ದಿನಾಚರಣೆಯನ್ನು ಆಚರಿಸುವ ಮೂಲಕ ಶಿಕ್ಷಕ ಸಮುದಾಯವನ್ನು ಗೌರವಿಸಬೇಕು ಎಂದು ಹೇಳಿದರು.**
> ಡಾ.ಕೆ.ಸಿ ರಾಮಮೂರ್ತಿ

ಕಾರ್ಯಕ್ರಮದಲ್ಲಿ ಸಿಎಂಆರ್ ವಿಶ್ವವಿದ್ಯಾಲಯ ಪ್ರೊಚಾನ್ಸಲರ್ ಜಯದೀಪ್ ಕೆ.ಆರ್ ರೆಡ್ಡಿ, ಕುಲಪತಿ ಡಾ.ಹೆಚ್.ಪಿ ರಾಘವೇಂದ್ರ, ಅವರು ಸೇರಿದಂತೆ ಡೀನ್‌ಗಳು ಮತ್ತು ನಿರ್ದೇಶಕರುಗಳು ಉಪಸ್ಥಿತರಿದ್ದರು.

# ರೈತ ವಿರೋಧಿ ವಿದ್ಯುತ್ ನೀತಿಯನ್ನು ರದ್ದು ಮಾಡುವಂತೆ ಆಗ್ರಹ

## ಬಡಿಗೇರ ನೇತೃತ್ವದಲ್ಲಿ ನೇತಾಜಿ ಸುಭಾಷ ಚಂದ್ರ ಬೋಸ್ ವೃತ್ತದಿಂದ ಮೆರವಣಿಗೆಯಲ್ಲಿ ಬಂದು ಇಇ ಕಚೇರಿ ಮುಂದೆ ಧರಣಿ

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

**ಗಿರಿಜಿಲ್ಲೆಯಲ್ಲಿ ರೈತರ ಪ್ರತಿಭಟನೆ**

ರೈತ ವಿರೋಧಿ ವಿದ್ಯುತ್ ನೀತಿಯನ್ನು ರದ್ದು ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ (ಕೋಡಿಹಳ್ಳಿ ಚಂದ್ರಶೇಖರ ಬಣ)ದ ಜಿಲ್ಲಾ ಘಟಕ ವತಿಯಿಂದ ಇಲ್ಲಿನ ಜೆಸ್ಕಾಂ ಇಇ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಎಚ್.ಆರ್. ಬಡಿಗೇರ ಅವರ ನೇತೃತ್ವದಲ್ಲಿ ನೇತಾಜಿ ಸುಭಾಷ ಚಂದ್ರ ಬೋಸ್ ವೃತ್ತದಿಂದ ಮೆರವಣಿಗೆಯಲ್ಲಿ ಬಂದು ಇಇ ಕಚೇರಿ ಮುಂದೆ ಧರಣಿ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಎಚ್.ಆರ್. ಬಡಿ ಗೇರ, ಕೃಷಿ ಪಂಪ್‌ಸೆಟ್‌ಗಳಿಗೆ ಆರ್. ಆರ್. ನಂಬರ್‌ಗೆ ಆಧಾರ ಕಾರ್ಡ ನಂಬರ ಜೋಡಣೆ ಮಾಡುವ ಮೂಲಕ ಮೀಟರ್ ಅಳವಡಿಸಿ ಶುಲ್ಕ ವಿಧಿಸುವ ಉದ್ದೇಶದಿಂದ ರಾಜ್ಯದಲ್ಲಿ ಸರ್ಕಾರ ರೈತರ ಬೆನ್ನಿಗೆ ಚೂರಿ ಹಾಕುವ ನಿಟ್ಟಿನಲ್ಲಿ ತರಾತುರಿಯಲ್ಲಿ ಕ್ರಮ ಕೈಗೊಳ್ಳುತ್ತಿದೆ. ಕೃಷಿ ಪಂಪ್‌ಸೆಟ್‌ಗಳಿಗೆ ದಿನಾಂಕ: 22-09-2023 ರಿಂದ ಟಿ.ಸಿ. ವಿದ್ಯುತ್ ಕಂಬಗಳು, ವೈರ್‌ಗಳು, ಇತರೆ ಸಾಮಾಗ್ರಿಗಳನ್ನು ರೈತರು ತಮ್ಮ ಸ್ವಂತ ಖರ್ಚಿನಲ್ಲಿ ವಿದ್ಯುತ್ ಸಂಪರ್ಕ ಪಡೆಯಬೇಕೆಂದು ಕರಾಳ ಕಾನೂನು ಜಾರಿಗೊಳಿಸಿದೆ. ಹಿಂದೆ ಕೃಷಿ ಪಂಪ್‌ಸೆಟ್‌ಗಳಿಗೆ 2000 ಇಸ್ವಿಯಲ್ಲಿ ವಿದ್ಯುತ್ ಶುಲ್ಕ ವಸೂಲಿ ಮಾಡುತ್ತಿದ್ದ ಆಗಿನ ಮುಖ್ಯಮಂತ್ರಿ ಎಸ್. ಎಮ್.ಕೃಷ್ಣ ರವರ ಸರ್ಕಾರದ ನೀತಿಗಳ ವಿರುದ್ಧ 2001 ರಲ್ಲಿ ಹೋರಾಟದ ಮೂಲಕ ಕೃಷಿ ಪಂಪ್‌ಸೆಟ್‌ಗಳಿಗೆ ರೈತರಿಗೆ ಉಚಿತ ವಿದ್ಯುತ್ ಪಡೆಯಲಾಯಿತು.

ರಾಜ್ಯದಲ್ಲಿ ರೈತರ ಕೊಳವೆ ಬಾವಿಗಳ ಆಶ್ರಯದಲ್ಲಿ ಕೃಷಿ ಕಾರ್ಯಗಳನ್ನು ನಡೆಸುತ್ತಿದ್ದಾರೆ. ರೈತರ ಬೆಳೆಗಳಿಗೆ ನ್ಯಾಯಯುತ ಬೆಲೆ ನಿಗದಿಗೊಳಿಸಿ ಕಾನೂನು ಬದ್ದಗೊಳಿಸುವವರೆಗೂ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ನೀಡಬೇಕಾಗಿರುವುದು.

ಸರ್ಕಾರದ ಮೂಲಭೂತ ಜವಾಬ್ದಾರಿಯಾಗಬೇಕು ಎಂದು ಅವರು ಒತ್ತಾಯಿಸಿದರು.

ರೈತ ಮುಖಂಡ ಮಲ್ಲಿಕಾರ್ಜುನಸ್ವಾಮಿ ಪರಸನಹಳ್ಳಿ ಮಾತನಾಡಿ, ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ ನಂಬರ್ ಜೋಡನೆ ಮಾಡುವುದನ್ನು ತತಕ್ಷಣ ಕೈಬಿಡಬೇಕು. ಕೃಷಿ ಪಂಪ್ ಸೆಟ್‌ಗಳಿಗೆ 07-10-2023 ರಿಂದ ಜಾರಿಗೊಳಿಸಿರುವ ಸದರಿ ಆದೇಶ ಸಂಖ್ಯೆ ಪಿ. 475/2023 ರಂದು ಮಾಡಿರುವ ಕಾನೂನು ರದ್ದು ಮಾಡಿ ಹಿಂದಿನಂತೆ ರೈತರಿಗೆ ನಿದ್ಯುತ ಪರಿವರ್ತಕ ಕಂಬ ವಾಯರ ಇತರೆ ಉಪಕರಣಗಳನ್ನು ಉಚಿತವಾಗಿ ಇಲಾಖೆ ಸರಬರಾಜು ಮಾಡಿ ಸಮರ್ಪಕ ವಿದ್ಯುತ್ ನೀಡಬೇಕು. ಮನೆ ಬಳಕೆಗೆ 200 ಯೂನಿಟ್ ಉಚಿತ ವಿದ್ಯುತ್ ಜಾರಿ ಮಾಡಿರುವ ಸರ್ಕಾರ ಹೆಚ್ಚಿಸಿರುವ ಯೂನಿಟ್ ಧರವನ್ನು ಕಡಿಮೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಚೆನ್ನಾರೆಡ್ಡಿ ಪಾಟೀಲ್ ಗುರುಸುಣಗಿ, ಸಿದ್ದರಾಮ ತಳ್ಳಳ್ಳಿ, ಮಹಿಳಾ ಘಟಕದ ಜಿಲ್ಲಾಧ್ಯಕ್ಷ ಬೇಬಿ ಎ. ರಾಠೋಡ, ಯಮನಪ್ಪಗೌಡ ಕುಂಬಾರ, ಧರ್ಮಣ್ಣ ಮಳ್ಳಿಕೇರಿ, ಮಹಿಬೂಬ ದದ್ದೆದಾರ, ಶಿವು ಮಾಳಿಕೇರಿ, ಮಲ್ಲು ತುಂಬಗಿ, ಗುರಪ್ಪ ಕುಂಬಾರ, ಶಿವಲಿಂಗಯ್ಯ ಸ್ವಾಮಿ, ಬಸವರಾಜ ಬುದೂರ, ವಿಕ್ರಮ್ ಪರಸನಳ್ಳಿ, ಸಾಯಿ ಬಣ್ಣ ವಜ್ಜಲ್, ಮುದುಕಣ್ಣ ವಜ್ಜಲ್, ಕಕ್ಕೇರಾ ಹೋಬಳಿ ಅಧ್ಯಕ್ಷ ಗೋವಿಂದ ಪತ್ತಾರ ಸೇರಿದಂತೆ ಅನೇಕ ರೈತರು ಭಾಗಿಯಾಗಿದ್ದರು.

**ಉದಯ ವಾಹಿನಿ ಹೈಲೆಟ್ಸ್**

- ರೈತ ವಿರೋಧಿ ವಿದ್ಯುತ್ ನೀತಿ ರದ್ದು ಮಾಡುವಂತೆ ಆಗ್ರಹ.
- ರೈತರ ಬೆನ್ನಿಗೆ ಚೂರಿ ಹಾಕುತ್ತಿರುವ ಸರಕಾರ.
- ಸರಕಾರದ ವಿರುದ್ದ ಸಿಡಿದೆದ್ದ ರೈತರು.
- ಕೃಷಿ ಪಂಪ್ ಸೆಟ್ ಗಳಿಗೆ ಆಧಾರ್ ನಂಬರ್ ಜೋಡಣೆ ಕೈಬಿಡಲು ಆಗ್ರಹ.

# ಶಾಲೆಯ ನೂತನ ಕಟ್ಟಡ ಕಳಪೆ ಮಟ್ಟದ ಕಾಮಗಾರಿ ತನಿಖೆಗೆ ಆಗ್ರಹ

• ಉದಯವಾಹಿನಿ,ಚಿಂಚೋಳಿ


ಉದಯವಾಹಿನಿ ಚಿತ್ರ



ಪಟ್ಟಣದ ಪವ್ಹರ ಫ್ಲಾಂಟ್ ಎದುರು ನೂತನವಾಗಿ 2.12 ಕೋಟಿ ರೂಪಾಯಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಯ ಕಟ್ಟಡವು ಕಳಪೆಮಟ್ಟದಿಂದ ಗುತ್ತಿಗೆದಾರರು ನಿರ್ಮಾಣ ಮಾಡುತ್ತಿದ್ದು ಸಂಬಂಧಿಸಿದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿ ಅಧಿಕಾರಿಗಳು, ಎಇಇ ಜೆಇಯವರು ಸಮಗ್ರ ತನಿಖೆ ನಡೆಸಿ ಗುತ್ತಿಗೆದಾರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮುಸ್ಲಿಂ ಅಭಿವೃದ್ಧಿ ಸಮಿತಿಯ ನಗರ ಅಧ್ಯಕ್ಷ ಮತೀನ್ ಸೌದಾಗಾರ ಆರೋಪಿಸಿದ್ದಾರೆ.

ತಾಲ್ಲೂಕಿನಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆಯ ಸ್ವತಃ ಕಟ್ಟಡವಿಲ್ಲದೆ ಅಲ್ಪಸಂಖ್ಯಾತರ, ಹಿಂದುಳಿದ ವರ್ಗಗಳ ಮಕ್ಕಳು ಪರದಾಡುತ್ತಿದರು ಆದರೆ ಕೆಲ ವರ್ಷಗಳಿಂದ ಬೇರೆ ಕಟ್ಟಡಗಳಲ್ಲಿ ಮಕ್ಕಳಿಗೆ ವಿಧ್ಯಾಭ್ಯಾಸ ಮಾಡಿಸುತ್ತಿದ್ದರು,ಆದರೆ ಈಗ ಸರ್ಕಾರದಿಂದ ಸ್ವತಃ ಕಟ್ಟಡ ನಿರ್ಮಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸುಮಾರು ಕಟ್ಟಡಕ್ಕೆ 2.12ಕೋಟಿ ರೂಪಾಯಿ ಅನುದಾನ ಬಿಡುಗಡೆಗೊಳಿಸಿದೆ.

ಆದರೆ ಕಟ್ಟಡ ನಿರ್ಮಿಸುತ್ತಿದ್ದ ಗುತ್ತಿಗೆದಾರಬುನಾದಿಯ (ಬೇಸ್ಮೆಂಟ್), ಕಾಲಂ ಹಾಕುವಾಗಲೇ ರೋಬೋ ಸ್ಯಾಂಡ್ ಹೆಸರಿನಲ್ಲಿ ಕಪ್ಪು ಭೂಸಾ ಹಾಕಿ ಬುನಾದಿ, ಕಾಲಂ ಹಾಕುತ್ತಿದ್ದಾರೆ,ಸಂಬಂಧಿಸಿದ ಎಇಇ ಜೆಇ, ಇಲಾಖೆಯ ಅಧಿಕಾರಿಗಳು ಒಮ್ಮೆ ಕಾಮಗಾರಿ ನಡೆಯುವ ಸ್ಥಳಕ್ಕೆ ಆಗಮಿಸಿ ಪರಿಶೀಲಿಸಬೇಕು.

ಹೀಗೆ ಕೆಲಸ ಮುಂದುವರೆಸಿ ಕಟ್ಟಡ ನಿರ್ಮಾಣವಾದರೆ ಶಾಲೆಯ ತರಗತಿ ನಡೆಯುತ್ತಿರುವಾಗ ಯಾವುದೇ ಅಪಘಾತವಾದರೆ ಯಾರು ಹೊಣೆ,ಭೂಸಾ ಮಣ್ಣಿನಿಂದ ಸಿಮೆಂಟ್ ಕಲಬೆರಕೆ ಮಾಡಿ ಕಟ್ಟಿದ ಕಟ್ಟಡ ಬಹಳಷ್ಟು ದಿನ ನಡೆಯುವುದಿಲ್ಲಾ ಇದನ್ನು ಗುತ್ತಿಗೆದಾರ ಪರವಾಗಿ ಕಾಮಗಾರಿ ನಡೆಯುವ ಸ್ಥಳದಲ್ಲಿರುವ ವ್ಯಕ್ತಿಗೆ ಕೇಳಿದರೆ ನಮಗೆ ರೋಬೋ ಸ್ಯಾಂಡ್ ಹಾಕಲು ಪರವಾನಿಗೆಯಿದೆ ಎಂದು ಜನರಿಗೆ ದರ್ಪದ ಮಾತುಗಳು ಹೇಳುತ್ತಿದ್ದಾರೆ ಆದರೆ ಅವರು ಕಟ್ಟಡಕೆ ಉಪಯೋಗ ಮಾಡುತ್ತಿರುವುದು ರೋಬೋ ಸ್ಯಾಂಡ್ ಅಲ್ಲ ಭೂಸಾವಿದೆ ಇದರಿಂದ ಕಟ್ಟಡ ಆಯುಷ್ಯ ಬರುವುದಿಲ್ಲಾ ಅದಕ್ಕಾಗಿ ಸಂಬಂಧಿಸಿದ ತಾಲ್ಲೂಕಾಡಳಿತ ಮತ್ತು ಜಿಲ್ಲೆಯ ಅಲ್ಪಸಂಖ್ಯಾತರ ಅಧಿಕಾರಿಗಳು ಒಮ್ಮೆ ಪರಿಶೀಲಿಸಬೇಕು ಅಲ್ಲಿಯವರೆಗೆ ಕಾಮಗಾರಿ ತಡೆಗಟ್ಟಬೇಕು,ಅಧಿಕಾರಿಗಳು ಪರಿಶೀಲಿಸಿ ಗುಣಮಟ್ಟದ ಕಾಮಗಾರಿ ಮಾಡುವಂತೆ ತಾಕೀತು ಮಾಡಬೇಕು ಇಲ್ಲಾದಿದ್ದರೆ ಎಡ್ಮೂರು ದಿನಗಳಲ್ಲಿ ಮುಸ್ಲಿಂ ಅಭಿವೃದ್ಧಿ ಸಮಿತಿ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಮುಸ್ಲಿಂ ಅಭಿವೃದ್ಧಿ ಸಮಿತಿಯ ನಗರ ಅಧ್ಯಕ್ಷ ಮತೀನ್ ಸೌದಾಗಾರ ಆಗ್ರಹಿಸಿದರು.

# ತಾಯಿ ಶಿಶುಗಳ ಮರಣ ಕಡಿಮೆ ಮಾಡಲು ತರಬೇತಿ

• ಉದಯವಾಹಿನಿ,ಚಿಂಚೋಳಿ


ಉದಯವಾಹಿನಿ ಚಿತ್ರ

ಗುಣಮಟ್ಟದ ಪ್ರಸವಪೂರ್ವ ಸೇವೆ ಒದಗಿಸುವುದರಿಂದ ತಾಯಿ ಮತ್ತು ಶಿಶುಗಳ ಮರಣ ಕಡಿಮೆ ಮಾಡಬಹುದು ಎಂದು ತಾಲ್ಲೂಕಾ ವೈದ್ಯಾಧಿಕಾರಿ ಡಾ.ಮಹ್ಮದ್ ಗಫಾರ್ ಹೇಳಿದರು. ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ಜೆ.ಹೆಚ್.ಫೀಗೋ ಸಹಯೋಗದಲ್ಲಿ ತಾಲ್ಲೂಕಾ ಆಸ್ಪತ್ರೆ, ತಾಯಿ ಶಿಶು ಮರಣ ಕಡಿಮೆ ಮಾಡಲು ಸಮೂದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಸುರಕ್ಷಾಣಾಧಿಕಾರಿ,ಸಮೂದಾಯ ಆರೋಗ್ಯ ಅಧಿಕಾರಿ, ಶುಶ್ರೂಷಣಾಧಿಕಾರಿಗಳಿಗೆ ಕರೆದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗರ್ಭ ವ್ಯವಸ್ಥೆಯಲ್ಲಿ ಮಹಿಳೆಯರು ತೆಗೆದುಕೊಳ್ಳುವ ಐಎಫ್ಎ, ಸಿಎ, ಎಫ್ಎ, ಅಲ್ಬೆನೋಜೋಲ್ ಮಾತ್ರೆಗಳ ಬಗ್ಗೆ ಗರ್ಭವ್ಯವಸ್ಥೆಯಲ್ಲಿ ರಕ್ತ ಹಿನತೆ ಮಧುಮೇಹ ಪ್ರಸವ ಪೂರ್ವ ರಕ್ತಸ್ರಾವ ತಡೆಗಟ್ಟುವ ಮತ್ತು ನಿರ್ವಹಣೆಯ ಬಗ್ಗೆ ಸ್ವವಿಸ್ತಾರವಾಗಿ ತಿಳಿಸಲಾಯಿತು.

ತರಬೇತಿದಾರ ಶಬ್ಬೀರ ನದಾಫ್, ಡಾ.ರೇಣುಕಾ, ಡಾ.ಈಶ್ವರ, ಡಾ.ಅಪರ್ಣಾ, ಅನೇಕ ವೈದ್ಯರು ಸಿಬ್ಬಂದಿ ವರ್ಗದವರು ಇದ್ದರು.

**ಗರ್ಭಿಣಿಯರಿಗೆ ಅಪಾಯದ ಲಕ್ಷಣಗಳು ಕಂಡು ಬಂದಾಗ ಮಾಡಬೇಕಾದ ಪರೀಕ್ಷೆಗಳ ಬಗ್ಗೆ ಸಮಗ್ರ ಮಾಹಿತಿ ಹಾಗೂ ಗರ್ಭಧಾರಣೆ ಆರೋಗ್ಯಕರ ಸಮಯ ಮತ್ತು ಅಂತರ ಕುಟುಂಬ ಯೋಜನೆಯ ವಿಧಾನಗಳು ಪೌಷ್ಟಿಕ ಆಹಾರ ಪದಾರ್ಥಗಳನ್ನು ಹೆರಿಗೆ ಸಂಕೇತಗಳ ಬಗ್ಗೆ ತಿಳಿಸಲಾಯಿತು ಎಂದರು.**

# ಹಾಸನ ಜಿಲ್ಲೆಯಲ್ಲಿ ಪಕ್ಷ ಸಂಘಟನೆಗೆ ಒತ್ತು ನೀಡಲಾಗುವುದು: ಎಚ್‌ಡಿಕೆ

• ಉದಯವಾಹಿನಿ ಅರಸೀಕೆರೆ


ಉದಯವಾಹಿನಿ ಚಿತ್ರ

ಹಾಸನ ಜಿಲ್ಲೆಯಲ್ಲಿ ಜಾತ್ಯತೀತ ಜನತಾದಳ ಪಕ್ಷವನ್ನು ಜಿಲ್ಲೆ ಎಲ್ಲಾ ಹಿರಿಯ ನಾಯಕರು ಮುಖಂಡರಗಳು ಕಾರ್ಯಕರ್ತರನ್ನು ಒಗ್ಗೂಡಿಸಿ ಪಕ್ಷವನ್ನು ಪ್ರಬಲವಾಗಿ ಸಂಘಟಿಸಲು ಸಿದ್ಧರಿರುವುದಾಗಿ ಭಾರತ ಸರ್ಕಾರದ ಕೇಂದ್ರ ಬಾರಿ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಎಚ್ ಡಿ ಕುಮಾರಸ್ವಾಮಿ ಹೇಳಿದರು

ಶಿವಮೊಗ್ಗದಿಂದ ಬೆಂಗಳೂರಿಗೆ ತೆರಳುವ ತೆರಳುವ ವೇಳೆ ಅರಸೀಕೆರೆಯಲ್ಲಿ ಮಾತನಾಡಿದ ಅವರು ಕಾರಣಾಂತರದಿಂದ ಈ ಹಿಂದೆ ಅರಸೀಕೆರೆ ವಿಧಾನಸಭಾ ಚುನಾವಣೆಯಲ್ಲಿ ಸೋಲುಂಟಾಗಿದೆ ಆದರೂ ಅರಸೀಕೆರೆಯ ಜನತೆ 80000 ಮತಗಳನ್ನು ನೀಡಿ ಜಾತ್ಯತೀತ ಜನತಾದಳ ಪಕ್ಷಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ ಇದಕ್ಕೆ ನಮ್ಮ ಪಕ್ಷ ಚಿರಋಣಿಯಾಗಿದೆ. ಬರುವ ದಿನಗಳಲ್ಲಿ ಪಕ್ಷದ ಮುಖಂಡರು ಹಿರಿಯರು ಕಾರ್ಯಕರ್ತರು ಯಾವುದೇ ಕಾರಣಕ್ಕೂ ಎದೆಗುಂದುವುದು ಬೇಡ ಕಾರ್ಯಕರ್ತರು, ಮುಖಂಡರು ನಮ್ಮ ಪಕ್ಷಕ್ಕೆ ಮತ ನೀಡಿರುವ ಮತದಾರರ ಸಂಕಷ್ಟಗಳಿಗೆ ಸ್ಪಂದಿಸುವುದಾಗಿ ಎಚ್.ಡಿ ಕುಮಾರಸ್ವಾಮಿ ಹೇಳಿದರು. ಮುಂದಿನ ದಿನಗಳಲ್ಲಿ ಎನ್ ಆರ್ ಸಂತೋಷ್ ರವರು ಗೆಲುವಿಗೆ ಸಹಕಾರ ನೀಡಬೇಕೆಂದು ಪಕ್ಷದ ಮುಖಂಡ ಜಯದೇವ್ ವಿನಂತಿಸಿದರು.

ಪಕ್ಷದ ಮುಖಂಡರಾದ ಅರಸೀಕೆರೆ ನಗರ ಸಭಾ ಮಾಜಿ ಅಧ್ಯಕ್ಷರಾದ ಗಿರೀಶ್ ಕೆವಿಎನ್ ಶಿವು ಬಿ ಜಿ ನಿರಂಜನ್ ರವರು ಸೇರಿದಂತೆ ನೂರಾರು ಪಕ್ಷದ ಕಾರ್ಯಕರ್ತರು ಜಮಾಯಿಸಿದರು.

# ಇಂದು ವಿಎಸ್‌ಕೆವಿವಿಯ 12ನೇ ಘಟಿಕೋತ್ಸವ

• ಉದಯವಾಹಿನಿ, ಬಳ್ಳಾರಿ


ಉದಯವಾಹಿನಿ ಚಿತ್ರ

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ 12ನೇ ಘಟಿಕೋತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವವಿದ್ಯಾಲಯದ ಕುಲಪತಿಗಳಾದ ಆರ್ ಮುನಿರಾಜು ತಿಳಿಸಿದರು. ಅವರು ಗುರುವಾರ ನಗರದ ಹೊರ ಹೊಲಯದಲ್ಲಿರುವ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಘಟಿಕೋತ್ಸವದ ಕುರಿತು ಪತ್ರಿಕಾಗೋಷ್ಠಿಯನ್ನು ನಡೆಸಿ ಮಾತನಾಡಿ, ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯದ ಘನವಿತ್ತ ರಾಜ್ಯಪಾಲರಾದ ತಾವರ್ಚಂದ್ ಗೆಹೋಲೆಟ್ ವಹಿಸಿಕೊಳ್ಳುವರು, ಕರ್ನಾಟಕ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಸಚಿವರಾದ ಎಂ ಸಿ ಸುಧಾಕರ್ ಅವರು ಉಪಸ್ಥಿತಿ ಇರುವವರು, ಘಟಿಕೋತ್ಸವ ಭಾಷಣವನ್ನು ಹಿರಿಯ ವಿಜ್ಞಾನಿಗಳಾದ ಶಿವಪ್ರಸಾದ್ ಮಾಡುವರು ಎಂದು ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಆರ್ ಮುನಿರಾಜು ತಿಳಿಸಿದರು. ರಂಗ ಭೂಮಿ, ಕಲೆ, ಮತ್ತು ಸಮಾಜ ಸೇವೆಗಾಗಿ ಕನ್ನಡ ಚಿತ್ರನಟಿ ಶ್ರೀಮತಿ ಉಮಾಶ್ರೀ ಅವರಿಗೆ, ಕೈಗಾರಿಕೆ, ಸಮಾಜಸೇವೆಗಾಗಿ ಎಸ್ ಕೆ ಮೋದಿ ಅವರಿಗೆ (ಮರಣೋತ್ತರವಾಗಿ), ಹರಪನಹಳ್ಳಿ ಎಲ್ಲಿ ತೆಗ್ಗಿನ ಮಠ ಶಿಕ್ಷಣ ಸಂಸ್ಥೆಯನ್ನು ಆರಂಭಿಸಿ ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿದ ಕೀರ್ತಿಗೆ ಪಾತ್ರರಾದ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಅನನ್ಯ ಸಾಧನೆಗಾಗಿ ಚಂದ್ರಮೌಳೇಶ್ವರ ಶಿವಾಚಾರ್ಯ ಸ್ವಾಮಿ ಜಿಗೆ ಸೇರಿದಂತೆ ಸ್ನಾತಕೋತ್ತರ ಪದವಿಯಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ, ಪಿಎಚ್‌ಡಿ ಪದವಿ ಪ್ರಧಾನ ಮಾಡುವ ಲಾಗುವುದು ಎಂದು ತಿಳಿಸಿದರು. ಈ ಸಮಾರಂಭದ ನೇತೃತ್ವವನ್ನು ಕುಲಪತಿಗಳಾದ ಪ್ರೊ. ಎಂ ಮುನಿರಾಜು ಕುಲಸಚಿವ ಎನ್. ರುದ್ರೇಶ್, ಕುಲ ಸಚಿವ ಮೌಲ್ಯಮಾಪನ ಪ್ರೊ ರಮೇಶ್ ಓ ಓಲೇಕಾರ್ ಕುಲಪತಿಗಳಿಗೆ ಸಾಥ್ ನೀಡಲಿದ್ದಾರೆ. ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ವಿದ್ಯಾ ವಿಷಯಕ ಪರಿಷತ್ ಸದಸ್ಯರು ಉಪಸ್ಥಿತರಿರುತ್ತಾರೆ ಎಂದು ವಿವರಿಸಿದರು. ಕುಲಸಚಿವ ಎನ್. ರು ದ್ರೇಶ್, ಕುಲಸಚಿವರು ಮೌಲ್ಯಮಾಪನ ರಮೇಶ್ ಓ ಓಲೇಕಾರ್ ಇನ್ನಿತರರಿದ್ದರು.

**ಇದೇ ಸಂದರ್ಭದಲ್ಲಿ ಪಿಎಚ್‌ಡಿ ಹಾಗೂ ರ್‍ಯಾಂಕ್ ಪಡೆದ ಒಟ್ಟು 42 ವಿದ್ಯಾರ್ಥಿಗಳು 53 ಚಿನ್ನದ ಪದಗಳನ್ನು ಪಡೆಯಲಿದ್ದಾರೆ, ಮತ್ತು ನಾಟಕ ಮತ್ತು ಸ್ನಾತಕೋತ್ತರ ಒಟ್ಟು ಒಟ್ಟು 125 ರ್‍ಯಾಂಕ್ ಪಡೆದ ಪ್ರಮಾಣ ಪತ್ರಗಳನ್ನು ವಿತರಿಸಲಾಗುವುದು ಎಂದರು. ವಿಶ್ವವಿದ್ಯಾಲಯದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡಲಾಗುವುದು, ಪ್ರತಿವರ್ಷದ ಈ ವರ್ಷ ಕೂಡ ಮಹನೀಯರಿಗೆ ಗೌರವ ಡಾಕ್ಟರೇಟ್ ನೀಡಲಾಗುವುದು.**

# ನೂರರ ಗುರಿ ಸಾಧಿಸಿದ ಶಿಕ್ಷಕರಿವರು

• ಉದಯವಾಹಿನಿ, ದಾವಣಗೆರೆ


ಉದಯವಾಹಿನಿ ಚಿತ್ರ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸತತ ಐದು ವರ್ಷಗಳಿಂದ ಶೇ. 100 ಫಲಿತಾಂಶದ ಗುರಿ ಸಾಧಿಸಿಕೊಂಡು ಬಂದ ಹಿರಿಮೆ ತಾಲ್ಲೂಕಿನ ಹಾಲುವರ್ತಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯದ್ದು. ಇದಕ್ಕೆ ಮುಖ್ಯ ಕಾರಣ ಶಿಕ್ಷಕರ ಸಾಮೂಹಿಕ ಪ್ರಯತ್ನ. ಹಾಲುವರ್ತಿ ಸೇರಿ ಕೆಂಚಮ್ಮನಹಳ್ಳಿ, ಹೊಸಹಳ್ಳಿ ತಾಂಡಾ, ಹೆಬ್ಬಾಳು ಬಡಾವಣೆಯಿಂದ ಮಕ್ಕಳು ಶಾಲೆಗೆ ಬರುತ್ತಾರೆ.

2019-20ರಲ್ಲಿ 23, 2020-21ರಲ್ಲಿ 18, 2021-22ರಲ್ಲಿ 31, 2022-23ರಲ್ಲಿ 27 ಹಾಗೂ 2023-24ರಲ್ಲಿ 27 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿಯಲ್ಲಿ ಕಲಿತಿದ್ದು, ಎಲ್ಲರೂ ಉತ್ತೀರ್ಣರಾಗಿದ್ದಾರೆ. ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲೂ ನೂರರ ಗುರಿ ಸಾಧನೆಗಾಗಿ ಹಲವು ಪ್ರಯೋಗಗಳನ್ನು ನಡೆಸಿದ್ದಾರೆ. ವಿದ್ಯಾರ್ಥಿಗಳು 8ನೇ ತರಗತಿ ಓದುತ್ತಿರುವಾಗಿನಿಂದಲೇ ಅವರ ಮೇಲೆ ಶಿಕ್ಷಕರು ವಿಶೇಷ ಗಮನ ಹರಿಸುತ್ತಾರೆ. ಇದುವೇ 'ಶತಕ'ದ ಸಾಧನೆಯ ಗುಟ್ಟು. ವಿದ್ಯಾರ್ಥಿ ಶಾಲೆಗೆ ಗೈರಾದರೆ ಕೂಡಲೇ ಶಿಕ್ಷಕರು ಮನೆಗೆ ಭೇಟಿ ನೀಡುತ್ತಾರೆ. ವಿದ್ಯಾರ್ಥಿ ಹಾಗೂ ಪಾಲಕರ ಮನವೊಲಿಸಿ ಶಾಲೆಗೆ ಕರೆ ತರುತ್ತಾರೆ. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಬೆಳಿಗ್ಗೆ ಹಾಗೂ ಸಂಜೆ ವಿಶೇಷ ತರಗತಿ ನಡೆಸಿ ಪರೀಕ್ಷೆಗೆ ಸಜ್ಜುಗೊಳಿಸುತ್ತಾರೆ.

ವಿವಿಧ ವಿಷಯಗಳ ಶಿಕ್ಷಕರು ತಲಾ ನಾಲ್ಕು ವಿದ್ಯಾರ್ಥಿಗಳನ್ನು ದತ್ತು ಪಡೆದು ಮುಂಜಾನೆ ಅವರು ಏಳುವುದರಿಂದ ರಾತ್ರಿ ಮಲಗುವವರೆಗಿನ ಚಟುವಟಿಕೆ ಬಗ್ಗೆ ನಿಗಾ ವಹಿಸಿದೆವು.

ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯಕ್ಕೆ ಅನುಗುಣವಾಗಿ ಬೋಧನೆ, ವಿಷಯಗಳನ್ನು ಮನದಟ್ಟು ಮಾಡಲು ಘಟಕ ಪರೀಕ್ಷೆ ಜೊತೆಗೆ ರಸಪ್ರಶ್ನೆ, ಪ್ರಬಂಧ, ಕಂಠಪಾಠ, ಆಶುಭಾಷಣ ಇತ್ಯಾದಿ ಸ್ಪರ್ಧೆಗಳನ್ನು ಆಯೋಜಿಸಿದ್ದೆವು. ಹೆಚ್ಚು ಅಂಕ ಗಳಿಸುವವರಿಗೆ ಸ್ಕೋರಿಂಗ್ ಪ್ಯಾಕೇಜ್, ಕಲಿಕೆಯಲ್ಲಿ ಹಿಂದುಳಿದವರಿಗೆ ಪಾಸಿಂಗ್ ಪ್ಯಾಕೇಜ್ ಅಡಿ ಪ್ರಶ್ನೆ-ಉತ್ತರಗಳನ್ನು ಬರೆಯಿಸಿ ಪರೀಕ್ಷೆಗೆ ಸಜ್ಜುಗೊಳಿಸಿದ್ದೆವು' ಎಂದು ಕನ್ನಡ ಶಿಕ್ಷಕ ಬಿ.ಎಸ್. ಈಶ್ವರಪ್ಪ ತಿಳಿಸಿದರು.

**ಇಂಗ್ಲಿಷ್ ವ್ಯಾಕರಣವನ್ನು 9ನೇ ತರಗತಿಯಲ್ಲಿರುವಾಗಲೇ ಸಂಪೂರ್ಣ ಮನದಟ್ಟು ಮಾಡಿಸುತ್ತೇವೆ. ಶಾಲೆಯಲ್ಲಿ ಗುಣಾತ್ಮಕ ಕಲಿಕೆಗೆ ಒತ್ತು ನೀಡಿರುವ ಕಾರಣ ಪ್ರತಿವರ್ಷ 2-3 ವಿದ್ಯಾರ್ಥಿಗಳು ಸರ್ಕಾರದಿಂದ ನೀಡುವ ಲ್ಯಾಪ್‌ಟಾಪ್ ಪಡೆದುಕೊಂಡಿದ್ದಾರೆ' ಎಂದು ಇಂಗ್ಲಿಷ್ ಶಿಕ್ಷಕ ಎಸ್.ದ್ವಾರಕೀಶ ನಾಯ್ಕ ಹೆಮ್ಮೆ ವ್ಯಕ್ತಪಡಿಸಿದರು.**

# ಶಿಕ್ಷಣ ಅಭಿವೃದ್ಧಿಯ ಸಂಕೇತ: ಶಾಸಕ ಆಸೀಫ್ ಸೇಠ್

• ಉದಯವಾಹಿನಿ, ಬೆಳಗಾವಿ


ಉದಯವಾಹಿನಿ ಚಿತ್ರ

**ಶಿಕ್ಷಣಕ್ಕೆ ಆದ್ಯತೆ ಕೊಡದಿದ್ದರೆ ಅಭಿವೃದ್ಧಿ ಸಾಧ್ಯವಿಲ್ಲ**

ಶಿಕ್ಷಣ ಅಭಿವೃದ್ಧಿಯ ಸಂಕೇತ. ಯಾವ ರಾಜ್ಯದವರು ಶಿಕ್ಷಣ ಮತ್ತು ಶಿಕ್ಷಕರಿಗೆ ಆದ್ಯತೆ ಕೊಟ್ಟಿದ್ದಾರೆಯೋ, ಅವರು ಅಭಿವೃದ್ಧಿಯತ್ತ ಸಾಗಿದ್ದಾರೆ' ಎಂದು ಶಾಸಕ ಆಸೀಫ್ ಸೇಠ್ ಹೇಳಿದರು. ಇಲ್ಲಿನ ಗಾಂಧಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಬೆಳಗಾವಿ ಶೈಕ್ಷಣಿಕ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ, ಪ್ರತಿಭಾಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣವು ನಮ್ಮನ್ನು ಅಭಿವೃದ್ಧಿಪಥದಲ್ಲಿ ಕೊಂಡೊಯ್ಯುತ್ತದೆ. ಸಮಾಜದಲ್ಲಿ ಜಾಗೃತಿ ಮೂಡಿಸುತ್ತದೆ. ಶಿಕ್ಷಣಕ್ಕೆ ಆದ್ಯತೆ ಕೊಡದಿದ್ದರೆ ಅಭಿವೃದ್ಧಿ ಸಾಧ್ಯವಿಲ್ಲ' ಎಂದು ಅಭಿಪ್ರಾಯಪಟ್ಟರು. ಯುವಜನರು ಇಂದು ವೈದ್ಯ, ಎಂಜಿನಿಯರ್, ಐಎಎಸ್ ಅಧಿಕಾರಿ ಹೀಗೆ. ವಿವಿಧ ಹುದ್ದೆ ಅಲಂಕರಿಸುತ್ತಿದ್ದಾರೆ. ಇವರನ್ನೆಲ್ಲ ರೂಪಿಸಿದ ಹಿರಿಮೆ ಶಿಕ್ಷಕ ವರ್ಗಕ್ಕೆ ಸಲ್ಲುತ್ತದೆ. ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಬಳಗದ ಕೊಡುಗೆ ದೊಡ್ಡದಿದೆ. ಹಲವು ಕಷ್ಟ, ಸವಾಲುಗಳನ್ನು ಎದುರಿಸಿ ಶಿಕ್ಷಕರು ಸಮರ್ಥವಾಗಿ ತಮ್ಮ ಹೊಣೆಗಾರಿಕೆ ನಿಭಾಯಿಸುತ್ತಿದ್ದಾರೆ ಎಂದ ಅವರು, ಬೆಳಗಾವಿಯ ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಪ್ರತಿ ಶಾಲೆ ವಿದ್ಯಾರ್ಥಿಗಳಿಗೆ ಡೆಸ್ಕ್ ವ್ಯವಸ್ಥೆ ಮಾಡಲಾಗುವುದು' ಎಂದರು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಸದೃಢವಾದ ರಾಷ್ಟ್ರ ನಿರ್ಮಾಣಕ್ಕೆ ಶಿಕ್ಷಕರ ಕೊಡುಗೆ ಅಪಾರ.

ಅವರು ವಿದ್ಯಾರ್ಥಿಗಳಲ್ಲಿ ಇರುವ ಅಜ್ಞಾನ ದೂರಗೊಳಿಸಿ, ಜ್ಞಾನದ ಹಾದಿಯಲ್ಲಿ ಕೊಂಡೊಯ್ಯುತ್ತಾರೆ. ಗುಣಾತ್ಮಕ ಶಿಕ್ಷಣ, ಶಿಸ್ತು, ನೈತಿಕ ಮೌಲ್ಯಗಳ ಮೂಲಕ ಉತ್ತಮ ಪ್ರಜೆಗಳನ್ನು ರೂಪಿಸಿ, ಸಮಾಜಕ್ಕೆ ಅರ್ಪಿಸಬೇಕಾದ ಜವಾಬ್ದಾರಿ ಶಿಕ್ಷಕರ ಮೇಲಿದೆ' ಎಂದರು.

# ಮಹತ್ವಾಕಾಂಕ್ಷಿ ಜಿಲ್ಲೆ ಯಾದಗಿರಿಯ ಸಮಗ್ರ ಅಭಿವೃದ್ಧಿಗೆ ಗಮನ ನೀಡಿ

## 112 ಜಿಲ್ಲೆಗಳನ್ನು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಆಯ್ಕೆ, ಅದರಲ್ಲಿ ಯಾದಗಿರಿ, ರಾಯಚೂರು ಕೂಡ ಇವೆ

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

**ಅಭಿವೃದ್ಧಿಗೆ ವಿಶೇಷ ಗಮನ ನೀಡಿ**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಜಿಲ್ಲೆಗಳಲ್ಲಿ ಆಯ್ಕೆಯಾಗಿರುವ ಯಾದಗಿರಿ ಜಿಲ್ಲೆಯನ್ನು ಸಮಗ್ರ ಅಭಿವೃದ್ಧಿ ಸೂಚ್ಯಂಕದಲ್ಲಿ ಮುಂಚೂಣಿಯಲ್ಲಿ ಬರುವಂತೆ ನೋಡಿಕೊಳ್ಳಲು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವರಾದ ಶ್ರೀ ವಿ. ಸೋಮಣ್ಣ ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

ವಡಿಗೇರಾ ತಾಲ್ಲೂಕಿನ ತಡಿಬಿಡಿ ಸರ್ಕಾರಿ ಪ್ರೌಢ ಶಾಲಾ ಆವರಣದಲ್ಲಿ ಗುರುವಾರ ಸಂಪೂರ್ಣತಾ ಅಭಿಯಾನ ಮೇಳ ಉದ್ಘಾಟಿಸಿ ಅವರು ಮಾತನಾಡಿದರು. ರಾಷ್ಟ್ರದ 112 ಜಿಲ್ಲೆಗಳನ್ನು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಆಯ್ಕೆ ಮಾಡಿದ್ದು ಅದರಲ್ಲಿ ಯಾದಗಿರಿ ಮತ್ತು ರಾಯಚೂರು ಜಿಲ್ಲೆ ಕೂಡ ಇವೆ. ಈ ಹಿನ್ನಲೆಯಲ್ಲಿ ಆರೋಗ್ಯ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಮೂಲಸೌಕರ್ಯ ಅಭಿವೃದ್ಧಿ, ಕುಡಿಯುವ ನೀರು, ಕೃಷಿ ಇಲಾಖೆ ಸೂಚ್ಯಂಕದಲ್ಲಿ ಮುಂಚೂಣಿಯಲ್ಲಿ ತರಲು ಪ್ರಯತ್ನಿಸಬೇಕು. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಗಮನ ನೀಡುವಂತೆ ಅವರು ಸಲಹೆ ನೀಡಿದರು.

ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವಂತಹ ಕೂಲಿಕಾರರ ಮಕ್ಕಳಿಗೆ ನೋಡಿಕೊಳ್ಳಲು ಕೂಸಿನ ಮನೆ ಸೌಲಭ್ಯ ಇಲ್ಲಿ ಇದ್ದು ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಈ ಮಕ್ಕಳ ಆರೈಕೆ ನೋಡಿಕೊಳ್ಳುತ್ತಿರುವುದರಿಂದ ಅವರಿಗೆ ಕನಿಷ್ಠ ಸಂಬಳ ನಿಗದಿಪಡಿಸುವ ಅವಶ್ಯಕತೆ ಇದ್ದು ಈ ಕುರಿತಂತೆ ಕೇಂದ್ರ ಸರ್ಕಾರದ ಗಮನಕ್ಕೂ ತರಲಾಗುವುದು ಎಂದು ಹೇಳಿದರು.

ರೈತರ ಸಮಗ್ರ ಅಭಿವೃದ್ಧಿಗೆ ನೆರವಾಗುವ ದೃಷ್ಟಿಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೃಷಿ ಇಲಾಖೆಗೆ ಅವಶ್ಯಕ ಅನುದಾನ ನೀಡುತ್ತಿದೆ. ಈ ಹಿನ್ನಲೆಯಲ್ಲಿ ಪ್ರತಿ ರೈತರ ಜೀವನ ಸುಧಾರಣೆಯಾಗಬೇಕು. ರೈತಾಪಿ ಜನರ ಆರ್ಥಿಕ ಅಭಿವೃದ್ಧಿಗೆ ನೆರವಾಗಬೇಕು. ಪ್ರತಿ ರೈತರಿಗಾಗಿ ಇರುವಂತಹ ಮಣ್ಣಿನ ಸತ್ವ ಪರೀಕ್ಷೆ, ಯೋಜನೆಗಳ ಲಾಭ ದೊರಕಿಸುವಂತೆ ಅವರು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಗುರುಮಿಠಕಲ್ ಶಾಸಕ ಶ್ರೀ ಶರಣಗೌಡ ಕಂದಕೂರ, ತಡಿಬಿಡಿ ಗ್ರಾಮ ಪಂಚಾಯತಿ ಅಧ್ಯಕ್ಷ ಉಮಾರೆಡ್ಡಿ, ಡಿಡಿಪಿಐ ಮಂಜುನಾಥ, ಡಿಹೆಚ್‌ಓ ಡಾ.ಎಮ್ ಎಸ್ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**ಜಿಲ್ಲೆಯಲ್ಲಿ 7 ಸಾವಿರ ಶಿಕ್ಷಕರ ಪೈಕಿ ಕೇವಲ 3 ಸಾವಿರ ಶಿಕ್ಷಕರ ಗುರಿ ತಲುಪಿಲ್ಲ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರಕ್ಕೆ ವಿನಂತಿಸುವುದಾಗಿ ತಿಳಿಸಿದ ಅವರು ತಕ್ಷಣ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಮ್ಮ ಇಲಾಖೆ ಆಯುಕ್ತರಿಗೆ ಖುದ್ದಾಗಿ ಭೇಟಿ ನೀಡಿ ಶಿಕ್ಷಕರ ಕೊರತೆ ನೀಗಿಸಲು ನನ್ನೊಂದಿಗೆ ಸಮನ್ವಯತೆ ಸಾಧಿಸಬೇಕು. ಅದರಂತೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕ್ಕಾಗಿ ಶಿಕ್ಷಕರ ಅವಶ್ಯಕತೆ ತೀರ ಇರುವುದರಿಂದ ನೇಮಕಾತಿ ನಡೆಯುವ ಅಗತ್ಯವಿದೆ**

**- ವಿ. ಸೋಮಣ್ಣ, ಸಚಿವ**

**2018 ರಲ್ಲಿ ಕೇಂದ್ರ ಸರ್ಕಾರವು ರಾಷ್ಟ್ರದ 112 ಜಿಲ್ಲೆಗಳನ್ನು ಸೂಚ್ಯಂಕ ಆಧಾರದಲ್ಲಿ ಮಹತ್ವಕಾಂಕ್ಷಿ ಜಿಲ್ಲೆಯಾಗಿ ಆಯ್ಕೆ ಮಾಡಿದ್ದು ಈ ಹಿನ್ನೆಲೆಯಲ್ಲಿ ವಡಿಗೇರಾ ಮಹತ್ವಾಕಾಂಕ್ಷಿ ಬ್ಲಾಕ್ ಎಂದು ಘೋಷಣೆ ಮಾಡಿದ್ದು, ಶೇಕಡಾ 100 ರಷ್ಟು ಪ್ರಗತಿ ಸಾಧಿಸಲು ಉದ್ದೇಶಿಸಲಾಗಿದೆ. ಮುಂದಿನ ದಿನಗಳಲ್ಲಿ ಈ ದಿಶೆಯಲ್ಲಿ ಪ್ರಾಮಾಣಿಕ ಪ್ರಯತ್ನ**

**- ಡಾ.ಸುಶೀಲ ಬಿ., ಜಿಲ್ಲಾಧಿಕಾರಿ**

## ಮಿನಿ ನ್ಯೂಸ್

### ಶಿಕ್ಷಕರು ವೃತ್ತಿಯಲ್ಲಿ ಆದರ್ಶ, ಬದ್ಧತೆ ತಲ್ಲೀನತೆ ಅಳವಡಿಸಿಕೊಳ್ಳಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ಶಿಕ್ಷಕರು ವೃತ್ತಿಯಲ್ಲಿ ಆದರ್ಶ, ಬದ್ಧತೆ ಹಾಗೂ ತಲ್ಲೀನತೆ ಅಳವಡಿಕೊಳ್ಳಬೇಕು ಎಂದು ಯೋಜನೆ ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಲಹೆ ನೀಡಿದರು. ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾಪಂಚಾತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ, ಗುರುವಾರ ನಗರದ ತರಾಸು ರಂಗಮಂದಿರದಲ್ಲಿ ಆಯೋಜಿಸಲಾದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕ ಸ್ಥಾನಕ್ಕೆ ಬೆಲೆ ಕಟ್ಟಲಾಗದು. ಸ್ವತಃ ನಾನು ಪದವಿ ಶಿಕ್ಷಣ ಪೂರೈಸಿದ್ದೇನೆ ಎಂದರೆ ಅದಕ್ಕೆ ಕಾರಣ ಚಿಕ್ಕಂದಿನಲ್ಲಿ ನನಗೆ ಪಾಠ ಹೇಳಿದ ಶಿಕ್ಷಕರು. ನಾನು ಜೀವನದಲ್ಲಿ ಶಿಸ್ತು, ಬದ್ಧತೆ ರೂಡಿಸಿಕೊಳ್ಳುವುದನ್ನು ಶಿಕ್ಷಕರು ಕಲಿಸಿದರು. ದೇಶ ಹಾಗೂ ರಾಜ್ಯದಲ್ಲಿ ಸರ್ಕಾರಗಳು ಸಾವಿರಾರು ಕೋಟಿ ಹಣವನ್ನು ಶಿಕ್ಷಣದ ಮೇಲೆ ಖರ್ಚು ಮಾಡುತ್ತಿವೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ನವರು ಶಿಕ್ಷಕರ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸುತ್ತಿದ್ದಾರೆ. ರಾಜ್ಯದಲ್ಲಿ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿ ಮಾಡಲಾಗಿದೆ. 2017ಕ್ಕಿಂತ ಮೊದಲು ಪ್ರಾಥಮಿಕ ಶಾಲೆಗಳಿಗೆ ನೇಮಕವಾದ ಶಿಕ್ಷಕರ ಬಡ್ತಿ ಸಮಸ್ಯೆ ಹಾಗೂ ಇತರೆ ಬೇಡಿಕೆಗಳಿಗೆ ಪರಿಹಾರ ದೊರಕಿಸಲು ಸಮಿತಿ ರಚಿಸುವ ಭರವಸೆ ನೀಡಿದ್ದಾರೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

### ಪೋಷಣ್ ಅಭಿಯಾನ ಮಾಸಾಚಾರಣೆ



• ಉದಯವಾಹಿನಿ, ಮುದ್ದೇಬಿಹಾಳ

ಆರೋಗ್ಯವೇ ಭಾಗ್ಯ ಎಂಬಂತೆ ಮನುಷ್ಯ ಆರೋಗ್ಯಯುತವಾಗಿರಬೇಕಾದರೆ ಒಳ್ಳೆಯ ಪೌಷ್ಟಿಕ ಆಹಾರ ಸೇವನೆ ತುಂಬಾ ಮುಖ್ಯ ಆ ನಿಟ್ಟಿನಲ್ಲಿ ತಾವೆಲ್ಲರೂ ಸಹ ತರಕಾರಿ, ಹಣ್ಣು ಹಂಪಲು, ಹಾಲು ಈಗೆ ಪ್ರೊಟೀನ್ ಯುತ ಆಹಾರ ಪದಾರ್ಥ ಒಟ್ಟಾರೆ ಪೌಷ್ಟಿಕ ಆಹಾರ ಸೇವಿಸಲೇ ಬೇಕು ಎಂದು ಸಿಡಿಪಿಓ ಶಿವಮೂರ್ತಿ ಕುಂಬಾರ ಹೇಳಿದರು ಕೊಣ್ಣೂರ ವಲಯದ ಗ್ರಾಪಂ ಅಡಿಯಲ್ಲಿ ಪೋಷನ್ ಅಭಿಯಾನ ಮಾಸಾಚರಣೆ ,ಭೇಟಿ ಬಚಾವೂ ಭೇಟಿ ಪಡಾವೋ ,ಮಕ್ಕಳಿಗೆ ಅನ್ನಪ್ರಾಶನ ಗರ್ಭಿಣಿ ಮಹಿಳೆಯರ ಸೀಮಂತ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಪೌಷ್ಟಿಕ ಆಹಾರ ನೀಡಬೇಕು ಆರೋಗ್ಯಕರ ಜೀವನದ ಅರಿವು ಮೂಡಿಸವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕೆ ಕೆ ಚೌಹಾನ್, ಡಾ. ಶ್ರೀಶೈಲ್ ಹುಕ್ಕೇರಿ ಸೇರಿದಂತೆ ಗ್ರಾಪಂ ಅಧ್ಯಕ್ಷರು ಉಪಾಧ್ಯಕ್ಷರು ಅಂಗನವಾಡಿ ಕಾರ್ಯಕರ್ತೆಯರ ಮೇಲ್ವಿಚಾರಕಿಯರು ಗ್ರಾಮದ ಮಹಿಳೆಯರು ಭಾಗವಹಿಸಿದ್ದರು.

### ಚಿನ್ನಾಭರಣ ಅಂಗಡಿ ಕಳ್ಳತನ: ಐವರ ಬಂಧನ, 77 ಲಕ್ಷ ರೂ. ಆಭರಣ ವಶ

• ಉದಯವಾಹಿನಿ, ಹುಬ್ಬಳ್ಳಿ

**ಕಳೆದ ಒಂದೂವರೆ ತಿಂಗಳ ಹಿಂದೆ** ನಡೆದಿದ್ದ ಚಿನ್ನಾಭರಣ ಅಂಗಡಿ ಕಳ್ಳತನದ ಐವರು ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದು, 77 ಲಕ್ಷ ಮೌಲ್ಯದ ಚಿನ್ನ, ಬೆಳ್ಳಿ ಆಭರಣ, ಕೃತ್ಯಕ್ಕೆ ಬಳಸಿದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಇಲ್ಲಿನ ಕೇಶ್ವಾಪುರ ಠಾಣೆಯ ವ್ಯಾಪ್ತಿಯ ರಮೇಶ ಮುಂಭಾಗದಲ್ಲಿರುವ ಶ್ರೀ ಭುವನೇಶ್ವರಿ ಜ್ಯುವೆಲರಿ ಅಂಗಡಿಯಲ್ಲಿ ಕಳ್ಳತನವಾಗಿತ್ತು. ಕಳ್ಳತನವಾಗಿರುವ ಚಿನ್ನಾಭರಣಗಳಲ್ಲಿ 780 ಗ್ರಾಂ ಚಿನ್ನ, 23.3 ಕೆಜಿ ಮೌಲ್ಯದ ಬೆಳ್ಳಿ ಆಭರಣ, ಕಳ್ಳತನ ಕೃತ್ಯಕ್ಕೆ ಬಳಸಿದ ಕಟರ್, ಗ್ಯಾಸ್ ಕಟ್ಟರ್, 10 ಸಾವಿರ ನಗದು ಹಣ ಸೇರಿದಂತೆ 77 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮೂರು ತಂಡಗಳ ಪರಿಶ್ರಮ: ಪ್ರಕರಣಕ್ಕೆ ಸಂಬಂಧಿಸಿದಂತೆ ಫರಾನ್ ಶೇಖ್, ಮುಖೇಶ್, ಫಾತೀಮಾ ಶೇಖ್, ಅಫ್ತಾಬ್ ಅಹ್ಮದ್ ಶೇಖ್, ತಲತ್ ಶೇಖ್ ಎಂಬುವರನ್ನು ಬಂಧಿಸಿದ್ದಾರೆ. ಪ್ರಕರಣದಲ್ಲಿ ಇನ್ನೊಂದೆರಡು ಆರೋಪಿಗಳ ಬಂಧನ, ಚಿನ್ನಾಭರಣ ಜಪ್ತಿ ಮಾಡಬೇಕಾಗಿದೆ. ಪ್ರಕರಣದ ಪತ್ತೆಗೆ ವಿವಿಧ ಇನ್ಸಪೆಕ್ಟರ್, ಪಿಎಸ್ಐ, ಸಿಬ್ಬಂದಿ ನೇತೃತ್ವದಲ್ಲಿ ಮೂರು ತಂಡಗಳನ್ನು ರಚಿಸಲಾಗಿತ್ತು. ಸತತ ಒಂದೂವರೆ ತಿಂಗಳ ಪರಿಶ್ರಮದಿಂದಾಗಿ ದೊಡ್ಡ ಪ್ರಕರಣ ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

### ಕೆಂಪಣ್ಣ ಆಯೋಗ ವರದಿ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಲಿ

• ಉದಯವಾಹಿನಿ, ಶಿವಮೊಗ್ಗ

ಕೋವಿಡ್ ಖರೀದಿ ವರದಿಯಲ್ಲಿ ಏನಿದೆ ಗೊತ್ತಿಲ್ಲ. ಕ್ಯಾಬಿನೆಟ್ ನಲ್ಲಿ ಈ ಬಗ್ಗೆ ಇಂದು ಚರ್ಚೆ ನಡೆಯುತ್ತಿದೆ ಎಂಬ ಬಗ್ಗೆ ಮಾಧ್ಯಮದಲ್ಲಿ ನೋಡಿದ್ದೇನೆ. ಕೆಂಪಣ್ಣ ಆಯೋಗ ವರದಿ ಬಗ್ಗೆ ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡಲಿ. ಅದನ್ನು ಏಕೆ ಕ್ಯಾಬಿನೆಟ್ ಮುಂದೆ ತರದೆ ಬಿಟ್ಟಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ಆಯುಕ್ತ ದಿನೇಶ್ ಕುಮಾರ್ ಅಮಾನತು ವಿಚಾರಕ್ಕೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಮಾಧ್ಯಮದವರಿಗೆ ಎಲ್ಲಾ ಗೊತ್ತಿದೆ. ಮಾಧ್ಯಮದವರೇ ಎಲ್ಲಾ ಹೇಳುತ್ತಿದ್ದಾರೆ. ಈಗಾಗಲೇ ಹೈಕೋರ್ಟ್ ನಲ್ಲಿ ಈ ವಿಷಯಕ್ಕೆ ಸಂಬಂಧಿಸಿದಂತೆ ವಾದ ಪ್ರತಿವಾದವಾಗಿದೆ. ಸಿದ್ದರಾಮಯ್ಯ ಅವರ ಪರ ವಕೀಲರು ವಾದ ಮಾಡಲು ಇನ್ನೂ ಸಮಯ ಕೇಳುತ್ತಿದ್ದಾರೆ ಎಂದರು. ವಿಐಎಸ್‌ಎಲ್ ನಿರ್ವಹಣೆಗೆ 10-15 ಸಾವಿರ ಕೋಟಿ ಬೇಕು. ವಿಐಎಸ್‌ಎಲ್ ಹಾಗು ವೈಜಾಕ್ ಬಗ್ಗೆ ನಮಗೆ ಬದ್ಧತೆಯಿದೆ. ಆ ಬಗ್ಗೆ ಅಧಿಕಾರಿಗಳ ಜೊತೆ ಚರ್ಚೆ ನಡೆಯುತ್ತಿದೆ. 10-15 ಸಾವಿರ ಕೋಟಿ ಬೇಕಾಗಿರುವುದರಿಂದ ಸಮಯ ಹಿಡಿಯುತ್ತದೆ ಎಂದರು.

ಕನ್ನಡ ಚಿತ್ರರಂಗದಲ್ಲಿ ಮೀಟೂ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಕುಮಾರಸ್ವಾಮಿ, ಈ ಬಗ್ಗೆ ನನಗೆ ಗೊತ್ತಿಲ್ಲ ನಾನು ಮಾತನಾಡಲ್ಲ ಎಂದರು.

# ಮಾಜಿ ಪ್ರಧಾನಿ ಶೇಖ್ ಹಸೀನಾಗೆ ಮೊಹಮ್ಮದ್ ಯೂನುಸ್ ವಾರ್ನಿಂಗ್

## ಭಾರತದಲ್ಲಿ ಕುಳಿತು ಶೇಖ್ ಹಸೀನಾ ನೀಡುತ್ತಿರುವ ಹೇಳಿಕೆಯನ್ನು ಇಲ್ಲಿ ಯಾರೊಬ್ಬರೂ ಒಪ್ಪುತ್ತಿಲ್ಲ



**ಭಾರತದಲ್ಲಿ ಸೈಲೆಂಟ್ ಆಗಿ ಇರಿ**

**ಬಾಂಗ್ಲಾ ದೇಶ:** ರಾಜಕೀಯ ಅಸ್ಥಿರತೆ ಹಾಗೂ ಹಿಂಸಾತ್ಮಕ ಪ್ರತಿಭಟನೆ ಹಿನ್ನೆಲೆಯಲ್ಲಿ ಬಾಂಗ್ಲಾ ದೇಶದ ಪ್ರಧಾನ ಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿ ಭಾರತಕ್ಕೆ ಪಲಾಯನ ಮಾಡಿದ ಶೇಖ್ ಹಸೀನಾ ಅವರಿಗೆ ಬಾಂಗ್ಲಾ ದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮುಹಮ್ಮದ್ ಯೂನುಸ್ ಖಡಕ್ ಎಚ್ಚರಿಕೆ ನೀಡಿದ್ದಾರೆ. ಭಾರತದಲ್ಲಿ ಕುಳಿತು ಬಾಂಗ್ಲಾ ದೇಶದಲ್ಲಿನ ರಾಜಕೀಯದ ಕುರಿತಾಗಿ ಹೇಳಿಕೆ ನೀಡೋದು 'ಸ್ನೇಹಪರವಲ್ಲದ ಸನ್ನೆ' ಎಂದು ಹೇಳಿದ್ದಾರೆ. ಭಾರತದಲ್ಲಿ ಇರುವವರೆಗೂ ಶೇಖ್ ಹಸೀನಾ ಅವರು ಮೌನವಾಗಿ ಇರಬೇಕು. ಇಲ್ಲವಾದ್ರೆ, ಶೇಖ್ ಹಸೀನಾ ಅವರನ್ನು ಹಸ್ತಾಂತರ ಮಾಡುವಂತೆ ಭಾರತಕ್ಕೆ ಬಾಂಗ್ಲಾ ದೇಶ ಮನವಿ ಮಾಡಲು ತೊಡಕಾಗುತ್ತದೆ ಎಂದೂ ಮೊಹಮ್ಮದ್ ಯೂನುಸ್ ಎಚ್ಚರಿಕೆ ನೀಡಿದ್ದಾರೆ.

ಬಾಂಗ್ಲಾ ದೇಶದ ಸರ್ಕಾರ ಶೇಖ್ ಹಸೀನಾ ಅವರನ್ನು ವಾಪಸ್ ಕರೆಸಿಕೊಳ್ಳಲು ಇಚ್ಛಿಸುವವರೆಗೂ ಭಾರತ ಬೇಕಿದ್ದರೆ ಅವರನ್ನು ಅಲ್ಲಿಯೇ ಇಟ್ಟುಕೊಳ್ಳಬಹುದು. ಈ ಹಂತದಲ್ಲಿ ಆಕೆ ಮೌನವಾಗಿ ಇರಬೇಕು ಎಂದು ಮೊಹಮ್ಮದ್ ಯೂನುಸ್ ತಾಕೀತು ಮಾಡಿದ್ದಾರೆ.

ಶೇಖ್ ಹಸೀನಾ ಅವರು ಬಾಂಗ್ಲಾ ದೇಶದಿಂದ ಪಲಾಯನ ಮಾಡಿದ ಬಳಿಕ ಬಾಂಗ್ಲಾ ದೇಶ ಸೇನೆಯ ನೆರವಿನೊಂದಿಗೆ ರಚನೆಯಾದ ಹಂಗಾಮಿ ಸರ್ಕಾರಕ್ಕೆ ಮುಖ್ಯ ಸಲಹೆಗಾರರಾಗಿ ನೊಬೆಲ್ ಪುರಸ್ಕೃತ ಮೊಹಮ್ಮದ್ ಯೂನುಸ್ ಆಯ್ಕೆಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಬಾಂಗ್ಲಾ ದೇಶ ರಾಜಧಾನಿ ಢಾಕಾದಲ್ಲಿ ಇರುವ ತಮ್ಮ ಸರ್ಕಾರಿ ನಿವಾಸದಲ್ಲಿ ಪಿಟಿಐ ಸುದ್ದಿ ಸಂಸ್ಥೆಗೆ ಸಂದರ್ಶನ ನೀಡಿರುವ ಮೊಹಮ್ಮದ್ ಯೂನುಸ್, ಶೇಖ್ ಹಸೀನಾ ಮಾತ್ರವಲ್ಲ ಭಾರತದ ವಿರುದ್ಧವೂ ಸಂದರ್ಶನದಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಶೇಖ್ ಹಸೀನಾ ಸಾರಥ್ಯದ ಆವಾಮಿ ಲೀಗ್ ಪಕ್ಷವೊಂದನ್ನು ಹೊರತುಪಡಿಸಿ ಬಾಂಗ್ಲಾ ದೇಶದ ಮಿಕ್ಕೆಲ್ಲಾ ರಾಜಕೀಯ ಪಕ್ಷಗಳನ್ನೂ ಇಸ್ಲಾಮೀಕರಣಗೊಂಡ ರಾಜಕೀಯ ಪಕ್ಷಗಳು ಎಂದು ಭಾರತ ಬಿಂಬಿಸುತ್ತಿದೆ. ಶೇಖ್ ಹಸೀನಾ ಇಲ್ಲವಾದರೆ ಬಾಂಗ್ಲಾ ದೇಶವು ಅಫ್ಘಾನಿಸ್ತಾನವಾಗಿ ಬದಲಾಗುತ್ತದೆ ಎಂದೂ ಬಿಂಬಿಸುತ್ತಿದೆ. ಇದು ಸರಿಯಲ್ಲ ಎಂದು ಮೊಹಮ್ಮದ್ ಯೂನುಸ್ ಹೇಳಿದರು.

**ನೀವು ಭಾರತದಲ್ಲಿ ಇದ್ದೀರಿ**

**ನಿಮ್ಮನ್ನು ಬಾಂಗ್ಲಾ ದೇಶಕ್ಕೆ ವಾಪಸ್ ಕರೆಸಿಕೊಳ್ಳಲು ನಾವೂ ಪ್ರಯತ್ನ ಮಾಡುತ್ತಿದ್ದೇವೆ. ಆದರೆ, ಈ ಹಂತದಲ್ಲಿ ನೀವು ಆಡುತ್ತಿರುವ ಮಾತುಗಳೇ ನಿಮಗೆ ಹಾಗೂ ನಮಗೆ ಸಮಸ್ಯೆ ತರುತ್ತಿದೆ. ಹೀಗಾಗಿ, ನೀವು ವಾಪಸ್ ಬರುವವರೆಗೂ ಮೌನವಾಗಿರಿ..' ಹೀಗಂತಾ ಹೇಳಿರೋದು ಬಾಂಗ್ಲಾ ದೇಶದ ಹಂಗಾಮಿ ಸರ್ಕಾರದ ಮುಖ್ಯ ಸಲಹೆಗಾರ ಮೊಹಮ್ಮದ್ ಯೂನುಸ್. ಶೇಖ್ ಹಸೀನಾ ರಾಜಕೀಯ ಹೇಳಿಕೆಗಳ ವಿರುದ್ಧ ಅವರು ಕೆಂಡ ಕಾರಿದ್ದಾರೆ.**

ಭಾರತದಲ್ಲಿ ಕುಳಿತು ಶೇಖ್ ಹಸೀನಾ ನೀಡುತ್ತಿರುವ ಹೇಳಿಕೆ, ಅವರ ನಿಲುವುಗಳನ್ನು ಬಾಂಗ್ಲಾ ದೇಶದಲ್ಲಿ ಯಾರೊಬ್ಬರೂ ಒಪ್ಪುತ್ತಿಲ್ಲ. ನಾವು ಆಕೆಯನ್ನು

- **ನಾವು ಆಕೆಯನ್ನು ಬಾಂಗ್ಲಾ ದೇಶಕ್ಕೆ ವಾಪಸ್ ಕರೆಸಿಕೊಳ್ಳಲು ಯತ್ನಿಸುತ್ತಿದ್ದೇವೆ**
- **ಆದರೆ ಅವರು ಆಡುತ್ತಿರುವ ಮಾತುಗಳು ಸಮಸ್ಯಾತ್ಮಕವಾಗಿ ಪರಿಣಮಿಸುತ್ತಿವೆ: ಮೊಹಮ್ಮದ್ ಯೂನುಸ್**

ಬಾಂಗ್ಲಾ ದೇಶಕ್ಕೆ ಕರೆಸಿಕೊಳ್ಳಲು ಯತ್ನಿಸುತ್ತಿದ್ದೇವೆ. ಆದರೆ ಈ ಹಂತದಲ್ಲಿ ಅವರು ಆಡುತ್ತಿರುವ ಮಾತುಗಳು ಸಮಸ್ಯಾತ್ಮಕವಾಗಿ ಪರಿಣಮಿಸುತ್ತಿವೆ. ಆಕೆ ಕೆಲ ಕಾಲ ಮೌನ ವಹಿಸಿದರೆ ನಾವು ಎಲ್ಲವನ್ನೂ ಮರೆಯಬಹುದು. ಆಕೆ ತನ್ನ ದೇಶದಲ್ಲಿ ಇರಬೇಕೆಂದು ಇಲ್ಲಿನ ಜನರೂ ಬಯಸುತ್ತಿದ್ದಾರೆ. ಆದರೆ ಅಲ್ಲಿ ಕುಳಿತು ಇಲ್ಲಿಗೆ ತಮ್ಮ ಸೂಚನೆಗಳನ್ನು ನೀಡುತ್ತಿರೋದನ್ನ ಜನರು ಒಪ್ಪೋದಿಲ್ಲ ಎಂದೂ ಮೊಹಮ್ಮದ್ ಯೂನುಸ್ ಹೇಳಿದ್ದಾರೆ.

ಕಳೆದ ಆಗಸ್ಟ್ 13 ರಂದು ಶೇಖ್ ಹಸೀನಾ ಅವರು ನೀಡಿದ್ದ ಒಂದು ಹೇಳಿಕೆಗೆ ಮೊಹಮ್ಮದ್ ಯೂನುಸ್ ಸಿಟ್ಟಾಗಿದ್ದಾರೆ. ಇತ್ತೀಚೆಗೆ ಬಾಂಗ್ಲಾ ದೇಶದಲ್ಲಿ ನಡೆದ ಹಿಂಸಾತ್ಮಕ ಹೋರಾಟ ಸಂಬಂಧ ತಮಗೆ ನ್ಯಾಯ ಬೇಕು ಎಂದು ಶೇಖ್ ಹಸೀನಾ ಕೇಳಿದ್ದರು. ಹಿಂಸಾತ್ಮಕ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದವರು ನಡೆಸಿದ ದಾಳಿಯನ್ನು ಭಯೋತ್ಪಾದಕ ದಾಳಿ ಎಂದೂ ಬಿಂಬಿಸಿದ್ದರು. ಅಮಾಯಕರ ಹತ್ಯೆ, ಹಿಂಸೆ ಹಾಗೂ ಲೂಟಿಗಳ ಕುರಿತಾಗಿ ತನಿಖೆ ನಡೆದು, ಆರೋಪಿಗಳನ್ನ ಗುರ್ತಿಸಿ ಅವರಿಗೆ ಶಿಕ್ಷೆ ನೀಡಬೇಕು ಎಂದು ಶೇಖ್ ಹಸೀನಾ ಆಗ್ರಹಿಸಿದ್ದರು.

ಈ ರೀತಿಯ ಹೇಳಿಕೆಗಳು ಹಾಗೂ ಬೆಳವಣಿಗೆಗಳು ನಮಗೆ ಹಾಗೂ ಭಾರತಕ್ಕೆ ಉತ್ತಮವಲ್ಲ ಎಂದು ಹೇಳಿರುವ ಮೊಹಮ್ಮದ್ ಯೂನುಸ್, ನಮಗೆ ಈ ರೀತಿಯ ಮಾತುಗಳು ಅಹಿತಕರ ಸನ್ನಿವೇಶ ಸೃಷ್ಟಿ ಮಾಡುತ್ತದೆ ಎಂದು ಹೇಳಿದ್ದಾರೆ.

ಇನ್ನು ಶೇಖ್ ಹಸೀನಾ ಅವರು ಮೌನವಾಗಿ ಇರಬೇಕು ಎಂದು ನಾವು ಈಗಾಗಲೇ ತಾಕೀತು ಮಾಡಿದ್ದೇವೆ ಎಂದು ಹೇಳಿರುವ ಮೊಹಮ್ಮದ್ ಯೂನುಸ್, ಆಕೆಗೆ ಭಾರತ ರಕ್ಷಣೆ ನೀಡಿದೆ.

ಆದರೆ, ಆಕೆ ಅಲ್ಲಿಂದಲೇ ಕುಳಿತು ಅಭಿಯಾನ ನಡೆಸುತ್ತಿದ್ದಾರೆ. ಆಕೆ ಸಾಮಾನ್ಯ ಸ್ವರೂಪದಲ್ಲಿ ಭಾರತಕ್ಕೆ ಹೋಗಿಲ್ಲ. ಆಕೆ ಇಲ್ಲಿನ ಜನಾಕ್ರೋಶಕ್ಕೆ ಹೆದರಿ ಪಲಾಯನ ಮಾಡಿದ್ದಾರೆ ಎಂದೂ ಮೊಹಮ್ಮದ್ ಯೂನುಸ್ ಹೇಳಿದ್ದಾರೆ.

# ಆಂಬ್ಯುಲೆನ್ಸ್ ನಿರಾಕರಿಸಿದ ಆಸ್ಪತ್ರೆ

## ಇಬ್ಬರು ಮಕ್ಕಳ ಶವ ಹೊತ್ತು 15 ಕಿ.ಮೀ. ನಡೆದ ದಂಪತಿ

**ಗಡ್ಚಿರೋಲಿ:** ದೇಶದಲ್ಲಿ ಬಡವರಿಗೆ ಮೂಲಭೂತ ಸೌಕರ್ಯಗಳು ಮರೀಚಿಕೆ ಎಂಬ ಮಾತು ಮತ್ತೊಮ್ಮೆ ನಿಜವಾಗಿದ್ದು, ಮಹಾರಾಷ್ಟ್ರದ ಗಡ್ಚಿರೋಲಿಯಲ್ಲಿ ದಂಪತಿಗಳು ಗುರುವಾರ ಸೂಕ್ತ ಚಿಕಿತ್ಸೆ ಸಿಗದೆ ಮೃತಪಟ್ಟ ತಮ್ಮ ಇಬ್ಬರು ಮಕ್ಕಳನ್ನು ಹೆಗಲ ಮೇಲೆ ಹೊತ್ತುಕೊಂಡು ಆಸ್ಪತ್ರೆಯಿಂದ 15 ಕಿಲೋಮೀಟರ್ ನಡೆದು ಮನೆ ತಲುಪಿದ ಘಟನೆ ನಡೆದಿದೆ. ಆಹೇರಿ ತಾಲ್ಲೂಕಿನ ಹಳ್ಳಿಯೊಂದರ ದಂಪತಿಗಳು, ತೀವ್ರ ಜ್ವರದಿಂದ ಮೃತಪಟ್ಟಿದ್ದ ತಮ್ಮ ಇಬ್ಬರು ಪುತ್ರರ ಮೃತದೇಹಗಳನ್ನು ಹೆಗಲ ಮೇಲೆ ಹೊತ್ತೊಯ್ದಿರುವ ವಿಡಿಯೊ ಇದೀಗ ವೈರಲ್ ಆಗಿದೆ.


ತೀವ್ರ ಜ್ವರದಿಂದ ಬಳಲುತ್ತಿದ್ದ ಬಾಲಕರು ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ದೊರೆಯದ ಕಾರಣ ಸಾವನ್ನಪ್ಪಿದ್ದಾರೆ. ಆಸ್ಪತ್ರೆ ಸಿಬ್ಬಂದಿ ಆಂಬ್ಯುಲೆನ್ಸ್ ನೀಡಲು ನಿರಾಕರಿಸಿದ್ದರಿಂದ ಆಸ್ಪತ್ರೆಯಿಂದ 15 ಕಿಮೀ ದೂರದಲ್ಲಿರುವ ಗಡ್ಚಿರೋಲಿಯಲ್ಲಿರುವ ತಮ್ಮ ಗ್ರಾಮದ ಮನೆಗೆ ಕಾಲ್ನಡಿಗೆಯಲ್ಲೇ ದಂಪತಿ



ಸಾಗಿದ್ದಾರೆ. ಈ ಘಟನೆಯ ವಿಡಿಯೋವನ್ನು ವಿಧಾನಸಭೆಯ ವಿರೋಧ ಪಕ್ಷದ ನಾಯಕ ವಿಜಯ್ ವಡೆಟ್ಟಿವಾರ್ ಅವರು ಎಕ್ಸ್ ನಲ್ಲಿ ಹಂಚಿಕೊಂಡಿದ್ದು, ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಇಬ್ಬರು ಅಪ್ರಾಪ್ತರ ಮೃತದೇಹಗಳನ್ನು ಅವರ ಗ್ರಾಮವಾದ ಪಟ್ಟಿಗಾಂವ್‌ಗೆ ವರ್ಗಾಯಿಸಲು ಸಹ ಆಂಬ್ಯುಲೆನ್ಸ್ ಇರಲಿಲ್ಲ ಮತ್ತು ಪೋಷಕರು ಮಳೆಯಿಂದ ತೋಯ್ದ ಕೆಸರು ಹಾದಿಯಲ್ಲಿ 15 ಕಿಲೋಮೀಟರ್ ನಡೆದುಕೊಂಡು ಹೋಗಬೇಕಾಯಿತು. ಗಡ್ಚಿರೋಲಿಯ ಆರೋಗ್ಯ ವ್ಯವಸ್ಥೆಯ ಕಠೋರ ವಾಸ್ತವ ಇಂದು ಮತ್ತೆ ಮುನ್ನೆಲೆಗೆ ಬಂದಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

**ಗಡ್ಚಿರೋಲಿ ಜಿಲ್ಲೆಯ ಆರೋಗ್ಯ ವ್ಯವಸ್ಥೆಯ ಕಠೋರ ವಾಸ್ತವ ಇಂದು ಮತ್ತೆ ಮುನ್ನೆಲೆಗೆ ಬಂದಿದೆ ಎಂದು ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ವೀಡಿಯೋದಲ್ಲಿ ದಂಪತಿಗಳು ಕಣ್ಣೀರಿಟ್ಟು, ಕೆಸರುಮಯವಾದ ಕಾಡಿನ ಹಾದಿಯಲ್ಲಿ ಮಕ್ಕಳ ಮೃತದೇಹ ಹೊತ್ತು ಸಾಗುತ್ತಿದ್ದಾರೆ. ಇಬ್ಬರೂ ತಮ್ಮ ಒಬ್ಬೊಬ್ಬ ಮಗನನ್ನು ಹೆಗಲ ಮೇಲೆ ಹೊತ್ತುಕೊಂಡಿದ್ದಾರೆ. ಇಬ್ಬರು ಒಡಹುಟ್ಟಿದವರು ಜ್ವರದಿಂದ ಬಳಲುತ್ತಿದ್ದರು. ಆದರೆ, ಅವರಿಗೆ ಸಮಯಕ್ಕೆ ಚಿಕಿತ್ಸೆ ಸಿಗಲಿಲ್ಲ. ಒಂದೆರಡು ಗಂಟೆಗಳಲ್ಲಿ ಅವರ ಸ್ಥಿತಿ ಹದಗೆಟ್ಟಿತು ಮತ್ತು ಮುಂದಿನ ಒಂದು ಗಂಟೆಯಲ್ಲಿ ಇಬ್ಬರು ಹುಡುಗರು ಸಾವನ್ನಪ್ಪಿದರು ಎಂದು ವಡೆಟ್ಟಿವಾರ್ ಅವರು ದುರಂತದ ವಿಡಿಯೋವನ್ನು ಪೋಸ್ಟ್ ಮಾಡಿದ್ದಾರೆ.**

# ಉಕ್ರೇನ್ ವಿದೇಶಾಂಗ ಸಚಿವ ಕುಲೆಬಾ ರಾಜೀನಾಮೆ



**ಕೀವ್:** ಸರ್ಕಾರ ಪುನರ್‌ರಚನೆಗೂ ಮುಂಚಿತವಾಗಿ ನಾಲ್ವರು ಸಂಪುಟ ಸಚಿವರು ರಾಜೀನಾಮೆ ಸಲ್ಲಿಸಿದ ಬೆನ್ನಲ್ಲೇ ಉಕ್ರೇನ್ ವಿದೇಶಾಂಗ ಸಚಿವ ಡಿಮಿಟ್ರಿ ಕುಲೆಬಾ ಕೂಡ ಬುಧವಾರ ರಾಜೀನಾಮೆ ಸಲ್ಲಿಸಿದ್ದಾರೆ. ಐರೋಪ್ಯ ವ್ಯವಹಾರಗಳ ಉಪ ಪ್ರಧಾನಿ ಓಲ್ಹಾ ಸ್ಟೆಫಾನಿಶಿನಾ, ರಕ್ಷಣಾ ಕೈಗಾರಿಕೆಗಳ ಸಚಿವ ಒಲೆಕ್ಸಾಂಡರ್ ಕಮಿಶಿನ್, ನ್ಯಾಯ ಸಚಿವ ಡೆನಿಸ್ ಮಾ ಲಿಯುಸ್ಕಾ ಮತ್ತು ಪರಿಸರ ಸಚಿವ ರುಸ್ತಾನ್ ಸ್ಟ್ರೈಲೆಟ್ಸ್ ರಾಜಿನಾಮೆ ಸಲ್ಲಿಸಿದ ಸಂಪುಟ ಸಚಿವರು ಎಂದು ಸ್ಪೀಕರ್ ಕಚೇರಿ ತಿಳಿಸಿದೆ.

ರಾಜೀನಾಮೆಯ ಪ್ರಸ್ತಾಪಗಳಿಗೆ ಸರ್ಕಾರದಿಂದ ಯಾವುದೇ ತಕ್ಷಣದ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಅವರು ಕ್ಯಾಬಿನೆಟ್ ಪುನರ್‌ರಚನೆಯು ಸನ್ನಿಹಿತವಾಗಿದೆ ಎಂದು ಕಳೆದ ವಾರ ಹೇಳಿದ್ದರು.

ಅಲ್ಲದೆ, ಸಂಸತ್ತಿನಲ್ಲಿ ಅವರ ಪಕ್ಷದ ಮುಖ್ಯಸ್ಥರು, ಪ್ರಸ್ತುತ ಅರ್ಧದಷ್ಟು ಮಂತ್ರಿಗಳನ್ನು ಬದಲಾಯಿಸುವ ಸಾಧ್ಯತೆಯಿದೆ ಎಂದು ಹೇಳಿಕೆ ನೀಡಿದ್ದರು.

ಇನ್ನು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಉಕ್ರೇನ್‌ನ ಪ್ರಮುಖ ಮುಖವಾಗಿ ಗುರುತಿಸಿಕೊಂಡಿದ್ದ ವಿದೇಶಾಂಗ ಸಚಿವ ಡಿಮಿಟ್ರಿ ಕುಲೆಬಾ ಅವರ ರಾಜೀನಾಮೆ ಕೂಡ ಅಚ್ಚರಿ ಮೂಡಿಸಿದೆ. 43 ವರ್ಷದ ಕುಲೇಬಾ ಅವರು ರಾಜೀನಾಮೆಗೆ ಕಾರಣ ನೀಡಲಿಲ್ಲ. ಅವರ ರಾಜೀನಾಮೆ ಬಗ್ಗೆ ಮುಂದಿನ ಅಧಿವೇಶನದಲ್ಲಿ ಸಂಸದರು ಚರ್ಚಿಸಲಿದ್ದಾರೆ ಎಂದು ಸ್ಪೀಕರ್ ರುಸ್ತಾನ್ ಸ್ಟೆಫಾಂಚುಕ್ 'ಫೇಸ್‌ಬುಕ್'ನಲ್ಲಿ ತಿಳಿಸಿದ್ದಾರೆ. ಏತನ್ಮಧ್ಯೆ, ಪಶ್ಚಿಮ ಉಕ್ರೇನ್ನ ಲುವಿವ್ ನಗರದ ಮೇಲೆ ರಷ್ಯಾ ನಡೆಸಿದ ದಾಳಿಗಳಲ್ಲಿ ಏಳು ಜನರು ಹತರಾಗಿದ್ದಾರೆ.

ಯುದ್ಧ ಪ್ರಾರಂಭವಾದ ದೀರ್ಘ ಸಮಯದ ನಂತರ ಪೋಲ್ಟವಾ ನಗರದ ಮೇಲೆ ಮಂಗಳವಾರ ನಸುಕಿನಲ್ಲಿ ತಡರಾತ್ರಿ ಎರಡು ಗುರಿ ನಿರ್ದೇಶಿತ ಕ್ಷಿಪಣಿ ದಾಳಿ ನಡೆದಿತ್ತು. ಈ ಭೀಕರ ದಾಳಿಯಲ್ಲಿ 53 ಜನರು ಹತರಾಗಿದ್ದರು. ಉಕ್ರೇನ್ ರಕ್ಷಣಾ ಸೇವೆ ಇಲಾಖೆ ಹೇಳಿದೆ. ಇದರ ಮರು ದಿನವೇ ರಷ್ಯಾ ಸೇನೆ ಲುವಿವ್ ಮೇಲೆ ಮಾರಕ ದಾಳಿ ಮಾಡಿದೆ. ರಕ್ಷಣಾ ಉದ್ಯಮಗಳನ್ನು ಗುರಿಯಾಗಿಸಿಕೊಂಡು ಕಿಂಜಾಲ್ ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸಲಾಗಿದೆ. 52 ಜನರು ಗಾಯಗೊಂಡಿದ್ದಾರೆ ಎಂದು

# ನೀಟ್ ಪರೀಕ್ಷೆ ತಯಾರಿ ನಡೆಸುತ್ತಿದ್ದ ವಿದ್ಯಾರ್ಥಿ ಆತ್ಮಹತ್ಯೆ



**ಜೈಪುರ:** ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ 21 ವರ್ಷದ ವಿದ್ಯಾರ್ಥಿ ಕಳೆದ ರಾತ್ರಿ ರಾಜಸ್ಥಾನದ ಕೋಟಾದಲ್ಲಿ ಆತಹತ್ಯೆ ಮಾಡಿಕೊಂಡಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ಉತ್ತರ ಪ್ರದೇಶದ ಮಥುರಾದ ವಿದ್ಯಾರ್ಥಿಯು ಒಂದು ವರ್ಷದ ಹಿಂದೆ ಕೋಟಾಕ್ಕೆ ಆಗಮಿಸಿ ತನ್ನ ಬಾಡಿಗೆ ಮನೆಯಲ್ಲಿ ಆತ್ಮ ಹತ್ಯೆ ಮಾಡಿಕೊಂಡಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಘಟನೆಯೊಂದಿಗೆ, ಕೋಟಾದಲ್ಲಿ 16 ನೇ, ಸಿಕರ್ ಮತ್ತು ಜೈಪುರದಲ್ಲಿ ತಲಾ ಒಬ್ಬರು ಸೇರಿದಂತೆ ರಾಜಸ್ಥಾನದಾದ್ಯಂತ 18 ಕ್ಕೆ ತಲುಪಿದೆ.

ಕೋಟಾ ಉಪ ಪೊಲೀಸ್ ಅಧೀಕ್ಷಕರ ಪ್ರಕಾರ, ಉತ್ತರ ಪ್ರದೇಶದ ಮಥುರಾದ ವಿದ್ಯಾರ್ಥಿ ರಾಜೇಶ್ ಟೈಲರ್ ಒಂದು ವರ್ಷದ ಹಿಂದೆ ಕೋಟಾಕ್ಕೆ ಆಗಮಿಸಿ ಜವಾಹರ್ ನಗರ ಪ್ರದೇಶದಲ್ಲಿ ಕಳೆದ ರಾತ್ರಿ ತನ್ನ ಬಾಡಿಗೆ ನಿವಾಸದಲ್ಲಿ ಆತಹತ್ಯೆ ಮಾಡಿಕೊಂಡಿದ್ದಾನೆ.

ಹಲವಾರು ಮನವಿ ಮಾಡಿಕೊಂಡರೂ ಸ್ಪಂದಿಸದ ಹಿನ್ನಲೆಯಲ್ಲಿ ಮನೆಯ ಮಾಲೀಕರಿಗೆ ಅನುಮಾನ ಬಂದಾಗ ಈ ಘಟನೆ ಬಯಲಿಗೆ ಬಂದಿದೆ. ಬಳಿಕ ಸ್ಥಳೀಯ ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡಿದ್ದಾರೆ. ಸ್ಥಳೀಯ ಠಾಣಾಧಿಕಾರಿ ಹರಿನಾರಾಯಣ ಶರ್ಮಾ ಅವರು ತಕ್ಷಣ ಸ್ಥಳಕ್ಕಾಗಮಿಸಿ ಬಾಗಿಲು ಒಡೆದು ನೋಡಿ ದಾಗ ಮೃತದೇಹ ಪತ್ತೆಯಾಗಿದೆ. ಆತನ ಸ್ಥಳದಿಂದ ಇದು ವರೆಗೆ ಯಾವುದೇ ಆತಹತ್ಯೆ ಪತ್ರ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಸ್ಥಳವನ್ನು ಪರೀಕ್ಷಿಸಲು ಎಫ್‌ಎಸ್‌ಎಲ್ ತಂಡವನ್ನು ಸಹಕರೆಯಲಾಗಿದೆ. ಆತನ ಪೋಷಕರಿಗೂ ಮಾಹಿತಿ ನೀಡಲಾಗಿತ್ತು. ಕಳೆದ ಕೆಲವು ದಿನಗಳಲ್ಲಿ ವಿದ್ಯಾರ್ಥಿಯಲ್ಲಿ ಯಾವುದೇ ವರ್ತನೆಯ ಬದಲಾವಣೆಗಳ ಬಗ್ಗೆ ನಾವು ಅವರನ್ನು ಪ್ರಶ್ನಿಸುತ್ತೇವೆ ಎಂದು ಡಿಎಸ್ಪಿ ಹೇಳಿದರು.

# 11 ಕೋಟಿ ರೈತರಿಗೆ ಡಿಜಿಟಲ್ ಐಡಿ ಕಾರ್ಡ್

**ನವದೆಹಲಿ:** ರೈತ ಸಮುದಾಯವನ್ನು ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ 2027 ರೊಳಗೆ 11 ಕೋಟಿ ರೈತರಿಗೆ ಡಿಜಿಟಲ್ ಐಡಿ ಕಾರ್ಡ್ ಸೃಷ್ಟಿಸುವ ಗುರಿ ಹೊಂದಿದೆ. ಇದು ಆಧಾರ್ ಕಾರ್ಡ್‌ನಂತೆಯೇ ಇರುತ್ತದೆ.

ರೈತರಿಗೆ ಪ್ರಮುಖ ಸೇವೆಗಳು, ಯೋಜನೆಗಳನ್ನು ತಲುಪಿಸುವ ರೈತ ಕೇಂದ್ರಿತ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದಂತೆ ರಚಿಸಿರುವ ಅಗ್ರಿಸ್ಟಾಕ್ ಉಪಕ್ರಮದ ಭಾಗವಾಗಿರುವುದು ಇದರ ಗುರಿ ಯಾಗಿದೆ.

ಆಧಾರ್ ಕಾರ್ಡ್‌ನಂತೆಯೇ ರೈತರಿಗೆ ರೈತ ಗುರುತಿನ ಚೀಟಿ ಪರಿಚಯಿಸುವುದು ಅಗ್ರಿಸ್ಟ್ಯಾಕ್‌ನ ಪ್ರಮುಖ ವೈಶಿಷ್ಟ್ಯವಾಗಿದೆ. 2024-25ರ ಹಣಕಾಸು ವರ್ಷದಲ್ಲಿ 6 ಕೋಟಿ, 2025-26ರ ಹಣಕಾಸು ವರ್ಷದಲ್ಲಿ 3 ಕೋಟಿ ಮತ್ತು 2026-27ನೇ ಸಾಲಿನಲ್ಲಿ 2 ಕೋಟಿ ಡಿಜಿಟಲ್ ಐಡಿಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದು ಸರ್ಕಾರ ಹೇಳಿದೆ. ರಾಜ್ಯ ಸರ್ಕಾರ, ಕೇಂದ್ರಾಡಳಿತ ಪ್ರದೇಶಗಳಿಂದ ರಚಿಸಲ್ಪಟ್ಟ ಮತ್ತು ನಿರ್ವಹಿಸಲ್ಪಡುವ ಈ ಗುರುತಿನ ಚೀಟಿಗಳಲ್ಲಿ ಭೂದಾಖಲೆಗಳು, ಜಾನುವಾರುಗಳ ಮಾಲೀಕತ್ವ, ಬಿತ್ತಿದ ಬೆಳೆಗಳು ಮತ್ತು ಪಡೆದ ಪ್ರಯೋಜನಗಳು ಸೇರಿದಂತೆ ವಿವಿಧ ರೈತ-ಸಂಬಂಧಿತ ಡೇಟಾವನ್ನು ಲಿಂಕ್ ಮಾಡಲಾಗುತ್ತದೆ ಎಂದು ಸರ್ಕಾರ ಹೇಳಿದೆ. 2024-25 ರಲ್ಲಿ 400 ಜಿಲ್ಲೆಗಳು ಮತ್ತು 2025-26 ರಲ್ಲಿ ಎಲ್ಲಾ ಜಿಲ್ಲೆಗಳನ್ನು ಒಳಗೊಳ್ಳುವ ಡಿಜಿಟಲ್ ಬೆಳೆ ಸಮೀಕ್ಷೆಯನ್ನು ಎರಡು ವರ್ಷಗಳಲ್ಲಿ ರಾಷ್ಟ್ರವ್ಯಾಪಿ ಪ್ರಾರಂಭಿಸಲು ಸರ್ಕಾರ ಯೋಜಿಸಿದೆ.



ಕೃಷಿ ಸಚಿವಾಲಯದ ಪ್ರಕಾರ, ಡಿಜಿಟಲ್ ಕ್ರಾಂತಿಯು ಸುರಕ್ಷಿತ ಪಾವತಿಗಳು ಮತ್ತು ವಹಿವಾಟುಗಳನ್ನು ರಚಿಸುವ ಮೂಲಕ ಇತ್ತೀಚಿನ ವರ್ಷಗಳಲ್ಲಿ ಆಡಳಿತ ಮತ್ತು ಸೇವಾ ವಿತರಣೆಯನ್ನು ಗಣನೀಯವಾಗಿ ಪರಿವರ್ತಿಸಿದೆ. ಇದು ಹಣಕಾಸು, ಆರೋಗ್ಯ, ಶಿಕ್ಷಣ, ಮತ್ತು ಚಿಲ್ಲರೆ ವ್ಯಾಪಾರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಡಿಜಿಟಲ್ ಪೂರಕ ಪರಿಸರಕ್ಕೆ ಹಾದಿ ಸುಗಮಗೊಳಿಸಿದೆ. ಕೃಷಿ ಕ್ಷೇತ್ರದಲ್ಲಿ ಇದೇ ರೀತಿಯ ಪರಿವರ್ತನೆಗಾಗಿ, ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟವು 2,817 ಕೋಟಿ ರೂಪಾಯಿಗಳ ಗಣನೀಯ ಹಣಕಾಸಿನ ವೆಚ್ಚದೊಂದಿಗೆ ಡಿಜಿಟಲ್ ಅಗ್ರಿಕಲ್ಚರ್ ಮಿಷನ ಗೆ ಅನುಮೋದನೆ ನೀಡಿದೆ. ಕೇಂದ್ರ, ರಾಜ್ಯ ಸರ್ಕಾರಗಳ ನಡುವಿನ ಸಹಭಾಗಿತ್ವದ ಮೂಲಕ ಅಗ್ರಿಸ್ಟಾಕ್ ಅನುಷ್ಠಾನ ಪ್ರಗತಿಯಲ್ಲಿದ್ದು, 19 ರಾಜ್ಯಗಳು ಕೃಷಿ ಸಚಿವಾಲಯದೊಂದಿಗೆ ಒಡಂಬಡಿಕೆಗೆ ಸಹಿ ಹಾಕಿವೆ.

# ಡಾ.ಸಂದೀಪ್ ಘೋಷ್ ಕಿಕ್‌ಬ್ಯಾಕ್ ಪಡೆದಿದ್ದನ್ನು ಬಹಿರಂಗಪಡಿಸಿದ ಸಿಬಿಐ



**ಕೋಲ್ಕತ್ತಾ:** ಆರ್‌ಜಿ ಕಾರ್ ವೈದ್ಯಕೀಯ ಕಾಲೇಜು, ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಡಾ.ಸಂದೀಪ್ ಘೋಷ್, ಸರ್ಕಾರಿ ಆಸ್ಪತ್ರೆ ಯಲ್ಲಿ ತಮ್ಮ ಅಧಿಕಾರಾವಧಿಯಲ್ಲಿ ಕೆಲವು ಕಿಕ್ ಬ್ಯಾಕ್ ಗಳನ್ನು ಪಡೆದಿದ್ದಾರೆ ಎಂದು ಕೇಂದ್ರೀಯ ತನಿಖಾ ದಳ ಬಹಿರಂಗಪಡಿಸಿದೆ.

ಕಳೆದ ತಿಂಗಳು ಆಸ್ಪತ್ರೆಯಲ್ಲಿ ತರಬೇತಿ ನಿರತ ವೈದ್ಯೆಯ ಅತ್ಯಾಚಾರ ಮತ್ತು ಹತ್ಯೆಯ ಪ್ರಕರಣ ನಂತರ ಆಸ್ಪತ್ರೆಯಲ್ಲಿ ನಡೆಯುತ್ತಿದ್ದ ಆರ್ಥಿಕ ಅಕ್ರಮಗಳ ಬಗ್ಗೆ ಸಂಸ್ಥೆ ಘೋಷ್ ಅವರನ್ನು ಎರಡು ವಾರಗಳ ಕಾಲ

**ವೈದ್ಯಕೀಯ ಹಗರಣಗಳಲ್ಲಿ ಭಾಗಿಯಾ ಗಿರುವ ಮಾರಾಟಗಾರರಿಗೆ ನೀಡಿದ ಪ್ರತಿ ಟೆಂಡರ್‌ನಲ್ಲಿ ಘೋಷ್ ಶೇ. 20 ರಿಂದ 30ರಷ್ಟು ಕಮಿಷನ್ ತೆಗೆದುಕೊಂಡಿದ್ದಾರೆ ಎಂದು ಮೂಲಗಳು ಹೇಳಿವೆ. ಅಂತಹ ಟೆಂಡರ್ ಗಳನ್ನು ಮಾರಾಟಗಾರರಾದ ಬಿಪ್ಲವ್ ಸಿಂಘಾ, ಸುಮನ್ ಹಜ್ರಾ ಅವರಿಗೆ ನಿಯಮಾವಳಿಗಳನ್ನು ಉಲ್ಲಂಘಿಸಿ ನೀಡಲಾಗಿದೆ ಎಂದು ವರದಿಯಾಗಿದೆ. ಸಿಬಿಐ ಸಂದೀಪ್ ಘೋಷ್ ಅವರನ್ನು ಸೋಮವಾರ ಬಂಧಿಸಿದೆ.**

ಪ್ರಶ್ನಿಸಿತ್ತು, ಅಂತಿಮವಾಗಿ ಸೆ.2 ರಂದು ಅವರನ್ನು ಬಂಧಿಸಲಾಯಿತು. ಸಂದೀಪ್ ಘೋಷ್ ಅವರು ನಿನ್ನೆ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದರು. ಸಂಸ್ಥೆಯಲ್ಲಿ ಹಣಕಾಸಿನ ಅವ್ಯವಹಾರಗಳನ್ನು ಆರೋಪಿಸಿರುವ ಅರ್ಜಿಗೆ ಕಕ್ಷಿದಾರರಾಗಿ ಸೇರಿಸಲು ತನ್ನ ಮನವಿಯನ್ನು ವಜಾಗೊಳಿಸಿದ ಕೋಲ್ಕತ್ತಾ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿದರು. ಸಿಬಿಐ ಮೂಲಗಳ ಪ್ರಕಾರ, ಘೋಷ್ ಅವರು ಅನರ್ಹ ವೈದ್ಯಕೀಯ ವಿದ್ಯಾರ್ಥಿಗಳಿಗೆ ವರ್ಗಾವಣೆ, ಪೋಸ್ಟಿಂಗ್ ಮತ್ತು ಪಾಸ್ ಅಂಕಗಳನ್ನು ಒದಗಿಸಲು ಶೇ.40ರಷ್ಟು ಕಮಿಷನ್ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ. ಇತ್ತೀಚಿನ ವರ್ಷಗಳಲ್ಲಿ ವೈದ್ಯರ ಅಕ್ರಮ ವರ್ಗಾವಣೆ ಮತ್ತು ಪೋಸ್ಟಿಂಗ್‌ಗಳ ದಂಧೆಯು ಹೆಚ್ಚಾಗುತ್ತಿದ್ದು ಅವರ ಕಮಿಷನ್ ಕ್ರಮೇಣ ಶೇ.10 ಕ್ಕೆ ಇಳಿದಿದೆ.

ಹೆಚ್ಚುತ್ತಿರುವ ವೈದ್ಯರ ನಡುವೆ ಹಣವನ್ನು ವಿತರಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಉತ್ತರ ಬಂಗಾಳದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯ ಡಾ. ಅಭಿಕ್ ಘೋಷ್ ಅವರನ್ನು ಅಕ್ರಮ ವರ್ಗಾವಣೆ ಮತ್ತು ಪೋಸ್ಟಿಂಗ್ ದಂಧೆ ನಡೆಸುವಲ್ಲಿ ಪ್ರಮುಖ ವ್ಯಕ್ತಿ ಎಂದು ಸಿಬಿಐ ಮೂಲಗಳು ಗುರುತಿಸಿವೆ.

ಈ ಯೋಜನೆಯಲ್ಲಿ ಭಾಗಿಯಾಗಿರುವ ಇತರ ಹಿರಿಯ ವೈದ್ಯರಿಗಾಗಿಯೂ ಕೇಂದ್ರ ತನಿಖಾ ಸಂಸ್ಥೆ ಹುಡುಕಾಟ ನಡೆಸುತ್ತಿದೆ ಎಂದು ಮೂಲಗಳು ತಿಳಿಸಿವೆ.

# ಸಿಕ್ಕಿಂ; ರಸ್ತೆ ಅಪಘಾತ: ನಾಲ್ವರು ಸೇನಾ ಸಿಬ್ಬಂದಿ ಸಾವು

**ಗ್ಯಾಂಗ್ಟಾಕ್:** ಸಿಕ್ಕಿಂನ ಪಾಕ್ಯೊಂಗ್ ಜಿಲ್ಲೆಯಲ್ಲಿ ಸೇನಾ ವಾಹನವು ಅಪಘಾತಕ್ಕೀಡಾದ ಪರಿಣಾಮ ನಾಲ್ವರು ಸೇನಾ ಸಿಬ್ಬಂದಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ. ಸೇನಾ ಸಿಬ್ಬಂದಿ ಕರೆದೊಯ್ಯುತ್ತಿದ್ದ ವಾಹನವು ರೆನಾಕ್-ರೋಂಗ್ಲಿ ಹೆದ್ದಾರಿಯಲ್ಲಿ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಮೃತರನ್ನು ಮಧ್ಯಪ್ರದೇಶದ ಸಿಪಾಯಿ ಪ್ರದೀಪ್ ಪಟೇಲ್, ಇಂಫಾಲ್ ನಿವಾಸಿ ಪೀಟರ್, ಹರಿಯಾಣ ನಿವಾಸಿ ನಾಯಕ್ ಗುರ್ಸೇವ್ ಸಿಂಗ್ ಮತ್ತು ತಮಿಳುನಾಡಿನ ಸುಬೇದಾರ್ ಕೆ ತಂಗಪಾಂಡಿ ಎಂದು ಗುರುತಿಸಲಾಗಿದೆ. ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ. ಮೃತದೇಹಗಳನ್ನು ಸೇನೆಗೆ ಹಸ್ತಾಂತರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಬರ್ಮುಡಾ ಟ್ರಯಾಂಗಲ್‌ನಂತೆಯೇ ಅಮೆರಿಕದಲ್ಲಿ ಮತ್ತೊಂದು ವಿಸ್ಮಯಕಾರಿ ಜಾಗ

## ಆಂಕೊರೇಜ್, ಜುನಿಯು ಮತ್ತು ಉಟ್ಕೆಯಾಗ್ವಿಕ್ ನಡುವೆ ನಿಗೂಢ ಪ್ರದೇಶ ಹೊಂದಿರುವ ಅಲಾಸ್ಕಾ

**ವಾಷಿಂಗ್ಟನ್:** ಅಟ್ಲಾಂಟಿಕ್ ಸಾಗರದಲ್ಲಿನ ಬರ್ಮುಡಾ ಟ್ರಯಾಂಗಲ್, ಜಗತ್ತಿನ ಅತಿ ನಟೋರಿಯಸ್ ಹಾಗೂ ನಿಗೂಢ ಪ್ರದೇಶ ಎಂದೇ ಹೆಸರಾಗಿದೆ. ಇಲ್ಲಿ ನಾಪತ್ತೆಯಾದ ಜನರು, ಹಡಗು ಮತ್ತು ವಿಮಾನಗಳಿಗೆ ಲೆಕ್ಕವಿಲ್ಲ. ಇದರ ನಿಗೂಢತೆಯನ್ನು ಭೇದಿಸಲು ಇನ್ನೂ ಸಾಧ್ಯವಾಗಿಲ್ಲ. ಜನರು ದಿಢೀರ್ ನಾಪತ್ತೆಯಾಗುವಂತಹ ಬಗೆಹರಿಯದ ನಿಗೂಢತೆಯ ತಾಣಗಳು ಇನ್ನೂ ಇವೆಯೇ? ದಕ್ಷಿಣದಲ್ಲಿ ಆಂಕೊರೇಜ್, ಜುನಿಯು, ಉತ್ತರದ ಕರಾವಳಿ ನಗರ ಉಟ್ಕಿಯಾಗ್ವಿಕ್ ಇರುವ ಮೂರು ಬಿಂದುಗಳನ್ನು ಒಳಗೊಂಡಿರುವ 'ಅಲಾಸ್ಕಾ ಟ್ರಯಾಂಗಲ್' ಕೂಡ ಬರ್ಮುಡಾ ಟ್ರಯಾಂಗಲ್‌ನಂತೆಯೇ 20 ಸಾವಿರಕ್ಕೂ ಅಧಿಕ ಮಂದಿ ನಿಗೂಢವಾಗಿ ಕಣ್ಮರೆಯಾಗಿರುವ ಮತ್ತೊಂದು ಜಾಗ.

ಐಎಫ್‌ಎಲ್ ಸೈನ್ಸ್ ನಿಯತಕಾಲಿಕೆ ಪ್ರಕಾರ, 1972ರ ಅಕ್ಟೋಬರ್‌ನಲ್ಲಿ ಇದು ಮೊದಲ ಬಾರಿಗೆ ಜನರ ಗಮನಕ್ಕೆ ಬಂದಿತ್ತು. ಅಮೆರಿಕದ ಇಬ್ಬರು ರಾಜಕಾರಣಿಗಳನ್ನು ಆಂಕೊರೇಜ್‌ನಿಂದ ಜುನಿಯುಗೆ ಕರೆದೊಯ್ಯುತ್ತಿದ್ದ ಸಣ್ಣ ವಿಮಾನವೊಂದು ಹಠಾತ್ ನಾಪತ್ತೆಯಾಗಿತ್ತು.'

**ಎರಡು ದಶಕಗಳ ಬಳಿಕ ಸಿಕ್ಕ ತಲೆಬುರುಡೆ:** ಮತ್ತೊಂದು



**20,000ಕ್ಕೂ ಅಧಿಕ ಮಂದಿ ನಿಗೂಢ ನಾಪತ್ತೆ**

- **ಅಪಾರ ವನ್ಯಮೃಗಗಳನ್ನು ಹೊಂದಿರುವ ದಟ್ಟಾರಣ್ಯಕ್ಕೆ ಹೋದವರ ದೇಹವೂ ಸಿಗುವುದಿಲ್ಲ**
- **ಅಮೆರಿಕದ ಇಬ್ಬರು ಪ್ರಮುಖ ರಾಜಕಾರಣಿಗಳ ವಿಮಾನ ನಾಪತ್ತೆಯೊಂದಿಗೆ ಬೆಳಕಿಗೆ ಬಂದಿದ್ದ ಪ್ರದೇಶ**

ಪ್ರಮುಖ ನಾಪತ್ತೆ ಪ್ರಕರಣವೆಂದರೆ ನ್ಯೂಯಾರ್ಕ್‌ನ 25 ವರ್ಷದ ಗ್ಯಾರಿ ಫ್ರಾಂಕ್ ಸೊದರ್ಡೆನ್ ಅವರದು. 1970ರ ದಶಕದ ಮಧ್ಯಭಾಗದಲ್ಲಿ ಅವರು ಬೇಟೆಯಾಡಲು ಅಲಾಸ್ಕಾದ ಅರಣ್ಯಕ್ಕೆ ತೆರಳಿದ್ದರು. ಅಲ್ಲಿಂದ ಅವರು ಮರಳಿ ಬರಲಿಲ್ಲ. ಎರಡು ದಶಕಗಳ ಬಳಿಕ, 1997ರಲ್ಲಿ ಅಲಾಸ್ಕಾದ ಈಶಾನ್ಯ ಭಾಗದ ಪೊರ್ಕುಪೈನ್ ನದಿ ತೀರದಲ್ಲಿ

**ವಿಮಾನದಲ್ಲಿಯೋ, ಹಡಗಿನಲ್ಲಿಯೋ ಅಥವಾ ಬೇರೆ ವಾಹನದಲ್ಲಿಯೋ ಹೋದವರು ಏಕಾಏಕಿ ಮಾಯವಾದರೆ ಹೇಗೆ? ಕೊನೆಗೆ ಅವರು ಪ್ರಯಾಣಿಸುತ್ತಿದ್ದ ವಾಹನವೂ ಪತ್ತೆಯಾಗದೆ, ಅವರೂ ಪತ್ತೆಯಾಗದೆ ಹೋದರೆ ಬರ್ಮುಡಾ ಟ್ರಯಾಂಗಲ್‌ನ ವಿಚಿತ್ರ ಹಾಗೂ ಭಯಾನಕ ಕಥೆಗಳನ್ನು ಓದಿದವರಿಗೆ ಇದು ಹೊಸತು ಎನಿಸದು. ಆದರೆ ಬರ್ಮುಡಾ ಟ್ರಯಾಂಗಲ್ ಮಾತ್ರವಲ್ಲ, ಅಮೆರಿಕದಲ್ಲಿನ ಮತ್ತೊಂದು ಸ್ಥಳವೂ ಇದೇ ರೀತಿ ನಿಗೂಢವಾಗಿ ಜನರನ್ನು ನುಂಗಿ ಹಾಕುತ್ತಿದೆ. ಅದು ಅಲಾಸ್ಕಾ ಟ್ರಯಾಂಗಲ್**

ಮಾನವನ ತಲೆಬುರುಡೆಯೊಂದು ಸಿಕ್ಕಿತ್ತು. ಇದರ ಡಿಎನ್‌ಎ ಸಿಕ್ಕಿದ್ದು 2022ರಲ್ಲಿ. ಇದು ಸೊದರ್ಡೆನ್ ಅವರದು ಎನ್ನುವುದು ದೃಢಪಟ್ಟಿತ್ತು. ಕರಡಿ ದಾಳಿಗೆ ಅವರು ಬಲಿಯಾಗಿರಬಹುದು ಎಂದು ನಂಬಲಾಗಿದೆ.

**ಪರಿಣತರ ವಿವರಣೆ ಏನು?:** ಅಲಾಸ್ಕಾದ ನಿಗೂಢ ನಾಪತ್ತೆ ಘಟನೆಗಳಿಗೆ ಅನೇಕ ವಿಜ್ಞಾನಿಗಳು ತಮ್ಮದೇ ವಿವರಣೆಗಳನ್ನು ನೀಡಿದ್ದಾರೆ. ಅಲಾಸ್ಕಾ ಟ್ರಯಾಂಗಲ್ ನಲ್ಲಿ ಬಹಳ ಅಸಹಜ ಎನಿಸುವ ಆಯಸ್ಕಾಂತೀಯ ಚಟುವಟಿಕೆ ನಡೆಯುತ್ತಿದೆ ಎಂದು ಕೆಲವರು ಹೇಳುತ್ತಿದ್ದಾರೆ. ಅನ್ಯ ಗ್ರಹ ಜೀವಿಗಳಲ್ಲಿ ಅಪಾರ ನಂಬಿಕೆ ಇರಿಸಿಕೊಂಡಿರುವ ಅಮೆರಿಕನ್ನರಲ್ಲಿ ಅನೇಕರು, ಇವು ಏಲಿಯನ್‌ಗಳು ಆಗಾಗ್ಗೆ ಈ ಪ್ರದೇಶಕ್ಕೆ ಭೇಟಿ ನೀಡುತ್ತಿರುವುದರಿಂದ ಉಂಟಾಗುತ್ತಿರುವುದು ಎಂದು ಪ್ರತಿಪಾದಿಸಿದ್ದಾರೆ. ಆದರೆ, ಅಲಾಸ್ಕಾ ತೀರವು ವಿಶಾಲವಾಗಿದ್ದು, ಕಾಡು ಪ್ರಾಣಿಗಳಿಂದ ತುಂಬಿಕೊಂಡಿದೆ. ಇದು ನೈಸರ್ಗಿಕವಾಗಿ ಅಪಾಯಕಾರಿ ಜಾಗ.

ಹೀಗಾಗಿಯೇ ಇಲ್ಲಿಗೆ ಹೋದವರು ನಾಪತ್ತೆಯಾಗುತ್ತಾರೆ ಹಾಗೂ ಮರಳಿ ಸಿಗುವುದಿಲ್ಲ ಎನ್ನುವುದು ಸರಳ ವಾದವಾಗಿದೆ. ಹಾಗಿದ್ದರೂ ಬರ್ಮುಡಾ ಟ್ರಯಾಂಗಲ್‌ನಂತೆ ಯೇ ಅಲಾಸ್ಕಾ ಟ್ರಯಾಂಗಲ್‌ನ ನಿಗೂಢತೆಯೂ ಬಹುಶಃ ಬಯಲಾಗುವುದು ಸಾಧ್ಯವಿಲ್ಲ. ಇದು ಮನುಷ್ಯರು 'ಸ್ಪರ್ಶಿಸದ ಅರಣ್ಯ', 'ಕಡಿದಾದ ಬೆಟ್ಟಗುಡ್ಡಗಳ ಜಾಗ, ಭಯಾನಕವಾದ ಶೀತ ವಾತಾವರಣದ ಪ್ರದೇಶ. ಹಾಗೆಯೇ ಭಾರಿ ಸಂಖ್ಯೆಯಲ್ಲಿ ಕರಡಿಗಳು ವಾಸವಾಗಿವೆ ಎಂದು ಐಎಫ್‌ಎಲ್ ಸೈನ್ಸ್ ವರದಿ ಹೇಳಿದೆ.

### ರಾಜಕೀಯ ಸಂಚಿನ ಅನುಮಾನ

**ಅಮೆರಿಕದ ಹೌಸ್ ಮೆಜಾರಿಟಿ ನಾಯಕ ಥಾಮಸ್ ಹೇಲ್ ಬಾಗ್ಸ್ ಸೀನಿಯರ್ ಮತ್ತು ಅಲಾಸ್ಕಾದ ಕಾಂಗ್ರೆಸ್ ಸಂಸದ ನಿಕ್ ಬೆಗಿಚ್ ಅವರು ಆಂಕೊರೇಜ್‌ನಿಂದ ಜುನಿಯುಗೆ ಹಗುರ ವಿಮಾನದಲ್ಲಿ ಪ್ರಯಾಣಿಸುತ್ತಿದ್ದರು. ಅವರ ಜತೆಗೆ ಬೆಗಿಚ್ ಅವರ ಸಹಾಯಕ ರಸೆಲ್ ಬ್ರೌನ್ ಮತ್ತು ಪೈಲಟ್ ಡಾನ್ ಜೋನ್ಸ್ ಅವರು ವಿಮಾನದಲ್ಲಿದ್ದರು. ನಾಪತ್ತೆಯಾದ ನಾಲ್ವರನ್ನು ಪತ್ತೆ ಮಾಡಲು ವ್ಯಾಪಕ ಶೋಧ ಕಾರ್ಯ ನಡೆಸಲಾಯಿತು. ಆದರೆ ಅವರ ಮೃತದೇಹಗಳಾಗಲಿ, ವಿಮಾನವಾಗಲಿ ಎಂದಿಗೂ ಸಿಗಲೇ ಇಲ್ಲ. ಬಾಗ್ಸ್ ಅವರು ವಾರೆನ್ ಆಯೋಗದ (ಮಾಜಿ ಅಧ್ಯಕ್ಷ ಜಾನ್ ಎಫ್ ಕೆನಡಿ ಹತ್ಯೆ ಪ್ರಕರಣದ ತನಿಖೆಗೆ ರಚನೆಯಾದ ಅಧಿಕೃತ ಆಯೋಗ) ಸದಸ್ಯರಾಗಿದ್ದರಿಂದ ಮುಖ್ಯವಾಗಿ ಈ ಘಟನೆಯು ಅನೇಕ ಸಂಚಿನ ಅನುಮಾನಗಳನ್ನು ಹುಟ್ಟುಹಾಕಿತ್ತು. ಏಕೆಂದರೆ ಬಾಗ್ಸ್ ಅವರು ಆಯೋಗವು ಪ್ರತಿಪಾದಿಸಿದ ಅನೇಕ ಸಂಗತಿಗಳನ್ನು ಬಾಗ್ಸ್ ಒಪ್ಪಿರಲಿಲ್ಲ ಎಂದು ಇಂಡಿ 100 ವರದಿ ಹೇಳಿದೆ.**


ಉದಯ UV ವಾಹಿನಿ

ದೇಶ/ವಿದೇಶ

ಶುಕ್ರವಾರ 06 ಸೆಪ್ಟೆಂಬರ್ 2024




## ಮಿನಿ ನ್ಯೂಸ್

### ಕುಡಿದ ನಶೆಯಲ್ಲಿ ತಾಯಿ ಮೇಲೆ ಅತ್ಯಾಚಾರವೆಸಗಿದ ಪಾಪಿಪುತ್ರ

**ಜೈಪುರ:** ಕುಡಿತದ ಮತ್ತಿನಲ್ಲಿದ್ದ ಮಗ ತನ್ನ ತಾಯಿಯ ಮೇಲೆ ಅತ್ಯಾಚಾರ ನಡೆಸಿರುವ ಹೀನ ಕೃತ್ಯ ರಾಜಸ್ಥಾನದಲ್ಲಿ ನಡೆದಿದೆ. ದೂರದಲ್ಲಿರುವ ತನ್ನ ಸಹೋದರ ಮನೆಗೆ ಪುತ್ರನೊಂದಿಗೆ ತೆರಳಿದ್ದ 52 ವರ್ಷದ ಮಹಿಳೆ ಅಲ್ಲಿಂದ ವಾಪಸ್ಸಾಗುತ್ತಿದ್ದಾಗ ನಿರ್ಜನ ಪ್ರದೇಶದಲ್ಲಿ ಕುಡಿತದ ಮತ್ತಿನಲ್ಲಿದ್ದ ಮಗನೆ ಅತ್ಯಾಚಾರ ನಡೆಸಿದ್ದಾನೆ ಎಂದು ಪೊಲೀಸರಿಗೆ ದೂರು ನೀಡಿದ್ದಾರೆ.

ಮತ್ತೊಬ್ಬ ಮಗ ಹಾಗೂ ಮಗಳೊಂದಿಗೆ ದಾಬಿ ಪೊಲೀಸ್ ಠಾಣೆಗೆ ತೆರಳಿ ಕಾಮುಕ ಮಗನ ವಿರುದ್ಧ ಆ ತಾಯಿ ದೂರು ನೀಡಿದ್ದಾರೆ. ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಪ್ರಾಥಮಿಕ ವಿಚಾರಣೆ ವೇಳೆ ಆರೋಪಿ ತನ್ನ ತಪ್ಪನ್ನು ಒಪ್ಪಿಕೊಂಡಿದ್ದಾನೆ. ಆತನನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ ಜೈಲಿಗೆ ಕಳುಹಿಸಲಾಗಿದೆ. ನಾವು ಆರೋಪಿಯನ್ನು ಬಂಧಿಸಿದ್ದೇವೆ ಮತ್ತು ಹೆಚ್ಚಿನ ತನಿಖೆ ನಡೆಯುತ್ತಿದೆ. ಆರೋಪಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಆತನನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿಎಸ್ಪಿ) ತರುಂಕಂತ್ ಸೋಮಾನಿ ತಿಳಿಸಿದ್ದಾರೆ.

### ಮೊಮ್ಮಗನಿಂದಲೇ ಕೊಲೆಯಾದ ನಿವೃತ್ತ ಯೋಧ

**ನವದೆಹಲಿ:** ಆಸ್ತಿ ವ್ಯಾಮೋಹದಿಂದ ಮೊಮಗನೆ ನಿವೃತ ಸೈನಿಕರಾಗಿದ್ದ ತಾತನನ್ನು ಕೊಲೆ ಮಾಡಿರುವ ಘಟನೆ ದೆಹಲಿಯ ಆದರ್ಶನ್ ಗರದಲ್ಲಿ ನಡೆದಿದೆ.ತಾತ ಭೋಜರಾಜ್ ಅವರನ್ನು ಕೊಂದ ಪಾಪಿ ಮೊಮಗನ್ನು 35 ವರ್ಷದ ಪ್ರದೀಪ್ ಎಂದು ಗುರುತಿಸಲಾಗಿದೆ. ಆರೋಪಿ ತಲೆಮರೆಸಿಕೊಂಡಿದ್ದು ಆತನ ಬಂಧನಕ್ಕಾಗಿ ಪೊಲೀಸರು ಕಾರ್ಯಾಚರಣೆ ನಡೆಸುತ್ತಿದ್ದಾರೆ. 1985 ರಲ್ಲಿ ಭಾರತೀಯ ಸೇನೆಯಿಂದ ನಿವೃತ್ತರಾಗಿದ್ದ ಮಾಜಿ ಹವಾಲ್ದಾರ್ ಭೋಜರಾಜ್ ಅವರು ತಮ ಪಿಂಚಣಿ ಹಣವನ್ನು ತನ್ನ ಇಬ್ಬರು ಪುತ್ರರಾದ ಜಯವೀರ್ ಮತ್ತು ಸುರೇಶ್ ಅವರಿಗೆ ಕೊಡುತ್ತಿದ್ದರು.

ಅವರು ಇಬ್ಬರು ಪುತ್ರರಿಗೂ ಮನೆಗಳನ್ನು ಕಟ್ಟಿಸಿಕೊಟ್ಟಿದ್ದರು ಆದರೆ ಆಜಾದ್‌ಪುರ ಗ್ರಾಮದಲ್ಲಿ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಪಿಂಚಣಿ ಹಣ ಹಂಚಿಕೆ ವಿಚಾರವಾಗಿ ಸುರೇಶ್ ಅವರ ಪುತ್ರ ಪ್ರದೀಪ್ ಭೋಜರಾಜ್ ಜತೆ ವಾಗ್ವಾದ ನಡೆಸಿದಾಗ ಈ ಘಟನೆ ನಡೆದಿದೆ. ಜಗಳ ವಿಕೋಪಕ್ಕೆ ಹೋಗಿದ್ದು, ಪ್ರದೀಪ್ ಭೋಜರಾಜ್ ಅವರನ್ನು ದೊಣ್ಣೆಯಿಂದ ಪದೇ ಪದೇ ಥಳಿಸಿದ್ದ ಎನ್ನಲಾಗಿದೆ. ಭೋಜರಾಜ್ ತೀವ್ರವಾಗಿ ಗಾಯಗೊಂಡಿದ್ದು ಎಲ್‌ಎನ್‌ಜೆಪಿ ಆಸ್ಪತ್ರೆಗೆ ದಾಖಲಿಸಲಾಯಿತು, ಅಲ್ಲಿ ಚಿಕಿತ್ಸೆ ವೇಳೆ ಅವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕೊಲೆ ಪ್ರಕರಣ ದಾಖಲಾಗಿದ್ದು, ಪ್ರದೀಪ್‌ನನ್ನು ಪತ್ತೆ ಹಚ್ಚಿ ಬಂಧಿಸುವ ಪ್ರಯತ್ನ ನಡೆಯುತ್ತಿದೆ.

### ಜಾರ್ಜಿಯಾ: ವಿದ್ಯಾರ್ಥಿಯಿಂದ ಗುಂಡಿನ ದಾಳಿ; ನಾಲ್ವರು ಸಾವು

**ಜಾರ್ಜಿಯಾ:** ಅಮೆರಿಕದ ಜಾರ್ಜಿಯಾದ ಹೈಸ್ಕೂಲ್‌ನಲ್ಲಿ ವಿದ್ಯಾರ್ಥಿಯೊಬ್ಬ ಗುಂಡಿನ ದಾಳಿ ನಡೆಸಿದ್ದು ನಾಲ್ವರು ಮೃತಪಟ್ಟಿದ್ದು, 9 ಮಂದಿ ಗಾಯಗೊಂಡಿದ್ದಾರೆ. ಗುಂಡು ಹಾರಿಸಿದ ವಿದ್ಯಾರ್ಥಿಯನ್ನು ಜಾರ್ಜಿಯಾದ ವಿಂಡರ್‌ನಲ್ಲಿರುವ ಅಪಾಲಾಚಿ ಹೈಸ್ಕೂಲ್‌ನ ವಿದ್ಯಾರ್ಥಿ 14 ವರ್ಷದ ಕೋಲ್ಟ್ ಕ್ರೇ ಎಂದು ಗುರುತಿಸಲಾಗಿದೆ. ಆತನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರಲ್ಲಿ ಇಬ್ಬರು ವಿದ್ಯಾರ್ಥಿಗಳು ಮತ್ತು ಇಬ್ಬರು ಶಿಕ್ಷಕರು ಸೇರಿದ್ದಾರೆ. ಈ ಕುರಿತು ತನಿಖೆ ನಡೆಸುತ್ತಿರುವ ತನಿಖಾಧಿಕಾರಿಗಳು, ವಿದ್ಯಾರ್ಥಿಯೊಬ್ಬ ಗುಂಡಿನ ದಾಳಿ ನಡೆಸಲು ಪ್ರಚೋದನೆ ನೀಡಿದ್ದು ಯಾರು ಎನ್ನುವುದನ್ನು ಪತ್ತೆ ಮಾಡುವುದಾಗಿ ಹೇಳಿದ್ದಾರೆ ಎಂದು ಈ ಕುರಿತು ಸಿಎನ್‌ಎನ್ ವರದಿ ಮಾಡಿದೆ.

### ಸೇವೆ ಗುಣಮಟ್ಟ ಸುಧಾರಣೆಗೆ ಎಐ ಬಳಕೆ: ಸಿಎಂ ರೇವಂತ ರೆಡ್ಡಿ

**ಹೈದರಾಬಾದ್:** ಆಡಳಿತ ವಿವಿಧ ಹಂತಗಳಲ್ಲಿ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಅಳವಡಿಕೆ ಮೂಲಕ ರಾಜ್ಯದ ಒಂದು ಕೋಟಿಗೂ ಅಧಿಕ ಜನರಿಗೆ ಉತ್ತಮ ಸೇವೆ ಒದಗಿಸಲು, ಸರ್ಕಾರಿ ನೌಕರರ ಉತ್ಪಾದಕತೆ ಹೆಚ್ಚಿಸಲು ತೆಲಂಗಾಣ ಸರ್ಕಾರ ಮುಂದಾಗಿದೆ. ಕೃತಕ ಬುದ್ಧಿಮತ್ತೆ ಅಳವಡಿಕೆ ಮೂಲಕ ಸೇವೆಯ ಗುಣಮಟ್ಟ ಹೆಚ್ಚಿಸುವುದಕ್ಕಾಗಿ ಆರು ಮುಖ್ಯ ಕ್ಷೇತ್ರಗಳನ್ನು ಸಹ ಸರ್ಕಾರ ಗುರುತಿಸಿದೆ. ನಗರದಲ್ಲಿ ನಡೆಯುತ್ತಿರುವ ಜಾಗತಿಕ ಎಐ ಶೃಂಗಸಭೆಯಲ್ಲಿ, ಎಐ ಅಳವಡಿಕೆಗೆ ಸಂಬಂಧಿಸಿದ ವರದಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಮುಖ್ಯಮಂತ್ರಿ ಎ.ರೇವಂತ ರೆಡ್ಡಿ, ತಂತ್ರಜ್ಞಾನ ಮತ್ತು ನಾವೀನ್ಯವು ಬದಲಾಯಿಸದಂತೆ ಸಮಾಜ ಮತ್ತು ಜನರ ಜೀವನ ಗುಣಮಟ್ಟವನ್ನು ಬೇರೆ ಯಾವ ಅಂಶವೂ ಬದಲಿಸುವುದಿಲ್ಲ ಎಂದರು. ಸಿನಿಮಾ 'ಆಡಳಿತದಲ್ಲಿ ಎಐ ಅಳವಡಿಸಿಕೊಳ್ಳುವ ಮೂಲಕ ಒಂದು ಕೋಟಿಗೂ ಅಧಿಕ ಜನರಿಗೆ ಸುಧಾರಿತ ಸೇವೆ ಒದಗಿಸಲು ಉದ್ದೇಶಿಸಲಾಗಿದೆ. ಸರ್ಕಾರಿ ನೌಕರರ ಉತ್ಪಾದಕತೆಯನ್ನು ಮುಂದಿನ ಮೂರು ವರ್ಷಗಳಲ್ಲಿ ಶೇ 20ರಷ್ಟು ಹೆಚ್ಚಿಸುವ ಗುರಿ ಹೊಂದಲಾಗಿದೆ' ಎಂದರು.

### ಆರ್ಥಿಕ ವಿಷಯಗಳ ಕುರಿತ ಚರ್ಚೆ ಸೆ. 12ಕ್ಕೆ ಐದು ರಾಜ್ಯಗಳ ಸಮಾವೇಶ

**ತಿರುವನಂತಪುರ:** ಆರ್ಥಿಕ ವಿಷಯಗಳ ಕುರಿತು ಚರ್ಚಿಸಲು, ವಿರೋಧ ಪಕ್ಷಗಳು ಆಡಳಿತದಲ್ಲಿರುವ ಐದು ರಾಜ್ಯಗಳ ಪ್ರತಿನಿಧಿಗಳ ಸಮಾವೇಶವನ್ನು ಕೇರಳ ಸರ್ಕಾರ ಆಯೋಜಿಸಿದೆ. 16ನೇ ಹಣಕಾಸು ಆಯೋಗದ ಮುಂದೆ ಮಂಡಿಸಬೇಕಿರುವ ಆರ್ಥಿಕ ಅಗತ್ಯಗಳ ಕುರಿತು ಇಲ್ಲಿ ಚರ್ಚಿಸಲಾಗುವುದು ಎಂದು ಕೇರಳದ ಹಣಕಾಸು ಸಚಿವರಾದ ಕೆ.ಎನ್.ಬಾಲಗೋಪಾಲ್ ಗುರುವಾರ ತಿಳಿಸಿದರು. ಎಡರಂಗದ ಆಡಳಿತವಿರುವ ಕೇರಳ, ಡಿಎಂಕೆ ಆಡಳಿತವಿರುವ ತಮಿಳುನಾಡು, ಕಾಂಗ್ರೆಸ್ ಆಡಳಿತವಿರುವ ಕರ್ನಾಟಕ ಮತ್ತು ತೆಲಂಗಾಣ ಹಾಗೂ ಎಎಪಿ ಆಡಳಿತವಿರುವ ಪಂಜಾಬ್ ರಾಜ್ಯ ಸರ್ಕಾರಗಳ ಪ್ರತಿನಿಧಿಗಳು ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ 12ರಂದು ನಡೆಯುವ ಸಮಾವೇಶವನ್ನು ಕೇರಳ ಸಿಎಂ ಪಿಣರಾಯಿ ವಿಜಯನ್ ಉದ್ಘಾಟಿಸುವರು.

ದೇಶದಲ್ಲಿ ಕೇಂದ್ರ ಮತ್ತು ರಾಜ್ಯಗಳ ನಡುವಿನ ಹಣಕಾಸು ಹಂಚಿಕೆ, ಸಹಕಾರವನ್ನು ರಕ್ಷಿಸುವ ಮತ್ತು ಬಲಪಡಿಸುವ ಉದ್ದೇಶವನ್ನು ಈ ಸಮಾವೇಶ ಹೊಂದಿದೆ ಎಂದು ಬಾಲಗೋಪಾಲ್ ಹೇಳಿದರು.

ತೆಲಂಗಾಣದ ಉಪ ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವರಾದ ಭಟ್ಟಿ ವಿಕ್ರಮಾರ್ಕ ಮಲ್ಲು, ಕರ್ನಾಟದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಪಂಜಾಬ್‌ನ ಹಣಕಾಸು ಸಚಿವರಾದ ಹರ್‌ಪಾಲ್ ಸಿಂಗ್ ಚೀಮಾ, ತಮಿಳುನಾಡಿನ ಹಣಕಾಸು ಸಚಿವರಾದ ತಂಗಂ ತೆನ್ನರಸು, ಕೇರಳ ವಿಧಾನಸಭೆಯ ವಿರೋಧ ಪಕ್ಷದ ನಾಯಕ ವಿ.ಡಿ.ಸತೀಶನ್ ಅವರು ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.



# ಹೆಣ್ಣು ಮಗುವಿಗೆ ಮಿಲನಾ ಜನ್ಮ

ಲವ್‌ಮಾಕ್ಟೇಲ್ ಸಿನಿಮಾ ಖ್ಯಾತಿಯ ಮಿಲನಾ ನಾಗರಾಜ್ ಹೆಣ್ಣು ಮಗುವಿಗೆ ಜನ್ಮ ನೀಡಿದ್ದು, ಈ ಸಂತಸದ ಸುದ್ದಿಯನ್ನು ಡಾರ್ಲಿಂಗ್ ಕೃಷ್ಣ ಅವರು ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್‌ನ್ನು ಹಂಚಿಕೊಂಡಿದ್ದಾರೆ.


ಮೊದಲ ಮಗುವನ್ನು ಪಡೆದುಕೊಂಡು ಡಾರ್ಲಿಂಗ್ ಕೃಷ್ಣ ಕುಟುಂಬ ಸಂಭ್ರಮದಲ್ಲಿದೆ. ನಾರ್ಮಲ್ ಡೆಲಿವರಿ ಮೂಲಕ ಮಿಲನಾ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾರೆ. ಮಗಳು ಬಂದಿರುವುದು ಬಹಳ ಖುಷಿ ನೀಡಿದೆ. ತಾಯಿ ಮತ್ತು ಮಗಳು ಆರೋಗ್ಯವಾಗಿದ್ದಾರೆ. ಈ ಜರ್ನಿಯಲ್ಲಿ ಮಿಲನಾ ನಾಗರಾಜ್ ಅನುಭವಿಸಿದ ನೋವು, ಮಾಡಿದ ತ್ಯಾಗ, ತೋರಿದ ಧೈರ್ಯದ ಬಗ್ಗೆ ನನಗೆ ಹೆಮ್ಮೆ ಇದೆ. ಈ ಜರ್ನಿಯಲ್ಲಿ ಸಾಗುವ ಎಲ್ಲ ತಾಯಂದಿರಿಗೆ ನನ್ನ ಸೆಲ್ಯೂಟ್. ಇದನ್ನು ನೋಡಿ ನನಗೆ ಮಹಿಳೆಯರ ಮೇಲೆ ಇದ್ದ ಗೌರವ ದುಪ್ಪಟ್ಟಾಗಿದೆ. ಇಂದು ಮಗಳು ಜನಿಸಿರೋದು ನನಗೆ ಹೆಮ್ಮೆಯಿದೆ. ನಾನೊಬ್ಬ ಅದೃಷ್ಟವಂತ ತಂದೆ ಎಂದು ಡಾರ್ಲಿಂಗ್ ಕೃಷ್ಣ ಪೋಸ್ಟ್ ಮಾಡಿ ಸಂತಸ ಹಂಚಿಕೊಂಡಿದ್ದಾರೆ.



ಶ್ರೀಲೀಲಾ ಬದಲು ಕೃತಿಗೆ ಚಿತ್ರತಂಡ ಮಣೆ ಹಾಕಿದೆ ಎನ್ನಲಾಗಿದೆ. ಡೇವಿಡ್ ಧವನ್ ನಿರ್ದೇಶನದ ಸಿನಿಮಾಗೆ ಕೃತಿ ನಾಯಕಿನಾ ಎಂಬ ಸುದ್ದಿ ಚಿತ್ರತಂಡದ ಕಡೆಯಿಂದ ಸ್ಪಷ್ಟನೆ ಸಿಗುವವರೆಗೂ ಕಾಯಬೇಕಿದೆ. ಇನ್ನೂ 'ಉಪ್ಪೇನ' ಬೆಡಗಿಗೆ ಹಿಂದಿ ಸಿನಿಮಾ ಹೊಸದಲ್ಲ. ಈ ಹಿಂದೆ ಹೃತಿಕ್ ರೋಷನ್ ನಟನೆಯ 'ಸೂಪರ್ 30 ಸಿನಿಮಾದಲ್ಲಿ ಸಣ್ಣ ಪಾತ್ರದಲ್ಲಿ ನಟಿ ಕಾಣಿಸಿಕೊಂಡಿದ್ದರು.

# ಕೃತಿ ಶೆಟ್ಟಿಗೆ ಬಿಗ್ ಆಫರ್

## ಬಾಲಿವುಡ್‌ನತ್ತ 'ಉಪ್ಪೇನ' ನಟಿ



ಸೌತ್ ಸಿನಿಮಾಗಳಲ್ಲಿ ಬ್ಯುಸಿ

ಕುಡ್ಲದ ಸುಂದರಿ ಕೃತಿ ಶೆಟ್ಟಿ ತೆಲುಗು, ತಮಿಳು, ಮಲಯಾಳಂ ಬಳಿಕ ಬಾಲಿವುಡ್‌ನತ್ತ ಮುಖ ಮಾಡಿದ್ದಾರೆ. ಸ್ಟಾರ್ ನಟ ವರುಣ್ ಧವನ್‌ಗೆ ಕೃತಿ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ.

'ಉಪ್ಪೇನ' ಸಿನಿಮಾ ಮೂಲಕ ಸಕ್ಸಸ್ ಕಂಡಿದ್ದ ನಟಿ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ವರುಣ್ ಧವನ್ ಹೊಸ ಚಿತ್ರದಲ್ಲಿ ಕೃತಿ ನಾಯಕಿ ಎಂಬ ಸುದ್ದಿ ಬಿಟೌನ್‌ನಲ್ಲಿ ಹರಿದಾಡುತ್ತಿದೆ. ಅದಕ್ಕೆ ಪೂರಕವೆಂಬಂತೆ ಮುಂಬೈನಲ್ಲಿ ನಟಿ ಕಾಣಿಸಿಕೊಂಡಿರೋದು ವರುಣ್ ಜೊತೆಗಿನ ಸಿನಿಮಾ ಸುದ್ದಿಗೆ ಪುಷ್ಠಿ ನೀಡಿದಂತೆ ಆಗಿದೆ. ಶ್ರೀಲೀಲಾ ಬದಲು ಕೃತಿಗೆ ಚಿತ್ರತಂಡ ಮಣೆ ಹಾಕಿದೆ ಎನ್ನಲಾಗಿದೆ. ಡೇವಿಡ್ ಧವನ್ ನಿರ್ದೇಶನದ ಸಿನಿಮಾಗೆ ಕೃತಿ ನಾಯಕಿನಾ ಎಂಬ ಸುದ್ದಿ ಚಿತ್ರತಂಡದ ಕಡೆಯಿಂದ ಸ್ಪಷ್ಟನೆ ಸಿಗುವವರೆಗೂ ಕಾಯಬೇಕಿದೆ. ಇನ್ನೂ 'ಉಪ್ಪೇನ' ಬೆಡಗಿಗೆ ಹಿಂದಿ ಸಿನಿಮಾ ಹೊಸದಲ್ಲ. ಈ ಹಿಂದೆ ಹೃತಿಕ್ ರೋಷನ್ ನಟನೆಯ 'ಸೂಪರ್ 30' ಸಿನಿಮಾದಲ್ಲಿ ಸಣ್ಣ ಪಾತ್ರದಲ್ಲಿ ನಟಿ ಕಾಣಿಸಿಕೊಂಡಿದ್ದರು. ಆದಾದ ನಂತರ ಪೂರ್ಣ ಪ್ರಮಾಣದ ನಾಯಕಿಯಾಗಿ 'ಉಪ್ಪೇನ' ಚಿತ್ರದಲ್ಲಿ ಕೃತಿ ಲಾಂಚ್ ಆದರು.

# ಬಿಗ್‌ಬಾಸ್‌ಗೆ ವಿಜಯ್ ಸೇತುಪತಿ ಹೋಸ್ಟ್



ತೆಲುಗಿನ ಬಿಗ್ ಬಾಸ್ ಸೀಸನ್ 8ಕ್ಕೆ ಈಗಾಗಲೇ ಅದ್ದೂರಿಯಾಗಿ ಚಾಲನೆ ಸಿಕ್ಕಿದೆ. ಇತ್ತ ತಮಿಳು ಬಿಗ್ ಬಾಸ್ ಆರಂಭಕ್ಕೆ ಕೌಂಟ್‌ಡೌನ್ ಶುರುವಾಗಿದೆ. ಕಮಲ್ ಹಾಸನ್ ಬದಲು ಹೊಸ ನಿರೂಪಕನಾಗಿ ವಿಜಯ್ ಸೇತುಪತಿ ಎಂಟ್ರಿ ಕೊಟ್ಟಿರುವ ಪ್ರೋಮೋ ರಿಲೀಸ್ ಆಗಿದೆ. ಕಮಲ್ ಹಾಸನ್ ಬಿಗ್ ಬಾಸ್‌ಗೆ ಗುಡ್ ಬೈ ಹೇಳಿದ ಬಳಿಕ ಯಾರು ನಿರೂಪಕರಾಗುತ್ತಾರೆ ಎಂಬ ಕುತೂಹಲಕ್ಕೆ ತೆರೆಬಿದ್ದಿದೆ. ದುಬಾರಿ ಸಂಭಾವನೆ ಪಡೆದು ವಿಜಯ್ ಸೇತುಪತಿ ಬಿಗ್ ಬಾಸ್‌ಗೆ ನಿರೂಪಕನಾಗಿ ಎಂಟ್ರಿ ಕೊಟ್ಟಿದ್ದಾರೆ. ವಾಹಿನಿ ರಿಲೀಸ್ ಮಾಡಿರುವ ಪ್ರೋಮೋದಲ್ಲಿ ಖಡಕ್ ಆಗಿ ನಟ ಕಾಣಿಸಿಕೊಂಡಿದ್ದಾರೆ. ಈ ಪ್ರೋಮೋ ನೋಡಿರುವ ಫ್ಯಾನ್ಸ್‌ಗೆ ಕಾರ್ಯಕ್ರಮದ ಬಗ್ಗೆ ನಿರೀಕ್ಷೆ ಹೆಚ್ಚಿಸಿದೆ.

ಇತ್ತೀಚೆಗೆ 7 ವರ್ಷಗಳ ಹಿಂದೆ ಶುರುವಾದ ನನ್ನ ಬಿಗ್ ಬಾಸ್ ಪಯಣಕ್ಕೆ ಬ್ರೇಕ್ ನೀಡಲು ನಿರ್ಧರಿಸಿದ್ದೇನೆ ಎಂದು ಭಾರವಾದ ಹೃದಯದಿಂದ ನಿಮಗೆ ತಿಳಿಸುತ್ತಿದ್ದೇನೆ.

ಈ ಮೊದಲೇ ಒಪ್ಪಿಕೊಂಡ ಸಿನಿಮಾಗಳ ಕೆಲಸದ ಕಾರಣದಿಂದ ನನಗೆ ಈ ಬಾರಿಯ ಬಿಗ್ ಬಾಸ್ ಶೋ ನಿರೂಪಣೆ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಕಮಲ್ ಹಾಸನ್ ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದರು.

'ಬಿಗ್ ಬಾಸ್' ಕಾರ್ಯಕ್ರಮದ ಮೂಲಕ ನಿಮ್ಮ ಮನ ಮತ್ತು ಮನೆ ತಲುಪಿದ್ದೇನೆ. ಅಗಾಧ ಪ್ರೀತಿ ಮತ್ತು ಕಾಳಜಿಯನ್ನು ತೋರಿಸಿದ್ದೀರಿ. ನಿಮ್ಮ ಬೆಂಬಲದಿಂದಾಗಿ ಬಿಗ್ ಬಾಸ್ ತಮಿಳು ರಿಯಾಲಿಟಿ ಶೋ ನನ್ನ ಪಾಲಿಗೆ ಬೆಸ್ಟ್ ಆಯಿತು. ಕಲಿಕೆಯ ಅನುಭವ ನೀಡಿದ ಈ ಶೋಗೆ ನಾನು ಋಣಿಯಾಗಿದ್ದೇನೆ. ಸ್ಪರ್ಧಿಗಳಿಂದ ಹಿಡಿದು ಪ್ರತಿಯೊಬ್ಬರಿಗೂ ನನ್ನ ಧನ್ಯವಾದಗಳು ಎಂದು ಕಮಲ್ ಹಾಸನ್ ಭಾವುಕವಾಗಿ ಬರೆದುಕೊಂಡಿದ್ದರು.



ಸಿನಿ ವಾಹಿನಿ

# ಎಷ್ಟು ಜನರ ಜೊತೆ ಮಲಗಿದ್ದೀ?

ಅಸಭ್ಯ ಪ್ರಶ್ನೆಗೆ ಉರ್ಫಿ ಶಾಕ್

ಸದಾ ವಿಚಿತ್ರ ಉಡುಗೆಗಳನ್ನು ಧರಿಸುವ ಮೂಲಕ ಸದ್ದು ಮಾಡುವ ಬಾಲಿವುಡ್ ಬ್ಯೂಟಿ ಉರ್ಫಿ ಜಾವೇದ್ ಮತ್ತೆ ಸುದ್ದಿಯಲ್ಲಿದ್ದಾರೆ. ಬಾಲಕನೊಬ್ಬ ಅಶ್ಲೀಲ ಪ್ರಶ್ನೆ ಕೇಳಿದ್ದರ ಬಗ್ಗೆ ನಟಿ ಬೇಸರ ವ್ಯಕ್ತಪಡಿಸಿದ್ದಾರೆ. ತನ್ನ ತಾಯಿಯ ಮುಂದೆಯೇ ಎಷ್ಟು ಜನರ ಜೊತೆ ಮಲಗಿದ್ದೀ ಎಂದು ಕೇಳಿದ ಬಾಲಕನ ಅಸಭ್ಯ ಮಾತಿಗೆ ಉರ್ಫಿ ಶಾಕ್ ಆಗಿದ್ದಾರೆ. ನಿನ್ನೆ ನನ್ನ ಕುಟುಂಬದವರ ಮುಂದೆ ತುಂಬಾ ಕಿರಿಕಿರಿ ಆಗುವಂತಹ ಘಟನೆ ನಡೆಯಿತು. ಪಾಪರಾಜಿಗಳು ನನ್ನ ಫೋಟೋ ತೆಗೆಯುತ್ತಿರುವಾಗ ಹುಡುಗರ ಗುಂಪೊಂದು ನನ್ನ ನೋಡಿ ಕಾಮೆಂಟ್ ಹೊಡೆದರು. ಆಗ ಎಲ್ಲರ ಎದುರಿನಲ್ಲೂ ನೀನು ಎಷ್ಟು ಜನರ ಜೊತೆ ಮಲಗಿದ್ದೀಯಾ? ಅಂತ ಬಾಲಕನೊಬ್ಬ ಕೇಳಿದ್ದಾನೆ. ಆ ಹುಡುಗನಿಗೆ ಅಂದಾಜು 15 ವರ್ಷ ಇರಬಹುದು. ನನ್ನ ಕುಟುಂಬ ಮತ್ತು ತಾಯಿ ಎದುರಿನಲ್ಲೇ ಅವನು ಹಾಗೆ ಕೇಳಿದ ಎಂದು ಉರ್ಫಿ ಸೋಶಿಯಲ್ ಮೀಡಿಯಾದಲ್ಲಿ ನಡೆದ ಘಟನೆಯ ಬಗ್ಗೆ ವಿವರಿಸಿದ್ದಾರೆ. ಆ ಪ್ರಶ್ನೆ ಕೇಳಿಸಿಕೊಂಡು ನನಗೆ ನನ್ನ ಕುಟುಂಬದ ಮುಂದೆ ತುಂಬಾ ಮುಜುಗರ ಆಯಿತು. ಇದರಿಂದ ನನ್ನ ತಾಯಿಗೆ ಬೇಸರವಾಯಿತು. ಪಾಪರಾಜಿಗಳ ಎದುರಿನಲ್ಲೇ ನಾನು ಆ ಹುಡುಗನಿಗೆ ಬಾರಿಸಬೇಕು ಎಂದುಕೊಂಡೆ ಎಂದಿದ್ದಾರೆ ನಟಿ.

# ಗಂಡು ಮಗುವಿಗೆ ಜನ್ಮ ನೀಡಿದ ಪ್ರಣೀತಾ






ಸ್ಯಾಂಡಲ್‌ವುಡ್ ನಟಿ ಪ್ರಣೀತಾ ಸುಭಾಷ್ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. ಎರಡನೇ ಮಗುವನ್ನು ಬರಮಾಡಿಕೊಂಡಿರುವ ಖುಷಿಯಲ್ಲಿದ್ದಾರೆ ಪ್ರಣೀತಾ ಸುಭಾಷ್ ದಂಪತಿ.

ತುಂಬಾ ಖುಷಿಯಾಗುತ್ತಿದೆ, ಪುಟ್ಟ ಮಗುವನ್ನು ನೋಡಿ ಮಗಳು ಆರ್ನಾ ಆಕಾಶದಲ್ಲಿ ತೇಲುತ್ತಿದ್ದಾಳೆ. ಆಕೆ ತಮ್ಮನನ್ನು ಬೇಬಿ ಎಂದು ಕರೆಯುತ್ತಿದ್ದಾಳೆ ಎಂದು ಪ್ರಣೀತಾ ಸಂತಸ ವ್ಯಕ್ತಪಡಿಸಿದ್ದಾರೆ

ತಾಯಿ ಮತ್ತು ಮಗು ಇಬ್ಬರೂ ಆರೋಗ್ಯವಾಗಿದ್ದಾರೆ. ಅಂದಹಾಗೆ, 2021ರಲ್ಲಿ ಉದ್ಯಮಿ ನಿತಿನ್ ರಾಜು ಅವರನ್ನು ಪ್ರಣೀತಾ ಮದುವೆಯಾದರು. 2022ರಲ್ಲಿ ಹೆಣ್ಣು ಮಗುವಿಗೆ ನಟಿ ಜನ್ಮ ನೀಡಿದರು. ಆ ಮಗುವಿಗೆ ಆರ್ನಾ ಎಂಬ ಮುದ್ದಾದ ಹೆಸರಿಟ್ಟಿದ್ದಾರೆ. ಈಗ ಮಗಳಿಗೆ 2 ವರ್ಷ ತುಂಬಿದೆ.

# ಐಪಿಎಲ್ ಟೀಮ್‌ಗಳ ವಿಶ್ವ ದಾಖಲೆ ಸರಿಗಟ್ಟಿದ ಸಿಪಿಎಲ್

## ಇಂತಹದೊಂದು ವಿಶ್ವ ದಾಖಲೆಯನ್ನು ನಿರ್ಮಿಸಿದ್ದು ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ಕಿಂಗ್ಸ್



ಬರೋಬ್ಬರಿ 42 ಸಿಕ್ಸ್

ಟಿ20 ಕ್ರಿಕೆಟ್ ಪಂದ್ಯವೊಂದರಲ್ಲಿ ಮೂಡಿಬಂದ ಗರಿಷ್ಠ ಸಿಕ್ಸ್‌ಗಳ ಸಂಖ್ಯೆ 42. ಇಂತಹದೊಂದು ವಿಶ್ವ ದಾಖಲೆಯನ್ನು ನಿರ್ಮಿಸಿದ್ದು ಐಪಿಎಲ್ ತಂಡಗಳಾದ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ಕಿಂಗ್ಸ್. ಇದೀಗ ಈ ದಾಖಲೆಯನ್ನು ಕೆರಿಬಿಯನ್ ಪ್ರೀಮಿಯರ್ ಲೀಗ್‌ನ ಎರಡು ತಂಡಗಳು ಸರಿಗಟ್ಟಿದೆ. ಒಂದೇ ಪಂದ್ಯದಲ್ಲಿ ಬರೋಬ್ಬರಿ 42 ಸಿಕ್ಸರ್‌ಗಳು... ಐಪಿಎಲ್‌ನಲ್ಲಿ ನಿರ್ಮಾಣವಾದ ವಿಶ್ವ ದಾಖಲೆಗೆ ಸರಿಸಮಾನವಾಗಿ ನಿಂತ ಸಿಪಿಎಲ್ ತಂಡಗಳು. ಹೌದು, ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 7ನೇ ಪಂದ್ಯದಲ್ಲಿ ಸಿಕ್ಸರ್‌ಗಳ ಸುರಿಮಳೆಯಾಗಿದೆ. ಈ ಸಿಕ್ಸ್ ಸುರಿಮಳೆಯೊಂದಿಗೆ ಟಿ20 ಕ್ರಿಕೆಟ್‌ನಲ್ಲಿ ವಿಶ್ವ ದಾಖಲೆಯನ್ನು ನಿರ್ಮಿಸಿದೆ. ಸಿಪಿಎಲ್‌ನ 7ನೇ ಪಂದ್ಯದಲ್ಲಿ ಸೇಂಟ್ ಕಿಟ್ಸ್ ಅಂಡ್ ನೆವಿಸ್ ಪೇಟ್ರಿಯಾಟ್ಸ್ ಮತ್ತು ಗಯಾನಾ ಅಮೆಝೂನ್ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಗಯಾನಾ ಅಮೆಝೂನ್ ವಾರಿಯರ್ಸ್ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 266 ರನ್ ಕಲೆಹಾಕಿತು. ಈ ಇನಿಂಗ್ಸ್‌ನಲ್ಲಿ ಮೂಡಿಬಂದ ಒಟ್ಟು ಸಿಕ್ಸ್‌ಗಳ ಸಂಖ್ಯೆ 23.

ಇದಾದ ಬಳಿಕ 267 ರನ್‌ಗಳ ಗುರಿಯನ್ನು ಬೆನ್ನತ್ತಿದ ಸೇಂಟ್ ಕಿಟ್ಸ್ ಅಂಡ್ ನೆವಿಸ್ ಪೇಟ್ರಿಯಾಟ್ಸ್ ತಂಡವು 18 ಓವರ್‌ಗಳಲ್ಲಿ 226 ರನ್ ಬಾರಿಸಿ ಆಲೌಟ್ ಆಯಿತು. ಈ ಚೇಸಿಂಗ್ ವೇಳೆ ಸಿಡಿದ ಒಟ್ಟು ಸಿಕ್ಸರ್‌ಗಳ ಸಂಖ್ಯೆ 19.

ಈ ಸಿಕ್ಸರ್‌ಗಳೊಂದಿಗೆ ಟಿ20 ಕ್ರಿಕೆಟ್ ಪಂದ್ಯವೊಂದರಲ್ಲಿ ಅತ್ಯಧಿಕ ಸಿಕ್ಸ್‌ಗಳನ್ನು ಬಾರಿಸಿದ ವಿಶ್ವ ದಾಖಲೆಯನ್ನು ಸೇಂಟ್ ಕಿಟ್ಸ್ ಅಯಂಡ್ ನೆವಿಸ್ ಪೇಟ್ರಿಯಾಟ್ಸ್ ಮತ್ತು ಗಯಾನಾ ಅಮೆಝೂನ್ ವಾರಿಯರ್ಸ್ ತಂಡಗಳು ಸರಿಗಟ್ಟಿದೆ. ಅಲ್ಲದೆ ಸಿಪಿಎಲ್ ಪಂದ್ಯವೊಂದರಲ್ಲಿ ಅತ್ಯಧಿಕ ಸಿಕ್ಸ್ ಸಿಡಿಸಿದ ದಾಖಲೆ ನಿರ್ಮಿಸಿದ್ದಾರೆ. ಇದಕ್ಕೂ ಮುನ್ನ ಇಂತಹದೊಂದು ದಾಖಲೆ ಮೂಡಿಬಂದಿದ್ದು ಐಪಿಎಲ್‌ನಲ್ಲಿ ಎಂಬುದು ವಿಶೇಷ. ಐಪಿಎಲ್ 2024ರ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ಕಿಂಗ್ಸ್ ನಡುವಣ ಪಂದ್ಯದಲ್ಲಿ ಒಟ್ಟು 42 ಸಿಕ್ಸ್‌ಗಳನ್ನು ಬಾರಿಸಲಾಗಿತ್ತು. ಈ ಮೂಲಕ ಕೆಕೆಆರ್-ಪಂಜಾಬ್ ಕಿಂಗ್ಸ್ ಜೊತೆಗೂಡಿ ಹೊಸ ವಿಶ್ವ ದಾಖಲೆ ನಿರ್ಮಿಸಿದ್ದರು. ಇದೀಗ ಸೇಂಟ್ ಕಿಟ್ಸ್ ಅಂಡ್ ನೆವಿಸ್ ಪೇಟ್ರಿಯಾಟ್ಸ್ ಮತ್ತು ಗಯಾನಾ ಅಮೆಝೂನ್ ವಾರಿಯರ್ಸ್ ತಂಡಗಳು ಒಟ್ಟು 42 ಸಿಕ್ಸ್‌ಗಳನ್ನು ಸಿಡಿಸಿ ಈ ದಾಖಲೆ ಸರಿಗಟ್ಟಿದ್ದಾರೆ. ಈ ಮೂಲಕ ಟಿ20 ಪಂದ್ಯವೊಂದರಲ್ಲಿ ಅತ್ಯಧಿಕ ಸಿಕ್ಸ್ ಸಿಡಿಸಿದ ತಂಡಗಳ ವಿಶ್ವ ದಾಖಲೆ ಪಟ್ಟಿಯಲ್ಲಿ ಪಂಜಾಬ್ ಕಿಂಗ್ಸ್-ಕೆಕೆಆರ್ ಜೊತೆ ಅಗ್ರಸ್ಥಾನಗಳನ್ನು ಹಂಚಿಕೊಂಡಿದೆ.

# ರಾಜಕೀಯದಲ್ಲಿ ಹೊಸ ಇನ್ನಿಂಗ್ಸ್ ಆರಂಭಿಸಿದ ಜಡೇಜಾ



ಟೀಂ ಇಂಡಿಯಾಕ್ಕೆ ಎರಡನೇ ಬಾರಿಗೆ ಟಿ20 ವಿಶ್ವಕಪ್ ಗೆಲ್ಲಿಸಿಕೊಟ್ಟು, ಚುಟುಕು ಮಾದರಿಗೆ ವಿದಾಯ ಹೇಳಿದ್ದ ಟೀಂ ಇಂಡಿಯಾದ ಸ್ಟಾರ್ ಕ್ರಿಕೆಟಿಗ ರವೀಂದ್ರ ಜಡೇಜಾ ರಾಜಕೀಯ ಕ್ಷೇತ್ರದಲ್ಲಿ ಹೊಸ ಇನ್ನಿಂಗ್ಸ್ ಆರಂಭಿಸಿದ್ದಾರೆ. ಆಲ್‌ರೌಂಡರ್ ರವೀಂದ್ರ ಜಡೇಜಾ ಇದೀಗ ಕೇಂದ್ರದ ಆಡಳಿತಾರೂಢ ಭಾರತೀಯ ಜನತಾ ಪಕ್ಷದ (ಬಿಜೆಪಿ) ಸದಸ್ಯತ್ವ ಸ್ವೀಕರಿಸಿದ್ದಾರೆ. ವಾಸ್ತವವಾಗಿ ರವೀಂದ್ರ ಜಡೇಜಾ ಅವರ ಪತ್ನಿ ಈಗಾಗಲೇ ಬಿಜೆಪಿಯಲ್ಲಿದ್ದು, ಅವರು ಗುಜರಾತ್‌ನ ಜಾಮ್‌ನಗರ ಉತ್ತರ ಕ್ಷೇತ್ರದ ಶಾಸಕರೂ ಆಗಿದ್ದಾರೆ.

ಇದೀಗ ಪತಿ ರವೀಂದ್ರ ಜಡೇಜಾ ಬಿಜೆಪಿಯ ಸದಸ್ಯತ್ವ ಸ್ವೀಕರಿಸಿರುವ ಫೋಟೋವನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುವ ಮೂಲಕ ರಿವಾಬಾ ಜಡೇಜಾ ಈ ಮಾಹಿತಿ ನೀಡಿದ್ದಾರೆ.

### ಎಕ್ಸ್‌ನಲ್ಲಿ ಮಾಹಿತಿ ನೀಡಿದ ರಿವಾಬಾ

ಈ ದಿನಗಳಲ್ಲಿ, ಗುಜರಾತ್ ಮತ್ತು ಕೇಂದ್ರದ ಆಡಳಿತಾರೂಢ ಬಿಜೆಪಿ ದೇಶಾದ್ಯಂತ ಸದಸ್ಯತ್ವ ಅಭಿಯಾನವನ್ನು ನಡೆಸುತ್ತಿದೆ. ಈ ಅಭಿಯಾನದ ಅಡಿಯಲ್ಲಿ ಇದೀಗ ಜಡೇಜಾ ಕೂಡ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ.


ರಿವಾಬಾ ತಮ್ಮ 'ಎಕ್ಸ್' ಖಾತೆಯಲ್ಲಿ ಇಬ್ಬರ ಸದಸ್ಯತ್ವ ಪ್ರಮಾಣಪತ್ರಗಳ ಫೋಟೋಗಳನ್ನು ಪೋಸ್ಟ್ ಮಾಡಿದ್ದಾರೆ. ರವೀಂದ್ರ ಜಡೇಜಾ ಈ ಹಿಂದೆ 2022 ರಲ್ಲಿ ಗುಜರಾತ್ ಚುನಾವಣೆಯ ಸಂದರ್ಭದಲ್ಲಿ ತಮ್ಮ ಪತ್ನಿ ಪರ ಪ್ರಚಾರ ಮಾಡಿದ್ದರು.

### ಜಡೇಜಾ ವೃತ್ತಿಜೀವನ ಹೀಗಿದೆ

ಮೇಲೆ ಹೇಳಿದಂತೆ ಕಳೆದ ಜೂನ್‌ನಲ್ಲಿ ನಡೆದ ಟಿ20 ವಿಶ್ವಕಪ್‌ನಲ್ಲಿ ಟೀಂ ಇಂಡಿಯಾವನ್ನು ಟಿ20 ವಿಶ್ವ ಚಾಂಪಿಯನ್ ಮಾಡಿದ ಬಳಿಕ ಜಡೇಜಾ ಈ ಸ್ವರೂಪಕ್ಕೆ ನಿವೃತ್ತಿ ಘೋಷಿಸಿದ್ದರು. ಅಂದಿನಿಂದ ಕ್ರಿಕೆಟ್ ಆಯಕ್ಷನ್‌ನಿಂದ ದೂರ ಉಳಿದಿರುವ ಜಡೇಜಾ, ಕಳೆದ ತಿಂಗಳು ಶ್ರೀಲಂಕಾ ಪ್ರವಾಸದಲ್ಲಿ ನಡೆದ ಏಕದಿನ ಸರಣಿಯಲ್ಲೂ ಏಕದಿನ ತಂಡದಲ್ಲಿ ಸ್ಥಾನ ಪಡೆದಿರಲಿಲ್ಲ.

# ಅತಿಹೆಚ್ಚು ತೆರಿಗೆ ಕಟ್ಟುವ ಭಾರತೀಯ ಕ್ರಿಕೆಟಿಗರು

ವಿರಾಟ್ ಕೊಹ್ಲಿ ನಂ. 1



ವಿರಾಟ್ ಕೊಹ್ಲಿ 66 ಕೋಟಿ ರೂ ತೆರಿಗೆ ಪಾವತಿಸುತ್ತಾರೆ. 2023-24ರ ಹಣಕಾಸು ವರ್ಷದಲ್ಲಿ ಭಾರತದ ಮಾಜಿ ಕ್ರಿಕೆಟ್ ಕ್ಯಾಪ್ಟನ್ ಆದ ಅವರು ಪಾವತಿಸಿದ ತೆರಿಗೆ ಮೊತ್ತ ಅದು. ಶಾರುಖ್ ಖಾನ್, ದಳಪತಿ ವಿಜಯ್, ಸಲ್ಮಾನ್ ಖಾನ್, ಅಮಿತಾಭ್ ಬಚ್ಚನ್ ಬಳಿಕ ಅತಿಹೆಚ್ಚು ಟ್ಯಾಕ್ಸ್ ಕಟ್ಟಿದ ಸೆಲಬ್ರಿಟಿ ಅವರು. ಕ್ರೀಡಾಪಟುಗಳ ಪೈಕಿ ಅವರದ್ದೇ ಗರಿಷ್ಠ ತೆರಿಗೆ ಪಾವತಿ.

**ಎಂಎಸ್ ಧೋನಿ 38 ಕೋಟಿ ರೂ:** ಭಾರತದ ಸಾರ್ವಕಾಲಿಕ ಶ್ರೇಷ್ಠ ಕ್ಯಾಪ್ಟನ್ ಮತ್ತು ವಿಕೆಟ್‌ಕೀಪರ್ ಬ್ಯಾಟ್ಸ್‌ಮ್ಯಾನ್ ಎಂದು ಪರಿಗಣಿಸಲಾದ ಮಾಜಿ ಕ್ರಿಕೆಟಿಗ ಮಹೇಂದ್ರ ಸಿಂಗ್ ಧೋನಿ 2023-24ರಲ್ಲಿ 38 ಕೋಟಿ ರೂ ಟ್ಯಾಕ್ಸ್ ಕಟ್ಟಿದ್ದಾರೆ. ಕ್ರೀಡಾಪಟುಗಳ ಪೈಕಿ ಅತಿ ಹೆಚ್ಚು ತೆರಿಗೆ ಕಟ್ಟಿದವರ ಪಟ್ಟಿಯಲ್ಲಿ ಧೋನಿ ಎರಡನೇ ಸ್ಥಾನದಲ್ಲಿದ್ದಾರೆ. ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತರಾದರೂ ಜಾಹೀರಾತು, ವಿವಿಧ ಉದ್ದಿಮೆಗಳನ್ನು ಅವರು ನಿರ್ವಹಿಸುತ್ತಾ ಆದಾಯ ಗಳಿಸುತ್ತಿದ್ದಾರೆ.

**ಸಚಿನ್ ತೆಂಡೂಲ್ಕರ್ 28 ಕೋಟಿ ರೂ:** ಕ್ರಿಕೆಟ್ ಮಾಸ್ಟರ್ ಬ್ಲಾಸ್ಟರ್ ಆದ ಅವರು ಹಲವು ವರ್ಷಗಳ ಹಿಂದೆಯೇ ನಿವೃತ್ತರಾದರೂ ವಿವಿಧ ಮೂಲಗಳಿಂದ ಆದಾಯ ಪಡೆಯುತ್ತಾರೆ. ಇದಕ್ಕೆ ಸಾಕ್ಷಿ ಅವರು 2023-24ರಲ್ಲಿ ಕಟ್ಟಿದ 28 ಕೋಟಿ ರೂ ತೆರಿಗೆಯೇ ಸಾಕ್ಷಿ. ಟ್ಯಾಕ್ಸ್ ಪಾವತಿಯಲ್ಲಿ ಅವರು ಪ್ರಾಮಾಣಿಕರಾಗಿದ್ದಾರೆ.

**ಸೌರವ್ ಗಂಗೂಲಿ 23 ಕೋಟಿ ರೂ:** ಮಾಜಿ ಕ್ರಿಕೆಟಿಗ, ಮಾಜಿ ಕ್ಯಾಪ್ಟನ್ ಮತ್ತು ಮಾಜಿ ಬಿಸಿಸಿಐ ಅಧ್ಯಕ್ಷರಾದ ಸೌರವ್ ಗಂಗೂಲಿ 2023-24ರ ಹಣಕಾಸು ವರ್ಷದಲ್ಲಿ 23 ಕೋಟಿ ರೂ ಆದಾಯ ತೆರಿಗೆ ಪಾವತಿಸಿದ್ದಾರೆ. ಸ್ವಂತ ಉದ್ದಿಮೆಗಳನ್ನು ಹೊಂದಿದ್ದು ಬಹಳಷ್ಟು ಆದಾಯ ಗಳಿಸುತ್ತಿದ್ದಾರೆ.

**ಹಾರ್ದಿಕ್ ಪಾಂಡ್ಯ 13 ಕೋಟಿ ರೂ:** ಹಾಲಿ ಸಕ್ರಿಯ ಕ್ರಿಕೆಟಿಗರ ಪೈಕಿ ವಿರಾಟ್ ಕೊಹ್ಲಿ ಬಿಟ್ಟರೆ ಅತಿಹೆಚ್ಚು ತೆರಿಗೆ ಕಟ್ಟಿರುವುದು ಹಾರ್ದಿಕ್ ಪಾಂಡ್ಯ ಅವರೇಯೇ. ಜಾಹೀರಾತು ಮತ್ತು ಕ್ರಿಕೆಟ್ ಅವರ ಪ್ರಮುಖ ಆದಾಯ ಮೂಲಗಳು.

**ರಿಷಭ್ ಪಂತ್ 10 ಕೋಟಿ ರೂ:** ವಿಕೆಟ್ ಕೀಪರ್ ಬ್ಯಾಟ್ಸ್‌ಮ್ಯಾನ್ ಆಗಿರುವ ರಿಷಭ್ ಪಂತ್ 2023-24ರಲ್ಲಿ 10 ಕೋಟಿ ರೂ ತೆರಿಗೆ ಕಟ್ಟಿದ್ದಾರೆ.

ಗಾಯದ ಕಾರಣದಿಂದ ಸಾಕಷ್ಟು ಕಾಲ ಅವರು ಸಕ್ರಿಯ ಆಟದಿಂದ ದೂರ ಇದ್ದರು. ಆದರೂ ಅವರು ಭಾರತದ ಟಾಪ್ ಕ್ರಿಕೆಟಿಗರಾಗಿ ಉಳಿದಿದ್ದಾರೆ. ಜಾಹೀರಾತುಗಳಿಂದಲೂ ಇವರು ಸಾಕಷ್ಟು ಆದಾಯ ಗಳಿಸುತ್ತಾರೆ. ಅತಿಹೆಚ್ಚು ಟ್ಯಾಕ್ಸ್ ಪಾವತಿಸುವ 20 ಸೆಲಬ್ರಿಟಿಗಳ ಪಟ್ಟಿಯಲ್ಲಿ ಪಂತ್ 20ನೆಯವರಾಗಿದ್ದಾರೆ.

ತೆರಿಗೆ ಪಾವತಿಸುವ ಅಗ್ರಮಾನ್ಯ 20 ಸೆಲಬ್ರಿಟಿಗಳ ಪಟ್ಟಿಯಲ್ಲಿ ರೋಹಿತ್ ಶರ್ಮಾ ಹೆಸರು ಇಲ್ಲ. ಅಲ್ಲು ಅರ್ಜುನ್, ಮೋಹನ್ ಲಾಲ್, ದಳಪತಿ ವಿಜಯ್ ಮೊದಲಾದ ಸದರ್ನ್ ಫಿಲಂ ಸ್ಟಾರ್‌ಗಳ ಹೆಸರು ಈ ಪಟ್ಟಿಯಲ್ಲಿವೆ. ಪಟ್ಟಿಯಲ್ಲಿ ಮೇಲಿನ ಆರು ಕ್ರಿಕೆಟಿಗರು ಇದ್ದಾರೆ.

# ಒಂದಂಕಿಗೆ ಅಣ್ಣ ಸುಸ್ತು, ಶತಕ ಸಿಡಿಸಿದ ತಮ್ಮ



ಒಂದೇ ತಂಡದಲ್ಲಿ ಅಣ್ಣ-ತಮ್ಮ

ಇದೇ ಮೊದಲ ಬಾರಿಗೆ ದುಲೀಪ್ ಟ್ರೋಫಿ ಟೂರ್ನಿಯಲ್ಲಿ ಆಡುತ್ತಿರುವ ಉದಯೋನ್ಮುಖ ಆಟಗಾರ 19ರ ಹರೆಯದ ಮುಶೀರ್ ಖಾನ್, ಸ್ಟಾರ್ ಬೌಲರ್‌ಗಳ ಬೆವರಿಳಿಸಿ ಅಜೇಯ ಶತಕ ಸಿಡಿಸಿ ಮಿಂಚಿದ್ದಾರೆ. ಈ ಟೂರ್ನಿಯಲ್ಲಿ ಭಾರತ ಎ ಮತ್ತು ಭಾರತ ಬಿ ತಂಡಗಳ ನಡುವೆ ಬೆಂಗಳೂರಿನ ಎಂ ಚಿನ್ನಸ್ವಾಮಿ ಮೈದಾನದಲ್ಲಿ ಪಂದ್ಯ ನಡೆಯುತ್ತಿದೆ. ದಿನದಾಟದಂತ್ಯಕ್ಕೆ ಭಾರತ ಬಿ ತಂಡ 7 ವಿಕೆಟ್ ಕಳೆದುಕೊಂಡು 202 ರನ್ ಕಲೆಹಾಕಿದೆ.

ಇಂದಿನಿಂದ ಆರಂಭವಾಗಿರುವ ದುಲೀಪ್ ಟ್ರೋಫಿಯಲ್ಲಿ ಒಂದೇ ದಿನ ನಾಲ್ಕು ತಂಡಗಳ ನಡುವೆ ಪಂದ್ಯ ನಡೆಯುತ್ತಿದೆ. ಈ ಎರಡೂ ಪಂದ್ಯಗಳಲ್ಲೂ ಬೌಲರ್‌ಗಳ ಪ್ರಾಬಲ್ಯ ಮುಂದುವರೆದಿದೆ. ಆದರೆ ಇದೇ ಮೊದಲ ಬಾರಿಗೆ ಈ ಟೂರ್ನಿಯಲ್ಲಿ ಆಡುತ್ತಿರುವ ಉದಯೋನ್ಮುಖ ಆಟಗಾರ 19ರ ಹರೆಯದ ಮುಶೀರ್ ಖಾನ್, ಸ್ಟಾರ್ ಬೌಲರ್‌ಗಳ ಬೆವರಿಳಿಸಿ ಅಜೇಯ ಶತಕ ಸಿಡಿಸಿ ಮಿಂಚಿದ್ದಾರೆ. ಈ ಟೂರ್ನಿಯಲ್ಲಿ ಭಾರತ ಎ ಮತ್ತು ಭಾರತ ಬಿ ತಂಡಗಳ ನಡುವೆ ಬೆಂಗಳೂರಿನ ಎಂ ಚಿನ್ನಸ್ವಾಮಿ ಮೈದಾನದಲ್ಲಿ ಪಂದ್ಯ ನಡೆಯುತ್ತಿದೆ. ದಿನದಾಟದಂತ್ಯಕ್ಕೆ ಭಾರತ ಬಿ ತಂಡ 7 ವಿಕೆಟ್ ಕಳೆದುಕೊಂಡು 202 ರನ್ ಕಲೆಹಾಕಿದೆ. ಇದೇ ಪಂದ್ಯದಲ್ಲಿ ಭಾರತ ಬಿ ತಂಡದ ಪರ ಚೊಚ್ಚಲ ಪಂದ್ಯವನ್ನಾಡುತ್ತಿರುವ ಮುಶೀರ್ ಖಾನ್ ಅಜೇಯ ಶತಕ ಸಿಡಿಸಿ ಎರಡನೇ ದಿನದಾಟಕ್ಕೆ ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ. ವಾಸ್ತವವಾಗಿ ಇದೇ ತಂಡದಲ್ಲಿ ಅಂದರೆ ಭಾರತ ಬಿ ತಂಡದಲ್ಲಿ ಸ್ಟಾರ್ ಕ್ರಿಕೆಟಿಗರಾದ ಯಶಸ್ವಿ ಜೈಸ್ವಾಲ್, ರಿಷಬ್ ಪಂತ್, ಅಭಿಮನ್ಯು ಈಶ್ವರನ್, ವಾಷಿಂಗ್ಟನ್ ಸುಂದರ್ ಜೊತೆಗೆ ಕಳೆದ ಬಾರಿಯ ರಣಜಿ ಹೀರೋ ಹಾಗೂ ಮುಶೀರ್ ಖಾನ್ ಅಣ್ಣ ಸರ್ಫರಾಜ್ ಖಾನ್ ಆಡುತ್ತಿದ್ದಾರೆ. ಆದರೆ ಇವರ್ಯಾರಿಗೂ ಮಾಡಲು ಸಾಧ್ಯವಾಗದ ಚಮತ್ಕಾರವನ್ನು ಮುಶೀರ್ ಖಾನ್ ಮಾಡಿದ್ದಾರೆ. ಮೊದಲ ದಿನದಾಟದಲ್ಲಿ ಮುಶೀರ್ ಹೊರತುಪಡಿಸಿ ಉಳಿದೆಲ್ಲ ಸ್ಟಾರ್ ಕ್ರಿಕೆಟಿಗರು ನಿರೀಕ್ಷಿತ ಪ್ರದರ್ಶನ ನೀಡಲಿಲ್ಲ. ಒಂದು ವೇಳೆ ಮುಶೀರ್ ಕೂಡ ಬೇಗನೆ ವಿಕೆಟ್ ಒಪ್ಪಿಸಿದ್ದರೆ, ಈ ತಂಡ 100 ರನ್‌ಗಳನ್ನು ಕಲೆಹಾಕಲು ಸಾಧ್ಯವಾಗುತ್ತಿರಲಿಲ್ಲ. ಆದರೆ ತಂಡದ ಪರ ಏಕಾಂಗಿ ಹೋರಾಟ ನಡೆಸುತ್ತಿರುವ ಮುಶೀರ್ ಅಜೇಯ ಶತಕ ಸಿಡಿಸಿದ್ದಾರೆ.

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರಂಭವಾದ ಈ ಪಂದ್ಯದಲ್ಲಿ ಭಾರತ ಬಿ ತಂಡ ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ಅದರಂತೆ ಬೌಲಿಂಗ್ ಮಾಡಲು ಅಖಾಡಕ್ಕಿಳಿದ ಶುಭ್‌ಮನ್ ಗಿಲ್ ನಾಯಕತ್ವದ ಭಾರತ ಎ ತಂಡದ ವೇಗದ ಬೌಲರ್‌ಗಳು ಪರಿಣಾಮಕಾರಿ ಬೌಲಿಂಗ್ ಪ್ರದರ್ಶಿಸಿದರು. ಆಕಾಶ್ ದೀಪ್, ಅವೇಶ್ ಖಾನ್ ಮತ್ತು ಖಲೀಲ್ ಅಹ್ಮದ್, ಭಾರತ ಬಿ ತಂಡದ ಇಡೀ ಅಗ್ರ ಮತ್ತು ಮಧ್ಯಮ ಕ್ರಮಾಂಕವನ್ನು ಬೇಗನೇ ಪೆವಿಲಿಯನ್ ಗಟ್ಟಿದರು. ಯಶಸ್ವಿ ಜೈಸ್ವಾಲ್ (30), ರಿಷಭ್ ಪಂತ್ (7) ಮತ್ತು ಸರ್ಫರಾಜ್ ಖಾನ್ (9) ಅವರಂತಹ ಬ್ಯಾಟ್ಸ್‌ಮನ್‌ಗಳು ದೊಡ್ಡ ಮೊತ್ತ ಗಳಿಸಲು ವಿಫಲರಾದರು. ತಂಡದ ನಾಯಕ ಮತ್ತು ಅನುಭವಿ ಆರಂಭಿಕ ಅಭಿಮನ್ಯು ಈಶ್ವರನ್ (13) ಸಹ ಅಗ್ಗವಾಗಿ ಔಟಾದರು. ಅಂತಹ ಪರಿಸ್ಥಿತಿಯಲ್ಲಿ ಮುಶೀರ್ ತಂಡದ ಇನ್ನಿಂಗ್ಸ್ ಕೈಗೆತ್ತಿಕೊಂಡರು.

ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದ ಮುಶೀರ್, ಅವರ ಎದುರೇ ತಂಡದ 7 ವಿಕೆಟ್‌ಗಳು ಕೇವಲ 94 ರನ್ ಆಗುವಷ್ಟರಲ್ಲಿ ಪತನಗೊಂಡವು. ಅಂತಹ ಸಮಯದಲ್ಲಿ, 9 ನೇ ಕ್ರಮಾಂಕದ ಕಣಕ್ಕಿಳಿದ ನವದೀಪ್ ಸೈನಿ (ವೇಗದ ಬೌಲರ್) ಮುಶೀರ್‌ಗೆ ಉತ್ತಮ ಸಾಥ್ ನೀಡಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966